ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

ಒಟ್ಟು ಪ್ರಶ್ನೆಗಳು – ೧೪೭

# ಪಟ್ಟಿ – ೦೧

# ಕರ್ನಾಟಕ ವಿಧಾನ ಪರಿಷತ್ತು

**ನೂರ ಐವತ್ತೊಂಭತ್ತನೆ ಅಧಿವೇಶನ**

**ಸೋಮವಾರ, ದಿನಾಂಕ : ೧೭ನೇ ಆಗಸ್ಟ್, ೨೦೨೬**

---

## ಸಮೂಹ – I

೧. ಮುಖ್ಯಮಂತ್ರಿಗಳು

೨. ಸಮಾಜ ಕಲ್ಯಾಣ ಸಚಿವರು

೩. ಪರಿಶಿಷ್ಟ ಪಂಗಡಗಳ ಕಲ್ಯಾಣ ಸಚಿವರು

೪. ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವರು

೫. ಅರಣ್ಯ, ಜೀವಿ ಪರಿಸ್ಥಿತಿ ಮತ್ತು ಪರಿಸರ ಸಚಿವರು

೬. ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

೭. ಉನ್ನತ ಶಿಕ್ಷಣ ಸಚಿವರು

---

# ಕುವೆಂಪು ವಿಶ್ವವಿದ್ಯಾಲಯಕ್ಕೆ ಉಚಿತವಾಗಿ ಅರಣ್ಯ ಜಮೀನು ನೀಡುವ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧ (೮೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಷ್ಟ್ರಕವಿ ಕುವೆಂಪು ವಿಶ್ವವಿದ್ಯಾಲಯಕ್ಕೆ ೧೦೦ ಕೋಟಿ ರೂ. ಹಣ ಪಾವತಿಸುವಂತೆ ಅರಣ್ಯ ಇಲಾಖೆ ನೋಟೀಸ್ ನೀಡಿರುವುದು ನಿಜವೇ ; ಇದಕ್ಕೆ ಕಾರಣಗಳೇನು ; (ಸಂಪೂರ್ಣ ವಿವರ ಹಾಗೂ ಒಡಂಬಡಿಕೆಗಳ ಪ್ರತಿಗಳೊಂದಿಗೆ ಮಾಹಿತಿ ನೀಡುವುದು)

(ಆ) ಸದರಿ ವಿಶ್ವವಿದ್ಯಾಲಯಕ್ಕೆ ಅರಣ್ಯ ಇಲಾಖೆಯವರು ಎಷ್ಟು ಎಕರೆ ಜಮೀನನ್ನು ನೀಡಿರುತ್ತಾರೆ ; ಸದರಿ ಜಮೀನಿಗೆ ಪರ್ಯಾಯವಾಗಿ ಜಮೀನನ್ನು ನೀಡುವ ಸಂಬಂಧ ವಿಶ್ವವಿದ್ಯಾಲಯದೊಡನೆ ಇಲ್ಲಿಯವರೆಗೆ ಕೈಗೊಂಡಿರುವ ಕ್ರಮಗಳ ವಿವರ ನೀಡುವುದು ;

(ಇ) ಸದರಿ ವಿಶ್ವವಿದ್ಯಾಲಯ ಜಮೀನಿಗೆ ಪರ್ಯಾಯ ಜಮೀನನ್ನು ಅರಣ್ಯ ಇಲಾಖೆಗೆ ನೀಡಿದರೆ ೧೦೦ ಕೋಟಿ ಹಣವನ್ನು ವಿಶ್ವವಿದ್ಯಾಲಯದ ಅಭಿವೃದ್ಧಿಗೆ ಬಳಸಬಹುದಲ್ಲವೇ ;

(ಈ) ಕುವೆಂಪು ವಿಶ್ವವಿದ್ಯಾಲಯಕ್ಕೆ ೧೦೦ ಹೆಕ್ಟೇರ್ ಜಮೀನನ್ನು ಉಚಿತವಾಗಿ ನೀಡಲು ಅವಕಾಶವಿದೆಯೇ; ಇದ್ದಲ್ಲಿ, ಇದಕ್ಕೆ ಸಂಬಂಧಿಸಿದಂತೆ ಏನಾದರೂ ಕ್ರಮ ಕೈಗೊಳ್ಳಲಾಗಿದೆಯೇ ; ಇದಕ್ಕೆ ಸಂಬಂಧಿಸಿದ ಇಲಾಖೆ/ಕುವೆಂಪು ವಿಶ್ವವಿದ್ಯಾಲಯದೊಡನೆ ಈ ಸಂಬಂಧ ಸಕಾರಾತ್ಮಕ ಚರ್ಚೆ ನಡೆಸಲಾಗಿದೆಯೇ ? (ಈ ಸಂಬಂಧ ವಿವರವಾದ ಮಾಹಿತಿಯನ್ನು ನೀಡುವುದು)

# ಸರ್ಕಾರಿ ಶಾಲೆಗಳ ಬಿಸಿಯೂಟ ಯೋಜನೆಗೆ ಅನುದಾನ ಪರಿಷ್ಕರಣೆ ಬಗ್ಗೆ

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨ (೮೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಾರುಕಟ್ಟೆಯಲ್ಲಿ ತೊಗರಿಬೇಳೆ, ಅಡುಗೆ ಎಣ್ಣೆ, ಮೊಟ್ಟೆ ಸೇರಿದಂತೆ ಅಗತ್ಯ ವಸ್ತುಗಳ ಬೆಲೆ ಗಗನಕ್ಕೇರಿದ್ದರೂ, ಸರ್ಕಾರ ಶಾಲಾ ಬಿಸಿಯೂಟ ಯೋಜನೆಗೆ ನಿಗದಿಪಡಿಸಿರುವ ಹಳೆಯ ದರಗಳನ್ನೇ ಮುಂದುವರಿಸಿರುವುದರಿಂದ ರಾಜ್ಯಾದ್ಯಂತ ಬಹುತೇಕ ಶಾಲೆಗಳಲ್ಲಿ ಮಧ್ಯಾಹ್ನದ ಬಿಸಿಯೂಟ ನೀಡಲು ಶಿಕ್ಷಕರು ಪರದಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಪ್ರಸ್ತುತ ಶೈಕ್ಷಣಿಕ ಸಾಲಿನಲ್ಲಿ ಎಣ್ಣೆ–ಬೇಳೆ ಟೆಂಡರ್ ಪ್ರಕ್ರಿಯೆ ಪೂರ್ಣಗೊಳ್ಳದ ಕಾರಣ, ಮೈಸೂರು ಜಿಲ್ಲೆಯೊಂದರಲ್ಲೇ ೨೨೮೬ ಶಾಲೆಗಳ ೧.೬೯ ಲಕ್ಷ ಮಕ್ಕಳಿಗೆ ಬಿಸಿಯೂಟದ ಸಂಕಷ್ಟ ಎದುರಾಗಿರುವುದು ನಿಜವೇ ; ಟೆಂಡರ್ ಮುಗಿಯದ ಕಾರಣಕ್ಕೆ ಶಿಕ್ಷಕರೇ ತಮ್ಮ ಕೈಯಿಂದ ಹಣ ಹಾಕಿ ಮಾರುಕಟ್ಟೆ ದರದಲ್ಲಿ ಸಾಮಗ್ರಿ ಖರೀದಿಸುತ್ತಿರುವುದು ಸರ್ಕಾರದ ಬೇಜವಾಬ್ದಾರಿತನವನ್ನು ತೋರಿಸುವುದಿಲ್ಲವೇ ;

(ಇ) ಸರ್ಕಾರಿ ದರಕ್ಕೂ ಮತ್ತು ಮಾರುಕಟ್ಟೆ ದರಕ್ಕೂ ಭಾರಿ ವ್ಯತ್ಯಾಸವಿರುವುದು ನಿಜವೇ ; (ಉದಾಹಣೆಗೆ:ಸರ್ಕಾರಿ ತೊಗರಿಬೇಳೆಗೆ ರೂ.೧೦೩.೫೦ ನಿಗದಿಪಡಿಸಿದ್ದರೆ ಮಾರುಕಟ್ಟೆಯಲ್ಲಿ ರೂ.೧೪೦ ಇದೆ ; ಅಡುಗೆ ಎಣ್ಣೆಗೆ ರೂ.೧೬೦ ನಿಗದಿಪಡಿಸಿದ್ದರೆ ಮಾರುಕಟ್ಟೆಯಲ್ಲಿ ರೂ.೧೮೦ ಇದೆ ; ಮೊಟ್ಟೆಗೆ ರೂ.೬

ನಿಗದಿಪಡಿಸಿದ್ದರೆ ಮಾರುಕಟ್ಟೆಯಲ್ಲಿ ರೂ. ೭.೫೦ ಇದೆ) ಈ ಹೆಚ್ಚುವರಿ ಆರ್ಥಿಕ ಹೊರೆಯನ್ನು ಶಿಕ್ಷಕರ ಮೇಲೆ ಹೇರುತ್ತಿರುವುದಕ್ಕೆ ಕಾರಣಗಳೇನು ;

(ಈ) ಆರ್ಥಿಕ ಹೊರೆ ಭರಿಸಲಾಗದೆ ಕೆಲವು ಶಾಲೆಗಳಲ್ಲಿ ಮಕ್ಕಳಿಗೆ ಬಳಸಬೇಕಾದ ನಿಗದಿತ ಬಿಸಿಯೂಟದ ಪ್ರಮಾಣವನ್ನು (ಬೇಳೆ, ಎಣ್ಣೆ ಇತ್ಯಾದಿ) ಕಡಿತಗೊಳಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಮಕ್ಕಳ ಪೌಷ್ಠಿಕತೆಗೆ ಧಕ್ಕೆ ತರುತ್ತಿರುವ ಈ ಬೆಲೆ ಏರಿಕೆಯ ಬಿಕ್ಕಟ್ಟನ್ನು ಬಗೆಹರಿಸಲು ಸರ್ಕಾರ ಬಿಸಿಯೂಟದ ಅನುದಾನವನ್ನು ತಕ್ಷಣವೇ ಪರಿಷ್ಕರಿಸುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿ ಅರಣ್ಯ ಒತ್ತುವರಿ ಕುರಿತು

**ಶ್ರೀ ಡಿ.ಎಸ್. ಅರುಣ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೩ (೮೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ಎಂದರೇನು ; ಇವುಗಳಲ್ಲಿ ಎಷ್ಟು ವಿಧ ; ಅವುಗಳು ಯಾವುವು ; ವಿವರವಾದ ಮಾಹಿತಿ ನೀಡುವುದು ;

(ಆ) ಅರಣ್ಯ ಒತ್ತುವರಿ ಎಂದರೇನು ; ಒತ್ತುವರಿಯ ವಿಧಗಳಾವುವು ; ರಾಜ್ಯದಲ್ಲಿ ಯಾವ ರೀತಿಯ ಒತ್ತುವರಿಗಳಾಗಿವೆ ; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಎಷ್ಟು ಎಕರೆ ಅರಣ್ಯ ಜಮೀನು ಒತ್ತುವರಿಯಾಗಿದೆ ; ಒತ್ತುವರಿಯಾದ ಜಮೀನಿನ ಸರ್ವೆ ನಂಬರ್, ವಿಸ್ತೀರ್ಣ, ಗ್ರಾಮ, ಹೋಬಳಿ ಒಳಗೊಂಡಂತೆ ಒತ್ತುವರಿ ಮಾಡಿಕೊಂಡಿರುವ ರೈತರ/

ಒತ್ತುವರಿದಾರರ ವಿಳಾಸದೊಂದಿಗೆ ತಾಲ್ಲೂಕುವಾರು ಸಂಪೂರ್ಣವಾದ ಮಾಹಿತಿ ನೀಡುವುದು ;

(ಈ) ರಾಜ್ಯದಲ್ಲಿ ಒತ್ತುವರಿಯಾಗಿರುವ ಎಷ್ಟು ಎಕರೆ ಜಮೀನನ್ನು ಒತ್ತುವರಿದಾರರಿಂದ ತೆರವುಗೊಳಿಸಿ ಇಲಾಖೆ ವಶಕ್ಕೆ ಪಡೆಯಲಾಗಿದೆ ; ಒತ್ತುವರಿದಾರರ ವಿಳಾಸ, ಗ್ರಾಮ, ಸರ್ವೆ ನಂಬರ್, ವಿಸ್ತೀರ್ಣ, ಹೋಬಳಿ ಒಳಗೊಂಡಂತೆ ತಾಲ್ಲೂಕುವಾರು ಸಂಪೂರ್ಣ ಮಾಹಿತಿ ನೀಡುವುದು ?

## ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೪ (೧೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಇರುವಂತಹ ವಿದ್ಯಾರ್ಥಿ ನಿಲಯಗಳಲ್ಲಿ ಬಹುತೇಕ ಕಡೆಗಳಲ್ಲಿ ಮೂಲಭೂತ ಸೌಕರ್ಯಗಳಿಲ್ಲದೆ ಸಮಸ್ಯೆಗಳು ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಕುಡಿಯುವ ನೀರು, ಶೌಚಾಲಯ, ಗ್ರಂಥಾಲಯ, ಸ್ನಾನಗೃಹ, ವಿದ್ಯುತ್, ಹಾಸಿಗೆ, ಮೇಜು–ಕುರ್ಚಿ ಹಾಗೂ ಭದ್ರತಾ ವ್ಯವಸ್ಥೆಯಂತಹ ಮೂಲಭೂತ ಸೌಲಭ್ಯಗಳ ಕೊರತೆಗಳನ್ನು ನಿವಾರಿಸಲು ಸರ್ಕಾರ ಕೈಗೊಂಡ ಕ್ರಮಗಳಾವುವು ;

(ಈ) ಕಳೆದ ಮೂರು ವರ್ಷಗಳಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿ ನಿಲಯಗಳ ಕಟ್ಟಡ ದುರಸ್ತಿ ನಿರ್ವಹಣೆ ಹಾಗೂ ಮೂಲಸೌಕರ್ಯ ಅಭಿವೃದ್ಧಿಗೆ ಜಿಲ್ಲಾವಾರು ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ; ಖರ್ಚು ಮಾಡಲಾದ ವೆಚ್ಚದ ವಿವರ ನೀಡುವುದು ? (ಕಾಮಗಾರಿವಾರು ವಿವರ ಒದಗಿಸುವುದು)

## ರಾಜ್ಯದ ಸರ್ಕಾರಿ ಶಾಲೆಗಳಲ್ಲಿನ ಮೂಲಭೂತ ಸೌಲಭ್ಯಗಳ ಕೊರತೆ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

* (೧೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶೌಚಾಲಯ, ಶುದ್ಧ ಕುಡಿಯುವ ನೀರು, ವಿದ್ಯುತ್ ಮತ್ತು ಆಟದ ಮೈದಾನದಂತಹ ಮೂಲಭೂತ ಸೌಲಭ್ಯಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮೂಲಭೂತ ಸೌಲಭ್ಯಗಳ ಕೊರತೆ ಇರುವ ಶಾಲೆಗಳ ಸಮೀಕ್ಷೆ ಮಾಡಲಾಗಿದೆಯೇ ; ಮಾಡಿದ್ದಲ್ಲಿ, ಕೊರತೆ ಇರುವ ಶಾಲೆಗಳ ಸಂಖ್ಯೆ ಎಷ್ಟು; ಯಾವ ಯಾವ ಸೌಲಭ್ಯಗಳಲ್ಲಿ ಎಷ್ಟು ಕೊರತೆ ಕಂಡುಬಂದಿದೆ ಎಂಬ ವಿವರವನ್ನು ನೀಡುವುದು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಇ) ಸದರಿ ಶಾಲೆಗಳಲ್ಲಿನ ಮೂಲಸೌಲಭ್ಯಗಳ ಕೊರತೆಯನ್ನು ಸಂಪೂರ್ಣವಾಗಿ ನಿವಾರಿಸಲು ಸರ್ಕಾರ ಕಾಲಬದ್ಧ ಕಾರ್ಯಕ್ರಮ ರೂಪಿಸಿರುವುದೇ; ಇದ್ದಲ್ಲಿ, ಅದರ ವಿವರ ಹಾಗೂ ಪೂರ್ಣಗೊಳಿಸಲು ತೆಗೆದುಕೊಂಡ ಕಾಲಮಿತಿ ಎಷ್ಟು ;

(ಈ) ಗ್ರಾಮೀಣ ಹಾಗೂ ನಗರ ಪ್ರದೇಶಗಳ ಸರ್ಕಾರಿ ಶಾಲೆಗಳ ಮೂಲಸೌಕರ್ಯದಲ್ಲಿ ಇರುವ ವ್ಯತ್ಯಾಸಗಳ ಕುರಿತು ಸರ್ಕಾರ ಅಧ್ಯಯನ ನಡೆಸಿದೆಯೇ ; ನಡೆಸಿದ್ದಲ್ಲಿ, ಅದರ ವರದಿ ಹಾಗೂ ಕೈಗೊಂಡಿರುವ ಕ್ರಮಗಳು ಯಾವುವು ?

## ಸಮಾಜ ಕಲ್ಯಾಣ ಇಲಾಖೆಯ ಗಂಗಾ ಕಲ್ಯಾಣ ಯೋಜನೆಯಡಿ ಕೊಳವೆಬಾವಿ ಕಾಮಗಾರಿಗಳು ಅಪೂರ್ಣಗೊಂಡಿರುವ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೬ (೧೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಗಂಗಾ ಕಲ್ಯಾಣ ಯೋಜನೆಯಡಿ ಎಷ್ಟು ಫಲಾನುಭವಿಗಳಿಗೆ ಕೊಳವೆಬಾವಿ ಮಂಜೂರು ಮಾಡಲಾಗಿದೆ ; (ಜಿಲ್ಲಾ/ತಾಲ್ಲೂಕುವಾರು ವಿವರ ಒದಗಿಸುವುದು)

(ಆ) ಮಂಜೂರಾದ ಕೊಳವೆ ಬಾವಿಗಳಲ್ಲಿ ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಇನ್ನೂ ಅಪೂರ್ಣವಾಗಿರುವ ಕಾಮಗಾರಿಗಳ ಸಂಖ್ಯೆ ಎಷ್ಟು ; ಕಾಮಗಾರಿ ಪೂರ್ಣಗೊಳ್ಳದಿರುವುದಕ್ಕೆ ಇರುವ ಪ್ರಮುಖ ಕಾರಣಗಳು ಯಾವುವು ; (ಜಿಲ್ಲಾ/ತಾಲ್ಲೂಕುವಾರು ವಿವರ ಒದಗಿಸುವುದು)

(ಇ) ಹಲವು ಜಿಲ್ಲೆಗಳಲ್ಲಿ ಕೊಳವೆಬಾವಿ ಕೊರೆಯುವ ಕಾಮಗಾರಿ, ವಿದ್ಯುತ್ ಸಂಪರ್ಕ ಹಾಗೂ ಪಂಪ್‌ಸೆಟ್ ಅಳವಡಿಕೆ ಕಾಮಗಾರಿಗಳು ಪೂರ್ಣಗೊಳ್ಳದೇ ಫಲಾನುಭವಿಗಳು ಯೋಜನೆಯ ಪ್ರಯೋಜನದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅಪೂರ್ಣ ಕಾಮಗಾರಿಗಳನ್ನು ಪೂರ್ಣಗೊಳಿಸಿ ಫಲಾನುಭವಿಗಳಿಗೆ ನೀರಾವರಿ ಸೌಲಭ್ಯ ಕಲ್ಪಿಸಲು ಸರ್ಕಾರ ಯಾವ ಯಾವ ಕ್ರಮಗಳನ್ನು ಕೈಗೊಂಡಿದೆ ಹಾಗೂ ಅದಕ್ಕೆ ನಿಗದಿಪಡಿಸಿರುವ ಕಾಲಮಿತಿ ಯಾವುದು ;

(ಉ) ಪಂಪ್‌ಸೆಟ್, ವಿದ್ಯುತ್ ಸಂಪರ್ಕ ಹಾಗೂ ಟ್ರಾನ್ಸ್‌ಫಾರ್ಮರ್‌ಗಳನ್ನು ನೀಡಲು ಇರುವ ಮಾನದಂಡಗಳು ಯಾವುವು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ರಾಜ್ಯದಲ್ಲಿ ಇರುವಂತಹ ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭ (೧೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; ಅವುಗಳಲ್ಲಿ ಸ್ವಂತ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಕೇಂದ್ರಗಳೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಹೊಸ ಅಂಗನವಾಡಿ ಕೇಂದ್ರಗಳನ್ನು ಆರಂಭಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಅಂಗನವಾಡಿ ಕೇಂದ್ರಗಳಲ್ಲಿ ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಹಾಗೂ ಅಡುಗೆಮನೆ ಸೌಲಭ್ಯಗಳ ಸ್ಥಿತಿ ಏನು ;

(ಈ) ಅಂಗನವಾಡಿ ಕಾರ್ಯಕರ್ತೆಯರು ಮತ್ತು ಸಹಾಯಕಿಯರ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ;

(ಉ) ಅಂಗನವಾಡಿ ಕಾರ್ಯಕರ್ತೆಯರಿಗೆ ನೀಡಲಾಗುತ್ತಿರುವ ಗೌರವಧನವನ್ನು ಹೆಚ್ಚಿಸಲು ಸರ್ಕಾರ ಚಿಂತಿಸಿದೆಯೇ ; ಇದ್ದಲ್ಲಿ, ಮಾಹಿತಿ ಒದಗಿಸುವುದು ?

## ರಾಜ್ಯದಲ್ಲಿ ದಾಖಲಾದ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳ ಕುರಿತು

**ಶ್ರೀ ಕೆ. ಅಬ್ದುಲ್ ಜಬ್ಬಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮ (೧೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ದಾಖಲಾದ ಸಿವಿಲ್ ಹಾಗೂ ಕ್ರಿಮಿನಲ್ ಪ್ರಕರಣಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಇತ್ಯರ್ಥಗೊಂಡ ಪ್ರಕರಣಗಳು ಹಾಗೂ ಬಾಕಿ ಉಳಿದ ಪ್ರಕರಣಗಳ ಸಂಖ್ಯೆ ಎಷ್ಟು; (ವರ್ಷವಾರು ಮಾಹಿತಿ ಒದಗಿಸುವುದು)

(ಆ) ಬಾಕಿ ಇರುವ ಪ್ರಕರಣಗಳ ಸಂಖ್ಯೆ ಹೆಚ್ಚಾಗಲು ಪ್ರಮುಖ ಕಾರಣಗಳೇನು ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಬಾಕಿ ಪ್ರಕರಣಗಳ ಕಾರಣ ಸಾರ್ವಜನಿಕರಿಗೆ ನ್ಯಾಯ ದೊರೆಯಲು ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಡೆಗಟ್ಟಲು ಕೈಗೊಂಡಿರುವ ಕ್ರಮಗಳಾವುವು ;

(ಈ) ರಾಜ್ಯದಲ್ಲಿ ಬಾಕಿ ಇರುವ ಸಿವಿಲ್ ಮತ್ತು ಕ್ರಿಮಿನಲ್ ಪ್ರಕರಣಗಳನ್ನು ಮುಂದಿನ ದಿನಗಳಲ್ಲಿ ಗಣನೀಯವಾಗಿ ಕಡಿಮೆ ಮಾಡಲು ಸರ್ಕಾರ ಕಾಲಬದ್ಧ ಕಾರ್ಯಯೋಜನೆ ರೂಪಿಸಿರುವುದೇ ? (ಇದ್ದಲ್ಲಿ ಮಾಹಿತಿ ಒದಗಿಸುವುದು)

## ಸಿಂಧನೂರು ತಾಲ್ಲೂಕನ್ನು ಪ್ರತ್ಯೇಕ ಶೈಕ್ಷಣಿಕ ಜಿಲ್ಲೆಯೆಂದು ಘೋಷಿಸುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೯ (೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕು ಇಡೀ ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತೀ ಹೆಚ್ಚು ಶಿಕ್ಷಣ ಸಂಸ್ಥೆಗಳನ್ನು ಹೊಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಸಿಂಧನೂರು ತಾಲ್ಲೂಕನ್ನು ನೂತನ ಶೈಕ್ಷಣಿಕ ಜಿಲ್ಲೆಯೆಂದು ಘೋಷಿಸುವ ಬಗ್ಗೆ ಸರ್ಕಾರದ ನಿಲುವೇನು ;

(ಇ) ಸಿಂಧನೂರು ತಾಲ್ಲೂಕು ಶೈಕ್ಷಣಿಕ ಜಿಲ್ಲೆಯೆಂದು ಘೋಷಿಸಲು ಅಗತ್ಯವಿರುವ ಮಾನದಂಡಗಳೇನು ;

(ಈ) ಸಿಂಧನೂರು ತಾಲ್ಲೂಕಿನ ಶಾಲೆಗಳ ಸಂಖ್ಯೆ, ವಿದ್ಯಾರ್ಥಿಗಳ ಸಂಖ್ಯೆ ಹಾಗೂ ಭೌಗೋಳಿಕ ವ್ಯಾಪ್ತಿಯನ್ನು ಪರಿಗಣಿಸಿ, ಯಾವ ಕಾಲಮಿತಿಯೊಳಗೆ ಸಿಂಧನೂರು ತಾಲ್ಲೂಕನ್ನು ಪ್ರತ್ಯೇಕ ಶೈಕ್ಷಣಿಕ ಜಿಲ್ಲೆಯೆಂದು ಘೋಷಿಸಲಾಗುವುದು ?

## ಹೆಚ್ಚುವರಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦ (೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ಒಟ್ಟು ೦೫ ಮೆಟ್ರಿಕ್ ನಂತರದ ವಿದ್ಯಾರ್ಥಿನಿಲಯಗಳು ಕರ್ತವ್ಯ ನಿರ್ವಹಿಸುತ್ತಿದ್ದು, ಮಂಜೂರಾದ

ಸಂಖ್ಯೆಗಿಂತ ಹೆಚ್ಚಿನ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಒಂದು ಹಾಸ್ಟೆಲ್‌ನ ಮಂಜೂರಾತಿ ಸಾಮರ್ಥ್ಯ ೧೦೦ ವಿದ್ಯಾರ್ಥಿಗಳು ಮಾತ್ರ ಆಗಿದ್ದು, ಅದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ವಿದ್ಯಾರ್ಥಿಗಳು ಪ್ರವೇಶಾತಿ ಪಡೆದಲ್ಲಿ ವಿದ್ಯಾರ್ಥಿಗಳಿಗೆ ಸಮರ್ಪಕವಾಗಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಕಷ್ಟ ಸಾಧ್ಯವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಬಂದಿದ್ದಲ್ಲಿ, ಈ ಸಂಬಂಧ ಜಿಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ರಾಯಚೂರು ಇವರಿಂದ ವರದಿ ಪಡೆದು ಪ್ರವೇಶಾತಿ ಪಡೆಯುವ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿನಿಲಯಗಳನ್ನು ಮಂಜೂರು ಮಾಡುವ ಸಂಬಂಧ ಸರ್ಕಾರದ ನಿಲುವೇನು ;

(ಈ) ಸಿಂಧನೂರು ತಾಲ್ಲೂಕಿಗೆ ಅಗತ್ಯವಿರುವ ಹೆಚ್ಚುವರಿ ವಿದ್ಯಾರ್ಥಿನಿಲಯಗಳನ್ನು ನಿರ್ಮಿಸಲು ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ಮಂಜೂರಾತಿ ನೀಡಲಾಗುವುದು ?

## ಅಂಗನವಾಡಿ ಕೇಂದ್ರ ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧ (೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನ ಅಲಬನೂರು ಗ್ರಾಮದಲ್ಲಿ ಹೆಚ್ಚಿನ ಸಂಖ್ಯೆಯ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ಜನರು ವಾಸಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಅಲಬನೂರು ಗ್ರಾಮದ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ವಾರ್ಡ್‌ಗೆ ಹೊಸ ಅಂಗನವಾಡಿ ಕೇಂದ್ರ ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಪ್ರಸ್ತುತ ಯಾವ ಹಂತದಲ್ಲಿದೆ ;

(ಇ) ಸಿಂಧನೂರು ತಾಲ್ಲೂಕಿನ ಅಲಬನೂರು ಗ್ರಾಮದಲ್ಲಿ ಪರಿಶಿಷ್ಟ ಜಾತಿ (ಮಾದಿಗ) ಸಮುದಾಯದ ವಾರ್ಡ್‌ಗೆ ಹೊಸ ಅಂಗನವಾಡಿ ಕೇಂದ್ರವನ್ನು ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ಮಂಜೂರು ಮಾಡಲಾಗುವುದು ?

## ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಮಂಜೂರು ಮಾಡುವ ಬಗ್ಗೆ

**ಶ್ರೀ ಬಸನಗೌಡ ಬಾದರ್ಲಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨ (೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಿಂಧನೂರು ತಾಲ್ಲೂಕಿನಲ್ಲಿ ರಾಯಚೂರು ಜಿಲ್ಲೆಯ ಇತರೆ ತಾಲ್ಲೂಕಿಗಳಿಗಿಂತ ಹೆಚ್ಚಿನ ಸಂಖ್ಯೆಯಲ್ಲಿ ಹಿಂದುಳಿದ ವರ್ಗಗಳ ಬಡ ವಿದ್ಯಾರ್ಥಿಗಳು ವ್ಯಾಸಂಗ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಆ) ಸಮಾಜ ಕಲ್ಯಾಣ ಇಲಾಖೆಯ KRIES ಅಧೀನದಲ್ಲಿ ಬರುವ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳು ಸಿಂಧನೂರಿನಲ್ಲಿ ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಇ) ಬಂದಿದ್ದಲ್ಲಿ, ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಈ) ಸಿಂಧನೂರು ತಾಲ್ಲೂಕಿನಲ್ಲಿ ಸಮಾಜ ಕಲ್ಯಾಣ ಇಲಾಖೆಯ KRIES ವತಿಯಿಂದ ಹಿಂದುಳಿದ ವರ್ಗಗಳ ಬಡ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತಹ ಹಿಂದುಳಿದ ವರ್ಗಗಳ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಯಾವ ಕಾಲಮಿತಿಯೊಳಗೆ ತೆರೆಯಲಾಗುವುದು ?

## ಅಂಗನವಾಡಿ ಕೇಂದ್ರಗಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩ (೧೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ರಾಜ್ಯದಲ್ಲಿ ಒಟ್ಟು ಎಷ್ಟು ಅಂಗನವಾಡಿ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ ; (ಜಿಲ್ಲಾವಾರು ವಿವರ ನೀಡುವುದು)

(ಆ) ಎಷ್ಟು ಅಂಗನವಾಡಿ ಕೇಂದ್ರಗಳು ಸ್ವಂತ ಕಟ್ಟಡಗಳನ್ನು ಹೊಂದಿದೆ ಹಾಗೂ ಎಷ್ಟು ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿವೆ ;

(ಇ) ಎಷ್ಟು ಅಂಗನವಾಡಿ ಕಾರ್ಯಕರ್ತೆ ಮತ್ತು ಸಹಾಯಕಿಯರ ಹುದ್ದೆಗಳು ಖಾಲಿ ಇವೆ ; (ಜಿಲ್ಲಾವಾರು ವಿವರ ನೀಡುವುದು)

(ಈ) ಹೊಸ ಅಂಗನವಾಡಿ ಕೇಂದ್ರಗಳನ್ನು ಮಂಜೂರು ಮಾಡಲು ಹಾಗೂ ಮೂಲಭೂತ ಸೌಲಭ್ಯಗಳನ್ನು (ಕುಡಿಯುವ ನೀರು, ಶೌಚಾಲಯ, ವಿದ್ಯುತ್, ಅಡುಗೆ ಕೊಠಡಿ, ಆಟಿಕೆಗಳು) ಒದಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಬಿಡುಗಡೆಯಾದ ಅನುದಾನ ಮತ್ತು ಖರ್ಚಾದ ಅನುದಾನದ ವಿವರ ನೀಡುವುದು ?

## ಅಂಗನವಾಡಿ ಕೇಂದ್ರಗಳಲ್ಲಿ ನೋಂದಾಯಿತ ಮಕ್ಕಳ ಕುರಿತು

**ಶ್ರೀಮತಿ ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪ (೧೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಅಂಗನವಾಡಿ ಕೇಂದ್ರಗಳಲ್ಲಿ ನೋಂದಾಯಿತ ನವಜಾತ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ನೋಂದಾಯಿತ ಮಕ್ಕಳಿಗೆ ನೀಡಲಾಗುವ ಪೌಷ್ಠಿಕ ಆಹಾರದ ವಿವರ ನೀಡುವುದು ;

(ಇ) ಗರ್ಭಿಣಿಯರು ಮತ್ತು ಬಾಣಂತಿಯರಿಗೆ ಪೂರಕ ಪೌಷ್ಠಿಕ ಆಹಾರ ವಿತರಣೆ ನಿಯಮಿತವಾಗಿ ನಡೆಯುತ್ತಿದೆಯೇ ; ಎಷ್ಟು ದಿನಗಳ ವರೆಗೆ ಆಹಾರ ವಿತರಣೆ ಮಾಡಲಾಗುವುದು ;

(ಈ) ಎಷ್ಟು ಅಪೌಷ್ಠಿಕ ಮಕ್ಕಳಿಗೆ ಪೌಷ್ಠಿಕ ಮತ್ತು ಪುನರ್ವಸತಿ ಸೇವೆಗಳನ್ನು ನೀಡಲಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ಈ ಯೋಜನೆಗೆ ಸರ್ಕಾರದಿಂದ ಬಿಡುಗಡೆಯಾದ ಮತ್ತು ವೆಚ್ಚವಾದ ವಿವರ ನೀಡುವುದು ; (ಜಿಲ್ಲಾವಾರು ವಿವರ ನೀಡುವುದು)

(ಊ) ಮಗುವಿನ ಆರೋಗ್ಯಕ್ಕೆ ಸಂಬಂಧಿಸಿದಂತೆ ಇರುವ ಯೋಜನೆಗಳು ಯಾವುವು ? (ವಿವರ ನೀಡುವುದು)

## ಬೀದರ್ ಜಿಲ್ಲೆಯ ಹುಮ್ನಾಬಾದ್ ತಾಲ್ಲೂಕಿನಲ್ಲಿ ನೂತನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಮಂಜೂರಾತಿ ಕುರಿತು

**ಡಾ. ಚಂದ್ರಶೇಖರ್ ಬಿ. ಪಾಟೀಲ (ಪದವೀದರರ ಕ್ಷೇತ್ರ) :–**

೧೫ (೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆ, ಹುಮ್ನಾಬಾದ್ ತಾಲ್ಲೂಕಿನಲ್ಲಿ ನೂತನ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜನ್ನು ಮಂಜೂರು ಮಾಡುವ ಉದ್ದೇಶ ಸರ್ಕಾರದ ಮುಂದಿದೆಯೇ ;

(ಆ) ಹಾಗಿದ್ದಲ್ಲಿ, ನೂತನ ಪಾಲಿಟೆಕ್ನಿಕ್ ಕಾಲೇಜನ್ನು ಮಂಜೂರು ಮಾಡಲು ಸರ್ಕಾರವು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ರಾಜ್ಯದಲ್ಲಿರುವ ಸರ್ಕಾರಿ ಪ್ರೌಢ ಶಾಲೆಗಳ ವ್ಯವಸ್ಥೆ ಹಾಗೂ ಬಾಲಕಿಯ ಡ್ರಾಪ್ ಔಟ್ ಪ್ರಮಾಣ ತಗ್ಗಿಸುವ ಕುರಿತು

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೬ (೬೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರೌಢ ಶಾಲೆಗಳ ಸಂಖ್ಯೆ ಎಷ್ಟು; ಎಷ್ಟು ಶಾಲೆಗಳು ಸ್ವಂತ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ; ಮತ್ತು ಎಷ್ಟು ಶಾಲೆಗಳು ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿವೆ ; ಕಳೆದ ಮೂರು ವರ್ಷಗಳಲ್ಲಿ ನಿರ್ಮಾಣವಾದ ಪ್ರೌಢ ಶಾಲಾ ಕಟ್ಟಡಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಆ) ಎಷ್ಟು ಪ್ರೌಢ ಶಾಲೆಗಳಲ್ಲಿ ಸುಸಜ್ಜಿತವಾದ ಶೌಚಾಲಯ ನಿರ್ಮಾಣ ಮಾಡಲಾಗಿದೆ ; ಎಷ್ಟು ಶಾಲೆಗಳಲ್ಲಿ ಶೌಚಾಲಯಗಳು ಲಭ್ಯವಿರುವುದಿಲ್ಲ ; ಎಲ್ಲಾ ಶಾಲೆಗಳಿಗೆ ಶೌಚಾಲಯ ಸೌಲಭ್ಯ ನೀಡಲು ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ರಾಜ್ಯದ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ವಿದ್ಯಾಭ್ಯಾಸ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಬಾಲಕರ ಮತ್ತು ಬಾಲಕಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಈ) ಕಳೆದ ಮೂರು ವರ್ಷಗಳಲ್ಲಿ ಪ್ರೌಢ ಶಾಲಾ ಹಂತದಲ್ಲಿ ಶಾಲೆಯನ್ನು ಬಿಟ್ಟ ಬಾಲಕಿಯರ ಮತ್ತು ಬಾಲಕರ ಸಂಖ್ಯೆ ಎಷ್ಟು; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಉ) ನೆರೆ ರಾಜ್ಯಗಳಾದ ತಮಿಳುನಾಡು ಮತ್ತು ಕೇರಳ ರಾಜ್ಯಗಳಿಗೆ ಹೋಲಿಸಿದಲ್ಲಿ, ರಾಜ್ಯದಲ್ಲಿ ಪ್ರೌಢ ಶಾಲಾ ಬಾಲಕಿಯರ ಡ್ರಾಪ್ ಔಟ್ ಪ್ರಮಾಣ ಹೆಚ್ಚಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಶಾಲೆಗಳಲ್ಲಿ ಡ್ರಾಪ್ ಔಟ್ ಪ್ರಮಾಣ ತಗ್ಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ತುಮಕೂರು ಜಿಲ್ಲೆ, ಸಿರಾ ತಾಲ್ಲೂಕು, ಚಿಕ್ಕನಹಳ್ಳಿ ಸರ್ಕಾರಿ ಶಾಲೆಯ ಆಸ್ತಿ ಒತ್ತುವರಿ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೭ (೬೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ಜಿಲ್ಲೆಯ ಎಷ್ಟು ಸರ್ಕಾರಿ ಶಾಲೆಗಳ ಹೆಸರಿಗೆ ಖಾತೆ ನೋಂದಣಿ ಮಾಡಲಾಗಿದೆ; ಎಷ್ಟು ಶಾಲೆಗಳ ಹೆಸರಿಗೆ ಖಾತೆ ಮಾಡುವುದು ಬಾಕಿಯಿದೆ; ಬಾಕಿಯಿರುವ ಖಾತೆ ದಾಖಲಾತಿಯನ್ನು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮವೇನು ;

(ಆ) ತುಮಕೂರು ಜಿಲ್ಲೆಯ ಹಲವು ಸರ್ಕಾರಿ ಶಾಲೆಗಳ ಆಸ್ತಿ ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಎಷ್ಟು ಶಾಲೆಗಳ ಆಸ್ತಿಗಳು ಒತ್ತುವರಿಯಾಗಿವೆ ; ಅವು ಯಾವುವು ; (ಸಂಪೂರ್ಣ ವಿವರ ನೀಡುವುದು)

(ಇ) ತುಮಕೂರು ಜಿಲ್ಲೆ, ಸಿರಾ ತಾಲ್ಲೂಕು, ಚಿಕ್ಕನಹಳ್ಳಿಯ ದಾನಿಯವರ ಕೋರಿಕೆ ಮೇರೆಗೆ ಹಳೆ ಸ.ನಂ.೧೯೦(ಹೊಸ ಸ.ನಂ.೨೦೨)ರ ೫-೧೪ ಗುಂಟೆ ವಿಸ್ತೀರ್ಣ ಹಾಗೂ ಹಳೆ ಸ.ನಂ.೧೮೭/೧ ಮತ್ತು ೨ (ಹೊಸ ಸ.ನಂ.೧೯೯/೪, ೫)ರ ೨ ಎಕರೆ ವಿಸ್ತೀರ್ಣದ ಜಮೀನುಗಳನ್ನು ಮಹಾರಾಜ ಸರ್ಕಾರದ ಆದೇಶ ಸಂಖ್ಯೆ:ಆರ್.೪೭೬೯-೭೦/ಇ೬೧-೦೭-೦೬, ದಿನಾಂಕ:೧೧.೦೧.೧೯೧೦ ರಂತೆ ಪಾಠಶಾಲೆ ಕಟ್ಟಲು ಈ ಜಮೀನುಗಳ ಕಂದಾಯ ವಜಾಗೊಳಿಸಿ, ಭೂ ಪರಿವರ್ತನೆಗೊಳಿಸಿ ಜಿಲ್ಲಾಧಿಕಾರಿಗಳ ಸಂರಕ್ಷಣೆಯಲ್ಲಿ ಸರ್ಕಾರ ವಹಿಸಿಕೊಂಡಿದೆಯೇ ;

(ಈ) ಸದರಿ ಸರ್ಕಾರಿ ಶಾಲೆಗೆ ದಾನಿಗಳು ನೀಡಿದ ಜಮೀನನ್ನು ಕಟ್ಟಡಗಳ ಸಹಿತ ಖಾಸಗಿಯವರಿಗೆ ಪರಭಾರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸದರಿ ಸರ್ಕಾರಿ ಶಾಲೆಯ ಆಸ್ತಿಯನ್ನು ರಕ್ಷಿಸಲು ಸರ್ಕಾರ ಕೈಗೊಂಡ ಕ್ರಮವೇನು ?

## ನಕಲಿ ದಾಖಲೆ ಸಲ್ಲಿಸಿ ಅತಿಥಿ ಉಪನ್ಯಾಸಕರಾಗಿ ನೇಮಕವಾಗಿರುವ ಬಗ್ಗೆ

**ಶ್ರೀ ಚಿದಾನಂದ್ ಎಂ. ಗೌಡ (ಪದವೀಧರರ ಕ್ಷೇತ್ರ) :–**

೧೮ (೬೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಕಾರ್ಯನಿರ್ವಹಿಸುತ್ತಿರುವ ಉಪನ್ಯಾಸಕರ ಸಂಖ್ಯೆ ಎಷ್ಟು; ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು;

(ಆ) ೨೦೨೫–೨೬ ನೇ ಸಾಲಿನಲ್ಲಿ ಎಷ್ಟು ಜನ ಅತಿಥಿ ಉಪನ್ಯಾಸಕರನ್ನು ನೇಮಕ ಮಾಡಿಕೊಳ್ಳಲಾಗಿತ್ತು; ಇವರಿಗೆ ನಿಗದಿಗೊಳಿಸಲಾಗಿದ್ದ ಅರ್ಹತೆಯೇನು ;

(ಇ) ೨೦೨೫–೨೬ ರಲ್ಲಿ ನೇಮಕವಾಗಿದ್ದ ಅತಿಥಿ ಉಪನ್ಯಾಸಕರಲ್ಲಿ ಎಷ್ಟು ಜನ ನಕಲಿ ದಾಖಲೆ ಸಲ್ಲಿಸಿ ಅತಿಥಿ ಉಪನ್ಯಾಸಕರಾಗಿ ಆಯ್ಕೆಯಾಗಿದ್ದಾರೆ ; ಇವರ ಮೇಲೆ ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಈ ಹಿಂದೆ ನೇಮಕವಾಗಿದ್ದ ಎಷ್ಟು ಅತಿಥಿ ಉಪನ್ಯಾಸಕರ ದಾಖಲಾತಿಗಳನ್ನು ಪರಿಶೀಲನೆ ಮಾಡಲಾಗಿದೆ ; ಮಾಡದೇ ಇದ್ದರೆ ಕಾರಣಗಳೇನು ;

(ಉ) ಎಲ್ಲಾ ಹುದ್ದೆಗಳಿಗೆ ಖಾಯಂ ಉಪನ್ಯಾಸಕರನ್ನು ನೇಮಕ ಮಾಡಲು ಸರ್ಕಾರಕ್ಕೆ ಇರುವ ಸಮಸ್ಯೆಗಳು ಏನು ; ವಿದ್ಯಾರ್ಥಿಗಳ ಹಿತದೃಷ್ಟಿಯಿಂದ ಸರ್ಕಾರವು ಪ್ರಥಮ ದರ್ಜೆ ಕಾಲೇಜುಗಳಿಗೆ ಖಾಯಂ ಉಪನ್ಯಾಸಕರ ನೇಮಕಾತಿಯನ್ನು ಯಾವ ಕಾಲಮಿತಿಯಲ್ಲಿ ಮಾಡಲಾಗುವುದು ; ಇದಕ್ಕಾಗಿ ಸರ್ಕಾರ ಕೈಗೊಂಡ ಕ್ರಮಗಳೇನು ?

# ನಿರಾಮಯ ಆರೋಗ್ಯ ವಿಮಾ ಯೋಜನೆ ಮತ್ತು ವಿಕಲಚೇತನರ ಸಬಲೀಕರಣದ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೧೯ (೧೫೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ "ನಿರಾಮಯ ಆರೋಗ್ಯ ವಿಮಾ ಯೋಜನೆ" ಅಡಿಯಲ್ಲಿ ಹಾಗೂ ಪ್ರಸ್ತುತ ವರ್ಷದಲ್ಲಿ ಎಷ್ಟು ವಿಶೇಷಚೇತನರು ನೋಂದಾಯಿಸಿಕೊಂಡಿದ್ದಾರೆ; ರಾಜ್ಯದಲ್ಲಿ ಈ ಯೋಜನೆಗೆ ಅರ್ಹರಾಗಿರುವ ಒಟ್ಟು ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ನೀಡುವುದು)

(ಆ) ತೀವ್ರ ಸ್ವರೂಪದ ಅಂಗವೈಕಲ್ಯ ಹೊಂದಿರುವ ಮಕ್ಕಳ ಪೋಷಕರು/ಆರೈಕೆದಾರರಿಗೆ ಮಾಸಿಕ ರೂ.೧,೦೦೦/– ಮಾಶಾಸನ ನೀಡುವ ಯೋಜನೆಯಡಿ ಇದುವರೆಗೆ ಎಷ್ಟು ಫಲಾನುಭವಿಗಳಿಗೆ ಗೌರವಧನವನ್ನು ವಿತರಿಸಲಾಗಿದೆ ;

(ಇ) ರಾಜ್ಯದಲ್ಲಿ ಇದುವರೆಗೆ ಎಷ್ಟು ವಿಶೇಷಚೇತನರಿಗೆ ವಿಶಿಷ್ಟ ಅಂಗವೈಕಲ್ಯ ಗುರುತಿನ ಚೀಟಿ (UDID Card) ನೀಡಲಾಗಿದೆ ; ಅಂದಾಜು ಒಟ್ಟು ಎಷ್ಟು ವಿಶೇಷಚೇತನರಿದ್ದಾರೆ ; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ನೀಡುವುದು)

(ಈ) ಅಂಗವಿಕಲರ ಮತ್ತು ಹಿರಿಯ ನಾಗರೀಕರ ಸಬಲೀಕರಣ ಇಲಾಖೆಯಲ್ಲಿ ಮಂಜೂರಾಗಿರುವ ಒಟ್ಟು ಹುದ್ದೆಗಳ ಸಂಖ್ಯೆ, ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಯ ಸಂಖ್ಯೆ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಹಾಗೂ ವರ್ಷವಾರು ವಿವರ ನೀಡುವುದು)

# ಕುವೆಂಪು ವಿಶ್ವವಿದ್ಯಾಲಯಕ್ಕೆ ಮಂಜೂರಾಗಿರುವ ಅರಣ್ಯ ಭೂಮಿಗೆ ಬಾಕಿ ಮೊತ್ತವನ್ನು ನೀಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೨೦ (೧೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕುವೆಂಪು ವಿಶ್ವವಿದ್ಯಾಲಯಕ್ಕೆ ಅರಣ್ಯ ಇಲಾಖೆಯಿಂದ ಒಟ್ಟು ಎಷ್ಟು ಎಕರೆ ಅರಣ್ಯ ಭೂಮಿಯನ್ನು ವರ್ಗಾಯಿಸಲಾಗಿದೆ ;

(ಆ) ಅರಣ್ಯ ಭೂಮಿಯ ವರ್ಗಾವಣೆಗೆ ಸಂಬಂಧಿಸಿದಂತೆ, ಕೇಂದ್ರ ಸರ್ಕಾರದ ನಿಯಮಗಳು ಹಾಗೂ ಷರತ್ತುಗಳ ಅನುಸಾರ ನೆಟ್ ಪ್ರೆಸೆಂಟ್ ವ್ಯಾಲ್ಯೂ (NPV) ಮತ್ತು ಇತರೆ ಕಡ್ಡಾಯ ಶುಲ್ಕಗಳ ರೂಪದಲ್ಲಿ ಪಾವತಿಸಬೇಕಾದ ಒಟ್ಟು ಮೊತ್ತ ಎಷ್ಟು ;

(ಇ) ಈವರೆಗೆ ಕುವೆಂಪು ವಿಶ್ವವಿದ್ಯಾಲಯ ಅಥವಾ ರಾಜ್ಯ ಸರ್ಕಾರದಿಂದ ಎಷ್ಟು ಮೊತ್ತವನ್ನು ಪಾವತಿಸಲಾಗಿದೆ; ಪ್ರಸ್ತುತ ಬಾಕಿ ಉಳಿದಿರುವ ಮೊತ್ತ ಎಷ್ಟು ;

(ಈ) ಬಾಕಿ ಮೊತ್ತವನ್ನು ಪಾವತಿಸುವ ಕುರಿತು ಕೇಂದ್ರ ಸರ್ಕಾರದ ಸಂಬಂಧಿತ ಅರಣ್ಯ/ಪರಿಸರ ಇಲಾಖೆಯಿಂದ ಯಾವುದೇ ಬೇಡಿಕೆ ಪತ್ರ, ನೋಟಿಸ್ ಅಥವಾ ನಿರ್ದೇಶನ ಬಂದಿದೆಯೇ ; ಬಂದಿದ್ದರೆ, ಅದರ ವಿವರಗಳನ್ನು ನೀಡುವುದು ;

(ಉ) ಪ್ರಸ್ತುತ ಸುಮಾರು ರೂ.೧೦೦ ಕೋಟಿಗೂ ಅಧಿಕವಾಗಿರುವ ಬಾಕಿ ಮೊತ್ತವನ್ನು ಪಾವತಿಸಲು ರಾಜ್ಯ ಸರ್ಕಾರವು ಯಾವುದೇ ನಿರ್ಧಾರ ಕೈಗೊಂಡಿದೆಯೇ ; ಕೈಗೊಂಡಿದ್ದರೆ, ಸಂಪೂರ್ಣ ವಿವರಗಳನ್ನು ನೀಡುವುದು ;

(ಊ) ರಾಜ್ಯ ಸರ್ಕಾರದ ಉನ್ನತ ಶಿಕ್ಷಣ ಇಲಾಖೆ, ಅರಣ್ಯ ಇಲಾಖೆ ಹಾಗೂ ಕೇಂದ್ರ ಸರ್ಕಾರದ ಸಂಬಂಧಿತ ಸಚಿವಾಲಯಗಳೊಂದಿಗೆ ಸಮನ್ವಯ ಸಾಧಿಸಿ ಈ ಸಮಸ್ಯೆಯನ್ನು ಶೀಘ್ರವಾಗಿ ಇತ್ಯರ್ಥಪಡಿಸಲು ಸರ್ಕಾರವು ಯಾವ ಕ್ರಮಗಳನ್ನು ಕೈಗೊಳ್ಳಲಿದೆ ; ಯಾವ ಕಾಲಮಿತಿಯೊಳಗೆ ಈ ಸಮಸ್ಯೆಯನ್ನು ಪರಿಹರಿಸಲು ಉದ್ದೇಶಿಸಿದೆ ?

## ಸರ್ಕಾರಿ ಪದವಿ ಪೂರ್ವ ಕಾಲೇಜಿಗೆ ಗಣಕ ವಿಜ್ಞಾನ ಉಪನ್ಯಾಸಕರ ನೇಮಕಾತಿ ಸಂದರ್ಭದಲ್ಲಿ B.Ed ವಿನಾಯಿತಿ ನೀಡುವ ಕುರಿತು

**ಡಾ. ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ) :–**

೨೧ (೧೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಮಂಜೂರಾಗಿರುವ “ಗಣಕ ವಿಜ್ಞಾನ” (Computer Science) ಉಪನ್ಯಾಸಕರ ಸಂಖ್ಯೆ ಎಷ್ಟು ; ಖಾಯಂ ಹಾಗೂ ಅತಿಥಿ ಉಪನ್ಯಾಸಕರ ಸಂಖ್ಯೆ ಎಷ್ಟು ;

(ಆ) ಖಾಯಂ ಹಾಗೂ ಅತಿಥಿ ಉಪನ್ಯಾಸಕರಿಗೆ ನಿಗದಿಪಡಿಸಿರುವ ವಿದ್ಯಾರ್ಹತೆಗಳೇನು ; (ಜಿಲ್ಲಾವಾರು, ತಾಲ್ಲೂಕುವಾರು ವಿವರ ನೀಡುವುದು)

(ಇ) M.S. Computer Science ಹೊರತುಪಡಿಸಿ BE, M.Tech, MCA ಪದವೀದರರಿಗೆ ನಿರ್ದಿಷ್ಟವಾಗಿ B.Ed ನಲ್ಲಿ ಮೆತಡಾಲಜಿ ಇಲ್ಲದಿರುವುದರಿಂದ, ನೇಮಕಾತಿಗಳಲ್ಲಿ B.Ed ನಿಂದ ವಿನಾಯಿತಿ ನೀಡಲಾಗುವುದೇ ; ಈ ಸಂಬಂಧ ಸರ್ಕಾರದ ನಿಲುವೇನು ;

(ಈ) ಕ್ರೈಸ್ (KRIES) ವಸತಿ ಶಾಲೆಗಳ ಗಣಕ ಶಿಕ್ಷಕರ ನೇಮಕಾತಿ ವೇಳೆ ಯಿಂದ ವಿನಾಯಿತಿ ನೀಡಿದ್ದು, ನೇಮಕಾತಿಯ ೫ ವರ್ಷಗಳಲ್ಲಿ B.Ed ಪದವಿ ಪಡೆಯುವ ಷರತ್ತು ವಿಧಿಸಲಾಗಿದ್ದು, ಅದೇ ಮಾದರಿಯಲ್ಲಿ PU ಕಾಲೇಜು ಗಣಕ ವಿಜ್ಞಾನ ಉಪನ್ಯಾಸಕರಿಗೆ B.Ed ವಿನಾಯಿತಿ ನೀಡುವುದು ಸರಿಯಲ್ಲವೇ ; ಈ ಸಂಬಂಧ ಸರ್ಕಾರ ಯಾವ ಕ್ರಮ ಕೈಗೊಳ್ಳಲಿದೆ ?

## ವಸತಿ ಮತ್ತು ವಿದ್ಯಾರ್ಥಿ ನಿಲಯಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೨ (೮೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಿದ್ಯಾರ್ಥಿ ನಿಲಯಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ವಿದ್ಯಾರ್ಥಿ ನಿಲಯಗಳಲ್ಲಿ ನೀರು, ವಿದ್ಯುತ್, ಶೌಚಾಲಯ ಹಾಗೂ ಇನ್ನಿತರ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಕೈಗೊಂಡ ಕ್ರಮವೇನು ; (ವಿವರ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ವಿದ್ಯಾರ್ಥಿ ನಿಲಯಗಳಿಗೆ ಒದಗಿಸುತ್ತಿರುವ ಮೂಲಭೂತ ಸೌಕರ್ಯಗಳಲ್ಲಿ ಯಾವ ರೀತಿಯ ಬದಲಾವಣೆಗಳನ್ನು ತರಲಾಗಿದೆ ;

(ಈ) ಕಳೆದ ೩ ವರ್ಷಗಳಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸಲಾಗಿದೆ ; ಮುಂದಿನ ದಿನಗಳಲ್ಲಿ ಎಷ್ಟು ವಿದ್ಯಾರ್ಥಿ ನಿಲಯಗಳನ್ನು ಸ್ಥಾಪಿಸುವ ಗುರಿ ಹೊಂದಲಾಗಿದೆ ? (ವಿವರ ನೀಡುವುದು)

## ವಿಶ್ವವಿದ್ಯಾನಿಲಯಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೩ (೮೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಕಾರ್ಯನಿರ್ವಹಿಸುತ್ತಿರುವ ವಿಶ್ವವಿದ್ಯಾನಿಲಯಗಳ ಸಂಖ್ಯೆ ಎಷ್ಟು; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ವಿಶ್ವವಿದ್ಯಾನಿಲಯಗಳ ಅಭಿವೃದ್ಧಿಗಾಗಿ ಬಿಡುಗಡೆ ಮಾಡಿದ ಒಟ್ಟು ಅನುದಾನ ಎಷ್ಟು;

(ಇ) ವಿಶ್ವವಿದ್ಯಾನಿಲಯಗಳ ಅಭಿವೃದ್ಧಿಗಾಗಿ ಸೂಕ್ತ ಅನುದಾನ ಬಿಡುಗಡೆ ಮಾಡದೇ ಇರುವುದರಿಂದ ವಿಶ್ವವಿದ್ಯಾನಿಲಯಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಬಳ ಹಾಗೂ ಇನ್ನಿತರ ಸೌಲಭ್ಯಗಳಿಂದ ವಂಚಿತರಾಗುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮಗಳೇನು ;

(ಈ) ಯಾವ ಕಾರಣಕ್ಕಾಗಿ ವಿಶ್ವವಿದ್ಯಾನಿಲಯಗಳಿಗೆ ಸೂಕ್ತ ಅನುದಾನ ನೀಡಲಾಗುತ್ತಿಲ್ಲ? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಗಳಲ್ಲಿರುವ ಸರ್ಕಾರಿ ಶಾಲೆಗಳ ಮೂಲಸೌಕರ್ಯಗಳ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೪ (೮೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಸರ್ಕಾರಿ ಶಾಲೆಗಳ ಪೈಕಿ ಮೂಲಸೌಕರ್ಯದ (ಕಟ್ಟಡ, ಕುಡಿಯುವ ನೀರು, ಶೌಚಾಲಯ, ವಿದ್ಯುತ್ ಮತ್ತು ಇತ್ಯಾದಿಗಳ) ಕೊರತೆಯಿಂದ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಲ್ಲಿ ಬೆಂಗಳೂರು ನಗರ ಜಿಲ್ಲೆಗೆ ಎಷ್ಟು ಅನುದಾನ ಬಿಡುಗಡೆ ಮಾಡಲಾಗಿದೆ ಮತ್ತು ಎಷ್ಟು ಖರ್ಚು ಮಾಡಲಾಗಿದೆ ; ಯಾವ ಯಾವ ಕಾಮಗಾರಿಗಳಿಗೆ ಖರ್ಚು ಮಾಡಲಾಗಿದೆ ; ಬಾಕಿ ಉಳಿದಿರುವ ಅನುದಾನವೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಇ) ಈ ಶಾಲೆಗಳು ಮುಚ್ಚುವ ಪರಿಸ್ಥಿತಿ ಬರದಂತೆ ಸರ್ಕಾರ ತೆಗೆದುಕೊಂಡಿರುವ ತುರ್ತು ಕ್ರಮಗಳು ಯಾವುವು ? (ವಿವರ ನೀಡುವುದು)

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಒದಗಿಸುವ ವಿದ್ಯಾರ್ಥಿ ವೇತನ ಮತ್ತು ಶಿಕ್ಷಣದ ಕುರಿತು

**ಶ್ರೀ ಹೆಚ್.ಎಸ್. ಗೋಪಿನಾಥ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೨೫ (೮೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೩ ವರ್ಷಗಳಲ್ಲಿ ವಿದ್ಯಾರ್ಥಿ ವೇತನ ವಿತರಣೆಯಲ್ಲಿ ಉಂಟಾದ ವಿಳಂಬಗಳ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಆ) ಪ್ರಸ್ತುತ ಆರ್ಥಿಕ ವರ್ಷದಲ್ಲಿ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ವಿದ್ಯಾರ್ಥಿ ವೇತನಗಳ ಒಟ್ಟು ಅನುದಾನ ಎಷ್ಟು ;

(ಇ) ವಿದೇಶ ವಿದ್ಯಾಭ್ಯಾಸಕ್ಕಾಗಿ ನೀಡಲಾಗಿರುವ ವಿದ್ಯಾರ್ಥಿ ವೇತನ ಯೋಜನೆಗಳ ಫಲಾನುಭವಿಗಳ ಸಂಖ್ಯೆ ಎಷ್ಟು;

(ಈ) ಹಿಂದುಳಿದ ವರ್ಗಗಳ ವಸತಿ ನಿಲಯಗಳ ಸ್ಥಿತಿ ಸುಧಾರಣೆಗೆ ಸರ್ಕಾರ ಕೈಗೊಂಡಿರುವ ಯೋಜನೆಗಳೇನು ?

## ಡಾ॥ ಬಿ.ಆರ್. ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿಯ ಅನುದಾನ ಬಿಡುಗಡೆ ಮತ್ತು ಸಿಬ್ಬಂದಿ ನೇಮಕದ ಬಗ್ಗೆ

**ಡಾ. ಕೆ. ಗೋವಿಂದರಾಜ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೬ (೧೨೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಡಾ॥ ಬಿ.ಆರ್ ಅಂಬೇಡ್ಕರ್ ಸ್ಕೂಲ್ ಆಫ್ ಎಕನಾಮಿಕ್ಸ್ ಯೂನಿವರ್ಸಿಟಿ ಆರಂಭವಾದಾಗ ಘೋಷಿಸಿದ ಅನುದಾನವೆಷ್ಟು; ಇದುವರೆವಿಗೂ ಬಿಡುಗಡೆಯಾಗಿರುವ ಅನುದಾನವೆಷ್ಟು; (ವಿವರ ನೀಡುವುದು)

(ಆ) ವಿಶ್ವವಿದ್ಯಾಲಯದಲ್ಲಿ ಬೋಧಕ ಮತ್ತು ಬೋಧಕೇತರ ಮಂಜೂರಾದ ಹುದ್ದೆಗಳೆಷ್ಟು; (ವೃಂದವಾರು ಮಾಹಿತಿ ನೀಡುವುದು)

(ಇ) ಇದುವರೆವಿಗೂ ಎಷ್ಟು ಬೋಧಕ ಮತ್ತು ಬೋಧಕೇತರ ಖಾಯಂ ಸಿಬ್ಬಂದಿಗಳು ನೇಮಕಗೊಂಡಿದ್ದಾರೆ ; ಗುತ್ತಿಗೆ ಮತ್ತು ಹೊರಗುತ್ತಿಗೆ ಆಧಾರದ ಮೇಲೆ ನೇಮಕಗೊಂಡ ಸಿಬ್ಬಂದಿಗಳೆಷ್ಟು ? (ಮಾಹಿತಿ ಒದಗಿಸುವುದು)

# ೨೦೨೫–೨೬ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯಿಂದ ನೀಡಲಾದ ವಿದ್ಯಾರ್ಥಿ ವೇತನ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೭ (೧೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ವೇತನಕ್ಕಾಗಿ ಒಟ್ಟು ಎಷ್ಟು ಅರ್ಜಿಗಳು ಸ್ವೀಕೃತವಾಗಿವೆ ; (ಇಲಾಖಾವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಆ) ಸ್ವೀಕೃತವಾದ ಅರ್ಜಿಗಳ ಪೈಕಿ ಎಷ್ಟು ವಿದ್ಯಾರ್ಥಿಗಳಿಗೆ ವಿದ್ಯಾರ್ಥಿವೇತನ ಮಂಜೂರು ಮಾಡಲಾಗಿದೆ ; (ಇಲಾಖಾವಾರು ಹಾಗೂ ಜಿಲ್ಲಾವಾರು ವಿವರ ಒದಿಸುವುದು)

(ಇ) ವಿದ್ಯಾರ್ಥಿವೇತನ ಮಂಜೂರಾದ ವಿದ್ಯಾರ್ಥಿಗಳ ಪೈಕಿ ಎಷ್ಟು ವಿದ್ಯಾರ್ಥಿಗಳಿಗೆ ನೇರ ನಗದು ವರ್ಗಾವಣೆ (DBT) ಮೂಲಕ ವಿದ್ಯಾರ್ಥಿವೇತನದ ಮೊತ್ತ ಜಮಾ ಮಾಡಲಾಗಿದೆ ; (ಇಲಾಖಾವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಈ) ವಿದ್ಯಾರ್ಥಿವೇನತ ಮಂಜೂರಾದರೂ ಇನ್ನೂ ಡಿಬಿಟಿ(DBT) ಮೂಲಕ ಹಣ ವರ್ಗಾವಣೆಯಾಗದೇ ಬಾಕಿ ಇರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಬಾಕಿ ಇರುವ ಮೊತ್ತ ಎಷ್ಟು ; (ಇಲಾಖಾವಾರು ಹಾಗೂ ಜಿಲ್ಲಾವಾರು ವಿವರ ಒದಗಿಸುವುದು)

(ಉ) ವಿದ್ಯಾರ್ಥಿವೇತನದ ಮೊತ್ತ ಬಾಕಿ ಉಳಿದಿರುವ ವಿದ್ಯಾರ್ಥಿಗಳಿಗೆ ಡಿಬಿಟಿ ಮೂಲಕ ಹಣವನ್ನು ಯಾವ ಕಾಲಮಿತಿಯೊಳಗೆ ವರ್ಗಾಯಿಸಲಾಗುವುದು ; ಈ ಸಂಬಂಧ ಸರ್ಕಾರ ಕೈಗೊಂಡಿರುವ ಕ್ರಮಗಳು ಹಾಗೂ ನಿಗದಿಪಡಿಸಿರುವ ವೇಳಾಪಟ್ಟಿಯ ವಿವರವನ್ನು ಒದಗಿಸುವುದು ?

## ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೮ (೧೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶದಲ್ಲಿ ಕಾರ್ಯನಿರ್ವಹಿಸುತ್ತಿರುವ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಜಿಲ್ಲಾವಾರು ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಮೇಲ್ಕಂಡ ಶಾಲೆಗಳಿಗೆ ಮಂಜೂರಾಗಿರುವ (Sanctioned) ಬೋಧಕ (Teaching) ಮತ್ತು (Non-Teaching) ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಮಂಜೂರಾಗಿರುವ ಹುದ್ದೆಗಳ ಪೈಕಿ ಪ್ರಸ್ತುತ ಕಾರ್ಯನಿರ್ವಸುತ್ತಿರುವ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಯ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಹಾಗೂ ಹುದ್ದೆವಾರು ವಿವರ ನೀಡುವುದು)

(ಈ) ಕಲ್ಯಾಣ ಕರ್ನಾಟಕ ಪ್ರದೇಶದ ಸರ್ಕಾರಿ ಶಾಲೆಗಳಲ್ಲಿ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಉ) ಪ್ರಸ್ತುತ ನಡೆಯುತ್ತಿರುವ ಅಥವಾ ಪ್ರಸ್ತಾವಿತ ನೇಮಕಾತಿ ಪ್ರಕ್ರಿಯೆಯ ಮೂಲಕ ಕಲ್ಯಾಣ ಕರ್ನಾಟಕ ಪ್ರದೇಶದ ಶಾಲೆಗಳಿಗೆ ಒಟ್ಟು ಎಷ್ಟು ಬೋಧಕ ಹಾಗೂ ಬೋಧಕೇತರ ಸಿಬ್ಬಂದಿಯನ್ನು ನೇಮಕ ಮಾಡಿಕೊಳ್ಳಲು ಉದ್ದೇಶಿಸಲಾಗಿದೆ ; (ಜಿಲ್ಲಾವಾರು ಹಾಗೂ ಹುದ್ದೆವಾರು ವಿವರ ನೀಡುವುದು)

(ಊ) ಪ್ರಸ್ತುತ ನೇಮಕಾತಿ ಪ್ರಕ್ರಿಯೆ ಪೂರ್ಣಗೊಂಡ ನಂತರವೂ ಖಾಲಿ ಉಳಿಯುವ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಯಾವುದೇ ಕಾಲಮಿತಿಯನ್ನು ನಿಗದಿಪಡಿಸಿರುವುದೇ ; ಹೌದಾದರೆ ಎಷ್ಟು ದಿನಗೊಳಗಾಗಿ ಅಥವಾ ಯಾವ ಅವಧಿಯೊಳಗೆ ಅವುಗಳನ್ನು ಭರ್ತಿ ಮಾಡಲಾಗುವುದು ; ಇಲ್ಲವಾದರೆ ಅದರ ಕಾರಣಗಳನ್ನು ವಿವರಿಸುವುದು ?

## ರಾಜ್ಯದಲ್ಲಿ ಜಮೀನು, ನಿವೇಶನ ಹಾಗೂ ಸ್ವಂತ ಮನೆ ಇಲ್ಲದೆ ಇರುವ ಮಾಜಿ ದೇವದಾಸಿಯರ ಕುರಿತು

**ಶ್ರೀಮತಿ ಹೇಮಲತಾ ನಾಯಕ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೨೯ (೧೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಜಮೀನು, ನಿವೇಶನ ಹಾಗೂ ಸ್ವಂತ ಮನೆ ಇಲ್ಲದೆ ಇರುವ ಮಾಜಿ ದೇವದಾಸಿಯರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ೨೦೨೩–೨೪,೨೦೨೪–೨೫ ಮತ್ತು ೨೦೨೫–೨೬) ಮಾಜಿ ದೇವದಾಸಿಯರಿಗೆ ಸರ್ಕಾರದಿಂದ

ಮಂಜೂರು ಮಾಡಲಾಗಿರುವ ಜಮೀನು, ನಿವೇಶನ ಹಾಗೂ ಮನೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಹಾಗೂ ವರ್ಷವಾರು ವಿವರ ಒದಗಿಸುವುದು)

(ಇ) ಜಮೀನು, ನಿವೇಶನ ಹಾಗೂ ಮನೆ ಸೌಲಭ್ಯಗಳನ್ನು ಪಡೆಯದೇ ಇರುವ ಮಾಜಿ ದೇವದಾಸಿಯರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ಒದಗಿಸುವುದು)

(ಈ) ಮೇಲ್ಕಂಡ ಸೌಲಭ್ಯಗಳನ್ನು ಇನ್ನೂ ಪಡೆಯದ ಮಾಜಿ ದೇವದಾಸಿಯರಿಗೆ ಜಮೀನು, ನಿವೇಶನ ಹಾಗೂ ಮನೆ ಒದಗಿಸಲು ಸರ್ಕಾರ ಯಾವ ಯೋಜನೆಗಳನ್ನು ರೂಪಿಸಿದೆ; ಅದಕ್ಕಾಗಿ ಎಷ್ಟು ಅನುದಾನ ಮೀಸಲಿರಿಸಲಾಗಿದೆ; ಯಾವ ಕಾಲಮಿತಿಯೊಳಗೆ ಸೌಲಭ್ಯಗಳನ್ನು ಒದಗಿಸಲಾಗುವುದು; (ವಿವರವನ್ನು ನೀಡುವುದು)

(ಉ) ಮಾಜಿ ದೇವದಾಸಿಯರ ಪುನರ್ವಸತಿಯನ್ನು ಪರಿಣಾಮಕಾರಿಯಾಗಿ ಅನುಷ್ಠಾನಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಬಾಕಿ ಉಳಿದಿರುವ ಅರ್ಜಿಗಳ ಸಂಖ್ಯೆ ಎಷ್ಟು; ಅವುಗಳನ್ನು ವಿಲೇವಾರಿ ಮಾಡಲು ಕೈಗೊಂಡಿರುವ ಕ್ರಮಗಳ ಕುರಿತಾದ ವಿವರ ಒದಗಿಸುವುದು ?

## ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಸ್ವಂತ ಕಟ್ಟಡ ಒದಗಿಸುವ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೦ (೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಸ್ವಂತ ಕಟ್ಟಡ ಒದಗಿಸಲು ಸರ್ಕಾರ ಮಂಜೂರು ಮಾಡಿದ ಅನುದಾನ ಎಷ್ಟು; ಕಾಮಗಾರಿ ಯಾವಾಗ ಪ್ರಾರಂಭಿಸಲಾಗುವುದು; ಕಾಮಗಾರಿ ಪ್ರಸ್ತುತ ಯಾವ

ಹಂತದಲ್ಲಿದೆ; ಈ ಬಗ್ಗೆ ಅನೇಕ ಬಾರಿ ಬೇಡಿಕೆ ನೀಡಿದ್ದರೂ ಯಾವುದೇ ಕ್ರಮಕೈಗೊಳ್ಳದೇ ಇರಲು ಕಾರಣವೇನು; ದೇಶಾದ್ಯಂತ ಇರುವ ಕೊಂಕಣಿ ಭಾಷಿಕರ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಆ) ಕಳೆದ ೩ ವರ್ಷಗಳಿಂದ ಕೊಂಕಣಿ ಸಾಹಿತ್ಯ ಅಕಾಡೆಮಿ ಕಟ್ಟಡ ಕಾಮಗಾರಿ ಪೂರ್ಣಗೊಳಿಸದೇ ಸ್ಥಗಿತಗೊಂಡಿದ್ದು, ಇದರಿಂದ ಹುಲ್ಲು ಬೆಳೆದು ಕಟ್ಟಡ ಕಾಣಿಸದಿರುವ ಪರಿಸ್ಥಿತಿ ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದನದಲ್ಲಿ ಆಶ್ವಾಸನೆ ನೀಡಿದ್ದರೂ ಸಹ ಯಾವುದೇ ಕ್ರಮಕೈಗೊಳ್ಳದೇ ಇರಲು ಕಾರಣವೇನು ; (ವಿವರ ನೀಡುವುದು)

(ಇ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ಮಂಜೂರಾದ ಹುದ್ದೆಗಳೆಷ್ಟು; ಪ್ರಸ್ತುತ ಕರ್ತವ್ಯ ನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಎಷ್ಟು; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಿಕೊಳ್ಳಲಾಗುವುದು ; (ವಿವರ ನೀಡುವುದು)

(ಈ) ಪ್ರಸ್ತುತ ವರ್ಷದಲ್ಲಿ ಕೊಂಕಣಿ ಸಾಹಿತ್ಯ ಅಕಾಡೆಮಿ ಪಾವತಿಸಿದ ಬಾಡಿಗೆ ಮೊತ್ತ ಎಷ್ಟು; ಕಾರ್ಯಕ್ರಮ ನಡೆಸಲು ಯಾವ ಸಭಾಭವನ ಒದಗಿಸಲಾಗಿದೆ, ಇದಕ್ಕೆ ತಗಲುವ ವೆಚ್ಚ ಎಷ್ಟು ; (ವಿವರ ನೀಡುವುದು)

(ಉ) ಕೊಂಕಣಿ ಸಾಹಿತ್ಯ ಅಕಾಡೆಮಿಗೆ ವರ್ಷ ಪ್ರತಿ ನೀಡುವ ಅನುದಾನ ಎಷ್ಟು ; ಇದನ್ನು ಯಾವ ಮಾನದಂಡದಲ್ಲಿ ಒದಗಿಸಲಾಗುವುದು ?

## ವಸತಿ ನಿಲಯಗಳಿಗೆ ಮಂಜೂರಾಗಿರುವ ಮೇಲ್ವಿಚಾರಕರ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೧ (೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಜಿಲ್ಲೆಯಲ್ಲಿರುವ ವಸತಿ ನಿಲಯಗಳ ಸಂಖ್ಯೆ ಎಷ್ಟು; ಸರ್ಕಾರದಿಂದ ಮಂಜೂರಾಗಿರುವ ಮೇಲ್ವಿಚಾರಕರ ಹುದ್ದೆಗಳ ಸಂಖ್ಯೆ ಎಷ್ಟು; ಎಷ್ಟು ಹುದ್ದೆಗಳನ್ನು ಭರ್ತಿ ಮಾಡಲಾಗಿದೆ; ಬಾಕಿ ಇರುವ ಹುದ್ದೆಗಳೆಷ್ಟು ; (ತಾಲ್ಲೂಕುವಾರು ವಿವರ ನೀಡುವುದು)

(ಆ) ಖಾಲಿ ಇರುವ ಮೇಲ್ವಿಚಾರಕರ ಹುದ್ದೆಗಳನ್ನು ನೇಮಕಾತಿ ಮಾಡಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ ; (ವಿವರ ನೀಡುವುದು)

(ಇ) ವಸತಿ ನಿಲಯಗಳಿಗೆ ಆಹಾರ ದಾಸ್ತಾನು ಸಾಮಗ್ರಿಗಳ ಸರಬರಾಜು ಟೆಂಡರ್ ಪ್ರಕ್ರಿಯೆ ನಿಗದಿತ ಸಮಯಕ್ಕೆ ಆಗದೇ ಇರುವುದರಿಂದ ಮಕ್ಕಳು ಮತ್ತು ಮೇಲ್ವಿಚಾರಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ವಿವರ ನೀಡುವುದು)

## ಅಂಗನವಾಡಿ ಕೇಂದ್ರಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೨ (೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ೩ ವರ್ಷಗಳಲ್ಲಿ ಹೊಸದಾಗಿ ಮಂಜೂರು ಮಾಡಲಾಗಿರುವ ಅಂಗನವಾಡಿ ಕೇಂದ್ರಗಳು ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಮಂಜೂರಾದ ಅಂಗನವಾಡಿಗಳ ಪೈಕಿ ಸ್ವಂತ ಕಟ್ಟಡಗಳಲ್ಲಿ ಹಾಗೂ ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಕೇಂದ್ರಗಳು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಬಾಡಿಗೆ ಕಟ್ಟಡಗಳಲ್ಲಿ ನಡೆಯುತ್ತಿರುವ ಅಂಗನವಾಡಿಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಮಾನವ–ವನ್ಯ ಪ್ರಾಣಿ ಸಂಘರ್ಷ ತಡೆಗೆ ಕೈಗೊಂಡಿರುವ ಪರಿಹಾರದ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೩ (೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಾನವ–ವನ್ಯಪ್ರಾಣಿ ಸಂಘರ್ಷ ತಡೆಗೆ ಸರ್ಕಾರ ಕೈಗೊಂಡಿರುವ ಶಾಶ್ವತ ಪರಿಹಾರವೇನು ; (ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಿಂದ ಮಾನವ–ವನ್ಯಪ್ರಾಣಿ ಸಂಘರ್ಷದಿಂದ ಪ್ರಾಣ ಕಳೆದುಕೊಂಡಿರುವವರ ಸಂಖ್ಯೆ ಎಷ್ಟು ;

(ಇ) ಕಾಡು ಪ್ರಾಣಿಗಳು ನಾಡಿಗೆ ಬರಲು ಕಾರಣವೇನು; ಈ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ; (ವಿವರ ನೀಡುವುದು)

(ಈ) ಅರಣ್ಯ ಪ್ರದೇಶಗಳಲ್ಲಿ ಅಕ್ರಮವಾಗಿ ರೆಸಾರ್ಟ್‌ಗಳಿಂದ ಮತ್ತು ಅಲ್ಲಿ ನಡೆಯುತ್ತಿರುವ ಅಕ್ರಮ ಚಟುವಟಿಕೆಗಳಿಂದ ಕಾಡು ಪ್ರಾಣಿಗಳು

ನಾಡಿಗೆ ಬರುತ್ತಿವೆ ಎಂದು ಸಾರ್ವಜನಿಕರು ಆರೋಪಿಸುತ್ತಿದ್ದು, ಇದಕ್ಕೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ವಿವರ ನೀಡುವುದು)

## ಅತಿಥಿ ಶಿಕ್ಷಕರಿಗೆ/ಉಪನ್ಯಾಸಕರಿಗೆ ಸರ್ಕಾರ ನೀಡುತ್ತಿರುವ ಸೌಲಭ್ಯಗಳ ಬಗ್ಗೆ

**ಶ್ರೀ ಐವನ್ ಡಿ'ಸೋಜಾ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೪ (೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಅತಿಥಿ ಶಿಕ್ಷಕರು/ಉಪನ್ಯಾಸಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಅತಿಥಿ ಶಿಕ್ಷಕರಿಗೆ/ಉಪನ್ಯಾಸಕರಿಗೆ ಸರ್ಕಾರ ನೀಡುತ್ತಿರುವ ವೇತನ ಎಷ್ಟು ;

(ಇ) ಸರ್ಕಾರಿ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳೆಷ್ಟು ; ಒಟ್ಟು ಎಷ್ಟು ಮಂದಿ ಅತಿಥಿ ಉಪನ್ಯಾಸಕರನ್ನು ಈ ಸಾಲಿನಲ್ಲಿ ನೇಮಕಾತಿ ಮಾಡಿಕೊಳ್ಳಲಾಗುವುದು ; (ವಿವರ ನೀಡುವುದು)

(ಈ) ಅನುದಾನಿತ ಕಾಲೇಜುಗಳಲ್ಲಿ ಖಾಲಿ ಇರುವ ಉಪನ್ಯಾಸಕರ ಹುದ್ದೆಗಳನ್ನು ಯಾವ ಮಾನದಂಡದಲ್ಲಿ ಭರ್ತಿ ಮಾಡಲಾಗುತ್ತಿದೆ ? (ವಿವರ ನೀಡುವುದು)

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿರುವ ಯೋಜನೆಗಳ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೫ (೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಲ್ಲಿರುವ ಯೋಜನೆಗಳು ಯಾವುವು ; (ಮಾಹಿತಿ ಒದಗಿಸುವುದು)

(ಆ) ಕಳೆದ ಎರಡು ವರ್ಷಗಳು ಸೇರಿದಂತೆ ಇಲ್ಲಿಯವರೆಗೆ ಸದರಿ ಇಲಾಖೆಯಿಂದ ಒದಗಿಸಿರುವ ಕಲ್ಯಾಣ ಕಾರ್ಯಕ್ರಮಗಳನ್ನು ಯಾವ ಯಾವ ಜಿಲ್ಲೆಗೆ ಎಷ್ಟೆಷ್ಟು ಅನುದಾನದೊಂದಿಗೆ ಹಂಚಿಕೆ ಮಾಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆಗೆ ಒದಗಿಸಿರುವ ವಿವಿಧ ಯೋಜನೆಗಳ ಕಲ್ಯಾಣ ಕಾರ್ಯಕ್ರಮಗಳ ಕ್ಷೇತ್ರವಾರು ಮಾಹಿತಿ ಒದಗಿಸುವುದು ;

(ಈ) ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಯಾವ ಯಾವ ಕಲ್ಯಾಣ ಕಾರ್ಯಕ್ರಮಗಳ ಯೋಜನೆಯನ್ನು ನೀಡಲಾಗಿದೆ ; ಈ ಯೋಜನೆಗಳಿಗೆ ಒದಗಿಸಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಉ) ಯಶವಂತಪುರ ವಿಧಾನ ಸಭಾ ಕ್ಷೇತ್ರಕ್ಕೆ ಸೇರಿದ ದೊಡ್ಡಬಿದರಕಲ್ಲು, ಭೈರವೇಶ್ವರ ಬಡಾವಣೆಯ ತಿಪ್ಪೇನಹಳ್ಳಿಯಲ್ಲಿ ಮಡಿವಾಳ ಜನಾಂಗ ಅತ್ಯಧಿಕವಾಗಿದ್ದು, ಇಲ್ಲಿನ ಮಡಿಕಟ್ಟೆ ಅಭಿವೃದ್ಧಿಗಾಗಿ ಹಾಗೂ

ಮೂಲಭೂತ ಸೌಕರ್ಯಗಳಿಗಾಗಿ ಇಲ್ಲಿಯ ತನಕ ಯಾವುದೇ ಯೋಜನೆಯನ್ನು ರೂಪಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಊ) ಬಂದಿದ್ದಲ್ಲಿ, ಇಲ್ಲಿನ ಮಡಿಕಟ್ಟೆ ಅಭಿವೃದ್ಧಿಗೆ ಮತ್ತು ಮೂಲಭೂತ ಸೌಕರ್ಯಗಳಿಗೆ ಅನುದಾನ ಒದಗಿಸಲಾಗುವುದೇ ಈ ಬಗ್ಗೆ ಸ್ಪಷ್ಟ ಮಾಹಿತಿ ನೀಡುವುದು ?

## ಬೆಂಗಳೂರು ನಗರ ಜಿಲ್ಲೆ ದೊಡ್ಡ ಬಿದರಕಲ್ಲುನಲ್ಲಿ ಡಾ॥ ಬಿ.ಆರ್. ಅಂಬೇಡ್ಕರ್ ಭವನ ನಿರ್ಮಾಣದ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೬ (೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆ, ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಸೇರಿದ ದೊಡ್ಡಬಿದರಕಲ್ಲು ವಾರ್ಡ್ ೪೦ರಲ್ಲಿ ಬರುವ ಚನ್ನನಾಯಕನಪಾಳ್ಯದಲ್ಲಿ ಡಾ॥ ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣಕ್ಕಾಗಿ ಅನುದಾನವನ್ನು ಒದಗಿಸಲಾಗಿದೆಯೇ ; (ವಿವರ ನೀಡುವುದು)

(ಆ) ಅನುದಾನ ಒದಗಿಸದಿದ್ದಲ್ಲಿ ಸದರಿ ಪ್ರಸ್ತಾವನೆಯು ಯಾವ ಹಂತದಲ್ಲಿದೆ, ಈ ಬಗ್ಗೆ ಕೈಗೊಂಡಿರುವ ಪ್ರಕ್ರಿಯೆಗಳ ಬಗ್ಗೆ ವಿವರ ನೀಡುವುದು ;

(ಇ) ಡಾ॥ ಬಿ.ಆರ್.ಅಂಬೇಡ್ಕರ್ ಭವನ ನಿರ್ಮಾಣದ ಕಾಮಗಾರಿಯನ್ನು ಎಷ್ಟು ದಿನಗಳಲ್ಲಿ ಮುಕ್ತಾಯಗೊಳಿಸಿ, ಸಾರ್ವಜನಿಕ ಕಾರ್ಯಕ್ರಮಗಳಿಗೆ ನೀಡಲಾಗುವುದರ ಬಗ್ಗೆ ; ಸ್ಪಷ್ಟ ಮಾಹಿತಿ ನೀಡುವುದು ?

## ಸರ್ಕಾರಿ ಪ್ರಾಥಮಿಕ ಶಾಲೆಗಳ ಕಟ್ಟಡಕ್ಕೆ/ ದುರಸ್ತಿಗೆ ಒದಗಿಸಿರುವ ಅನುದಾನದ ಬಗ್ಗೆ

**ಶ್ರೀ ಟಿ.ಎನ್. ಜವರಾಯಿ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೩೭ (೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷದಲ್ಲಿ ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ಹೊಸ ಕಟ್ಟಡ/ ಶಾಲಾ ಕೊಠಡಿಗಳ ದುರಸ್ತಿಗಾಗಿ ಒದಗಿಸಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ಒದಗಿಸುವುದು)

(ಆ) ಬೆಂಗಳೂರು ನಗರ ಜಿಲ್ಲೆಯ ಯಶವಂತಪುರ ವಿಧಾನಸಭಾ ಕ್ಷೇತ್ರಕ್ಕೆ ಒದಗಿಸಿರುವ ಅನುದಾನವೆಷ್ಟು ; (ವಿವರ ನೀಡುವುದು)

(ಇ) ಬೆಂಗಳೂರು ನಗರ ಜಿಲ್ಲೆಯ ವಿಧಾನಸಭಾ ಕ್ಷೇತ್ರಗಳಿಗೆ ಕಟ್ಟಡ ಮತ್ತು ಕೊಠಡಿಗಳ ದುರಸ್ತಿಗಾಗಿ ಒದಗಿಸಿರುವ ಅನುದಾನವೆಷ್ಟು ; (ಮಾಹಿತಿ ಒದಗಿಸುವುದು)

(ಈ) ರಾಜ್ಯದಲ್ಲಿರುವ ಸರ್ಕಾರಿ ಪ್ರಾಥಮಿಕ ಶಾಲೆಗಳ ನೂತನ ಕಟ್ಟಡ/ ಶಾಲಾ ಕೊಠಡಿಗಳ ದುರಸ್ತಿಗಾಗಿ ಕಳೆದ ಎರಡು ವರ್ಷಗಳಲ್ಲಿ ಸಿ.ಎಸ್.ಆರ್. ಯೋಜನೆಯಡಿ ಬಳಕೆಯಾಗಿರುವ ಒಟ್ಟು ಅನುದಾನದ ಮೊತ್ತವೆಷ್ಟು ; (ವಿವರ ನೀಡುವುದು)

(ಉ) ಈ ಸಿ.ಎಸ್.ಆರ್. ಯೋಜನೆಯ ಅನುದಾನವನ್ನು ಬೆಂಗಳೂರು ನಗರ ಜಿಲ್ಲೆಯ ಯಾವ ಯಾವ ವಿಧಾನಸಭಾ ಕ್ಷೇತ್ರಗಳಿಗೆ ಎಷ್ಟು ಅನುದಾನವನ್ನು ಒದಗಿಸಲಾಗಿದೆ ? (ವಿವರವಾದ ಮಾಹಿತಿ ಒದಗಿಸುವುದು)

## ಶ್ರೀ ಕುದ್ಮಲ್ ರಂಗರಾವ್‌ರವರ ಸ್ಮಾರಕ ನಿರ್ಮಾಣದ ಬಗ್ಗೆ

**ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೩೮ (೧೨೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಗಳೂರು ಮಹಾನಗರ ಪಾಲಿಕೆಯು ಅತ್ತಾವರದಲ್ಲಿರುವ ಕುದ್ಮಲ್ ರಂಗರಾವ್‌ರವರ ಸ್ಮಾರಕ ನಿರ್ಮಾಣ ಮಾಡಲು ಮಂಜೂರು ಮಾಡಿದ ಹಣವೆಷ್ಟು ;

(ಆ) ಸದರಿ ಕಾಮಗಾರಿ ಯಾವ ಹಂತದಲ್ಲಿದೆ ?

## ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳು ಹಾಗೂ ಪ್ರೌಢ ಶಾಲೆಗಳ ಬಗ್ಗೆ

**ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೩೯ (೧೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಿಂದ ನಡೆಸಲಾಗುತ್ತಿರುವ ವಸತಿ ಪ್ರೌಢ ಶಾಲೆಗಳೆಷ್ಟು; ವಿದ್ಯಾರ್ಥಿ/ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ;

(ಆ) ಈ ವಸತಿ ಪ್ರೌಢ ಶಾಲೆಗಳಿಗೆ ಹಂಚಿಕೆ ಮತ್ತು ಬಿಡುಗಡೆ ಮಾಡಿದ ಹಣವೆಷ್ಟು ;

(ಇ) ಈ ವಸತಿ ಪ್ರೌಢ ಶಾಲೆಗಳು ಎಷ್ಟು ಸ್ವಂತ ಕಟ್ಟಡದಲ್ಲಿವೆ; ಎಷ್ಟು ಬಾಡಿಗೆ ಕಟ್ಟಡದಲ್ಲಿವೆ ; ಸಂದಾಯ ಮಾಡುತ್ತಿರುವ ವಾರ್ಷಿಕ ಬಾಡಿಗೆ ಎಷ್ಟು ;

(ಈ) ಸಮಾಜ ಕಲ್ಯಾಣ ಇಲಾಖೆ ನಡೆಸುತ್ತಿರುವ ಒಟ್ಟು ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳೆಷ್ಟು; ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; ಸ್ವಂತ ಕಟ್ಟಡದಲ್ಲಿ ಎಷ್ಟು ಇವೆ; ಬಾಡಿಗೆ ಕಟ್ಟಡದಲ್ಲಿ ಎಷ್ಟಿವೆ ;

(ಉ) ಎಲ್ಲಾ ವಸತಿ ಶಾಲೆ ಮತ್ತು ವಸತಿ ನಿಲಯಗಳಲ್ಲಿ ಸೇವೆ ಸಲ್ಲಿಸುತ್ತಿರುವ ವೃಂದವಾರು ಸಿಬ್ಬಂದಿಯ ಸಂಖ್ಯೆ ಎಷ್ಟು; ಇವರಲ್ಲಿ ಖಾಯಂ ಸಿಬ್ಬಂದಿ ಎಷ್ಟು; ವೃಂದವಾರು, ಹೊರಗುತ್ತಿಗೆ ಮೇಲೆ ಇರುವ ಸಿಬ್ಬಂದಿ ಎಷ್ಟು ? (ವೃಂದವಾರು ಮಾಹಿತಿ ನೀಡುವುದು)

## ಪದವಿ ಪೂರ್ವ ಕಾಲೇಜಿನ ಪ್ರಾಂಶುಪಾಲರ ಬಡ್ತಿಯ ಬಗ್ಗೆ

**ಶ್ರೀ ಎಫ್.ಹೆಚ್. ಜಕ್ಕಪ್ಪನವರ್ (ನಾಮನಿರ್ದೇಶನ ಹೊಂದಿದವರು) :–**

೪೦ (೧೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಕಾಲೇಜುಗಳ ಪ್ರಾಂಶುಪಾಲರ ಹುದ್ದೆಗಳೆಷ್ಟು; ಅಂತಹ ಹುದ್ದೆಗಳಲ್ಲಿ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ದೊರೆಯಬೇಕಾದ ಸ್ಥಾನಗಳೆಷ್ಟು ;

(ಆ) ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡದವರಿಗೆ ಸಮಾಜ ಕಲ್ಯಾಣ ಇಲಾಖೆಯ ತನಿಖಾ ವರದಿಯಂತೆ ೬೭ ಪರಿಶಿಷ್ಟ ಜಾತಿ ೧೩ ಪರಿಶಿಷ್ಟ ಪಂಗಡದ ಹಿಂಬಾಕಿಯ ಪ್ರಾಂಶುಪಾಲರ ಹುದ್ದೆಗಳನ್ನು ಬಡ್ತಿ ಮುಖಾಂತರ ತುಂಬಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಇ) ಈ ಬಡ್ತಿಗಳನ್ನು ತಡೆ ಹಿಡಿದ ಅಧಿಕಾರಿಗಳ ಮೇಲೆ ಕೈಗೊಂಡಿರುವ ಶಿಸ್ತು ಕ್ರಮಗಳೇನು ?

## ಕೊಡಗು ಜಿಲ್ಲೆಯ ಅರಣ್ಯ ಇಲಾಖೆಗೆ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೧ (೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡುಗು ಜಿಲ್ಲೆಯ ಅರಣ್ಯ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಸರ್ಕಾರದಿಂದ ಈ ಹುದ್ದೆಗಳನ್ನು ಯಾವ ಅವಧಿಯೊಳಗೆ ಭರ್ತಿ ಮಾಡಲು ಉದ್ದೇಶಿಸಲಾಗಿದೆ ;

(ಈ) ಅರಣ್ಯ ಸಂರಕ್ಷಣೆ, ವನ್ಯಜೀವಿ ರಕ್ಷಣೆ ಹಾಗೂ ಮಾನವ–ವನ್ಯಜೀವಿ ಸಂಘರ್ಷ ನಿಯಂತ್ರಣದ ಮೇಲೆ ಸಿಬ್ಬಂದಿ ಕೊರತೆಯಿಂದ

ಉಂಟಾಗಿರುವ ಪರಿಣಾಮಗಳ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಉ) ಜಿಲ್ಲೆಯ ಅಗತ್ಯವನ್ನು ಪರಿಗಣಿಸಿ ಹೆಚ್ಚುವರಿ ಹುದ್ದೆಗಳನ್ನು ಮಂಜೂರು ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯಲ್ಲಿ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೪೨ (೪೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯ ವ್ಯಾಪ್ತಿಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಹಾಗೂ ಪ್ರಸ್ತುತ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳಲ್ಲಿ ಖಾಲಿ ಇರುವ ಮುಖ್ಯ ಶಿಕ್ಷಕರು, ಸಹ ಶಿಕ್ಷಕರು, ವಿಷಯ ಶಿಕ್ಷಕರು, ದೈಹಿಕ ಶಿಕ್ಷಣ ಶಿಕ್ಷಕರು ಹಾಗೂ ಇತರೆ ಸಿಬ್ಬಂದಿಯ ಖಾಲಿ ಹುದ್ದೆಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ಹಾಗೂ ಅವುಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲು ಉದ್ದೇಶಿಸಲಾಗಿದೆ ?

# ಕೊಡಗು ಜಿಲ್ಲೆಯ ಮಾನವ–ವನ್ಯಪ್ರಾಣಿ ಸಂಘರ್ಷದ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೪೩ (೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯಲ್ಲಿ ಮಾನವ–ವನ್ಯಜೀವಿ ಸಂಘರ್ಷ ದಿನದಿಂದ ದಿನಕ್ಕೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದನ್ನು ನಿಯಂತ್ರಿಸಲು ಸರ್ಕಾರ ಕೈಗೊಂಡಿರುವ ಶಾಶ್ವತ ಕ್ರಮಗಳೇನು ;

(ಆ) ಕೊಡಗು ಜಿಲ್ಲೆಯ ಅರಣ್ಯ ಅಂಚಿನ ಗ್ರಾಮಗಳಲ್ಲಿ ಕಾಡಾನೆ ಹಾವಳಿಯಿಂದ ರೈತರಿಗೆ ಉಂಟಾಗುತ್ತಿರುವ ಬೆಳೆ ನಷ್ಟಕ್ಕೆ ತ್ವರಿತವಾಗಿ ಪರಿಹಾರವನ್ನು ನೀಡಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಇ) ಕೊಡಗು ಜಿಲ್ಲೆಯ ಅರಣ್ಯ ಅಂಚಿನ ಗ್ರಾಮಗಳಲ್ಲಿ ಸೌರ ಬೇಲಿ, ಆನೆ ಕಂದಕ ಮತ್ತು ಇತರ ರಕ್ಷಣಾ ಕಾಮಗಾರಿಗಳ ಪ್ರಸ್ತುತ ಸ್ಥಿತಿ ಏನು ;

(ಈ) ಕಳೆದ ೩ ವರ್ಷಗಳಲ್ಲಿ ಮಾನವ–ವನ್ಯಪ್ರಾಣಿಗಳ ದಾಳಿಯನ್ನು ತಡೆಗಟ್ಟಲು ಜಿಲ್ಲೆಯಲ್ಲಿ ಕೈಗೊಂಡಿರುವ ಕ್ರಮಗಳೇನು; ಬಿಡುಗಡೆಯಾದ ಅನುದಾನ, ವಿನಿಯೋಗಿಸಿರುವ ಅನುದಾನ ಹಾಗೂ ಬಾಕಿ ಉಳಿದಿರುವ ಅನುದಾನ ಎಷ್ಟು ? (ಸಂಪೂರ್ಣ ವಿವರವನ್ನು ತಾಲ್ಲೂಕುವಾರು ನೀಡುವುದು)

# ಕೊಡಗು ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಗೆ ಮಂಜೂರಾದ ಹುದ್ದೆಗಳ ಕುರಿತು

**ಶ್ರೀ ಕುಶಾಲಪ್ಪ ಎಂ.ಪಿ. (ಸುಜಾ) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ ) :–**

೪೪ (೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೊಡಗು ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಹಾಗೂ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಸಿಬ್ಬಂದಿಗಳ ಸಂಖ್ಯೆ ಮತ್ತು ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ಖಾಲಿ ಇರುವ ಹುದ್ದೆಗಳಿಂದ ವಿದ್ಯಾರ್ಥಿ ನಿಲಯಗಳ ನಿರ್ವಹಣೆ, ವಿದ್ಯಾರ್ಥಿಗಳ ಕಲ್ಯಾಣ ಕಾರ್ಯಕ್ರಮಗಳು, ವಿದ್ಯಾರ್ಥಿವೇತನ ವಿತರಣೆ ಹಾಗೂ ಇಲಾಖೆಯ ಇತರ ಸೇವೆಗಳ ಮೇಲೆ ಪರಿಣಾಮ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು; ಕೈಗೊಂಡಿದ್ದರೆ, ಅದರ ವಿವರಗಳೇನು; ಇಲ್ಲದಿದ್ದರೆ ಯಾವ ಅವಧಿಯೊಳಗೆ ನೇಮಕಾತಿ ಪೂರ್ಣಗೊಳಿಸಲಾಗುವುದು ?

# ಗೃಹಲಕ್ಷ್ಮಿ ಯೋಜನೆಯಲ್ಲಿ ನಡೆದಿರುವ ಅವ್ಯವಹಾರಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೫ (೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಲಕ್ಷ್ಮಿ ಯೋಜನೆಗೆ ಸಂಬಂಧಿಸಿದಂತೆ CAG ವರದಿಯಲ್ಲಿ ಸೂಚಿಸಲಾದ ಅಕ್ರಮಗಳು ಮತ್ತು ಲೋಪಗಳ ವಿವರವೇನು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಆ) ಮೃತ ಫಲಾನುಭವಿಗಳು ನಕಲಿ ಫಲಾನುಭವಿಗಳು ಒಂದೇ ಬ್ಯಾಂಕ್ ಖಾತೆಗೆ ಬಹು ಫಲಾನುಭವಿಗಳ ಹಣ ಜಮೆಯಾಗಿರುವ ಪ್ರಕರಣಗಳು ಹಾಗೂ ಹೊರ ರಾಜ್ಯದ ಬ್ಯಾಂಕ್ ಖಾತೆಗಳಿಗೆ ಹಣ ವರ್ಗಾವಣೆಯಾದ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣಗಳ ಜಿಲ್ಲಾವಾರು ವಿವರ ನೀಡುವುದು)

(ಇ) ಈ ಅಕ್ರಮಗಳಿಂದ ಸರ್ಕಾರದ ಬೊಕ್ಕಸಕ್ಕೆ ಉಂಟಾದ ಅಂದಾಜು ಆರ್ಥಿಕ ನಷ್ಟ ಎಷ್ಟು ; ಇದುವರೆಗೆ ಎಷ್ಟು ಮೊತ್ತವನ್ನು ವಸೂಲಿ ಮಾಡಲಾಗಿದೆ ;

(ಈ) ಅಕ್ರಮಗಳಿಗೆ ಕಾರಣವಾದ ಅಧಿಕಾರಿಗಳು, ಸಿಬ್ಬಂದಿ, ಮಧ್ಯವರ್ತಿಗಳು ಅಥವಾ ಇತರ ಸಂಬಂಧಪಟ್ಟ ವ್ಯಕ್ತಿಗಳ ವಿರುದ್ಧ ಯಾವ ಶಿಸ್ತು ಮತ್ತು ಕ್ರಿಮಿನಲ್ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಉ) ಮುಂದಿನ ದಿನಗಳಲ್ಲಿ ಇಂತಹ ಅಕ್ರಮಗಳು ಮರುಕಳಿಸದಂತೆ ಫಲಾನುಭವಿಗಳ ಅರ್ಹತಾ ಪರಿಶೀಲನೆ, ಆಧಾರ್ ದೃಢೀಕರಣ ಜೀವಂತ ಇರುವ ಬಗ್ಗೆ ಪರಿಶೀಲನೆ, ಬ್ಯಾಂಕ್ ಖಾತೆ ದೃಢೀಕರಣ ಹಾಗೂ ಡಿಜಿಟಲ್ ಲೆಕ್ಕಪರಿಶೋಧನಾ ವ್ಯವಸ್ಥೆಯನ್ನು ಕಡ್ಡಾಯಗೊಳಿಸುವ ಉದ್ದೇಶ ಸರ್ಕಾರಕ್ಕಿದೆಯೇ ; ಈ ಬಗ್ಗೆ ಕೈಗೊಂಡಿರುವ ಕ್ರಮಗಳೇನು ;

(ಊ) ರಾಜ್ಯ, ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ಅನುಷ್ಠಾನ ಸಮಿತಿಯು ಗ್ಯಾರಂಟಿ ಯೋಜನೆಗಳ ಅಕ್ರಮಗಳನ್ನು ಪತ್ತೆ ಹಚ್ಚುವಲ್ಲಿ ವಿಫಲವಾಗಲು ಕಾರಣಗಳೇನು ; ಗ್ಯಾರಂಟಿ ಅನುಷ್ಠಾನ ಸಮಿತಿಗಳು ಈ ಅಕ್ರಮಗಳಲ್ಲಿ ಭಾಗಿಯಾಗಿವೆಯೇ ?

# ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿನ ನದಿಗಳ ಸ್ವಚ್ಛತೆ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೬ (೬೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿ ನೇತ್ರಾವತಿ, ಕುಮಾರಧಾರ, ಫಲ್ಗುಣಿ, ಸ್ವರ್ಣಾ, ಸೀತಾ ಸೇರಿದಂತೆ ಹಲವಾರು ನದಿಗಳು ಹರಿಯುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಸದರಿ ನದಿಗಳಿಗೆ ಸಾರ್ವಜನಿಕರು ಬಟ್ಟೆಗಳು, ಪ್ಲಾಸ್ಟಿಕ್ ಇತ್ಯಾದಿ ಅಪಾಯಕಾರಿ ತ್ಯಾಜ್ಯವನ್ನು ಎಸೆಯುತ್ತಿರುವುದು ಅಲ್ಲದೆ ಕೆಲವು ಕಾರ್ಖಾನೆಗಳು, ವಾಣಿಜ್ಯ ಸಂಸ್ಥೆಗಳು ತ್ಯಾಜ್ಯ ನೀರನ್ನು ನದಿಗಳಿಗೆ ಬಿಡುವುದರಿಂದ ನದಿಗಳು ಮಾಲಿನ್ಯಗೊಂಡು ಪರಿಸರ, ಜಲಚರ ಸಂಪತ್ತು ಹಾಗೂ ಸಾರ್ವಜನಿಕರ ಆರೋಗ್ಯದ ಮೇಲೆ ಗಂಭೀರ ದುಷ್ಪರಿಣಾಮ ಬೀರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಗಟ್ಟಲು ಕೈಗೊಂಡ ಕ್ರಮಗಳೇನು ;

(ಆ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಗಳಲ್ಲಿನ ನದಿಗಳ ಮಾಲಿನ್ಯ ಮಟ್ಟವನ್ನು ಪರಿಶೀಲಿಸಲು ಸರ್ಕಾರವು ಕಳೆದ ಮೂರು ವರ್ಷಗಳಲ್ಲಿ ಯಾವುದಾದರೂ ಸಮೀಕ್ಷೆ ಅಥವಾ ನೀರಿನ ಗುಣಮಟ್ಟ ಪರೀಕ್ಷೆ ನಡೆಸಿದೆಯೇ ; ನಡೆಸಿದ್ದರೆ, ಅದರ ವಿವರ ಹಾಗೂ ವರದಿ ನೀಡುವುದು ;

(ಇ) ಸದರಿ ಜಿಲ್ಲೆಗಳಲ್ಲಿ ಕಳೆದ ೩ ವರ್ಷಗಳಲ್ಲಿ ನದಿಗಳಿಗೆ ಘನ ತ್ಯಾಜ್ಯ, ಪ್ರಾಸ್ಟಿಕ್ ತ್ಯಾಜ್ಯ ಮತ್ತು ಸಂಸ್ಕರಿಸದ ತ್ಯಾಜ್ಯ ನೀರನ್ನು

ಬಿಡುತ್ತಿರುವ ಎಷ್ಟು ಪ್ರಕರಣಗಳು ಪತ್ತೆಯಾಗಿವೆ ; (ಪ್ರಕರಣವಾರು, ಜಿಲ್ಲಾವಾರು ವಿವರ ನೀಡುವುದು)

(ಈ) ನದಿ ಮಾಲಿನ್ಯಕ್ಕೆ ಕಾರಣವಾಗಿರುವ ಕಾರ್ಖಾನೆಗಳು, ವಾಣಿಜ್ಯ ಸಂಸ್ಥೆಗಳು, ಸ್ಥಳೀಯ ಸಂಸ್ಥೆಗಳು ಅಥವಾ ವ್ಯಕ್ತಿಗಳ ವಿರುದ್ಧ ಸರ್ಕಾರ/ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯಿಂದ ಯಾವ ಕ್ರಮ ಕೈಗೊಳ್ಳಲಾಗಿದೆ ; ವಿಧಿಸಲಾದ ದಂಡ, ನೋಟಿಸ್ ಮತ್ತು ಕೈಗೊಂಡ ಕಾನೂನು ಕ್ರಮಗಳೇನು ?

## ರಾಜ್ಯದ ವಸತಿ ಶಾಲೆಗಳ ಗುಣಮಟ್ಟದ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೭ (೬೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಮಾಜ ಕಲ್ಯಾಣ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಒಟ್ಟು ವಸತಿ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ವಸತಿ ಶಾಲೆಗಳಲ್ಲಿ ಸ್ವಂತ ಕಟ್ಟಡವಿರುವ ಶಾಲೆಗಳು, ಬಾಡಿಗೆ ಕಟ್ಟಡದಲ್ಲಿ ಕಾರ್ಯನಿರ್ವಹಿಸುತ್ತಿರುವ ಶಾಲೆಗಳು ಹಾಗೂ ಅಪೂರ್ಣ/ದುರಸ್ತಿಗೆ ಅಗತ್ಯವಿರುವ ಕಟ್ಟಡಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಸತಿ ಶಾಲೆಯಲ್ಲಿ ಮಾನದಂಡಗಳ ಪ್ರಕಾರ ಇರಬೇಕಾದ ತರಗತಿ ಕೊಠಡಿಗಳು, ವಸತಿ ನಿಲಯ, ಅಡುಗೆಮನೆ, ಭೋಜನಾಲಯ, ಶೌಚಾಲಯ, ಕುಡಿಯುವ ನೀರು, ವಿದ್ಯುತ್ ವ್ಯವಸ್ಥೆ, ಪ್ರಯೋಗಾಲಯ, ಗ್ರಂಥಾಲಯ, ಕ್ರೀಡಾಂಗಣ, ಭದ್ರತಾ ವ್ಯವಸ್ಥೆ

ಹಾಗೂ ಡಿಜಿಟಲ್ ಕಲಿಕಾ ಸೌಲಭ್ಯಗಳ ಲಭ್ಯತೆ ಕುರಿತು ಶಾಲಾವಾರು ಮಾಹಿತಿ ನೀಡುವುದು ;

(ಈ) ಸದರಿ ವಸತಿ ಶಾಲೆಗಳಲ್ಲಿ ಮಂಜೂರಾದ ಶಿಕ್ಷಕ ಹುದ್ದೆಗಳು, ಭರ್ತಿಯಾಗಿರುವ ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ವಿಷಯವಾರು ಮತ್ತು ಜಿಲ್ಲಾವಾರು ಎಷ್ಟು; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

ಉ) ಕಳೆದ ಮೂರು ವರ್ಷಗಳಲ್ಲಿ ಮೂಲಭೂತ ಸೌಲಭ್ಯಗಳ ಕೊರತೆ, ಶಿಕ್ಷಕರ ಅಭಾವ, ವಿದ್ಯಾರ್ಥಿಗಳ ಸುರಕ್ಷತೆ, ಆಹಾರದ ಗುಣಮಟ್ಟ, ಆರೋಗ್ಯ ಮತ್ತು ಸ್ವಚ್ಛತೆ ಕುರಿತು ಸರ್ಕಾರಕ್ಕೆ ಬಂದಿರುವ ದೂರುಗಳ ಸಂಖ್ಯೆ ಎಷ್ಟು; ಅವುಗಳ ಪರಿಶೀಲನೆ ಮತ್ತು ಕೈಗೊಂಡ ಕ್ರಮಗಳೇನು ;

(ಊ) ಇಲಾಖೆಯ ವಸತಿ ಶಾಲೆಗಳ ಗುಣಮಟ್ಟ ಸುಧಾರಣೆ, ಹೊಸ ಕಟ್ಟಡ ನಿರ್ಮಾಣ, ಮೂಲಸೌಕರ್ಯ ಅಭಿವೃದ್ಧಿ ಹಾಗೂ ಖಾಲಿ ಹುದ್ದೆಗಳ ಭರ್ತಿಗಾಗಿ ಸರ್ಕಾರ ರೂಪಿಸಿರುವ ಯೋಜನೆಗಳಾವುವು ? (ವಿವರ ನೀಡುವುದು)

## ಕಲಾವಿದರು ಮತ್ತು ಸಾಹಿತಿಗಳ ಜೀವನೋಪಾಯಕ್ಕೆ ನೀಡಲಾಗುವ ಮಾಸಾಶನ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೮ (೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಕಲಾವಿದರು ಹಾಗೂ ಸಾಹಿತಿಗಳಿಗೆ ಅವರ ಜೀವನೋಪಾಯಕ್ಕೆ ನೆರವಾಗುವ ಉದ್ದೇಶದಿಂದ ಇಲಾಖೆಯ

ವತಿಯಿಂದ ಹಲವು ವರ್ಷಗಳಿಂದ ಮಾಸಾಶನ (ಗೌರವಧನ) ನೀಡಲಾಗುತ್ತಿದ್ದು, ಆದರೆ ಕೆಲವು ತಿಂಗಳಿನಿಂದ ಮಾಸಾಶನ ಬಿಡುಗಡೆಯಾಗದೆ ಇರುವುದರಿಂದ ವಯೋವೃದ್ಧ ಹಾಗೂ ಆರ್ಥಿಕವಾಗಿ ದುರ್ಬಲ ಕಲಾವಿದರು ಮತ್ತು ಸಾಹಿತಿಗಳು ಸಂಕಷ್ಟಕ್ಕೆ ಒಳಗಾಗಿದ್ದಾರೆ ಇದರ ಬಗ್ಗೆ ದೂರುಗಳು ಸರ್ಕಾರದ ಗಮನಕ್ಕೆ ಬಂದಿವೆಯೇ ; ಈ ವಿಳಂಬಕ್ಕೆ ಕಾರಣವೇನು ;

(ಆ) ಪ್ರಸ್ತುತ ಪಾವತಿಸುತ್ತಿರುವ ಮಾಸಾಶನದ ಮೊತ್ತವೆಷ್ಟು ; ರಾಜ್ಯದಲ್ಲಿ ಮಾಸಾಶನ ಪಡೆಯುತ್ತಿರುವ ಕಲಾವಿದರು ಮತ್ತು ಸಾಹಿತಿಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಇ) ಮುಂದಿನ ದಿನಗಳಲ್ಲಿ ಮಾಸಾಶನವನ್ನು ಪ್ರತಿ ತಿಂಗಳು ನಿಗದಿತ ದಿನಾಂಕದಂದು ಯಾವುದೇ ವಿಳಂಬವಿಲ್ಲದೆ ಬಿಡುಗಡೆ ಮಾಡಲು ಶಾಶ್ವತ ವ್ಯವಸ್ಥೆಯನ್ನು ಜಾರಿಗೆ ತರಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಸದರಿ ಮಾಸಾಶನ ಪಡೆಯಲು ಇರಬೇಕಾದ ಅರ್ಹತೆಗಳೇನು ; ಮಾಸಾಶನಕ್ಕೆ ಆಯ್ಕೆ ಮಾಡುವ ಪ್ರಾಧಿಕಾರ ಯಾವುದು ;

(ಉ) ಸದರಿ ಮಾಸಾಶನ ತೀರಾ ಕನಿಷ್ಠವೆಂದು ಸರ್ಕಾರಕ್ಕೆ ಅನಿಸಿಲ್ಲವೆ ; ಹೆಚ್ಚಿಸುವ ಪ್ರಸ್ತಾಪ ಸರ್ಕಾರದ ಮುಂದೆ ಇದೆಯೇ ; ಮಾಸಾಶನ ಹೆಚ್ಚಿಸಲು ಯಾವಾಗ ಕ್ರಮ ಕೈಗೊಳ್ಳಲಾಗುವುದು ?

## ರಾಜ್ಯದ ವಸತಿ ಶಿಕ್ಷಣ ಸಂಸ್ಥೆಗಳ ಬಗ್ಗೆ

**ಶ್ರೀ ಕಿಶೋರ್ ಕುಮಾರ್ ಪುತ್ತೂರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೪೯ (೬೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯಾದ್ಯಂತ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸೊಸೈಟಿ (KREIS) ವತಿಯಿಂದ ನಡೆಸುತ್ತಿರುವ ಹಲವಾರು ವಸತಿ ಶಾಲೆಗಳು ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಬೋಧಕ ಮತ್ತು ಬೋಧಕೇತರ ಸಿಬ್ಬಂದಿಗಳ ಹುದ್ದೆಗಳು ಖಾಲಿ ಉಳಿದಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಗುಣಮಟ್ಟದ ಮೇಲೆ ಪ್ರತಿಕೂಲ ಪರಿಣಾಮ ಉಂಟಾಗುತ್ತಿಲ್ಲವೇ ; ಸದರಿ ವಸತಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಸ್ತುತ ಮಂಜೂರಾದ ಹುದ್ದೆಗಳು, ಭರ್ತಿಯಾಗಿರುವ ಹುದ್ದೆಗಳು ಹಾಗೂ ಖಾಲಿ ಇರುವ ಬೋಧಕ ಮತ್ತು ಬೋಧಕೇತರ ಹುದ್ದೆಗಳ ಜಿಲ್ಲಾವಾರು ವಿವರ ನೀಡುವುದು ;

(ಆ) ಸದರಿ ಶೈಕ್ಷಣಿಕ ಸಂಸ್ಥೆಗಳಲ್ಲಿ ಹಾಗೂ ವಿದ್ಯಾರ್ಥಿನಿಲಯಗಳಲ್ಲಿ, ಶುದ್ಧ ಕುಡಿಯುವ ನೀರು, ಶೌಚಾಲಯಗಳು, ವಸತಿ ಕೊಠಡಿಗಳು, ಪ್ರಯೋಗಾಲಯಗಳು, ಗ್ರಂಥಾಲಯಗಳು, ಕ್ರೀಡಾ ಸೌಲಭ್ಯಗಳು, ಕಂಪ್ಯೂಟರ್ ವ್ಯವಸ್ಥೆ ಸೇರಿದಂತೆ ಹಲವಾರು ಮೂಲಭೂತ ಸೌಲಭ್ಯಗಳ ಕೊರತೆಯ ಬಗ್ಗೆ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಖಾಲಿ ಇರುವ ಹುದ್ದೆಗಳನ್ನು ಶೀಘ್ರವಾಗಿ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದರೆ, ಅದರ ವಿವರ ನೀಡುವುದು ಹಾಗೂ ನೇಮಕಾತಿ ಪೂರ್ಣಗೊಳ್ಳುವ ಕಾಲಮಿತಿಯೇನು ;

(ಈ) ಕಳೆದ ೩ ವರ್ಷದಲ್ಲಿ ಸದರಿ ವಸತಿ ಶಾಲೆಗಳಲ್ಲಿ ಮೂಲಭೂತ ಸೌಲಭ್ಯಗಳ ಅಭಿವೃದ್ಧಿಗೆ ಎಷ್ಟು ಅನುದಾನವನ್ನು ಮಂಜೂರು ಮಾಡಿದೆ ; ಎಷ್ಟು ಕಾಮಗಾರಿಗಳು ಪೂರ್ಣಗೊಂಡಿವೆ ; ಎಷ್ಟು ಅನುದಾನ ಖರ್ಚು ಮಾಡಲಾಗಿದೆ ; (ಜಿಲ್ಲಾವಾರು, ವರ್ಷವಾರು ವಿವರ ನೀಡುವುದು)

(ಉ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿರುವ ವಸತಿ ಶಾಲೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಲ್ಲಿರುವ ಒಟ್ಟು ಪ್ರವೇಶಾತಿ ಸಂಖ್ಯೆ ಎಷ್ಟು;

(ಊ) ಕಳೆದ ಮೂರು ವರ್ಷಗಳಲ್ಲಿ ಪ್ರವೇಶಾತಿ ಪಡೆದ ಸ್ಥಳೀಯ ಮತ್ತು ಇತರ ಜಿಲ್ಲೆಗಳ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು? (ಶಾಲಾವಾರು ವಿವರ ನೀಡುವುದು)

## ರಾಜ್ಯದ ಮುಕ್ತ ವಿಶ್ವವಿದ್ಯಾಲಯಗಳ ಬೋಧಕೇತರ ಹುದ್ದೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೦ (೧೫೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮುಕ್ತ ವಿಶ್ವವಿದ್ಯಾಲಯ, ಮೈಸೂರು ಇಲ್ಲಿಗೆ ಸರ್ಕಾರದಿಂದ ಮಂಜೂರಾಗಿರುವ; ಬೋಧಕ ಮತ್ತು ಬೋಧಕೇತರ ಹುದ್ದೆಗಳ ವಿವರ ಮತ್ತು ಖಾಲಿ ಇರುವ ಹುದ್ದೆಗಳ ವಿವರವನ್ನು ಒದಗಿಸುವುದು ;

(ಆ) ಸದರಿ ವಿವಿಯಲ್ಲಿ ಹಾಲಿ ಕಾರ್ಯನಿರ್ವಹಿಸುತ್ತಿರುವ ಬೋಧಕ ಮತ್ತು ಬೋಧಕೇತರ ವರ್ಗದ ಖಾಯಂ ಹಾಗೂ ತಾತ್ಕಾಲಿಕ, ಗುತ್ತಿಗೆ ಆಧಾರಿತ ಮತ್ತು ಹೊರಗುತ್ತಿಗೆ ಸಿಬ್ಬಂದಿಯ ಸಂಪೂರ್ಣ ಮಾಹಿತಿಯನ್ನು; ಹುದ್ದೆವಾರು, ನೇಮಕಾತಿ ದಿನಾಂಕದೊಂದಿಗೆ ಸಂಪೂರ್ಣ ಅಂಕಿ ಅಂಶಗಳನ್ನು ಒದಗಿಸುವುದು ;

(ಇ) ಸದರಿ ವಿವಿಯಲ್ಲಿ ಬೋಧಕ ಮತ್ತು ಬೋಧಕೇತರ ವರ್ಗದ ಖಾಯಂ ಹಾಗೂ ತಾತ್ಕಾಲಿಕ, ಗುತ್ತಿಗೆ ಆಧಾರಿತ ಮತ್ತು

ಹೊರಗುತ್ತಿಗೆ ಸಿಬ್ಬಂದಿಗಳ ವಾರ್ಷಿಕ ವೇತನ ಪಾವತಿ ಮತ್ತು ಪಿಂಚಣಿ ಮೊತ್ತದ ಬಗೆಗಿನ ವಿವರಗಳನ್ನು ಒದಗಿಸುವುದು ?

## ರಾಜ್ಯದ ಮುಕ್ತ ವಿಶ್ವವಿದ್ಯಾಲಯಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೧ (೧೫೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ಮುಕ್ತ ವಿಶ್ವವಿಶ್ವವಿದ್ಯಾಲಯ ಮೈಸೂರು ಇಲ್ಲಿಯ ಭ್ರಷ್ಟಾಚಾರ ಹಾಗೂ ದುಂದುವೆಚ್ಚ ಇತ್ಯಾದಿಗಳನ್ನು ಪ್ರತಿಭಟಿಸಿ ವಿವಿ ಸಿಬ್ಬಂದಿಗಳ ಪ್ರತಿಭಟನೆಯ ಬಗ್ಗೆ ೨೦೨೫ರ ಬಜೆಟ್ ಅಧಿವೇಶನದ ಶೂನ್ಯವೇಳೆಯಲ್ಲಿ ಮಾನ್ಯ ವಿರೋಧ ಪಕ್ಷದ ನಾಯಕರ ಪ್ರಸ್ತಾವನೆಗೆ ಸಂಬಂಧಿಸಿದಂತೆ ವಿಚಾರಣೆ ನಡೆಸಲು ಸರ್ಕಾರ ನೇಮಿಸಿದ್ದ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ ಉಪಾಧ್ಯಕ್ಷರ ನೇತೃತ್ವದ ಸಮಿತಿಯ ವರದಿಯು ಅನುಷ್ಠಾನವಾಗಿದೆಯೇ ; ಆಗಿದ್ದರೆ, ಸದರಿ ಸಮಿತಿಯು ಸರ್ಕಾರಕ್ಕೆ ಸಲ್ಲಿಸಿರುವ ವರದಿಯ ಪ್ರತಿ ಮತ್ತು ಅನುಷ್ಠಾನದ ವಿವರಗಳನ್ನು ಒದಗಿಸುವುದು ;

(ಆ) ಸದರಿ ವಿವಿಯ ಹಗರಣಗಳ ಬಗ್ಗೆ ಕ.ರಾ.ಮು.ವಿ ಅಧಿನಿಯಮ ೧೯೯೨ರ ಕಲಂ ೮ರಡಿ ಮಾನ್ಯ ರಾಜ್ಯಪಾಲರಿಗೆ ಪ್ರದತ್ತವಾಗಿರುವ ಅಧಿಕಾರದಲ್ಲಿ GS 13 KOM 2025 Dated 30.01.2026ರ ಆದೇಶದಂತೆ ಉಚ್ಚ ನ್ಯಾಯಾಲಯದ ನಿವೃತ್ತ ನ್ಯಾಯಾಧೀಶರ ನೇತೃತ್ವದಲ್ಲಿ ತನಿಖಾ ಸಮಿತಿ ವರದಿಯು ಸರ್ಕಾರಕ್ಕೆ ಸಲ್ಲಿಕೆಯಾಗಿದೆಯೇ ; ಸಲ್ಲಿಕೆಯಾಗಿದ್ದರೆ, ವರದಿಯ

ಪ್ರತಿಯನ್ನು ಒದಗಿಸುವುದು ಮತ್ತು ವರದಿಯು ಅನುಷ್ಠಾನ ಮತ್ತು ಜರುಗಿಸಲ್ಪಟ್ಟ ಕ್ರಮಗಳ ಬಗ್ಗೆ ಮಾಹಿತಿ ಒದಗಿಸುವುದು ?

## ರಾಜ್ಯದ ಹಿಂದುಳಿದ ವರ್ಗಗಳ ಹಾಸ್ಟೆಲ್ ಕಟ್ಟಡಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೨ (೧೪೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಹಾಸ್ಟೆಲ್ ಕಟ್ಟಡಗಳ ದುರಸ್ತಿ ಕಾರ್ಯಕ್ಕೆ ಬೇಕಾಗಿರುವ ಹಣ ಎಷ್ಟು ; ಪ್ರಸ್ತುತ ಸಾಲಿನಲ್ಲಿ ಸರ್ಕಾರ ಬಿಡುಗಡೆ ಮಾಡಿರುವ ಹಣವೆಷ್ಟು ; (ಹಾಸ್ಟೆಲ್‌ವಾರು ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಎಷ್ಟು ನೂತನ ಹಾಸ್ಟೆಲ್‌ಗಳ ಅವಶ್ಯಕತೆ ಇದೆ; ಪ್ರಸಕ್ತ ವರ್ಷದಲ್ಲಿ ಎಷ್ಟು ನೂತನ ಹಾಸ್ಟೆಲ್ ಕಟ್ಟಡ ಕಟ್ಟಲು ಸರ್ಕಾರ ಹಣ ಬಿಡುಗಡೆ ಮಾಡಿರುತ್ತದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿ ಬಾಡಿಗೆ ಕಟ್ಟಡದಲ್ಲಿ ನಡೆಯುತ್ತಿರುವ ಹಾಸ್ಟೆಲ್‌ಗಳ ಸಂಖ್ಯೆ ಎಷ್ಟು; ಹೊಸ ಹಾಸ್ಟೆಲ್ ಕಟ್ಟಡಗಳನ್ನು ಕಟ್ಟಲು ಎಷ್ಟು ಕಡೆ ನಿವೇಶನ/ಸ್ಥಳಗಳನ್ನು ನೀಡಲಾಗಿದೆ? (ಜಿಲ್ಲಾವಾರು ಸಂಪೂರ್ಣ ಮಾಹಿತಿ ನೀಡುವುದು)

## ಶಿಕ್ಷಕರನ್ನು ಅನ್ಯಕಾರ್ಯಕ್ಕೆ ನಿಯೋಜಿಸಿರುವುದರಿಂದ ಬೋಧನೆಗೆ ಆಗುತ್ತಿರುವ ಸಮಸ್ಯೆಗಳ ಕುರಿತು

**ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೫೩ (೧೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳಲ್ಲಿ ಶಿಕ್ಷಕರ ಕೊರತೆಯಿಂದ ಪಾಠ ಬೋಧನೆ ಸಮರ್ಪಕವಾಗಿ ನಡೆಯುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಶಾಲಾ ಶಿಕ್ಷಕರನ್ನು ವಿಶೇಷ ತೀವ್ರ ಪರಿಷ್ಕರಣೆ (SIR) ಜನಗಣತಿ, ಚುನಾವಣೆ ಹಾಗೂ ಇತರೆ ಇಲಾಖೆಗಳ ಕಾರ್ಯಗಳಿಗೆ ನಿಯೋಜಿಸಲಾಗುತ್ತಿರುವುದರಿಂದ ವಿದ್ಯಾರ್ಥಿಗಳ ಶೈಕ್ಷಣಿಕ ಚಟುವಟಿಕೆಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಕಳೆದ ಮೂರು ವರ್ಷಗಳಲ್ಲಿ (SIR) ಜನಗಣತಿ ಹಾಗೂ ಇತರೆ ಸರ್ಕಾರಿ ಕಾರ್ಯಗಳಿಗೆ ನಿಯೋಜಿಸಲಾದ ಶಿಕ್ಷಕರ ಜಿಲ್ಲಾವಾರು ಸಂಖ್ಯೆ ಮತ್ತು ಅವರು ಶಾಲೆಯಿಂದ ದೂರ ಉಳಿದ ದಿನಗಳ ವಿವರವನ್ನು ಒದಗಿಸುವುದು ;

(ಈ) ಶಿಕ್ಷಕರನ್ನು ಶೈಕ್ಷಣಿಕೇತರ ಕಾರ್ಯಗಳಿಗೆ ನಿಯೋಜಿಸುವ ಸಂದರ್ಭದಲ್ಲಿ ಶಾಲೆಗಳ ಪಾಠ ಬೋಧನೆಗೆ ಅಡ್ಡಿಯಾಗದಂತೆ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ ;

(ಉ) ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಶಿಕ್ಷಕರನ್ನು SIR ಜನಗಣತಿ ಹಾಗೂ ಇತರೆ ಶೈಕ್ಷಣಿಕೇತರ ಕಾರ್ಯಗಳಿಂದ ವಿನಾಯಿತಿ ನೀಡುವ ಕುರಿತು ಸರ್ಕಾರ ಪರಿಶೀಲಿಸುತ್ತಿದೆಯೇ ?

## ಕರ್ನಾಟಕ ರಾಜ್ಯದಲ್ಲಿ ಕೆಪಿಎಸ್ ಶಾಲೆಗಳಾಗಿ ಮೇಲ್ದರ್ಜೆಗೇರಿಸಿದ ಆಡಳಿತಾತ್ಮಕ ಆದೇಶಗಳ ಅನುಷ್ಠಾನ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೪ (೨೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆಪಿಎಸ್ ಶಾಲೆಗಳಲ್ಲಿ ಎಲ್‌ಕೆಜಿ–ಪಿಯುಸಿ ವಿಭಾಗವನ್ನು ಪ್ರಾರಂಭಿಸಲು ಸರ್ಕಾರ ನಿಗಧಿಪಡಿಸಿರುವ ಕಡ್ಡಾಯ ಮಾನದಂಡಗಳು ಹಾಗೂ ಕಾಲಮಿತಿಯ ವಿವರವೇನು ; ಅದನ್ನು ಪಾಲಿಸಲಾಗಿದೆಯೇ ; ಕೆಪಿಎಸ್ ಶಾಲೆಗಳಾಗಿ ಮೇಲ್ದರ್ಜೆಗೇರಿಸಿದ ಪ್ರಕರಣಗಳಲ್ಲಿ ನಿಯಮಗಳಂತೆ ಬಿಡುಗಡೆ ಮಾಡಬೇಕಾದ ಅನುದಾನವೆಷ್ಟು ; ಇಲ್ಲಿಯವರೆಗೆ ಯಾವ ಶಾಲೆಗಳಿಗೆ ಎಷ್ಟೆಷ್ಟು ಅನುದಾನ ಮಂಜೂರಾಗಿ ಬಿಡುಗಡೆಯಾಗಿದೆ ; ಅನುಸರಿಸಿದ ಮಾನದಂಡಗಳೇನು ;

(ಆ) ರಾಜ್ಯದಲ್ಲಿ ಇಲ್ಲಿಯವರೆಗೆ ಕೆಪಿಎಸ್ ಶಾಲೆಗಳಾಗಿ ಮೇಲ್ದರ್ಜೆಗೇರಿಸಿದ ಸರ್ಕಾರಿ ಶಾಲೆಗಳೆಷ್ಟು ; ಅವುಗಳಲ್ಲಿ ಎಷ್ಟು ಶಾಲೆಗಳಲ್ಲಿ ಎಲ್‌ಕೆಜಿ(LKG)ಯಿಂದ ಪಿಯುಸಿ (PUC)ವರೆಗೆ ಕೆಪಿಎಸ್ ಏಕೀಕೃತ ಶಿಕ್ಷಣ ವ್ಯವಸ್ಥೆಯನ್ನು ಪ್ರಾರಂಭಿಸಲಾಗಿದೆ ; ಮೇಲ್ದರ್ಜೆಗೇರಿಸಿ ಆದೇಶ ಹೊರಡಿಸಿ ಒಂದು ವರ್ಷ ಕಳೆದರೂ ಶಾಲೆಗಳು ಪೂರ್ಣ ಪ್ರಮಾಣದಲ್ಲಿ ಕಾರ್ಯಾರಂಭ ಮಾಡದಿರುವುದಕ್ಕೆ ಕಾರಣವೇನು ;

(ಇ) ಈ ಬಗ್ಗೆ ಸರ್ಕಾರ ಆಡಳಿತಾತ್ಮಕ ಆದೇಶ ಹೊರಡಿಸಿದ್ದರೂ, ಬಹುತೇಕ ಶಾಲೆಗಳಲ್ಲಿ ಅಗತ್ಯ ಮೂಲಭೂತ ಸೌಲಭ್ಯಗಳು, ಹೆಚ್ಚುವರಿ ಕೊಠಡಿಗಳು, ಪ್ರಯೋಗಾಲಯಗಳು, ಶಿಕ್ಷಕರ ನೇಮಕಾತಿ ಹಾಗೂ ಇತರೆ ಶೈಕ್ಷಣಿಕ ಸೌಲಭ್ಯಗಳನ್ನು ಒದಗಿಸದಿರಲು ಕಾರಣವೇನು ;

(ಈ) ಘೋಷಣೆ ಮತ್ತು ವಾಸ್ತವ ಅನುಷ್ಠಾನದ ನಡುವಿನ ಈ ವಿಳಂಬದಿಂದ ಸಾವಿರಾರು ವಿದ್ಯಾರ್ಥಿಗಳು ಹಾಗೂ ಪೋಷಕರು ಖಾಸಗಿ ಶಿಕ್ಷಣ ಸಂಸ್ಥೆಗಳ ಮೊರೆ ಹೋಗುವಂತಾಗಿದ್ದು

ಯೋಜನೆಯ ಅನುಷ್ಠಾನದಲ್ಲಿನ ಆಡಳಿತಾತ್ಮಕ ವೈಫಲ್ಯವನ್ನು ಸರಿಪಡಿಸಲು ಸರ್ಕಾರ ಯಾವ ಪರಿಹಾರ ಕ್ರಮಗಳನ್ನು ಯಾವ ಕಾಲಮಿತಿಯಲ್ಲಿ ಜರುಗಿಸಲು ಉದ್ದೇಶಿಸಿದೆ ;

(ಉ) ೨೦೨೬-೨೭ನೇ ಶೈಕ್ಷಣಿಕ ವರ್ಷದಲ್ಲಿ ಮೇಲ್ದರ್ಜೆಗೇರಿಸಲಾದ ಎಲ್ಲಾ ಕೆಪಿಎಸ್ ಶಾಲೆಗಳಲ್ಲಿ ಎಲ್‌ಕೆಜಿಯಿಂದ ಪಿಯುಸಿವರೆಗೆ ಎಲ್ಲಾ ತರಗತಿಗಳನ್ನು ಆರಂಭಿಸಲು ಅಗತ್ಯ ಮೂಲಸೌಕರ್ಯ, ಶಿಕ್ಷಕರ ನೇಮಕಾತಿ, ಆಡಳಿತಾತ್ಮಕ ಅನುಮೋದನೆ ಹಾಗೂ ಅನುದಾನಸಹಿತ ಇತರ ಪೂರಕ ಸೌಲಭ್ಯಗಳೊಂದಿಗೆ ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲು ಸರ್ಕಾರ ಯೋಜಿಸಿದೆ ?

## ರಾಜ್ಯದ ಇಂಜಿನಿಯರಿಂಗ್ ಕಾಲೇಜುಗಳಲ್ಲಿನ ಸೂಪರ್‌ನ್ಯೂಮರರಿ (Supernumerary) ಸೀಟುಗಳ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೫೫ (೨೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ೩ ಶೈಕ್ಷಣಿಕ ವರ್ಷಗಳಲ್ಲಿ ರಾಜ್ಯದ ಸರ್ಕಾರಿ, ಅನುದಾನಿತ ಹಾಗೂ ಖಾಸಗಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಮಂಜೂರಾದ ಸೂಪರ್‌ನ್ಯೂಮರರಿ (Supernumerary) ಸೀಟುಗಳ ಸಂಖ್ಯೆಯೆಷ್ಟು; ಅವುಗಳಲ್ಲಿ ಪ್ರವೇಶ ಪಡೆದ, ಖಾಲಿ ಉಳಿದ ಹಾಗೂ ರದ್ದಾದ ಸೀಟುಗಳೆಷ್ಟು; (ಕಾಲೇಜುವಾರು, ವಿಶ್ವವಿದ್ಯಾಲಯವಾರು, ವಿಭಾಗ (Branch) ವಾರು ಹಾಗೂ ವರ್ಗವಾರು ವಿವರಗಳನ್ನು ಒದಗಿಸುವುದು)

(ಆ) ಸೂಪರ್‌ನ್ಯೂಮರರಿ ಸೀಟುಗಳು ಭರ್ತಿಯಾಗದೆ ಉಳಿಯಲು ಅರಿವಿನ ಕೊರತೆ, ಪ್ರವೇಶ ಪ್ರಕ್ರಿಯೆಯ ಸಂಕೀರ್ಣತೆ, ಶುಲ್ಕ, ಕಾಲೇಜುಗಳ ಸ್ಥಳ, ಕೋರ್ಸ್‌ಗಳ ಬೇಡಿಕೆ, ಉದ್ಯೋಗಾವಕಾಶ, ಮೂಲಸೌಕರ್ಯ, ಗುಣಮಟ್ಟ ಹಾಗೂ ಕೈಗಾರಿಕಾ ಸಂಪರ್ಕದ ಕೊರತೆ ಸೇರಿದಂತೆ ಸರ್ಕಾರ ಗುರುತಿಸಿರುವ ಪ್ರಮುಖ ಕಾರಣಗಳೇನು ;

(ಇ) ಸೂಪರ್‌ನ್ಯೂಮರರಿ ಸೀಟುಗಳ ಕುರಿತು ಉನ್ನತ ಶಿಕ್ಷಣ ಇಲಾಖೆ, ಕರ್ನಾಟಕ ಪರೀಕ್ಷಾ ಪ್ರಾಧಿಕಾರ (KEA), ತಾಂತ್ರಿಕ ಶಿಕ್ಷಣ ಇಲಾಖೆ, ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (VTU) ಅಥವಾ AICTE ಯಾವುದೇ ವಿಶ್ಲೇಷಣೆ ಹಾಗೂ ಶೈಕ್ಷಣಿಕ ಲೆಕ್ಕಪರಿಶೋಧನೆ (Academic Audit) ಅಥವಾ ಪರಿಣಾಮ ಮೌಲ್ಯಮಾಪನ (Impact Assessment) ನಡೆಸಿದೆಯೆ ; ನಡೆಸಿದ್ದರೆ, ಅದರ ಶಿಫಾರಸ್ಸುಗಳೇನು ;

(ಈ) ಸೂಪರ್‌ನ್ಯೂಮರರಿ ಸೀಟುಗಳನ್ನು ಪೂರ್ಣವಾಗಿ ಭರ್ತಿಮಾಡಿ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಅವಕಾಶವೊದಗಿಸುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಿಗೆ ಜಾಗೃತಿ, ಕೇಂದ್ರೀಕೃತ ಕೌನ್ಸೆಲಿಂಗ್, ಪ್ರವೇಶ ಮಾರ್ಗಸೂಚಿಗಳ ಸರಳೀಕರಣ, ಉದ್ಯಮ–ಶೈಕ್ಷಣಿಕ ಸಹಭಾಗಿತ್ವ ಹಾಗೂ ಪೂರಕ ನೀತಿಗಳನ್ನು ಜಾರಿಗೊಳಿಸಲು ಸರ್ಕಾರ ಕಾಲಬದ್ಧ ಕಾರ್ಯಯೋಜನೆಯನ್ನು ರೂಪಿಸಿದೆಯೇ ; ಇಲ್ಲದಿದ್ದಲ್ಲಿ, ಯಾವಾಗ ರೂಪಿಸಲಾಗುವುದು ?

# ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳ (Hostel) ಸ್ಥಾಪನೆ, ಪ್ರವೇಶ ಸಾಮರ್ಥ್ಯ ಹಾಗೂ ಬೇಡಿಕೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೬ (೨೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಮೆಟ್ರಿಕ್ ಪೂರ್ವ ಹಾಗೂ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿ ನಿಲಯಗಳನ್ನು ಹೊಸದಾಗಿ ಆರಂಭಿಸಲು ಅನುಸರಿಸುತ್ತಿರುವ ಅರ್ಹತಾ ಮಾನದಂಡಗಳಾವುವು ; ಜನಸಂಖ್ಯೆ, ವಿದ್ಯಾರ್ಥಿಗಳ ಸಂಖ್ಯೆ, ದೂರ, ಸೀಟುಗಳ ಕೊರತೆ, ಕಟ್ಟಡ ಲಭ್ಯತೆ ಹಾಗೂ ಇತರ ಮಾನದಂಡಗಳಲ್ಲಿ ವಿದ್ಯಾರ್ಥಿ ನಿಲಯಗಳನ್ನು ಹೊಸದಾಗಿ ಆರಂಭಿಸಲು ಇಲಾಖೆ ಪರಿಗಣಿಸುತ್ತಿರುವ ಆದ್ಯತಾ ಮಾನದಂಡಗಳು ಯಾವುವು ;

(ಆ) ಕಳೆದ ಮೂರು ವರ್ಷಗಳಲ್ಲಿ ಜಿಲ್ಲಾವಾರು, ಹೊಸದಾಗಿ ಮಂಜೂರಾದ ವಿದ್ಯಾರ್ಥಿ ನಿಲಯಗಳೆಷ್ಟು; ಅವುಗಳು ಎಲ್ಲೆಲ್ಲಿ ಮಂಜೂರಾಗಿವೆ ಮತ್ತು ಅವುಗಳ ಆಡಳಿತಾತ್ಮಕ ಅನುಮತಿ, ಅನುದಾನ ಬಿಡುಗಡೆ, ಕಾಮಗಾರಿ ಪ್ರಗತಿ ಕುರಿತ ವಿವರವನ್ನು ಒದಗಿಸುವುದು ;

(ಇ) ಕಳೆದ ಮೂರು ವರ್ಷಗಳಲ್ಲಿ ಉಡುಪಿ ಹಾಗೂ ದಕ್ಷಿಣ ಕನ್ನಡ ಜಿಲ್ಲೆಗಳಲ್ಲಿ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳಿಗೆ ಅರ್ಜಿ ಸಲ್ಲಿಸಿದ, ಪ್ರವೇಶ ಪಡೆದ ಹಾಗೂ ಸೀಟುಗಳ ಕೊರತೆಯಿಂದ ವಂಚಿತರಾದ ವಿದ್ಯಾರ್ಥಿಗಳೆಷ್ಟು; ಹೆಚ್ಚುವರಿ ಬೇಡಿಕೆಯನ್ನು ಈಡೇರಿಸಲು ಕೈಗೊಂಡಿರುವ ಕ್ರಮಗಳೇನು ;

(ಈ) ಈ ಎರಡೂ ಜಿಲ್ಲೆಗಳಲ್ಲಿ ವಿದ್ಯಾರ್ಥಿಗಳ ಬೇಡಿಕೆ, ಜನಪ್ರತಿನಿಧಿಗಳು ಹಾಗೂ ಸಾರ್ವಜನಿಕರಿಂದ ಬಂದ ಮನವಿಗಳ ಆಧಾರದ ಮೇಲೆ ಹೊಸ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸಲು ಪ್ರಸ್ತಾವನೆಗಳು ಬಂದಿವೆಯೇ ; ಬಂದಿದ್ದರೆ, ಅವುಗಳ ಸ್ಥಿತಿ, ಅನುಮೋದಿಸದಿದ್ದರೆ, ಕಾರಣಗಳು ಹಾಗೂ ಹೊಸ ವಿದ್ಯಾರ್ಥಿ ನಿಲಯಗಳನ್ನು ಆರಂಭಿಸಲು ಸರ್ಕಾರ ರೂಪಿಸಿರುವ ಕಾರ್ಯಯೋಜನೆಗಳೇನು ?

## ರಾಜ್ಯದಲ್ಲಿ ವಿಶೇಷವಾಗಿ ದುರ್ಬಲ ಬುಡಕಟ್ಟು ಗುಂಪುಗಳು (PVTG) ಸೇರಿದಂತೆ ಮೂಲನಿವಾಸಿ ಸಮುದಾಯಗಳಿಗೆ ನೀಡುತ್ತಿದ್ದ ಉಚಿತ ಪೌಷ್ಠಿಕ ಆಹಾರ ಕಿಟ್ ಯೋಜನೆ ಕುರಿತು

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೭ (೨೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ವಿಶೇಷವಾಗಿ ದುರ್ಬಲ ಬುಡಕಟ್ಟು ಗುಂಪುಗಳು (PVTG) ಸೇರಿದಂತೆ ಮೂಲನಿವಾಸಿ ಸಮುದಾಯಗಳ ಅಪೌಷ್ಠಿಕತೆ ನಿವಾರಣೆಗಾಗಿ ೨೦೦೮–೦೯ರಿಂದ ಜಾರಿಯಲ್ಲಿರುವ ಉಚಿತ ಪೌಷ್ಠಿಕ ಆಹಾರ ಕಿಟ್ ಯೋಜನೆಯಡಿ ಯಾವ ಯಾವ ಜಿಲ್ಲೆಗಳ ಯಾವ ಸಮುದಾಯಗಳಿಗೆ ಕಿಟ್ ನೀಡಲಾಗುತ್ತಿತ್ತು ;

(ಆ) ರಾಜ್ಯದ ವಿವಿಧ ಜಿಲ್ಲೆಗಳ ೪೭,೮೫೫ ಫಲಾನುಭವಿಗಳಿಗೆ ನೀಡಲಾಗುತ್ತಿದ್ದ ಆಹಾರ ಕಿಟ್ ವಿತರಣೆ ಪ್ರಸ್ತುತ ಸ್ಥಗಿತಗೊಳ್ಳಲು ಕಾರಣವೇನು; ಕಳೆದ ೫ ತಿಂಗಳ ಅವಧಿಯಲ್ಲಿ ಬಿಡುಗಡೆಯಾದ ಅನುದಾನ, ಖರ್ಚಾದ ಮೊತ್ತ ಹಾಗೂ ಬಳಕೆಯಾಗದೆ

ಉಳಿದಿರುವ ಅನುದಾನದ ಜಿಲ್ಲಾವಾರು ವಿವರವೇನು; ಈ ಕುರಿತ ಟೆಂಡರ್ ಅಥವಾ ಖರೀದಿ ಪ್ರಕ್ರಿಯೆಯಲ್ಲಿರುವ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ವಹಿಸುತ್ತಿರುವ ಕ್ರಮಗಳೇನು ;

(ಇ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ನೀಡಲಾಗುತ್ತಿದ್ದ ಆಹಾರ ಸಾಮಾಗ್ರಿಗಳಾದ ಅಕ್ಕಿ, ಮೊಟ್ಟೆ, ಎಣ್ಣೆ, ಬೇಳೆ, ರಾಗಿ, ಉದ್ದು, ಅಲಸಂದೆ, ಬಟಾಣಿ ಇತ್ಯಾದಿ ಪೂರೈಕೆ ಸ್ಥಗಿತಗೊಂಡಿದ್ದು, ಸದರಿ ಯೋಜನೆಯನ್ನು ತಕ್ಷಣ ಪುನರಾರಂಭಿಸಿ ಬಾಕಿ ಉಳಿದಿರುವ ತಿಂಗಳ ಕಿಟ್‌ಗಳನ್ನು ವಿತರಿಸಲು ಸರ್ಕಾರ ಯಾವ ಕಾಲಮಿತಿಯೊಳಗೆ ಕ್ರಮ ಕೈಗೊಳ್ಳುವುದು ;

(ಈ) ಉಚಿತ ಪೌಷ್ಠಿಕ ಆಹಾರ ಯೋಜನೆಯಡಿ ಕಿಟ್ ಪಡೆಯುತ್ತಿದ್ದರೂ ದಕ್ಷಿಣ ಕನ್ನಡ–ಉಡುಪಿ ಸ್ಥಳೀಯ ಮೂಲ ನಿವಾಸಿ ಕೊರಗ ಸಮುದಾಯದ ಜನಸಂಖ್ಯೆ ಕ್ಷೀಣಿಸುತ್ತಿರುವ ಬಗ್ಗೆ ವರದಿಯಾಗಿದ್ದು, ಇದನ್ನು ಸರಿಪಡಿಸಲು ಸರ್ಕಾರ ಅನುಸರಿಸುತ್ತಿರುವ ಕ್ರಮಗಳೇನು ;

(ಉ) ಒಟ್ಟಿನಲ್ಲಿ ಕೊರಗ, ಮೆಲಕುಡಿಯ, ಸುಮಾರು ೧೩ ಬುಡಕಟ್ಟು ಸಮುದಾಯಗಳ ಮಕ್ಕಳು, ಗರ್ಭಿಣಿಯರು, ಬಾಣಂತಿಯರು ಮತ್ತು ವೃದ್ಧರಲ್ಲಿ ಅಪೌಷ್ಠಿಕತೆಯನ್ನು ನಿವಾರಿಸಲು ಯಾವ ಕಾಲಮಿತಿಯಲ್ಲಿ ಯಾವ್ಯಾವ ಕ್ರಮಗಳನ್ನು ಅನುಷ್ಠಾನಿಸಲಾಗುತ್ತಿದೆ ?

## ರಾಜ್ಯದ ನದಿಗಳ ನೀರಿನ ಹಾಗೂ ಕುಡಿಯುವ ನೀರು ಪೂರೈಸುವ ಜಲಮೂಲಗಳ ಗುಣಮಟ್ಟದ ಕುರಿತು.

**ಶ್ರೀ ಮಂಜುನಾಥ್ ಭಂಡಾರಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೮ (೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ನದಿಗಳ ನೀರಿನ ಹಾಗೂ ಕುಡಿಯುವ ನೀರು ಪೂರೈಸುವ ಜಲಮೂಲಗಳ ನೀರಿನ ಗುಣಮಟ್ಟದ ಪರೀಕ್ಷೆ ನಡೆಸಲಾಗಿದೆಯೇ; ಮಾಡಿದ್ದರೆ, BOD, COD, Dissolved Oxygen, Coliform, Heavy Metal ಇತ್ಯಾದಿಗಳನ್ನೊಳಗೊಂಡಂತೆ ಪರೀಕ್ಷಾ ವರದಿ ಒದಗಿಸುವುದು ;

(ಆ) ಕರಾವಳಿ ಜಿಲ್ಲೆಗಳ ನದಿಗಳಿಗೆ ಸಂಸ್ಕರಿಸದ ಒಳಚರಂಡಿ ತ್ಯಾಜ್ಯ ಹರಿಸುತ್ತಿರುವ ಸ್ಥಳೀಯ ಸಂಸ್ಥೆಗಳು, ಮತ್ತು ಕೈಗಾರಿಕಾ ತ್ಯಾಜ್ಯ ಹರಿಸುತ್ತಿರುವ ಕೈಗಾರಿಕಾ ಘಟಕಗಳ ಕುರಿತು ಎಷ್ಟು ಪ್ರಕರಣಗಳು ಬೆಳಕಿಗೆ ಬಂದಿವೆ ; ಸದರಿ ಪ್ರಕರಣಗಳ ಕುರಿತು ಸರ್ಕಾರ ವಹಿಸಿರುವ ಕ್ರಮಗಳೇನು ;

(ಇ) ಕರಾವಳಿ ಜಿಲ್ಲೆಗಳ ಎಲ್ಲಾ ನಗರಗಳಲ್ಲಿ ೧೦೦% Sewage Treatment Plants (STPs) ಹಾಗೂ ಗ್ರಾಮಗಳಿಗೆ Decentralised Wastewater Treatment Systems (DEWATS) ಸ್ಥಾಪಿಸಲು ಸರ್ಕಾರ ಹಂತವಾರು ಯೋಜನೆ ರೂಪಿಸಿರುವುದೇ ; ಈ ಬಗ್ಗೆ ಯಾವಾಗ ಕ್ರಮವಹಿಸಲಾಗುವುದು ;

(ಈ) ಅಕ್ರಮ ಮರಳುಗಾರಿಕೆ, ನದಿತೀರ ಅತಿಕ್ರಮಣ ಮತ್ತು ಘನ/ ದ್ರವ ತ್ಯಾಜ್ಯ ವಿಲೇವಾರಿಯನ್ನು ತಡೆಯಲು GIS Mapping, Drone Surveillance River Protection Task Force ರಚಿಸುವ ಕುರಿತು ಸರ್ಕಾರ ರೂಪಿಸಿರುವ ಯೋಜನೆಗಳಾವುವು ;

(ಉ) ನೇತ್ರಾವತಿ, ಗುರುಪುರ, ಸ್ವರ್ಣಾ ಮತ್ತು ಇತರ ಕರಾವಳಿ ನದಿಗಳ ಸಂರಕ್ಷಣೆಗಾಗಿ "Karnataka Coastal River Rejuvenation Mission" ಅನ್ನು ನಿಗದಿತ ಅನುದಾನದೊಂದಿಗೆ

ಆರಂಭಿಸಲು ಸರ್ಕಾರ ಉದ್ದೇಶಿಸಿರುವುದೇ ; ಇದ್ದರೆ, ಅದರ ಅನುಷ್ಠಾನ ವೇಳಾಪಟ್ಟಿಯ ಮಾಹಿತಿ ಒದಗಿಸುವುದು ;

(ಊ) ನದಿ ಹಾಗೂ ಇತರ ಜಲಮೂಲಗಳ ಮಾಲಿನ್ಯ ನಿಯಂತ್ರಣ ಕುರಿತು ಸಮನ್ವಯ ಸಾಧಿಸಲು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಸ್ಥಳೀಯ ಸಂಸ್ಥೆಗಳು, ಮೀನುಗಾರಿಕೆ, ಕೈಗಾರಿಕೆ, ಅರಣ್ಯ, ಕಂದಾಯ ಮತ್ತು ನೀರಾವರಿ ಇಲಾಖೆಗಳನ್ನು ಒಳಗೊಂಡ ಶಾಶ್ವತ ರಾಜ್ಯಮಟ್ಟದ ಹಾಗೂ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ರಚಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಮೂಲಸೌಕರ್ಯಗಳ ತೀವ್ರ ಕೊರತೆ ಮತ್ತು ಶಿಕ್ಷಕರ ಹುದ್ದೆಗಳು ಖಾಲಿ ಇರುವ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೫೯ (೯೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಒಟ್ಟು ೪೬,೪೬೦ ಸರ್ಕಾರಿ ಶಾಲೆಗಳಲ್ಲಿ ಕನಿಷ್ಠ ಮೂಲಸೌಕರ್ಯಗಳಿಲ್ಲದೆ ವಿದ್ಯಾರ್ಥಿಗಳು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಇವುಗಳನ್ನು ಸರಿಪಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಸರ್ಕಾರದ ಅಧಿಕೃತ ಮಾಹಿತಿಯ ಪ್ರಕಾರ ರಾಜ್ಯದ ೩೯,೪೭೮ ಶಾಲೆಗಳಲ್ಲಿ ವಿಶೇಷಚೇತನ ಸ್ನೇಹಿ ಶೌಚಾಲಯ, ೪,೭೫೫ ಶಾಲೆಗಳಿಗೆ ಕಾಪೌಂಡ್ ಮತ್ತು ೨,೦೩೯ ಬಾಲಕರಿಗೆ ಹಾಗೂ

೭೦೧ ಬಾಲಕಿಯರಿಗೆ ಪ್ರತ್ಯೇಕ ಶೌಚಾಲಯಗಳಿಲ್ಲದಿರುವುದು ನಿಜವೇ; ಹೆಣ್ಣುಮಕ್ಕಳಿಗೆ ಪ್ರತ್ಯೇಕ ಶೌಚಾಲಯವಿಲ್ಲದೆ ಅವರ ಶಿಕ್ಷಣಕ್ಕೆ ತೊಂದರೆಯಾಗುತ್ತಿರುವುದನ್ನು ಸರ್ಕಾರ ಗಂಭೀರವಾಗಿ ಪರಿಗಣಿಸಿದೆಯೇ ;

(ಇ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಪ್ರಸ್ತುತ ಬರೋಬ್ಬರಿ ೫೭,೭೦೬ ಶಿಕ್ಷಕರ ಕೊರತೆ ಇರುವುದು ನಿಜವೇ ; ಶೈಕ್ಷಣಿಕ ವರ್ಷ ಆರಂಭವಾಗಿದ್ದರೂ ಶಿಕ್ಷಕರ ಹುದ್ದೆಗಳು ಖಾಲಿ ಉಳಿದಿದ್ದರೆ ಮಕ್ಕಳ ಗುಣಮಟ್ಟದ ಶಿಕ್ಷಣಕ್ಕೆ ಧಕ್ಕೆಯಾಗುವುದಿಲ್ಲವೇ ; ಈ ಕೊರತೆಯನ್ನು ನೀಗಿಸಲು ಸರ್ಕಾರ ಕೈಗೊಂಡಿರುವ ಪರ್ಯಾಯ ಯೋಜನೆಗಳೇನು ;

(ಈ) ರಾಜ್ಯದ ೬೩೦ ಶಾಲೆಗಳಿಗೆ ವಿದ್ಯುತ್ ಸಂಪರ್ಕವೇ ಇಲ್ಲದಿರುವುದು, ೬೦೬ ಶಾಲೆಗಳಿಗೆ ಸ್ವಂತ ಕಟ್ಟಡವಿಲ್ಲದಿರುವುದು ಹಾಗೂ ಶೇ.೮೦ ರಷ್ಟು ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರಿನ ಸೌಲಭ್ಯವಿಲ್ಲದೆ ಬೋರ್‌ವೆಲ್ ನೀರನ್ನೇ ಅವಲಂಬಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಸ್ಮಾರ್ಟ್ ಬೋರ್ಡ್, ಫ್ಯಾನ್ ಮತ್ತು ಲ್ಯಾಬ್ ಉಪಕರಣಗಳಿಗೆ ಸರ್ಕಾರದಿಂದ ಹಣ ಸಿಗದಿರಲು ಕಾರಣಗಳೇನು ;

(ಉ) ಶಾಲೆಗಳ ಅಭಿವೃದ್ಧಿಗೆ ಮತ್ತು ಕೊಠಡಿಗಳ ದುರಸ್ತಿಗೆ ಸರ್ಕಾರದ ಅನುದಾನ ಸಾಲದೆ, ಸಾರ್ವಜನಿಕರು ಮತ್ತು ದಾನಿಗಳ ದೇಣಿಗೆಯನ್ನು ಆಶ್ರಯಿಸುವಂತೆ ಮಾನ್ಯ ಶಿಕ್ಷಣ ಸಚಿವರೇ ಹೇಳಿಕೆ ನೀಡಿರುವುದು ನಿಜವೇ ; ೨೦೨೫-೨೬ನೇ ಸಾಲಿಗೆ ಶಾಲಾ ಕೊಠಡಿಗಳ ದುರಸ್ತಿಗೆ ಕೇವಲ ರೂ.೧೦೦ ಕೋಟಿ, ಶೌಚಾಲಯ ನಿರ್ಮಾಣಕ್ಕೆ ೯೦ ಕೋಟಿ ನಿಗದಿಪಡಿಸಿದ್ದು, ಈ ಅನುದಾನವನ್ನು ಹೆಚ್ಚಿಸಲು ಸರ್ಕಾರ ಕ್ರಮ ಕೈಗೊಳ್ಳುವುದೇ ? (ಸಂಪೂರ್ಣ ವಿವರ ನೀಡುವುದು)

# ಹುಲಿ ಸಂರಕ್ಷಿತ ಪ್ರದೇಶದ ಸೂಕ್ಷ್ಮ ವಲಯದಲ್ಲಿ ಅಕ್ರಮ ಬಡಾವಣೆ ನಿರ್ಮಾಣ ಕುರಿತು

**ಶ್ರೀ ಸಿ.ಎನ್. ಮಂಜೇಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೬೦ (೯೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಚಾಮರಾಜನಗರ ಜಿಲ್ಲೆ, ಗುಂಡ್ಲುಪೇಟೆ ತಾಲ್ಲೂಕಿನ ಮಂಗಲ ಗ್ರಾಮ ಹಾಗೂ ಬಂಡೀಪುರ ಹುಲಿ ಸಂರಕ್ಷಿತ ಪ್ರದೇಶದ ಸೂಕ್ಷ್ಮ ವಲಯದಲ್ಲಿ (Eco-Sensitive Zone) ಅಕ್ರಮವಾಗಿ ಬಡಾವಣೆ/ಲೇಔಟ್ ನಿರ್ಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಅತ್ಯಂತ ಸಂರಕ್ಷಿತ ಅರಣ್ಯ ಪ್ರದೇಶಕ್ಕೆ ಹೊಂದಿಕೊಂಡಂತೆ ಎಕೊ–ಸೆನ್ಸಿಟಿವ್ ವಲಯದ ನಿಯಮಗಳನ್ನು ಉಲ್ಲಂಘಿಸಿ ಖಾಸಗಿ ಲೇಔಟ್‌ಗಳನ್ನು ನಿರ್ಮಿಸಲು ಅನುಮತಿ ನೀಡಿದ ಅಧಿಕಾರಿಗಳು/ ಸಿಬ್ಬಂದಿಗಳು ಯಾರು ; (ಅಧಿಕಾರಿಗಳ ವಿವರ ನೀಡುವುದು)

(ಇ) ಪತ್ರಿಕಾ ವರದಿಗಳ ಹಿನ್ನೆಲೆಯಲ್ಲಿ ಕೊಳ್ಳೇಗಾಲ ಉಪ ವಿಭಾಗಾಧಿಕಾರಿ, ತಹಶೀಲ್ದಾರ್ ಹಾಗೂ ಎಸಿಎಫ್‌ಗಳ ಸ್ಥಳ ಪರಿಶೀಲನೆ ನಡೆಸಿ ಕೆಲಸ ಸ್ಥಗಿತಗೊಳಿಸಲು ಆದೇಶಿಸಿರುವುದು ನಿಜವೇ ; ಬಂದಿದ್ದಲ್ಲಿ, ಪ್ರಸ್ತುತ ಸ್ಥಳದಲ್ಲಿ ನಡೆದಿರುವ ಅಕ್ರಮ ಕಾಮಗಾರಿಗಳ ವ್ಯಾಪ್ತಿ ಎಷ್ಟು ;

(ಈ) ಬಂಡೀಪುರ ವನ್ಯಜೀವಿ ಧಾಮದ ಸುತ್ತಮುತ್ತ ಇಂತಹ ಅಕ್ರಮ ಲೇಔಟ್ ಹಾಗೂ ರೆಸಾರ್ಟ್‌ಗಳ ನಿರ್ಮಾಣವನ್ನು ಸಂಪೂರ್ಣವಾಗಿ ತಡೆಯಲು ಈ ಅಕ್ರಮ ಲೇಔಟ್ ಹಿನ್ನೆಲೆಯ

ರೂವಾರಿಗಳು ಹಾಗೂ ಭಾಗಿಯಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕಠಿಣ ಕಾನೂನು ಕ್ರಮಗಳೇನು ?

## ರಾಜ್ಯದ ಸರ್ಕಾರಿ ಪ್ರಾಥಮಿಕ ಶಾಲೆಗಳಲ್ಲಿ 'ಡಿ' ಗ್ರೂಪ್ ಹುದ್ದೆಗಳನ್ನು ಮಂಜೂರು ಮಾಡದೇ ಇರುವ ಬಗ್ಗೆ

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೧ (೯೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಪ್ರಾಥಮಿಕ ಹಾಗೂ ಹಿರಿಯ ಪ್ರಾಥಮಿಕ ಶಾಲೆಗಳಲ್ಲಿ 'ಡಿ'–ಗ್ರೂಪ್ (ಪ್ಯಾಕರ್, ಅಟೆಂಡೆಂಟ್, ಸ್ವಚ್ಛತಾಗಾರ) ಹುದ್ದೆಗಳು ಮಂಜೂರಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ, ಪ್ರಸ್ತುತ ರಾಜ್ಯದಲ್ಲಿ 'ಡಿ'–ಗ್ರೂಪ್ ಹುದ್ದೆಗಳಿಲ್ಲದೇ ಕಾರ್ಯನಿರ್ವಹಿಸುತ್ತಿರುವ ಪ್ರಾಥಮಿಕ ಶಾಲೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಶಾಲೆಗಳಲ್ಲಿ 'ಡಿ'–ಗ್ರೂಪ್ ಸಿಬ್ಬಂದಿಯ ಅಭಾವದಿಂದ ಶಾಲಾ ಆವರಣದ ನೈರ್ಮಲ್ಯ ಶೌಚಾಲಯಗಳ ನಿರ್ವಹಣೆ ಮತ್ತು ಕುಡಿಯುವ ನೀರಿನ ಓವರ್, ಹೆಡ್ ಟ್ಯಾಂಕ್‌ಗಳ ಶುಚಿತ್ವದಲ್ಲಿ ಎದುರಾಗುತ್ತಿರುವ ತೊಂದರೆಗಳ ಕುರಿತು ಸರ್ಕಾರಕ್ಕೆ ವರದಿಗಳು ಸಲ್ಲಿಕೆಯಾಗಿವೆಯೇ ;

(ಇ) ಪ್ರಸ್ತುತ ಶಾಲಾ ಶಿಕ್ಷಣ ಇಲಾಖೆಯಡಿ ಮಂಜೂರಾಗಿರುವ ಒಟ್ಟು 'ಡಿ'–ಗ್ರೂಪ್ ಹುದ್ದೆಗಳೆಷ್ಟು ಮತ್ತು ಅವುಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು/ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಶಾಲಾ ಶಿಸ್ತು ಹಾಗೂ ನೈರ್ಮಲ್ಯದ ಹಿತದೃಷ್ಟಿಯಿಂದ ಪ್ರಾಥಮಿಕ ಶಾಲೆಗಳಿಗೆ ಹೊಸದಾಗಿ ಖಾಯಂ 'ಡಿ'-ಗ್ರೂಪ್ ಹುದ್ದೆಗಳನ್ನು ಮಂಜೂರು ಮಾಡಲು ಅಥವಾ ನೇಮಕಾತಿ ಪ್ರಕ್ರಿಯೆ ಆರಂಭಿಸಲು ಸರ್ಕಾರದ ನಿಲುವೇನು ;

(ಉ) ಖಾಯಂ ನೇಮಕಾತಿಯಾಗುವವರೆಗೆ, ಗ್ರಾಮೀಣ ಹಾಗೂ ನಗರ ಸ್ಥಳೀಯ ಸಂಸ್ಥೆಗಳ (ಗ್ರಾಮ ಪಂಚಾಯತ್/ನಗರಸಭೆ) ಸ್ವಚ್ಛತಾ ಸಿಬ್ಬಂದಿಯನ್ನು ಅಥವಾ ಹೊರಗುತ್ತಿಗೆ (Outsourcing) ಆಧಾರದಲ್ಲಿ ನೌಕರರನ್ನು ಶಾಲೆಗಳ ಸ್ವಚ್ಛತೆಗಾಗಿ ನಿಯೋಜಿಸಲು ಸರ್ಕಾರ ರೂಪಿಸಿರುವ ಯೋಜನೆಯೇನು ; (ಸುತ್ತೋಲೆ/ಆದೇಶದ ವಿವರ ನೀಡುವುದು)

(ಊ) ಬರುವ ಆರ್ಥಿಕ ವರ್ಷದ ಬಜೆಟ್‌ನಲ್ಲಿ ವಿದ್ಯಾರ್ಥಿಗಳ ಆರೋಗ್ಯ ಮತ್ತು ಶಾಲಾ ಶುಚಿತ್ವದ ದೃಷ್ಟಿಯಿಂದ ಶಾಲಾ ನೈರ್ಮಲ್ಯ ಅನುದಾನ (School Hygiene Grant) ಹೆಚ್ಚಿಸಿ ಪ್ರತಿ ಶಾಲೆಗೆ ಮಾಸಿಕ ನಿರ್ವಹಣಾ ವೆಚ್ಚ ಬಿಡುಗಡೆ ಮಾಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

## ಗಡಿಭಾಗದ ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸುವ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :-**

೬೨ (೯೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಲ್ಯಾಣ ಕರ್ನಾಟಕದ ಗಡಿಭಾಗಗಳಲ್ಲಿ ವಿಶೇಷವಾಗಿ ಬೀದರ್ ಜಿಲ್ಲೆಯ ಬಸವಕಲ್ಯಾಣ ತಾಲ್ಲೂಕಿನಲ್ಲಿ ಮರಾಠಿ ಮಾಧ್ಯಮ

ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸುವ ಕುರಿತು ಸಾರ್ವಜನಿಕ ವಲಯದಲ್ಲಿ ವದಂತಿಗಳು ಹರಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ವಿಷಯಕ್ಕೆ ಸಂಬಂಧಿಸಿದಂತೆ ಗಡಿ ಭಾಗದ ಸಾರ್ವಜನಿಕರು ಆತಂತಕಕ್ಕೊಳಗಾಗಿ ಪ್ರತಿಭಟನೆಗಳನ್ನು ನಡೆಸುತ್ತಿರುವುದು ಸರ್ಕಾರದ ಗಮನದಲ್ಲಿದೆಯೇ ;

(ಇ) ಮರಾಠಿ ಮಾಧ್ಯಮ ಶಾಲೆಗಳನ್ನು ಕನ್ನಡ ಮಾಧ್ಯಮಕ್ಕೆ ಪರಿವರ್ತಿಸಲು ಸರ್ಕಾರವು ಯಾವುದಾದರೂ ಅಧಿಕೃತ ಆದೇಶ ಅಥವಾ ಸಚಿವ ಸಂಪುಟದಲ್ಲಿ ನಿರ್ಧಾರ ಕೈಗೊಂಡಿದೆಯೇ ;

(ಈ) ಗಡಿ ಭಾಗದ ನಾಗರಿಕರ ಮಾತೃಭಾಷೆ ಮರಾಠಿಯಾಗಿರುವುದರಿಂದ ಮತ್ತು ಶೈಕ್ಷಣಿಕ/ಸಾಮಾಜಿಕ ಕಾರಣಗಳಿಗಾಗಿ ಅವರಿಗೆ ಮರಾಠಿ ಭಾಷೆಯ ಜ್ಞಾನ ಅಗತ್ಯವಿರುವುದರಿಂದ ಈ ಶಾಲೆಗಳನ್ನು ಯಥಾಸ್ಥಿತಿಯಲ್ಲಿ ಮುಂದುವರಿಸಲು ಸರ್ಕಾರದ ನಿಲುವು ಏನು ;

(ಉ) ಕನ್ನಡ ಮಾಧ್ಯಮ ಶಾಲೆಗಳು ಅಗತ್ಯವಿದ್ದಲ್ಲಿ, ಅಸ್ತಿತ್ವದಲ್ಲಿರುವ ಮರಾಠಿ ಶಾಲೆಗಳನ್ನು ಪರಿವರ್ತಿಸುವ ಬದಲು ಹೊಸದಾಗಿ ಕನ್ನಡ ಮಾಧ್ಯಮ ಶಾಲೆಗಳನ್ನು ಸ್ಥಾಪಿಸುವ ಮೂಲಕ ಸಾರ್ವಜನಿಕರಿಗೆ ಆಯ್ಕೆಯ ಸ್ವಾತಂತ್ರ್ಯ ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಊ) ಈ ವಿಷಯದ ಕುರಿತು ಸಾರ್ವಜನಿಕರಲ್ಲಿ ಉಂಟಾಗಿರುವ ಗೊಂದಲವನ್ನು ಪರಿಹರಿಸಲು ಸರ್ಕಾರ ಸ್ಪಷ್ಟೀಕರಣ ನೀಡುವುದು ?

## ಬೀದರ್ ಜಿಲ್ಲೆಯಲ್ಲಿ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪನೆ ಹಾಗೂ ತಾಂತ್ರಿಕ ಶಿಕ್ಷಣದ ಉತ್ತೇಜನ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೩ (೯೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ತಾಂತ್ರಿಕ ಶಿಕ್ಷಣವನ್ನು ಪ್ರೋತ್ಸಾಹಿಸುವ ನಿಟ್ಟಿನಲ್ಲಿ ಪ್ರತ್ಯೇಕ ಮಹಿಳಾ ಸರ್ಕಾರಿ ಪಾಲಿಟೆಕ್ನಿಕ್ ಕಾಲೇಜು ಸ್ಥಾಪಿಸುವ ಕುರಿತು ಸರ್ಕಾರದ ಮುಂದೆ ಯಾವುದಾದರೂ ಅಧಿಕೃತ ಪ್ರಸ್ತಾವನೆ ಸಲ್ಲಿಕೆಯಾಗಿದೆಯೇ ;

(ಆ) ಒಂದು ವೇಳೆ ಪ್ರಸ್ತಾವನೆ ಸಲ್ಲಿಕೆಯಾಗಿದ್ದಲ್ಲಿ, ಅದು ಪ್ರಸ್ತುತ ಯಾವ ಹಂತದಲ್ಲಿದೆ ; (ಆಡಳಿತಾತ್ಮಕ ಅನುಮೋದನೆ, ಆರ್ಥಿಕ ಇಲಾಖೆಯ ಸಮ್ಮತಿ ಅಥವಾ ಸ್ಥಳ ಗುರುತಿಸುವಿಕೆ ಕುರಿತು ಸಂಪೂರ್ಣ ವಿವರ ನೀಡುವುದು)

(ಇ) ಬೀದರ್ ಜಿಲ್ಲೆಯಲ್ಲಿ ಕಳೆದ ಮೂರು ವರ್ಷಗಳಲ್ಲಿ ತಾಂತ್ರಿಕ ಶಿಕ್ಷಣಕ್ಕೆ (ಪಾಲಿಟೆಕ್ನಿಕ್/ಇಂಜಿನಿಯರಿಂಗ್) ದಾಖಲಾಗಿರುವ ಮಹಿಳಾ ವಿದ್ಯಾರ್ಥಿನಿಯರ ಸಂಖ್ಯೆ ಎಷ್ಟು ; ಪ್ರತ್ಯೇಕ ಮಹಿಳಾ ಕಾಲೇಜಿನ ಬೇಡಿಕೆಯನ್ನು ಪರಿಗಣಿಸಿ ಸರ್ಕಾರವು ವಿಶೇಷ ಆದ್ಯತೆ ನೀಡಲಿದೆಯೇ ;

(ಈ) ಹೊಸ ಕಾಲೇಜು ಸ್ಥಾಪನೆಗೆ ಅಗತ್ಯವಾದ ಭೂಮಿ, ಸುಸಜ್ಜಿತ ಕಟ್ಟಡದ ನಿರ್ಮಾಣ ಹಾಗೂ ಬೋಧಕ ಮತ್ತು ಬೋಧಕೇತರ ಸಿಬ್ಬಂದಿ ಹುದ್ದೆಗಳನ್ನು ಸೃಷ್ಟಿಸಿ ಮಂಜೂರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಗಡಿ ಭಾಗ ಹಾಗೂ ಕಲ್ಯಾಣ ಕರ್ನಾಟಕ (Article ೩೭೧J) ವ್ಯಾಪ್ತಿಗೆ ಬರುವ ಬೀದರ್ ಜಿಲ್ಲೆಯಲ್ಲಿ ಮಹಿಳೆಯರ ವೃತ್ತಿಪರ ಶಿಕ್ಷಣಕ್ಕೆ ಉತ್ತೇಜನ ನೀಡಲು ವಿಶೇಷ ಪ್ಯಾಕೇಜ್ ಅಥವಾ ಕೇಂದ್ರ ಸರ್ಕಾರದ ಅನುದಾನವನ್ನು ಪಡೆಯುವ ಯೋಜನೆ ಸರ್ಕಾರದ ಮುಂದಿದೆಯೇ ?

## ರಾಜ್ಯದ ವಿಶ್ವವಿದ್ಯಾಲಯಗಳಲ್ಲಿ ಸಂಶೋಧನಾ ಯೋಜನೆಗಳು ಹಾಗೂ ಸ್ನಾತಕೋತ್ತರ ಶಿಕ್ಷಣದ ಅಭಿವೃದ್ಧಿ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು)**

೬೪(೯೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ಶೈಕ್ಷಣಿಕ ವರ್ಷಗಳಲ್ಲಿ ರಾಜ್ಯದ ವಿವಿಧ ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಕೈಗೆತ್ತಿಕೊಳ್ಳಲಾದ ಒಟ್ಟು ಸಂಶೋಧನಾ ಯೋಜನೆಗಳ (Research Projects) ಸಂಖ್ಯೆ ಎಷ್ಟು ; ಇವುಗಳಲ್ಲಿ ಪೂರ್ಣಗೊಂಡಿರುವ ಮತ್ತು ಪ್ರಗತಿಯಲ್ಲಿರುವ ಯೋಜನೆಗಳ ವಿವರವೇನು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಮೇಲ್ಕಂಡ ಸಂಶೋಧನಾ ಯೋಜನೆಗಳಿಗೆ ಸರ್ಕಾರದಿಂದ ಬಿಡುಗಡೆಗೊಳಿಸಲಾದ ಒಟ್ಟು ಅನುದಾನದ ಮೊತ್ತ ಎಷ್ಟು ; ಇದರಲ್ಲಿ ಕೇಂದ್ರ ಸರ್ಕಾರ ಅಥವಾ ಯುಜಿಸಿ (UGC) ಯಿಂದ ಲಭಿಸಿದ ಅನುದಾನದ ಪ್ರಮಾಣ ಎಷ್ಟು ; (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಇ) ರಾಜ್ಯದ ಸರ್ಕಾರಿ ಕಾಲೇಜುಗಳು ಮತ್ತು ವಿಶ್ವವಿದ್ಯಾಲಯಗಳಲ್ಲಿ ವಿದ್ಯಾರ್ಥಿಗಳು ಹೆಚ್ಚುತ್ತಿರುವ ಬೇಡಿಕೆಗೆ ಅನುಗುಣವಾಗಿ ಸ್ನಾತಕೋತ್ತರ (PG) ಪಠ್ಯಕ್ರಮಗಳ ಸೀಟುಗಳನ್ನು ಹೆಚ್ಚಿಸುವ ಕುರಿತು ಸರ್ಕಾರದ ಮುಂದೆ ಪ್ರಸ್ತಾವನೆ ಇದೆಯೇ ; ಇದ್ದಲ್ಲಿ, ಪ್ರಸ್ತುತ ಶೈಕ್ಷಣಿಕ ವರ್ಷದಿಂದ ಎಷ್ಟು ಹೊಸ ಸೀಟುಗಳನ್ನು ಸೇರ್ಪಡೆಗೊಳಿಸಲು ಉದ್ದೇಶಿಸಲಾಗಿದೆ ;

(ಈ) ಸ್ನಾತಕೋತ್ತರ ವಿದ್ಯಾರ್ಥಿಗಳಿಗೆ ಯುಜಿಸಿ–ನೆಟ್ (UGC-NET), ಕೆ–ಸೆಟ್ (K-SET) ಹಾಗೂ ಸಿಎಸ್ಐಆರ್ (CSIR) ಮುಂತಾದ ರಾಷ್ಟ್ರೀಯ ಮಟ್ಟದ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತಯಾರಿ ಮಾಡಿಕೊಳ್ಳಲು ವಿಶ್ವವಿದ್ಯಾಲಯ ಮಟ್ಟದಲ್ಲಿ ವಿಶೇಷ ತರಬೇತಿ ಕೇಂದ್ರಗಳನ್ನು ಸ್ಥಾಪಿಸಲಾಗಿದೆಯೇ ; ಇದ್ದಲ್ಲಿ, ಈವರೆಗೆ ಎಷ್ಟು ವಿದ್ಯಾರ್ಥಿಗಳು ಇದರ ಪ್ರಯೋಜನ ಪಡೆದಿದ್ದಾರೆ ;

(ಉ) ರಾಜ್ಯದ ವಿಶ್ವವಿದ್ಯಾಲಯಗಳ ಸಂಶೋಧಕರು ಮತ್ತು ಪ್ರಾಧ್ಯಾಪಕರು ಅಂತರಾಷ್ಟ್ರೀಯ ಮಟ್ಟದ ಗುಣಮಟ್ಟದ ನಿಯತಕಾಲಿಕೆಗಳಲ್ಲಿ (Scopus/Web of Science) ಪ್ರಕಟಿಸಿರುವ ಸಂಶೋಧನಾ ಪ್ರಬಂಧಗಳ ಸಂಖ್ಯೆ ಎಷ್ಟು ; ಸಂಶೋಧನೆಯ ಗುಣಮಟ್ಟ ಹೆಚ್ಚಿಸಲು ಸರ್ಕಾರದಿಂದ ನೀಡಲಾಗುತ್ತಿರುವ ಪ್ರೋತ್ಸಾಹಗಳು ಯಾವುವು ?

## ಬೀದರ್ ಜಿಲ್ಲೆಯಲ್ಲಿನ ಮಾನವ–ವನ್ಯಜೀವಿ ಸಂಘರ್ಷ ಹಾಗೂ ಪರಿಹಾರ ವಿತರಣೆ ಕುರಿತು

**ಡಾ. ಎಂ.ಜಿ. ಮುಳೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೬೫ (೧೦೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಬೀದರ್ ಜಿಲ್ಲೆಯಲ್ಲಿ ವರದಿಯಾಗಿರುವ ಮಾನವ–ವನ್ಯಜೀವಿ ಸಂಘರ್ಷದ ಒಟ್ಟು ಪ್ರಕರಣಗಳ ಸಂಖ್ಯೆ ಎಷ್ಟು ; (ವಿಶೇಷವಾಗಿ ಚಿರತೆ, ಕೃಷ್ಣಮೃಗ ಹಾಗೂ ಕಾಡು ಹಂದಿ ಹಾವಳಿ ಸಂಬಂಧಿತ ಪ್ರಕರಣಗಳು) ಈ ಘಟನೆಗಳಿಂದ ಸಂಭವಿಸಿದ ಪ್ರಾಣಹಾನಿ ಮತ್ತು ಗಾಯಗೊಂಡವರ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಹಾಗೂ ವರ್ಷವಾರು ವಿವರ ನೀಡುವುದು)

(ಆ) ವನ್ಯಜೀವಿಗಳಿಂದ ಉಂಟಾದ ಬೆಳೆಹಾನಿಗೆ ಸಂಬಂಧಿಸಿದಂತೆ ರೈತರಿಗೆ ಪರಿಹಾರ ಮೊತ್ತ ವಿತರಿಸಲು ಸರ್ಕಾರ ಸರಾಸರಿಯಾಗಿ ಎಷ್ಟು ದಿನ ತೆಗೆದುಕೊಳ್ಳುತ್ತಿದೆ ; ಪರಿಹಾರ ವಿತರಣೆಯಲ್ಲಿನ ವಿಳಂಬ ತಪ್ಪಿಸಲು ಆನ್‌ಲೈನ್ ಅರ್ಜಿ ಮತ್ತು ನೇರ ಖಾತೆ ಜಮಾ (DBT) ವ್ಯವಸ್ಥೆಯನ್ನು ಸರಳಗೊಳಿಸಲಾಗಿದೆಯೇ ;

(ಇ) ವನ್ಯಜೀವಿಗಳು ಕೃಷಿ ಭೂಮಿಗೆ ನುಗ್ಗದಂತೆ ತಡೆಯಲು ಜಿಲ್ಲೆಯ ಎಷ್ಟು ಗ್ರಾಮಗಳಲ್ಲಿ ಸೌರ ಬೇಲಿ (Solar Fencing) ಕಂದಕ ನಿರ್ಮಾಣ ಅಥವಾ ಇತರೆ ತಾಂತ್ರಿಕ ರಕ್ಷಣಾ ಕ್ರಮಗಳನ್ನು ಜಾರಿಗೆ ತರಲಾಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಇದಕ್ಕಾಗಿ ವೆಚ್ಚ ಮಾಡಿದ ಅನುದಾನ ಎಷ್ಟು ; (ಗ್ರಾಮವಾರು ಮಾಹಿತಿ ನೀಡುವುದು)

(ಈ) ಕಾಡಿನ ಅಂಚಿನಲ್ಲಿರುವ ಹಾಗೂ ವನ್ಯಜೀವಿ ಪ್ರಮೇಯ ಹೆಚ್ಚಿರುವ ಗ್ರಾಮಗಳಲ್ಲಿ ಜಾಗೃತಿ ಮೂಡಿಸಲು ಮತ್ತು ಸುರಕ್ಷತಾ ಕ್ರಮಗಳ ಕುರಿತು ಎಷ್ಟು ಗ್ರಾಮಗಳಲ್ಲಿ ಜನಜಾಗೃತಿ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ ; ಭಾಗವಹಿಸಿದ ಜನರ ಸಂಖ್ಯೆ ಎಷ್ಟು ;

(ಉ) ಬೀದರ್ ಜಿಲ್ಲೆಯಲ್ಲಿ ವನ್ಯ ಜೀವಿಗಳು ಜನವಸತಿ ಪ್ರದೇಶಕ್ಕೆ ನುಗ್ಗಿದಾಗ ತುರ್ತಾಗಿ ಕಾರ್ಯಾಚರಣೆ ನಡೆಸಲು ವಿಶೇಷ ತುರ್ತು ಪ್ರತಿಕ್ರಿಯೆ ತಂಡ (Rapid Response Team-RRT) ರಚಿಸಲಾಗಿದೆಯೇ ; ಇದ್ದಲ್ಲಿ, ಈ ತಂಡಕ್ಕೆ ಒದಗಿಸಲಾದ ಪಂಜರಗಳು ಟ್ರ್ಯಾಂಕಿಲೈಸರ್ಗನ್, ವಾಹನ ಹಾಗೂ ಇತರೆ ತಾಂತ್ರಿಕ ಸಲಕರಣೆಗಳ ವಿವರಗಳೇನು ; ಕಳೆದ ಎರಡು ವರ್ಷಗಳಲ್ಲಿ ಈ ತಂಡ ನಡೆಸಿದ ರಕ್ಷಣೆ/ಸೆರೆಹಿಡಿತ ಕಾರ್ಯಗಳ ಸಂಖ್ಯೆ ಎಷ್ಟು ?

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ "ನಕಲಿ" 'ಅಮಾನ್ಯ' ಪ್ರಮಾಣ ಪತ್ರಗಳ ಕುರಿತು

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :-**

೬೬ (೧೦೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಕೆಲವು ಖಾಯಂ ಅಧ್ಯಾಪಕರು ನಕಲಿ ಅಥವಾ ಅಮಾನ್ಯ ಎಂ.ಫಿಲ್ ಮತ್ತು ಪಿ.ಎಚ್.ಡಿ ಪ್ರಮಾಣ ಪತ್ರ ಹಾಜರುಪಡಿಸಿ ಕೆಲಸಕ್ಕೆ ಸೇರಿದ್ದಾರೆ ಹಾಗೂ ಪದೋನ್ನತಿ ಪಡೆದುಕೊಂಡಿದ್ದಾರೆ ಎಂಬ ದೂರುಗಳು ವ್ಯಾಪಕವಾಗಿ ಕೇಳಿ ಬರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಖಾಯಂ ಅಧ್ಯಾಪಕರ ಪ್ರಮಾಣ ಪತ್ರಗಳ ನೈಜತೆ ಪರಿಶೀಲಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ;

(ಇ) ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದ ಅತಿಥಿ ಉಪನ್ಯಾಸಕರು ಹಾಜರುಪಡಿಸಿರುವ ಪ್ರಮಾಣ ಪತ್ರಗಳನ್ನು

ಪರಿಶೀಲಿಸಿದಾಗ ನೈಜತೆಯಿಂದ ಕೂಡಿಲ್ಲದಿರುವುದು ದೃಢಪಟ್ಟಿರುವುದು ನಿಜವೇ ; ಇದ್ದಲ್ಲಿ, ಜಿಲ್ಲಾವಾರು ವಿಷಯವಾರು ಪ್ರಮಾಣ ಪತ್ರವಾರು ಎಂಫಿಲ್ ಮತ್ತು ಪಿ.ಎಚ್.ಡಿ ವಿಶೇಷ ಚೇತನರ ಇನ್ನಿತರ ಸಂಪೂರ್ಣ ವಿವರ ನೀಡುವುದು ;

(ಈ) ಈ ಹಿಂದೆ ನಕಲಿ ಅಥವಾ ಅಮಾನ್ಯ ಪ್ರಮಾಣಪತ್ರಗಳನ್ನು ದಾಖಲಿಸಿ ಕೆಲಸ ಪಡೆದುಕೊಂಡಿದ್ದ ಕೆಲ ಅತಿಥಿ ಉಪನ್ಯಾಸಕರು ಪ್ರಸಕ್ತ ಶೈಕ್ಷಣಿಕ ಸಾಲಿನಲ್ಲೂ ಹೊಸದಾಗಿ ಅರ್ಜಿ ಸಲ್ಲಿಸಿದ್ದಾರೆ ಎನ್ನುವ ಆರೋಪ/ ದೂರುಗಳ ಕುರಿತು ಸರ್ಕಾರದ ಸ್ಪಷ್ಟನೆ ಏನು ; (ವಿವರ ನೀಡುವುದು)

(ಉ) ಹೊರ ರಾಜ್ಯದ ವಿಶ್ವವಿದ್ಯಾಲಯಗಳಿಂದ ಪಡೆದ ಪ್ರಮಾಣ ಪತ್ರಗಳನ್ನು ಕೆಲ ಕಾಲೇಜುಗಳಲ್ಲಿ ಅಂಗೀಕರಿಸಿದರೆ ಕೆಲಕಾಲೇಜುಗಳಲ್ಲಿ ನಕಲಿ ಅಥವಾ ಅಮಾನ್ಯ ಎಂಬ ತೀರ್ಮಾನಕ್ಕೆ ಬರಲಾಗಿದೆ ; ಪರಿಶೀಲನೆಯಲ್ಲಿದೆ ಎನ್ನುವ ದೂರುಗಳ ಕುರಿತು ಸರ್ಕಾರ ವಿವರ ನೀಡುವುದು ;

(ಊ) ಅತಿಥಿ ಉಪನ್ಯಾಸಕರು ಹಾಜರುಪಡಿಸಿದ್ದ ಪ್ರಮಾಣ ಪತ್ರಗಳ ಪೈಕಿ ಯಾವ ಯಾವ ವಿಶ್ವವಿದ್ಯಾಲಯಗಳ ಪಿ.ಎಚ್.ಡಿ ಮತ್ತು ಎಂ.ಫಿಲ್ ಪ್ರಮಾಣಪತ್ರಗಳನ್ನು ನಕಲಿ ಅಥವಾ ಅಮಾನ್ಯ ಎಂಬ ತೀರ್ಮಾನಕ್ಕೆ ಬರಲಾಗಿದೆ ? (ವಿವಿಗಳ ಹೆಸರಿನೊಂದಿಗೆ ವಿವರ ನೀಡುವುದು)

# ಮಂಡ್ಯ ವಿವಿ ಅಥಿತಿ ಉಪನ್ಯಾಸಕರಿಗೆ ವೇತನ ಪಾವತಿ ಕುರಿತ ಗೊಂದಲದ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೭ (೧೦೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಏಕೀಕೃತ ವಿಶ್ವವಿದ್ಯಾಲಯದಲ್ಲಿ ೨೦೨೬–೨೭ನೇ ಶೈಕ್ಷಣಿಕ ಸಾಲಿನಲ್ಲಿರುವ ಹೆಚ್ಚುವರಿ ಕಾರ್ಯಭಾರದ ಅವಧಿ ಎಷ್ಟು ; ವಿಷಯವಾರು ಕಾರ್ಯಭಾರ ಅವಧಿ ಮತ್ತು ಅವಶ್ಯವಿರುವ ಅತಿಥಿ ಉಪನ್ಯಾಸಕರ ಸಂಖ್ಯೆ ನೀಡುವುದು ;

(ಆ) ಪ್ರಸಕ್ತ ಶೈಕ್ಷಣಿಕ ಅವಧಿಗೆ ಮಂಡ್ಯ ವಿಶ್ವವಿದ್ಯಾಲಯಕ್ಕೆ ಅತಿಥಿ ಉಪನ್ಯಾಸಕರನ್ನು ಸದರಿ ವಿಶ್ವವಿದ್ಯಾಲಯದಿಂದಲೇ ನೇಮಿಸಿ ವೇತನವನ್ನು ಪಾವತಿಸಲಾಗುತ್ತಿದೆಯೇ ಅಥವಾ ಈ ಹಿಂದಿನಂತೆ ಕಾಲೇಜು ಶಿಕ್ಷಣ ಇಲಾಖೆ (DCE) ವತಿಯಿಂದಲೇ ಹೆಚ್ಚುವರಿ ಕಾರ್ಯಭಾರದ ಅವಧಿಗೆ ಅನುಗುಣವಾಗಿ ಅತಿಥಿ ಉಪನ್ಯಾಸಕರನ್ನು ನೇಮಿಸಿ, ಮಾಸಿಕ ವೇತನವನ್ನು ಪಾವತಿಸಲಾಗುವುದೇ ; (ಮಾಹಿತಿ ನೀಡುವುದು)

(ಇ) ಇದ್ದಲ್ಲಿ, ಮಾಸಿಕ ವೇತನ ಪಾವತಿಸಲು ಬೇಕಾಗಬಹುದಾದ ಅಂದಾಜು ಮೊತ್ತ ಎಷ್ಟು ; ಹಾಗೇ ಒಂದು ಶೈಕ್ಷಣಿಕ ಸಾಲಿಗೆ ಭರಿಸಲು ಬೇಕಾಗಬಹುದಾದ ಒಟ್ಟಾರೆ ಮೊತ್ತ ಎಷ್ಟು ; (ವಿವರ ನೀಡುವುದು)

(ಈ) ಮಂಡ್ಯ ವಿಶ್ವವಿದ್ಯಾಲಯಕ್ಕೆ ಖಾಯಂ ಬೋಧಕರು ಮತ್ತು ಬೋಧಕೇತರ ಸಿಬ್ಬಂದಿಯನ್ನು ನೇಮಿಸಿಕೊಳ್ಳುವ ಪ್ರಕ್ರಿಯೆಗೆ ಚಾಲನೆ

ನೀಡಲಾಗಿದೆಯೇ ; ಇಲ್ಲದಿದ್ದರೆ ಯಾವಾಗ ಚಾಲನೆ ನೀಡಲಾಗುವುದು ? ( ಸಂಪೂರ್ಣ ಮಾಹಿತಿ ನೀಡುವುದು)

## ಯುಜಿಸಿ ವೇತನ ಶ್ರೇಣಿಯ ಅಧ್ಯಾಪಕರು ಬೋಧಕೇತರ ಹುದ್ದೆಗಳಲ್ಲಿ ಕೆಲಸ ನಿರ್ವಹಿಸುತ್ತಿರುವ ಬಗ್ಗೆ

**ಶ್ರೀ ಮಧು ಜಿ.ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೮ (೧೦೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವವಿದ್ಯಾಲಯ ಅನುದಾನ ಆಯೋಗ (ಯುಜಿಸಿ) ಶ್ರೇಣಿಯ ವೇತನ ಪಡೆಯುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಕೆಲ ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು ಮತ್ತು ಸಹಾಯಕ ಪ್ರಾಧ್ಯಾಪಕರು ನಿಯೋಜನೆ ಆಧಾರದ ಮೇಲೆ ಕಡಿಮೆ ಸಂಬಳ ಬೋಧಕೇತರ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ಎಂಬ ಆರೋಪ/ದೂರಗಳಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇಂತಹ ಎಷ್ಟು ಪ್ರಾಧ್ಯಾಪಕರು ನಿಯೋಜನೆ ಮೇಲೆ ಬೋಧಕೇತರ ಹುದ್ದೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ ; (ಹೆಸರು, ಪದನಾಮ, ಕರ್ತವ್ಯ ನಿರ್ವಹಿಸುತ್ತಿದ್ದ ಮೂಲಸ್ಥಳ, ನಿಯೋಜನೆಗೊಂಡ ಸ್ಥಳ ಮತ್ತು ವರ್ಷದೊಂದಿಗೆ ಸಂಪೂರ್ಣ ವಿವರ ನೀಡುವುದು)

(ಇ) "ಯುಜಿಸಿ ವೇತನ ಶ್ರೇಣಿ ಪಡೆಯುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳ ಅಧ್ಯಾಪಕರು ಮತ್ತು ಪ್ರಾಂಶುಪಾಲರನ್ನು ಬೋಧಕೇತರ ಹುದ್ದೆಗಳಿಗೆ ನಿಯೋಜನೆ ಮಾಡಬಾರದು, ಇದು ಯುಜಿಸಿ ನಿಯಮಗಳಿಗೆ ವಿರುದ್ಧ" ಎಂದು ಘನ ನ್ಯಾಯಾಲಯದ

ಆದೇಶ ಇದ್ದರೂ ನಿಯೋಜನೆ ಮುಂದುವರೆಸಿರುವುದು ನಿಜವೇ ; (ವಿವರ ನೀಡುವುದು)

(ಈ) ಶಿಕ್ಷಣದಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳಲು ಬೋಧಕ ವರ್ಗದ ನಿಯೋಜನೆಗಳನ್ನು ರದ್ದು ಮಾಡುವ ಕುರಿತು ಸರ್ಕಾರದ ಕ್ರಮಗಳೇನು ;

(ಉ) ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿಯಿರುವ ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; ಭರ್ತಿ ಮಾಡುವ ನಿಟ್ಟಿನಲ್ಲಿ ತೆಗೆದುಕೊಂಡಿರುವ ಕ್ರಮಗಳೇನು ?

## 'ಕರ್ನಾಟಕ ರತ್ನ' ಪ್ರಶಸ್ತಿ ಪ್ರಧಾನ ಮಾಡುವ ಕುರಿತು

**ಶ್ರೀ ಮಧು ಜಿ ಮಾದೇಗೌಡ (ಪದವೀಧರರ ಕ್ಷೇತ್ರ) :–**

೬೯ (೧೦೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರವು ಕನ್ನಡ ಚಿತ್ರರಂಗದ ದಿಗ್ಗಜರಾದ ಡಾ: ವಿಷ್ಣುವರ್ಧನ್ ಮತ್ತು ಬಿ. ಸರೋಜಾದೇವಿ ಅವರಿಗೆ ಮರಣೋತ್ತರವಾಗಿ ೨೦೨೫–೨೬ನೇ ಸಾಲಿನ ರಾಜ್ಯದ ಅತ್ಯುನ್ನತ ನಾಗರಿಕ ಪ್ರಶಸ್ತಿಯಾದ 'ಕರ್ನಾಟಕ ರತ್ನ' ಪ್ರಶಸ್ತಿಯನ್ನು ಘೋಷಿಸಿದೆ ; ಆದರೆ, ಈವರೆವಿಗೂ ಪ್ರಶಸ್ತಿ ಪ್ರಧಾನ ಮಾಡಿಲ್ಲ ; ವಿಳಂಬಕ್ಕೆ ಕಾರಣಗಳೇನು ; ಯಾವಾಗ ಪ್ರಶಸ್ತಿ ಪ್ರಧಾನ ಮಾಡಲಾಗುವುದು ; (ವಿವರ ನೀಡುವುದು)

(ಆ) 'ಕನಾಟಕ ರತ್ನ' ಪ್ರಶಸ್ತಿಯನ್ನು ಯಾವ ಯಾವ ಗಣ್ಯ ವ್ಯಕ್ತಿಗಳಿಗೆ ಮರಣೋತ್ತರವಾಗಿ ನೀಡುವಂತೆ ಕೋರಿ ಸರ್ಕಾರಕ್ಕೆ ಮನವಿಗಳು

ಸ್ವೀಕೃತವಾಗಿವೆ ; ಸರ್ಕಾರದ ಹಂತದಲ್ಲಿ ಈ ಮನವಿಗಳು ಪರಿಶೀಲನೆಯಲ್ಲಿವೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ರಾಜ್ಯ ಸರ್ಕಾರವು ವಿವಿಧ ಕ್ಷೇತ್ರಗಳಲ್ಲಿ ಮಹೋನ್ನತ ಸಾಧನೆ ಮಾಡಿರುವ ಈ ನೆಲದ ಮೇರು ವ್ಯಕ್ತಿಗಳಿಗೆ ಮರಣೋತ್ತರವಾಗಿ 'ಭಾರತ ರತ್ನ' ನೀಡುವಂತೆ ಕೇಂದ್ರ ಸರ್ಕಾರಕ್ಕೆ ಯಾರ ಯಾರ ಹೆಸರುಗಳನ್ನು ಈಗಾಗಲೇ ಶಿಫಾರಸ್ಸು ಮಾಡಿದೆ ? (ಶಿಫಾರಸ್ಸು ಮಾಡಿದ ವರ್ಷ ಮೇರು ವ್ಯಕ್ತಿಗಳ ಹೆಸರಿನೊಂದಿಗೆ ವಿವರ ನೀಡುವುದು)

## ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪಧವೀಧರರ ಕ್ಷೇತ್ರ) :-**

೭೦ (೪೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಸಲ್ಲಿಸುತ್ತಿರುವ ಸುಮಾರು ೧೦,೦೦೦ ಕ್ಕೂ ಹೆಚ್ಚು ಉಪನ್ಯಾಸಕರಿಗೆ ಖಾಯಂ ಸೇವಾ ಭದ್ರತೆ ಅಥವಾ ಸೇವೆ ಸರಳಗೊಳಿಸಿ ಮುಂದುವರಿಸಲು ಸರ್ಕಾರದ ಮುಂದಿರುವ ಪ್ರಸ್ತುತ ಪ್ರಸ್ತಾವನೆಗಳು ಹಾಗೂ ತರಲಾಗಿರುವ ಮಾರ್ಗ ಸೂಚಿಗಳು ಯಾವುವು ;

(ಆ) ಪ್ರಸ್ತುತ ಅತಿಥಿ ಉಪನ್ಯಾಸಕರಿಗೆ ಅನುಭವದ ಆಧಾರದ ಮೇಲೆ ನೀಡಲಾಗುತ್ತಿರುವ ಗೌರವಧನ ಎಷ್ಟು ; ಯು.ಜಿ.ಸಿ (UGC) ನಿಯಮಾವಳಿಗಳ ಪ್ರಕಾರ ಸಮಾನ ಕೆಲಸಕ್ಕೆ ಸಮಾನ ವೇತನ

ಅಥವಾ ಕನಿಷ್ಠ ರೂ.೫೦,೦೦೦ ಗಳ ಗೌರವ ಧನ ನೀಡಬೇಕೆಂಬ ಬೇಡಿಕೆಯನ್ನು ಈಡೇರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಅತಿಥಿ ಉಪನ್ಯಾಸಕರಿಗೆ ಘೋಷಿಸಲಾಗಿದ್ದ ರೂ. ೫ ಲಕ್ಷದ ಆರೋಗ್ಯ ವಿಮೆ, ೬೦ ವರ್ಷ ತುಂಬಿದ ನಂತರ ನೀಡಲಾಗುವ ರೂ.೫ ಲಕ್ಷದ ಆರ್ಥಿಕ ನೆರವು, ಮತ್ತು ಮಹಿಳಾ ಉಪನ್ಯಾಸಕರಿಗೆ ೩ ತಿಂಗಳ ವೇತನ ಸಹಿತ ಹೆರಿಗೆ ರಜೆ ಸೌಲಭ್ಯಗಳು ಪ್ರಸ್ತುತ ಸಂಪೂರ್ಣವಾಗಿ ಅನುಷ್ಠಾನಕ್ಕೆ ಬಂದಿವೆಯೇ ; ಇಲ್ಲದಿದ್ದಲ್ಲಿ ವಿಳಂಬಕ್ಕೆ ಕಾರಣವೇನು ;

(ಈ) ಪ್ರತಿ ಶೈಕ್ಷಣಿಕ ವರ್ಷದ ಆರಂಭದಲ್ಲಿ ಆನ್‌ಲೈನ್ ಕೌನ್ಸೆಲಿಂಗ್ ಪ್ರಕ್ರಿಯೆಯಿಂದಾಗಿ ಹಿರಿಯ ಮತ್ತು ಅನುಭವಿ ಉಪನ್ಯಾಸಕರು ಉದ್ಯೋಗ ಕಳೆದುಕೊಳ್ಳುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಈಗಾಗಲೇ ವಯೋಮಿತಿ ಮೀರಿರುವ ಉಪನ್ಯಾಸಕರ ಹಿತ ರಕ್ಷಣೆಗಾಗಿ ನೇಮಕಾತಿಯಲ್ಲಿ ಹೆಚ್ಚುವರಿ ವೈಟೇಜ್ (Weightage) ನೀಡುವ ಕುರಿತು ಸರ್ಕಾರದ ನಿಲುವೇನು ?

## ಸರ್ಕಾರಿ ಶಾಲಾ ಶಿಕ್ಷಕರಿಗೆ ಮತ್ತು ಶಿಕ್ಷಣ ಇಲಾಖೆಯ ನೌಕರರಿಗೆ ಬೋಧಕೇತರ ಕೆಲಸಗಳ ಕುರಿತು

**ಶ್ರೀ ನಿರಾಣಿ ಹಣಮಂತ ರುದ್ರಪ್ಪ (ಪಧವೀದರರ ಕ್ಷೇತ್ರ) :–**

೭೧ (೪೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ಸರ್ಕಾರಿ ಶಾಲಾ ಶಿಕ್ಷಕರಿಗೆ ಶಿಕ್ಷಣ ಇಲಾಖೆ ಹಾಗೂ ಇತರ ಇಲಾಖೆಗಳ ವತಿಯಿಂದ ವಹಿಸಲಾಗುತ್ತಿರುವ ಬೋಧಕೇತರ ಕೆಲಸಗಳು ಯಾವುವು ; (ಸಂಪೂರ್ಣ ಪಟ್ಟಿ ನೀಡುವುದು)

(ಆ) ಜನಗಣತಿ, ಚುನಾವಣೆ, ಮತದಾರರ ಪಟ್ಟಿ ಪರಿಷ್ಕರಣೆ (BLO Duties), ವಿವಿಧ ಜಾಗೃತಿ ಜಾಥಾಗಳು ಮತ್ತು ಸರ್ಕಾರದ ಗ್ಯಾರಂಟಿ ಯೋಜನೆಗಳ ಸಮೀಕ್ಷೆಗಳಿಗೆ ಶಿಕ್ಷಕರನ್ನು ಬಳಸಿಕೊಳ್ಳುತ್ತಿರುವುದರಿಂದ ವರ್ಷದಲ್ಲಿ ಎಷ್ಟು ದಿನಗಳ ಬೋಧನಾ ಸಮಯ ನಷ್ಟವಾಗುತ್ತಿದ್ದೆ ;

(ಇ) ಶಿಕ್ಷಕರು ನಿತ್ಯ ಶಾಲಾ ಕೆಲಸಗಳಿಗಾಗಿ "ಸ್ಯಾಟ್ಸ್" (SATS), ಬಿಸಿಯೂಟ ಆ್ಯಪ್, ಕ್ಷೀರಭಾಗ್ಯ ಆ್ಯಪ್ ಸೇರಿದಂತೆ ಹತ್ತಾರು ಮೊಬೈಲ್ ಆ್ಯಪ್‌ಗಳಲ್ಲಿ ಮಾಹಿತಿ ಅಪ್‌ಲೋಡ್ ಮಾಡಬೇಕಾಗಿರುವುದು ನಿಜವೇ ? ಈ ಆನ್‌ಲೈನ್ ದಾಖಲಾತಿಗಳ ಕೆಲಸದಿಂದಾಗಿ ಶಿಕ್ಷಕರು ತರಗತಿಯಲ್ಲಿ ಪಾಠ ಮಾಡುವುದನ್ನು ಬಿಟ್ಟು ಮೊಬೈಲ್‌ಹಿಡಿದು ಕೂರುವ ಪರಿಸ್ಥಿತಿ ನಿರ್ಮಾಣವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ;

(ಈ) ಕಡ್ಡಾಯ ಶಿಕ್ಷಣ ಹಕ್ಕು ಕಾಯ್ದೆ (RTE–೨೦೦೯) ಸೆಕ್ಷನ್ ೨೭ರ ಪ್ರಕಾರ, ಶಿಕ್ಷಕರನ್ನು ಕೇವಲ ದಶವಾರ್ಷಿಕ ಜನಗಣತಿ, ವಿಪತ್ತು ಪರಿಹಾರ ಮತ್ತು ಚುನಾವಣೆ ಕೆಲಸಗಳನ್ನು ಹೊರತುಪಡಿಸಿ ಬೇರೆಯಾವುದೇ ಬೋಧಕೇತರ ಕೆಲಸಗಳಿಗೆ ಬಳಸಬಾರದು ಎಂಬ ನಿಯಮವಿದ್ದು ರಾಜ್ಯದಲ್ಲಿ ಈ ನಿಯಮದ ಸ್ಪಷ್ಟ ಉಲ್ಲಂಘನೆಯಾಗುತ್ತಿರುವುದಕ್ಕೆ ಕಾರಣವೇನು ?

## ಸಾರ್ವಜನಿಕ ವಿಶ್ವ ವಿದ್ಯಾಲಯಗಳ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪಧವೀಧರರ ಕ್ಷೇತ್ರ) :–**

೭೨ (೪೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಕಾರ್ಯನಿರ್ವಹಿಸುತ್ತಿರುವ ಒಟ್ಟು ಸಾರ್ವಜನಿಕ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಮಂಜೂರಾಗಿರುವ, ಸೃಜನೆಯಾಗಿರುವ ಹಾಗೂ ಪ್ರಸ್ತುತ ಖಾಲಿಯಿರುವ ಒಟ್ಟು ಬೋಧಕ ಮತ್ತು ಬೋಧಕೇತರ ಹುದ್ದೆಗಳ ಸಂಖ್ಯೆ ಎಷ್ಟು ; (ವಿಶ್ವವಿದ್ಯಾಲಯ ವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೋಧಕ ಮತ್ತು ಬೋಧಕೇತರ ಹುದ್ದೆಗಳು ಬೃಹತ್ ಮಾಣದಲ್ಲಿ ಖಾಲಿ ಇರುವುದರಿಂದ ವಿಶ್ವವಿದ್ಯಾಲಯಗಳಲ್ಲಿ ಶಿಕ್ಷಣದ ಗುಣಮಟ್ಟ ಮತ್ತು ಆಡಳಿತಾತ್ಮಕ ಕಾರ್ಯಗಳಿಗೆ ಹಿನ್ನಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಬಂದಿದ್ದಲ್ಲಿ, ಖಾಲಿಯಿರುವ ಈ ಹುದ್ದೆಗಳನ್ನು ಹಂತ ಹಂತವಾಗಿ ಅಥವಾ ನೇರವಾಗಿ ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಆರ್ಥಿಕ ಇಲಾಖೆಯ ಸಹಮತಿಯೊಂದಿಗೆ ನೇಮಕಾತಿ ಅಧಿಸೂಚನೆ ಹೊರಡಿಸಲು ವಿಳಂಬವಾಗುತ್ತಿರುವುದಕ್ಕೆ ಕಾರಣಗಳೇನು ; ಯಾವ ಕಾಲಮಿತಿಯೊಳಗೆ ಈ ಖಾಲಿ ಇರುವ ಹುದ್ದೆಗಳ ಭರ್ತಿ ಮಾಡಲಾಗುವುದು ;

(ಈ) ಖಾಯಂ ಹುದ್ದೆಗಳ ಭರ್ತಿಯಾಗುವವರೆಗೆ ಶೈಕ್ಷಣಿಕ ಹಿತದೃಷ್ಟಿಯಿಂದ ನೇಮಕ ಮಾಡಿಕೊಳ್ಳಲಾಗಿರುವ ಅತಿಥಿ ಉಪನ್ಯಾಸಕರ ಹಾಗೂ ಹೊರಗುತ್ತಿಗೆ ಆಧಾರದ ಬೋಧಕೇತರ ಸಿಬ್ಬಂದಿಗಳ ಸಂಖ್ಯೆ ಎಷ್ಟು ಮತ್ತು ಇವರಿಗೆ ಒದಗಿಸುತ್ತಿರುವ ಸೌಲಭ್ಯಗಳು ಯಾವುವು ?

# ಪ್ರಾಥಮಿಕ ಮತ್ತು ಪ್ರೌಢ ಶಾಲಾ ಶಿಕ್ಷಕರಿಗೆ ನೀಡಬೇಕಾದ ಮುಂಬಡ್ತಿ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪಧವೀಧರರ ಕ್ಷೇತ್ರ) :–**

೭೩ (೪೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಾಥಮಿಕ ಶಾಲಾ ಶಿಕ್ಷಕರಿಗೆ ಪ್ರೌಢ ಶಾಲಾ ಶಿಕ್ಷಕರಾಗಿ ಹಾಗೂ ಮುಖ್ಯೋಪಾಧ್ಯಾಯರಾಗಿ (Head Masters) ನೀಡಬೇಕಾದ ಮುಂಬಡ್ತಿ (Promotion) ಪ್ರಕ್ರಿಯೆ ಕಳೆದ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವುದು ನಿಜವೇ ; ಈ ವಿಳಂಬಕ್ಕೆ ಕಾರಣವೇನು ;

(ಆ) ಉತ್ತರ ಕರ್ನಾಟಕ ಮತ್ತು ಕಲ್ಯಾಣ ಕರ್ನಾಟಕ (೩೭೧ಜೆ) ಭಾಗದ ಶಾಲೆಗಳಲ್ಲಿ ಶಿಕ್ಷಕರ ಕೊರತೆ ಅತಿ ಹೆಚ್ಚಾಗಿದ್ದು, ಅಲ್ಲಿನ ಖಾಲಿ ಹುದ್ದೆಗಳನ್ನು ವಿಶೇಷ ನೇಮಕಾತಿ ಮೂಲಕ ತುಂಬಲು ಸರ್ಕಾರ ಕೈಗೊಂಡಿರುವ ತುರ್ತು ಕ್ರಮಗಳೇನು ;

(ಇ) ರಾಷ್ಟ್ರೀಯ ಶಿಕ್ಷಣ ನೀತಿಯ (RTE) ನಿಯಮಾವಳಿಗಳ ಪ್ರಕಾರ ರಾಜ್ಯದ ಎಷ್ಟು ಶಾಲೆಗಳಲ್ಲಿ ವಿದ್ಯಾರ್ಥಿ ಮತ್ತು ಶಿಕ್ಷಕರ ಅನುಪಾತ (PTR) ಸರಿಯಾಗಿಲ್ಲ; ಒಂದೇ ಒಂದು ಶಿಕ್ಷಕರಿರುವ(Single Teacher Schools) ಅಥವಾ ಶಿಕ್ಷಕರೇ ಇಲ್ಲದ ಶೂನ್ಯ ಶಿಕ್ಷಕರ ಶಾಲೆಗಳ ಸಂಖ್ಯೆ ಎಷ್ಟು ; ಇಂತಹ ಶಾಲೆಗಳ ವಿದ್ಯಾರ್ಥಿಗಳ ಭವಿಷ್ಯಕ್ಕಾಗಿ ಸರ್ಕಾರ ಕೈಗೊಂಡಿರುವ ಪರ್ಯಾಯ ವ್ಯವಸ್ಥೆಗಳೇನು ?

# ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಕೈಗೊಂಡಿರುವ ಕ್ರಮದ ಬಗ್ಗೆ

**ಶ್ರೀ ನಾಗರಾಜು ಎಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೪ (೧೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಮಹಿಳೆಯರ ಮೇಲಿನ ಹಿಂಸಾಚಾರ ಪ್ರಕರಣಗಳ ಸಂಖ್ಯೆ ಎಷ್ಟು; ದೋಷಾರೋಪಣ ಪ್ರಮಾಣ (Conviction Rate) ಎಷ್ಟು One Stop Centers ಪ್ರತಿ ಜಿಲ್ಲೆಯಲ್ಲಿ ಪೂರ್ಣ ಪ್ರಮಾಣದಲ್ಲಿ ಕಾರ್ಯನಿರ್ವಹಿಸುತ್ತಿವೆಯೇ ; ಈ ಕೇಂದ್ರಗಳಲ್ಲಿ ಸಿಬ್ಬಂದಿ ಕೊರತೆ ಇದೆಯೇ ; ಇದ್ದಲ್ಲಿ, ಎಷ್ಟು ಕೊರತೆ ಇದೆ ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮಹಿಳಾ ಆಶ್ರಯ ಗೃಹಗಳ ಮೇಲ್ವಿಚಾರಣೆ ಎಷ್ಟು ಬಾರಿ ನಡೆಸಲಾಗಿದೆ ; ರಾಜ್ಯದ ಎಷ್ಟು ಜಿಲ್ಲೆಗಳಲ್ಲಿ Working Women's Hostel ಗಳಿವೆ ಎಲ್ಲಾ ಹಾಸ್ಟೇಲ್‌ಗಳು ಕಾರ್ಯನಿರ್ವಹಣೆಯಲ್ಲಿವೆ ;

(ಇ) POCSO ಪ್ರಕರಣಗಳಲ್ಲಿ ತನಿಖೆ ಪೂರ್ಣಗೊಳ್ಳಲು ಸರಾಸರಿ ಎಷ್ಟು ಸಮಯ ತೆಗೆದುಕೊಳ್ಳುತ್ತಿದೆ Child Care Institutions (CCI) ಮತ್ತು Juvenile Justice Boards (JJB)ಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ?

# ಅರಣ್ಯ ಇಲಾಖೆಯ ಕ್ರಮದ ಬಗ್ಗೆ

**ಶ್ರೀ ನಾಗರಾಜು ಎಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೫ (೧೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದು ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಮಾನವ–ವನ್ಯಜೀವಿ ಸಂಘರ್ಷದಿಂದ ಎಷ್ಟು ಜನರು ಮೃತಪಟ್ಟಿದ್ದಾರೆ ಹಾಗೂ ಎಷ್ಟು ಮಂದಿ ಗಾಯಗೊಂಡಿದ್ದಾರೆ ; ಜಿಲ್ಲಾವಾರು ವಿವರ ಹಾಗೂ ಪರಿಹಾರ ವಿತರಣೆಯ ಸ್ಥಿತಿಯ ಮಾಹಿತಿ ನೀಡುವುದು ;

(ಆ) ಕಾಡಾನೆ, ಹುಲಿ, ಚಿರತೆ, ಕರಡಿ ಸೇರಿದಂತೆ ವನ್ಯಜೀವಿಗಳ ದಾಳಿಯಿಂದ ಬೆಳೆ ನಷ್ಟ ಹಾಗೂ ಆಸ್ತಿ ನಷ್ಟ ಅನುಭವಿಸಿದ ರೈತರಿಗೆ ಪರಿಹಾರವನ್ನು ನಿಗದಿತ ಅವಧಿಯೊಳಗೆ ನೀಡಲಾಗುತ್ತಿದೆಯೇ ; ಬಾಕಿ ಇರುವ ಪ್ರಕರಣಗಳ ಸಂಖ್ಯೆ ಎಷ್ಟು ;

(ಇ) ರಾಜ್ಯದಲ್ಲಿ ಅರಣ್ಯ ಒತ್ತುವರಿ ತೆರವು ಹಾಗೂ ಅರಣ್ಯ ಸಂರಕ್ಷಣೆಯ ನಡುವೆಯೇ ಹಲವು ವರ್ಷಗಳಿಂದ ಅರಣ್ಯ ಪ್ರದೇಶದಲ್ಲಿ ವಾಸಿಸುತ್ತಿರುವ ಅರ್ಹ ಬುಡಕಟ್ಟು ಹಾಗೂ ಅರಣ್ಯ ಅವಲಂಬಿತ ಕುಟುಂಬಗಳ ಹಕ್ಕುಪತ್ರ (Forest Rights Act) ಅರ್ಜಿಗಳ ಸ್ಥಿತಿ ಏನು ; ಎಷ್ಟು ಅರ್ಜಿಗಳು ಬಾಕಿ ಇವೆ ;

(ಈ) ಕಳೆದ ಮೂರು ವರ್ಷಗಳಲ್ಲಿ ಅರಣ್ಯ ಬೆಂಕಿ ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳು ಯಾವುವು ; ಎಷ್ಟು ಅರಣ್ಯ ಪ್ರದೇಶ ಬೆಂಕಿಗೆ ಆಹುತಿಯಾಗಿದೆ ; (ಜಿಲ್ಲಾವಾರು ವಿವರ ನೀಡುವುದು)

(ಉ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಅಕ್ರಮ ಮರ ಕಳ್ಳಸಾಗಣೆ ಹಾಗೂ ಅಮೂಲ್ಯ ಮರಗಳ ಕಳ್ಳತನದ ಕುರಿತು ಎಷ್ಟು ಪ್ರಕರಣಗಳು ದಾಖಲಾಗಿವೆ ; ಎಷ್ಟು ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳಲಾಗಿದೆ ?

## ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯ ಹಾಸ್ಟೇಲ್‌ಗಳಿಗೆ ಉಪಕರಣಗಳನ್ನು ಖರೀದಿಸಿರುವ ಬಗ್ಗೆ

**ಶ್ರೀ ನಾಗರಾಜು ಎಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೬ (೧೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೧ನೇ ಸಾಲಿನಲ್ಲಿ ಸಮಾಜ ಕಲ್ಯಾಣ ಇಲಾಖೆ, ಚಿಕ್ಕಬಳ್ಳಾಪುರ ಜಿಲ್ಲೆ ವತಿಯಿಂದ ಇಲಾಖಾ ವ್ಯಾಪ್ತಿಯ ಹಾಸ್ಟೇಲ್‌ಗಳಿಗೆ Semi-Automatic Chapathi Making Machine ಗಳನ್ನು ಕಿಯೋನಿಕ್ಸ್ ಸಂಸ್ಥೆಯಿಂದ ಖರೀದಿಸಲು ಕಾರ್ಯಾದೇಶ ನೀಡಿದ್ದು ಕಿಯೋನಿಕ್ಸ್ ಸಂಸ್ಥೆ ಮಾರುಕಟ್ಟೆ ಬೆಲೆಗಿಂತ ಮೂರು ಪಟ್ಟು ಹೆಚ್ಚು ಮೊತ್ತದಲ್ಲಿ ಸರಬರಾಜು ಮಾಡಿರುತ್ತದೆ ಎಂದು ಸಿ.ಎ.ಜಿ ವರದಿ ಬಹಿರಂಗ ಪಡಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದೇ ವರದಿಯಂತೆ ಮಂಡ್ಯ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳ ೩೭ ಹಾಸ್ಟೇಲ್‌ಗಳಲ್ಲಿ ವಿತರಿಸಲಾದ Semi-Automatic Chapathi Making Machine ಗಳನ್ನು ಪರಿಶೀಲಿಸಿದಾಗ ಸುಮಾರು ೩೦ ಹಾಸ್ಟೇಲ್‌ಗಳು ಈ ಉಪಕರಣಗಳನ್ನು ಬಳಸದೇ ಹಾಗೆಯೇ ಸ್ಟೋರ್ ರೂಂನಲ್ಲಿ ಇರಿಸಿದ್ದು, ಇದರಿಂದಾಗಿ ಸರ್ಕಾರಕ್ಕೆ ನಷ್ಟ ಉಂಟಾಗಿರುತ್ತದೆ ಎಂದು ವರದಿಯಲ್ಲಿ ತಿಳಿಸಿರುವುದು ನಿಜವೇ ;

(ಇ) ಮಾರುಕಟ್ಟೆ ಬೆಲೆಗಿಂತ ಹೆಚ್ಚಿನ ಮೊತ್ತಕ್ಕೆ ಮೇಲ್ಕಂಡ ಉಪಕರಣಗಳನ್ನು ಕಿಯೋನಿಕ್ಸ್ ಸಂಸ್ಥೆಯಿಂದ ಖರೀದಿಸುವ ಅವಶ್ಯಕತೆ ಉಂಟಾಗಿತ್ತಾ ; ಮತ್ತು ಈ ಉಪಕರಣಗಳನ್ನು ನಿಯಮಬಾಹಿರವಾಗಿ ಅಧಿಕಾರಿಗಳಿಂದ ಖರೀದಿಸಲಾಗಿದೆಯೇ ; ಸರ್ಕಾರ ಈ ಕುರಿತು ಕೈಗೊಂಡಿರುವ ಕ್ರಮವೇನು ?

## ಹುಲ್ಲುಗಾವಲುಗಳ ಸಂರಕ್ಷಣೆ, ವಿಸ್ತರಣೆ ಕುರಿತು

**ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೭ (೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹುಲ್ಲುಗಾವಲುಗಳನ್ನು ಕೇವಲ ಬಂಜರು ಭೂಮಿ ಎಂದು ಸರ್ಕಾರಗಳು ಮತ್ತು ಸಾರ್ವಜನಿಕರು ಪರಿಗಣಿಸಿ ಅವುಗಳನ್ನು

ವಾಣಿಜ್ಯ ಬಳಕೆಯ ಕೃಷಿ ಭೂಮಿಗಳನ್ನಾಗಿ ಮಾರ್ಪಡಿಸುವುದರ ಜೊತೆಗೆ ತೀವ್ರ ನಗರೀಕರಣ, ಕೈಗಾರಿಕೀಕರಣ ಮತ್ತು ಅತಿಯಾದ ಜಾನುವಾರು ಮೇಯಿಸುವಿಕೆಯಿಂದಾಗಿ ಹುಲ್ಲುಗಾವಲುಗಳು ಮರೆಯಾಗಿರುವುದರಿಂದ, ಒಂದು ಸಂಪೂರ್ಣ ಪರಿಸರ ವ್ಯವಸ್ಥೆಯೇ ಅಳಿವಿನ ಹಾದಿ ಹಿಡಿಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ. ಮರಗಳಿಲ್ಲ ಎಂಬ ಒಂದೇ ಕಾರಣಕ್ಕೆ ನಿರುಪಯುಕ್ತವೆಂದು ಪರಿಗಣಿಸಲ್ಪಟ್ಟ ಈ ಹುಲ್ಲುಗಾವಲುಗಳೇ ಸಾವಿರಾರು ಕೀಟಗಳು, ಚಿಟ್ಟೆಗಳು, ಸರೀಸೃಪಗಳು, ಸಣ್ಣ ಸಸ್ತನಿಗಳು ಹಾಗೂ ಪಕ್ಷಿಗಳ ಜೀವನಾಡಿಯಾಗಿರುವುದರ ಜೊತೆಗೆ ಸಂಪೂರ್ಣವಾಗಿ ಅವುಗಳ ನೈಸರ್ಗಿಕ ಆವಾಸಸ್ಥಾನವಾಗಿವೆ. ಈ ವಾಸ್ತವದ ಹಿನ್ನೆಲೆಯಲ್ಲಿ ಹೆಚ್ಚಿನ ಹುಲ್ಲುಗಾವಲು ಪ್ರದೇಶಗಳನ್ನು ಸೃಷ್ಟಿಸುವ ತುರ್ತು ಅನಿವಾರ್ಯತೆ ಇದ್ದು ಆ ದಿಕ್ಕಿನಲ್ಲಿ ಅರಣ್ಯ ಇಲಾಖೆ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಇ) ಒಂದು ಹೆಬ್ಬಕ್ಕ ಪಕ್ಷಿ ಸ್ವಚ್ಛಂದವಾಗಿ ಬದುಕಲು ೧೫೦ ರಿಂದ ೨೦೦ ಚದರ ಕಿಲೋಮೀಟರ್ ವಿಸ್ತೀರ್ಣದ ಹುಲ್ಲುಗಾವಲು ಬೇಕು ಎಂಬ ಅಂದಾಜಿದ್ದು, ಅಂದರೆ, ಒಂದು ಹಕ್ಕಿಯ ಉಳಿವಿನ ಹಿಂದೆ ನೂರಾರು ಚದರ ಕಿಲೋಮೀಟರ್ ನೈಸರ್ಗಿಕ ಪರಿಸರ ಇರಲೇಬೇಕಾಗಿದ್ದು, ಆ ಹಿನ್ನಲೆಯಲ್ಲಿ ಪ್ರಸ್ತುತ ಇರುವ ಹುಲ್ಲುಗಾವಲುಗಳ ಸಂರಕ್ಷಣೆ ಮಾಡುವುದರ ಜೊತೆಗೆ ಮತ್ತಷ್ಟು ಹೊಸ ಹುಲ್ಲುಗಾವಲು ಪ್ರದೇಶಗಳನ್ನು ಸೃಷ್ಟಿಸುವ ದಿಕ್ಕಿನಲ್ಲಿ ತುರ್ತಾಗಿ ಮುಂದಾಗಬೇಕಿದ್ದು, ಈ ನಿಟ್ಟಿನಲ್ಲಿ ಸರ್ಕಾರ ವಹಿಸುವ ಕ್ರಮಗಳೇನು ?

## ಸರ್ಕಾರಿ ಶಾಲೆಗಳ ಕುರಿತು

**ಶ್ರೀ ನಾಗರಾಜು ಎಂ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೮ (೧೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ ಶಿಕ್ಷಕರ ಖಾಲಿ ಹುದ್ದೆಗಳ ಜಿಲ್ಲಾವಾರು ವಿವರವೇನು; ಎಲ್ಲಾ ಹುದ್ದೆಗಳನ್ನು ಯಾವ ವೇಳೆಗೆ ಭರ್ತಿ ಮಾಡಲಾಗುವುದು ;

(ಆ) ಕಳೆದು ಮೂರು ವರ್ಷಗಳಲ್ಲಿ ವಿದ್ಯಾರ್ಥಿಗಳ ಶಾಲಾ ಬಿಡುವಿಕೆ (Dropout) ಪ್ರಮಾಣ ಎಷ್ಟು ; ಅದನ್ನು ತಗ್ಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಕರ್ನಾಟಕ ಪಬ್ಲಿಕ್ ಶಾಲೆಗಳ (KPS) ಅಭಿವೃದ್ಧಿಗೆ ಮೀಸಲಾದ ಅನುದಾನದಲ್ಲಿ ಎಷ್ಟು ವೆಚ್ಚವಾಗಿದೆ ; ಫಲಿತಾಂಶಗಳೇನು ; ಸರ್ಕಾರಿ ಶಾಲೆಗಳಲ್ಲಿ ಶುದ್ಧ ಕುಡಿಯುವ ನೀರು, ಶೌಚಾಲಯ ಮತ್ತು ವಿದ್ಯುತ್ ಸೌಲಭ್ಯಗಳಿಲ್ಲದ ಶಾಲೆಗಳ ಸಂಖ್ಯೆ ಎಷ್ಟು ;

(ಈ) ಮಧ್ಯಾಹ್ನ ಉಪಹಾರ ಯೋಜನೆಯಲ್ಲಿ ಗುಣಮಟ್ಟದ ಬಗ್ಗೆ ಬಂದ ದೂರುಗಳ ಸಂಖ್ಯೆ ಎಷ್ಟು ; ಯಾವ ಕ್ರಮ ಕೈಗೊಳ್ಳಲಾಗಿದೆ ; ಶಾಲಾ ಕಟ್ಟಡಗಳ ದುರಸ್ತಿ ಮತ್ತು ಹೊಸ ಕೊಠಡಿಗಳ ನಿರ್ಮಾಣಕ್ಕೆ ಜಿಲ್ಲಾವಾರು ಅನುದಾನ ಹಾಗೂ ಪ್ರಗತಿ ವಿವರ ನೀಡುವುದು ?

## ದಿ. ಸನಾದಿ ಅಪ್ಪಣ್ಣನವರ ಸಾಧನೆ ಕುರಿತು ಪ್ರಚಾರ ಪಡಿಸಲು ಹಾಗೂ ಅಧ್ಯಯನ ಮಾಡಲು ಬಾಗಲಕೋಟೆಯಲ್ಲಿ ಅವರ ಹೆಸರಲ್ಲಿ ಪ್ರತಿಷ್ಠಾನ ನಿರ್ಮಿಸುವ ಕುರಿತು

**ಶ್ರೀ ಪಿ.ಹೆಚ್. ಪೂಜಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೭೯ (೩೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಹನಾಯ್ ವಾದ್ಯ ನುಡಿಸುವಲ್ಲಿ ರಾಜ್ಯ ಮತ್ತು ಹೊರ ರಾಜ್ಯಗಳಲ್ಲಿ ತನ್ನದೇ ಆದ ವಿಶಿಷ್ಟ ಛಾಪನ್ನು ಮೂಡಿಸಿದ ದಿ. ಅಪ್ಪಣ್ಣ ವಾಲಗದ

ಇವರು ಸನಾದಿ ಅಪ್ಪಣ್ಣ ಎಂದೇ ಪ್ರಸಿದ್ಧರಾಗಿದ್ದು, ಇಂತಹ ಮೇರು ಕಲಾವಿದನ ಸಾಧನೆ ಕುರಿತು ಇಂದಿನ ಮಕ್ಕಳುಗಳಿಗೆ ಪ್ರಚಾರ ಪಡಿಸಲು ಹಾಗೂ ಇವರ ಕುರಿತು ಅಧ್ಯಯನ ಮಾಡಲು ಜಿಲ್ಲೆಯಲ್ಲಿ ಸನಾದಿ ಅಪ್ಪಣ್ಣನವರ ಹೆಸರಿನಲ್ಲಿ ಪ್ರತಿಷ್ಠಾನ ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದರೆ, ಬಾಗಲಕೋಟೆ ಜಿಲ್ಲೆಯಲ್ಲಿ ಸನಾದಿ ಅಪ್ಪಣ್ಣನವರ ಹೆಸರಿನಲ್ಲಿ "ಪ್ರತಿಷ್ಠಾನ" ಪ್ರಾರಂಭ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕ್ರಮಕೈಗೊಂಡಿದ್ದರೆ, ಯಾವಾಗ ಪ್ರಾರಂಭಿಸಲಾಗುವುದು ?

## ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳ ಸಂಖ್ಯೆ ಹಾಗೂ ಶಾಲೆಗಳ ದುರಸ್ತಿ ಕೊಠಡಿಗಳನ್ನು ಪೂರ್ಣಗೊಳಿಸುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೦ (೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಸರ್ಕಾರಿ ಪ್ರಾಥಮಿಕ ಹಾಗೂ ಪ್ರೌಢಶಾಲೆಗಳ ಸಂಖ್ಯೆ ಎಷ್ಟು ; ಎಷ್ಟು ಪ್ರಾಥಮಿಕ ಮತ್ತು ಪ್ರೌಢಶಾಲೆಗಳು ಸುಸಜ್ಜಿತ ಕೊಠಡಿಗಳನ್ನು ಹೊಂದಿವೆ ; ದುರಸ್ತಿಯಾಗಬೇಕಾದ ಕೊಢಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ಪ್ರತ್ಯೇಕವಾಗಿ ನೀಡುವುದು)

(ಆ) ಯಾವ ಕಾಲಮಿತಿಯಲ್ಲಿ ಕೊಠಡಿಗಳ ದುರಸ್ತಿ ಕಾರ್ಯ ಪೂರ್ಣಗೊಳಿಸಲಾಗುವುದು ?

## ದೇವದಾಸಿಯರ ಮಕ್ಕಳ ಸಂಖ್ಯೆ ಹಾಗೂ ಪ್ರೋತ್ಸಾಹ ಧನ ನೀಡುವ ಬಗ್ಗೆ

**ಶ್ರೀ ಪಿ.ಹೆಚ್. ಪೂಜಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೧ (೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಹಿಳಾ ಮತ್ತು ಮಕ್ಕಳ ಕಲ್ಯಾಣ ಇಲಾಖೆಯಿಂದ ಗುರುತಿಸಲ್ಪಟ್ಟ ದೇವದಾಸಿಯರ ಮಕ್ಕಳ ವಿವಾಹಕ್ಕೆ ಸರ್ಕಾರ ಪ್ರೋತ್ಸಾಹಧನ ನೀಡುತ್ತಾ ಬಂದಿದ್ದು, ರಾಜ್ಯದಲ್ಲಿ ಪ್ರೋತ್ಸಾಹಧನ ಪಡೆದ ದೇವದಾಸಿಯರ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು)

(ಆ) ಇಲ್ಲಿಯುವರೆಗೆ ಎಷ್ಟು ಫಲಾನುಭವಿಗಳಿಗೆ ಸಹಾಯಧನ ನೀಡಲಾಗಿದೆ ; ಬಾಕಿ ಉಳಿದಿರುವ ಫಲಾನುಭವಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಬಾಗಲಕೋಟೆ ಜಿಲ್ಲೆಯ ಫಲಾನುಭವಿಗಳ ಸಂಖ್ಯೆ ಎಷ್ಟು ; ಬೇಡಿಕೆ ಸಲ್ಲಿಸಿದ ಅನುದಾನ ಹಾಗೂ ಬಿಡುಗಡೆಯಾದ ಅನುದಾನದ ಮೊತ್ತವೆಷ್ಟು ; ಬಿಡುಗಡೆಗೆ ಬಾಕಿ ಇರುವ ಅನುದಾನದ ಮೊತ್ತವೆಷ್ಟು ; ಬಾಕಿ ಅನುದಾನ ಯಾವಾಗ ಬಿಡುಗಡೆ ಮಾಡಲಾಗುವುದು ? (ತಾಲ್ಲೂಕುವಾರು ಮಾಹಿತಿಯನ್ನು ನೀಡುವುದು)

## ಧಾರವಾಡ ಜಿಲ್ಲೆಗೆ ಸರ್ಕಾರಿ ಗ್ರಂಥಾಲಯಗಳು ಹಾಗೂ ಡಿಜಿಟಲ್ ಓದುವ ಕೋಣೆಗಳನ್ನು ಸ್ಥಾಪಿಸುವ ಕುರಿತು

**ಶ್ರೀ ಪ್ರದೀಪ್ ಶೆಟ್ಟರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೮೨ (೬೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ವಿವಿಧ ಭಾಗಗಳಿಂದ ವಿದ್ಯಾಕಾಶಿ ಧಾರವಾಡ ಇಲ್ಲಿಗೆ ಸಾವಿರಾರು ವಿದ್ಯಾರ್ಥಿಗಳು NEET, KAS, IAS, PSI ಸೇರಿದಂತೆ

ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳ ತಯಾರಿಗಾಗಿ ಆಗಮಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಧಾರವಾಡ ನಗರದಲ್ಲಿ ಪ್ರಸ್ತುತ ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಹಾಗೂ ಪಾಲಿಕೆ ವ್ಯಾಪ್ತಿಯ ಸಾರ್ವಜನಿಕ ಗ್ರಂಥಾಲಯ ಮತ್ತು ಉಚಿತ ಅಭ್ಯಾಸ ಕೋಣೆಗಳ (Reading Rooms) ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ನಗರದಲ್ಲಿ ಸರ್ಕಾರಿ ಗ್ರಂಥಾಲಯಗಳ ಹಾಗೂ ಕುಳಿತು ಓದಲು ಆಸನಗಳ ತೀವ್ರ ಅಭಾವವಿರುವುದರಿಂದ, ವಿದ್ಯಾರ್ಥಿಗಳು ಅನಿವಾರ್ಯವಾಗಿ ಖಾಸಗಿ ಸ್ಟಡಿ ರೂಮ್‌ಗಳನ್ನು (Reading Rooms) ಅವಲಂಬಿಸುತ್ತಿರುವುದು ಮತ್ತು ಖಾಸಗಿಯವರು ತಿಂಗಳಿಗೆ ದುಬಾರಿ ಶುಲ್ಕ ವಸೂಲಿ ಮಾಡುತ್ತಿರುವುದು ಸರ್ಕಾರದಗಮನಕ್ಕೆ ಬಂದಿದೆಯೇ ;

(ಈ) ವಿದ್ಯಾರ್ಥಿಗಳ ಮೇಲಿನ ಈ ಆರ್ಥಿಕ ಹೊರೆ ತಪ್ಪಿಸಲು ಧಾರವಾಡ ನಗರದಲ್ಲಿ ಆಧುನಿಕ ಸೌಲಭ್ಯಗಳನ್ನೊಳಗೊಂಡ ವಿಶಾಲವಾದ ಹೊಸ ಸರ್ಕಾರಿ ಗ್ರಂಥಾಲಯಗಳನ್ನು ಹಾಗೂ ಡಿಜಿಟಲ್ ಓದುವ ಕೋಣೆಗಳನ್ನು ಸ್ಥಾಪಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಖಾಸಗಿ ಸ್ಟಡಿ ರೂಮ್‌ಗಳ ಅನಿಯಂತ್ರಿತ ಶುಲ್ಕ ವಸೂಲಿಗೆ ಕಡಿವಾಣ ಹಾಕಲು ನಿಯಮಾವಳಿಗಳನ್ನು ರೂಪಿಸುವ ಹಾಗೂ ಧಾರವಾಡದಲ್ಲಿ ಸುಸಜ್ಜಿತ ಉಚಿತ ಸ್ಪರ್ಧಾತ್ಮಕ ಪರೀಕ್ಷಾ ಅಧ್ಯಯನ ಕೇಂದ್ರಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ?

# ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಖಾಲಿ ಹುದ್ದೆಗಳ ಭರ್ತಿ ಮತ್ತು ಮೂಲ ಸೌಲಭ್ಯಕ್ಕಾಗಿ ಮಂಜೂರಾಗಿರುವ ಹಣದ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೩ (೧೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಸರ್ಕಾರಿ ವಿಶ್ವವಿದ್ಯಾಲಯಗಳಿವೆ ; ಬೋಧಕ ಮತ್ತು ಬೋಧಕೇತರ ಹುದ್ದೆಗಳು ಸೇರಿದಂತೆ ಈ ವಿಶ್ವವಿದ್ಯಾಲಯಗಳಿಗೆ ಎಷ್ಟು ಹುದ್ದೆಗಳು ಮಂಜೂರಾಗಿವೆ ; ಖಾಲಿ ಇರುವ ಹುದ್ದೆಗಳೆಷ್ಟು ; (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಆ) ಸರ್ಕಾರಿ ವಿಶ್ವವಿದ್ಯಾಲಯಗಳಲ್ಲಿ ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಕಳೆದ ೩ ವರ್ಷದಿಂದ ಎಷ್ಟು ಖಾಲಿ ಹುದ್ದೆಗಳು ಭರ್ತಿ ಆಗಿದೆ ; ಖಾಲಿ ಹುದ್ದೆಗಳ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ವಿಶ್ವವಿದ್ಯಾಲಯವಾರು ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷದಿಂದ ಈ ವಿಶ್ವವಿದ್ಯಾಲಯಗಳಿಗೆ ಮೂಲಭೂತ ಸೌಲಭ್ಯಕ್ಕಾಗಿ ಮಂಜೂರು ಮಾಡಿರುವ/ಬಿಡುಗಡೆ ಮಾಡಿರುವ ಅನುದಾನ ಎಷ್ಟು ; ಈ ಅನುದಾನವನ್ನು ಯಾವ ಉದ್ದೇಶಕ್ಕೆ ವೆಚ್ಚಮಾಡಲಾಗಿದೆ ; (ವಿಶ್ವವಿದ್ಯಾಲಯವಾರು ವಿವರ ನೀಡುವುದು) ;

(ಈ) ಹಣದ ಕೊರತೆಯಿಂದ ಆರ್ಥಿಕವಾಗಿ ಸಂಕಷ್ಟಕ್ಕೆ ಸಿಲುಕಿರುವ ವಿಶ್ವವಿದ್ಯಾಲಯಗಳು ಯಾವುವು ; ಆರ್ಥಿಕ ಸಂಕಷ್ಟಕ್ಕೆ ಸಿಲುಕಲು ಕಾರಣಗಳೇನು ; (ವಿಶ್ವವಿದ್ಯಾಲಯವಾರು ವಿವರ ನೀಡುವುದು)

(ಉ) ಈ ವಿಶ್ವವಿದ್ಯಾಲಯಗಳನ್ನು ಆರ್ಥಿಕ ಸಂಕಷ್ಟದಿಂದ ಪಾರು ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಈ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳಿಗೆ ನೀಡಿರುವ ಸೂಚನೆ ಏನು ?

## ರಾಜ್ಯದಲ್ಲಿರುವ ಶಿಕ್ಷಣ ನೀತಿಯ ಕುರಿತು

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೪ (೦೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯುಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಪ್ರಸ್ತುತ ಜಾರಿಯಲ್ಲಿರುವ ಶಿಕ್ಷಣ ನೀತಿಯ ಬಗ್ಗೆ ವಿವರ ನೀಡುವುದು ; ದ್ವಿಭಾಷಾ ಶಿಕ್ಷಣ ನೀತಿ ಎಂದಿನಿಂದ ಜಾರಿಗೆ ಬಂದಿದೆ ; ಕೇಂದ್ರ ಸರ್ಕಾರದ ಶಿಕ್ಷಣ ನೀತಿ ಕುರಿತು ಸಂಪೂರ್ಣ ಮಾಹಿತಿ ಒದಗಿಸುವುದು ;

(ಆ) ರಾಜ್ಯದಲ್ಲಿ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಹಿಂದಿ ಭಾಷೆ ಪರೀಕ್ಷೆಗೆ ಮಾನ್ಯತೆ ಇದೆಯೇ ;

(ಇ) ಎಸ್.ಎಸ್.ಎಲ್.ಸಿ. ಪರೀಕ್ಷೆಗೆ ಹಿಂದಿ ಭಾಷೆ ಪರೀಕ್ಷೆಯ ಅಂಕಗಳನ್ನು ಪರಿಗಣಿಸುವ ವಿಚಾರಕ್ಕೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯ ನೀಡಿರುವ ಸೂಚನೆ ಏನು ;

(ಈ) ನ್ಯಾಯಾಲಯದ ಸೂಚನೆ ನಂತರ ಈ ವಿಚಾರದಲ್ಲಿ ಸರ್ಕಾರದ ನಿಲುವೇನು ?

## ಅಂಗನವಾಡಿ ಕೇಂದ್ರಗಳಿಗೆ ಶಾಲಾ ಪೂರ್ವ ಶಿಕ್ಷಣ ಕಿಟ್‌ಗಳ ಖರೀದಿ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೫ (೦೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯುಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅಂಗನವಾಡಿ ಕೇಂದ್ರಗಳೆಷ್ಟು ; ಈ ಅಂಗನವಾಡಿಗಳಲ್ಲಿ ಕಲಿಯುತ್ತಿರುವ ಮಕ್ಕಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು) ;

(ಆ) ಅಂಗನವಾಡಿ ಕೇಂದ್ರಗಳಿಗೆ ಶಾಲಾ ಪೂರ್ವ ಶಿಕ್ಷಣ ಕಿಟ್‌ಗಳನ್ನು ವಿತರಿಸಲು ಸರ್ಕಾರ ನಿರ್ಧರಿಸಿದೆಯೇ ; ಯಾವ ಯೋಜನೆಯಡಿ ಕಿಟ್‌ಗಳನ್ನು ವಿತರಿಸಲಾಗುತ್ತಿದೆ ; ಈ ಕಿಟ್‌ಗಳು ಯಾವ ಯಾವ ವಸ್ತುಗಳನ್ನು ಹೊಂದಿರುತ್ತವೆ ;

(ಇ) ಕಿಟ್‌ಗಳನ್ನು ಪೂರೈಸಲು ಟೆಂಡರ್ ಕರೆಯಲಾಗಿದೆಯೇ ; ಟೆಂಡರ್‌ನಲ್ಲಿ ಭಾಗವಹಿಸಿದ್ದ ಸಂಸ್ಥೆಗಳು ಪ್ರತೀ ವಸ್ತುಗೆ ನಮೂದಿಸಿರುವ ಮೊತ್ತ ಎಷ್ಟು ; ಯಾವ ಸಂಸ್ಥೆಗೆ ಟೆಂಡರ್ ನೀಡಲಾಗಿದೆ ; (ಸಮಗ್ರ ವಿವರ ನೀಡುವುದು)

(ಈ) ಕಿಟ್‌ಗಳ ಪೂರೈಕೆ ಆಗಿದೆಯೇ ; ಎಷ್ಟು ಕಿಟ್‌ಗಳನ್ನು ಪೂರೈಸಲಾಗಿದೆ ; ಈ ವರೆಗೆ ಎಷ್ಟು ಅಂಗನವಾಡಿಗಳಿಗೆ ಕಿಟ್‌ಗಳನ್ನು ವಿತರಿಸಲಾಗಿದೆ ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಖಾಲಿ ಇರುವ ಶಿಕ್ಷಕರ ಹುದ್ದೆಗಳನ್ನು ಭರ್ತಿ ಮಾಡುವ ಬಗ್ಗೆ

**ಶ್ರೀ ಸಿ.ಟಿ. ರವಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೮೬ (೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢ ಶಾಲೆಗಳು ಎಷ್ಟಿವೆ ; ಈ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಸರ್ಕಾರಿ ಪ್ರಾಥಮಿಕ ಮತ್ತು ಪ್ರೌಢಶಾಲೆಗಳಿಗೆ ಮಂಜೂರಾಗಿರುವ ಶಿಕ್ಷಕರ ಒಟ್ಟು ಸಂಖ್ಯೆ ಎಷ್ಟು ; ಪ್ರಸ್ತುತ ಖಾಲಿ ಇರುವ ಶಿಕ್ಷಕರ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಇ) ಶಿಕ್ಷಕರ ಭರ್ತಿಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಕಳೆದ ೨ ವರ್ಷದಿಂದ ನೇಮಕ ಆಗಿರುವ ಶಿಕ್ಷಕರು ಎಷ್ಟು ;

(ಈ) ಪ್ರಾಥಮಿಕ ಶಾಲಾ ಶಿಕ್ಷಕರ ಹುದ್ದೆಗಳ ನೇಮಕಾತಿ ಪ್ರಕ್ರಿಯೆ ಮುಂದುವರೆಸುವಂತೆ ಸುಪ್ರೀಂಕೋರ್ಟ್ ಸೂಚನೆ ನೀಡಿದ ನಂತರ ಆಗಿರುವ ಪ್ರಗತಿ ಏನು ; ಶಿಕ್ಷಕರ ನೇಮಕ ಪ್ರಕ್ರಿಯೆ ಪೂರ್ಣಗೊಂಡಿದೆಯೇ ; ಇಲ್ಲದಿದ್ದಲ್ಲಿ, ಕಾರಣವೇನು ;

(ಉ) ಕಳೆದ ೨ ವರ್ಷದಿಂದ ಹೊಸದಾಗಿ ಶಿಕ್ಷಕರ ಭರ್ತಿಗಾಗಿ ಎಷ್ಟು ಅಧಿಸೂಚನೆಗಳನ್ನು ಹೊರಡಿಸಲಾಗಿದೆ ; ಪ್ರಸ್ತುತ ಇವುಗಳು ಯಾವ ಹಂತದಲ್ಲಿವೆ ; ಖಾಲಿ ಇರುವ ಹುದ್ದೆಗಳನ್ನು ಯಾವ ಕಾಲಮಿತಿಯೊಳಗೆ ಭರ್ತಿ ಮಾಡಲಾಗುವುದು ?

## ಶಾಲಾ ಶಿಕ್ಷಣ ಇಲಾಖೆಯಲ್ಲಿ ಅನಧಿಕೃತ ಸಂಘಗಳ ಅವ್ಯವಹಾರ ಕುರಿತು

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೭ (೫೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಇಲಾಖೆಯಲ್ಲಿ ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆಯಿಂದ ಅಧಿಕೃತ ಮಾನ್ಯತೆ ಪಡೆದ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘಟನೆ, ಪ್ರೌಢ ಶಾಲಾ ಶಿಕ್ಷಕರ ಸಂಘಟನೆ ಹಾಗೂ ಪದವಿ ಪೂರ್ವ ಶಾಲಾ ಶಿಕ್ಷಕರ ಸಂಘಟನೆಗಳು ಯಾವುವು ; (ಮಾಹಿತಿ ನೀಡುವುದು)

(ಆ) ಸದರಿ ಸಂಘಟನೆಗಳು ರಾಜ್ಯ ಮಟ್ಟದ ಪದಾಧಿಕಾರಿಗಳ ಹೆಸರುಗಳನ್ನು ನೀಡುವುದು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ಕೆಲವು ವ್ಯಕ್ತಿಗಳು ಅನಧಿಕೃತ ಸಂಘಗಳ ಹೆಸರಿನಲ್ಲಿ ಯಾವುದೇ ನೋಂದಣಿ ಮತ್ತು ಮಾನ್ಯತೆ ಇಲ್ಲದೆ, ಇಲಾಖೆಯಲ್ಲಿ ಪತ್ರ ವ್ಯವಹಾರ ಮಾಡುತ್ತಾ, ಇಲಾಖೆಯಲ್ಲಿ ಗೊಂದಲ ಸೃಷ್ಟಿ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಕುರಿತು ಸರ್ಕಾರ ತೆಗೆದುಕೊಂಡ ಕ್ರಮಗಳೇನು ?

## ಜಿಲ್ಲೆಗಳಲ್ಲಿ ಅಂತಿಮ ಅರಣ್ಯ ಅಧಿಸೂಚನೆ ಮಾಹಿತಿ ನೀಡುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೮ (೬೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಮಹಾರಾಜರ ಸರ್ಕಾರವು ೧೯೦೦ರ ಮೈಸೂರು ಅರಣ್ಯ ಕಾಯ್ದೆ ಅಡಿಯಲ್ಲಿ ಸರ್ಕಾರದ ಅರಣ್ಯ ಇಲಾಖೆಯ ಎಲ್ಲಾ ಜಿಲ್ಲೆಗಳಲ್ಲಿ ಅಂತಿಮ ಅರಣ್ಯ ಅಧಿಸೂಚನೆ (Final Forest Notification) ಪೂರ್ಣಗೊಂಡಿರುವ ಅಧಿಸೂಚನೆಗಳ ಮಾಹಿತಿ ನೀಡುವುದು ಹಾಗೂ ಅಧಿಸೂಚನೆ ಪ್ರತಿಗಳನ್ನು ನೀಡುವುದು ;

(ಆ) ಪ್ರಾಥಮಿಕ ಅಧಿಸೂಚನೆ (Section 4 Notification) ಹೊರಡಿಸಿ, ಹಲವು ವರ್ಷಗಳಾದರೂ ಅಂತಿಮ ಅಧಿಸೂಚನೆ ಹೊರಡಿಸದಿರುವ ಅರಣ್ಯ ಪ್ರದೇಶಗಳ ಮಾಹಿತಿ ನೀಡುವುದು ;

(ಇ) ಅರಣ್ಯ ಮತ್ತು ಕಂದಾಯ ಇಲಾಖೆಗಳ ದಾಖಲೆಗಳಲ್ಲಿ ಒಂದೇ ಸರ್ವೇ ನಂಬರಿನಲ್ಲಿ ಭೂಮಿ ವ್ಯತ್ಯಾಸವಿರುವ ಪ್ರಕರಣ ಸಂಖ್ಯೆ ಎಷ್ಟು ; ಅವುಗಳನ್ನು ಇತ್ಯರ್ಥಪಡಿಸಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ ;

(ಈ) ರಾಜ್ಯದಲ್ಲಿ ಎಲ್ಲಾ ಜಿಲ್ಲೆಗಳಲ್ಲಿ ಜಂಟಿ ಸರ್ವೇ (Joint Survey) ಪೂರ್ಣಗೊಂಡಿರುವ ಮತ್ತು ಬಾಕಿ ಉಳಿದಿರುವ ಪ್ರಕರಣಗಳ ಜಿಲ್ಲಾವಾರು ವಿವರವನ್ನು ನೀಡುವುದು ?

## ರಾಜ್ಯದಲ್ಲಿರುವ "Minor Forest" ಭೂಮಿಗಳ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೮೯ (೫೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯುಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು "Minor Forest" ಭೂಮಿಗಳ ಬಗ್ಗೆ ಮಾಹಿತಿ ನೀಡುವುದು ; (ಜಿಲ್ಲಾವಾರು ಹಾಗೂ ತಾಲ್ಲೂಕುವಾರು ವಿವರವನ್ನು ನೀಡುವುದು)

(ಆ) "Minor Forest" ಭೂಮಿಗಳನ್ನು ಯಾವ ಕಾಯ್ದೆ, ನಿಯಮ, ಅಧಿಸೂಚನೆ, ಅಥವಾ ಸರ್ಕಾರಿ ಆದೇಶಗಳ ಅಡಿಯಲ್ಲಿ ಗುರುತಿಸಲಾಗಿದೆ ಮತ್ತು ಅವುಗಳ ಕಾನೂನುಬದ್ಧ ಸ್ಥಾನಮಾನವೇನು ; (ಮಾಹಿತಿ ನೀಡುವುದು)

(ಇ) ಸ್ವಾತಂತ್ರ್ಯ ಪೂರ್ವ ಹಾಗೂ ಸ್ವಾತಂತ್ರ್ಯಾನಂತರ ಜಿಲ್ಲಾಧಿಕಾರಿಗಳು "Minor Forest" ಭೂಮಿಗಳನ್ನು ಮಂಜೂರು ಮಾಡುವ ಕಾನೂನುಬದ್ಧ ಅಧಿಕಾರ ಹೊಂದಿರುತ್ತದೆಯೇ ; ಇದ್ದರೆ, ಅದರ ವಿವರವನ್ನು ನೀಡುವುದು ;

(ಈ) ಜಿಲ್ಲಾಧಿಕಾರಿಗಳು ನೀಡಿರುವ "Minor Forest" ಭೂ ಮಂಜೂರಾತಿಗಳನ್ನು ಸರ್ಕಾರ ಕಾನೂನುಬದ್ಧವೆಂದು ಪರಿಗಣಿಸುತ್ತದೆಯೇ ; ಇಲ್ಲದಿದ್ದರೆ, ಅವುಗಳನ್ನು ಯಾವ ಕಾನೂನಿನ ಅಡಿಯಲ್ಲಿ ಪರಿಶೀಲಿಸಲಾಗುತ್ತಿದೆ ? (ಮಾಹಿತಿ ನೀಡುವುದು)

## ವಸತಿ ನಿಲಯ ವಿದ್ಯಾರ್ಥಿಗಳಿಗೆ ಗುಣಮಟ್ಟ ಆಹಾರವನ್ನು ನೀಡುವ ಬಗ್ಗೆ

**ಶ್ರೀ ರಾಮೋಜಿಗೌಡ (ಪದವೀಧರರ ಕ್ಷೇತ್ರ) :–**

೯೦ (೫೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಸರ್ಕಾರಿ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ನೀಡುವ ಆಹಾರದ ಮೆನು, ಆಹಾರದ ಪ್ರಮಾಣ ಮತ್ತು ಗುಣಮಟ್ಟವನ್ನು ನಿಗದಿಪಡಿಸಲಾಗಿದೆಯೇ ; ನಿಗದಿಪಡಿಸಿದ್ದರೆ, ಅದರ ವಿವರ ನೀಡುವುದು ;

(ಆ) ಕಳೆದ ಮೂರು ವರ್ಷಗಳಲ್ಲಿ ಕಳಪೆ ಗುಣಮಟ್ಟದ ಆಹಾರ, ಆಹಾರದಲ್ಲಿ ಹುಳು/ಕೀಟಗಳು ಕಂಡುಬಂದಿರುವುದು ಅಥವಾ ಆಹಾರ ಸೇವನೆಯಿಂದ ವಿದ್ಯಾರ್ಥಿಗಳಿಗೆ ಅನಾರೋಗ್ಯ ಉಂಟಾದ ಬಗ್ಗೆ ಎಷ್ಟು ದೂರುಗಳು ದಾಖಲಾಗಿವೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ವಸತಿ ನಿಲಯಗಳಲ್ಲಿ ಆಹಾರದ ಗುಣಮಟ್ಟವನ್ನು ಪರಿಶೀಲಿಸಲು ಅಧಿಕಾರಿಗಳು ನಿಯಮಿತವಾಗಿ ತಪಾಸಣೆ ನಡೆಸುತ್ತಿದ್ದಾರೆಯೇ ; ಆಹಾರದ ಮಾದರಿಗಳನ್ನು ಪ್ರಯೋಗಾಲಯಕ್ಕೆ ಕಳುಹಿಸಿ ಪರೀಕ್ಷಿಸಲಾಗುತ್ತಿದೆಯೇ ; (ಮಾಹಿತಿ ನೀಡುವುದು)

(ಈ) ಕಳಪೆ ಗುಣಮಟ್ಟದ ಆಹಾರ ಪೂರೈಸುವ ಗುತ್ತಿಗೆದಾರರು ಅಥವಾ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ಇದುವರೆಗೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಉ) ವಿದ್ಯಾರ್ಥಿಗಳಿಗೆ ಪೌಷ್ಠಿಕ, ಸ್ವಚ್ಛ ಹಾಗೂ ಗುಣಮಟ್ಟದ ಆಹಾರ ದೊರೆಯುವುದನ್ನು ಖಚಿತಪಡಿಸಿಕೊಳ್ಳಲು ಸರ್ಕಾರವು ಕೈಗೊಂಡಿರುವ ಹೊಸ ಕ್ರಮಗಳೇನು ?

## ಶಾಲಾ ಮಕ್ಕಳಿಗೆ ನೀಡುವ ಸೌಲಭ್ಯಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೧ (೭೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ವತಿಯಿಂದ ಶಾಲಾ ಮಕ್ಕಳಿಗೆ ಯಾವ ಯಾವ ಸೌಲಭ್ಯಗಳನ್ನು ಉಚಿತವಾಗಿ ನೀಡಲಾಗುತ್ತದೆ ; (ವಿವರ ನೀಡುವುದು)

(ಆ) ಶಾಲಾ ಮಕ್ಕಳಿಗೆ ಶೂ, ಪುಸ್ತಕ, ಸಮವಸ್ತ್ರ ಸರಬರಾಜು ಮಾಡಲು ಟೆಂಡರ್ ಕರೆಯಲಾಗಿದೆಯೇ ; ಟೆಂಡರ್ ಪಡೆದವರ ವಿವರದೊಂದಿಗೆ ಮಾಹಿತಿ ನೀಡುವುದು ;

(ಇ) ಶೂ, ಪುಸ್ತಕ, ಸಮವಸ್ತ್ರ ಹಾಗೂ ಬ್ಯಾಗ್‌ಳನ್ನು ಸರ್ಕಾರ ಯಾವ ಮೊತ್ತಕ್ಕೆ ಖರೀದಿಸುತ್ತಿದೆ ; ಪ್ರತಿಯೊಂದು ವಸ್ತುವಿನ ಹೆಸರು, ಕಂಪನಿಯ ಬ್ರಾಂಡ್‌ನೊಂದಿಗೆ ವಿವರ ನೀಡುವುದು ?

## ಸ್ಕೂಲ್ ಕಿಟ್‌ಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೨ (೭೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರಿ ಶಾಲೆಗಳಲ್ಲಿ ಕಲಿಯುತ್ತಿರುವ ಮಕ್ಕಳಿಗೆ ಇಲಾಖೆಯನ್ನು ಹೊರತು ಪಡಿಸಿ ಬೇರೆ ಯಾವ ಇಲಾಖೆಯವರು ಸ್ಕೂಲ್ ಕಿಟ್‌ಳನ್ನು ಒದಗಿಸುತ್ತಿದ್ದಾರೆ ; (ವಿವರ ನೀಡುವುದು)

(ಆ) ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳ ಸಂಖ್ಯೆ ಎಷ್ಟು ;

(ಇ) ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿರುವ ಕಾರ್ಮಿಕರ ಮಕ್ಕಳಿಗೆ ಕಟ್ಟಡ ಕಾರ್ಮಿಕರ ಕಲ್ಯಾಣ ನಿಧಿಯಿಂದ ನೀಡಲಾಗುವ ಸ್ಕೂಲ್ ಕಿಟ್‌ಗಳನ್ನು ಎಷ್ಟು ಮಕ್ಕಳಿಗೆ ವಿತರಿಸಲಾಗಿದೆ ; ಸದರಿ ಸ್ಕೂಲ್ ಕಿಟ್‌ನಲ್ಲಿರುವ ವಸ್ತುಗಳು ಯಾವುದು ; ಸದರಿ ವಸ್ತುಗಳ ಮೌಲ್ಯದೊಂದಿಗೆ ಶಾಲಾವಾರು, ಜಿಲ್ಲಾವಾರು ಮಾಹಿತಿ ನೀಡುವುದು ?

## ಅರಣ್ಯ ವಸ್ತುಗಳ ಮಾರಾಟ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೩ (೭೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಅರಣ್ಯ ವಸ್ತುಗಳು ಮತ್ತು ಅದರ ಉಪ ಉತ್ಪನ್ನಗಳನ್ನು ಮಾರಾಟ ಮಾಡಲು ಅರಣ್ಯ, ಇಲಾಖೆಯಿಂದ ನಿರಾಕ್ಷೇಪಣಾ ಪತ್ರದ ಅವಶ್ಯಕತೆ ಇದೆಯೇ ; ಈ ಕುರಿತು ಇರುವ ನಿಯಮಗಳೇನು ; (ವಿವರ ನೀಡುವುದು)

(ಆ) ರಾಜ್ಯಾದ್ಯಂತ ಹಲವಾರು ಇಂಟೀರಿಯರ್ಸ್ ಕಂಪನಿಗಳು ಹುಟ್ಟಿಕೊಂಡಿದ್ದು, ಮರಗಳ ಉತ್ಪನ್ನವಾದ ಪ್ಲೇವುಡ್ ಹಾಗೂ

ಇತರ ಮರದ ಉತ್ಪನ್ನಗಳನ್ನು ಮಾರಾಟ ಮಾಡುತ್ತಿದ್ದು ಇದರಿಂದ ಅರಣ್ಯದ ತೀವ್ರತರದ ನಾಶಕ್ಕೆ ಮುನ್ನುಡಿ ಎಂಬುದರ ಬಗ್ಗೆ ಸರ್ಕಾರದ ನಿಲುವೇನು ; (ವಿವರ ನೀಡುವುದು)

(ಇ) ಆಪ್ ಆಧಾರಿತ ಕಂಪನಿಯಾದ Homelane, HSR Sector 2, #1147, 1 ಬೆಂಗಳೂರು ಸೇರಿದಂತೆ ಇತರ ಇಂಟೀರಿಯರ್ಸ್ ಕಂಪನಿಗಳು ಅರಣ್ಯ ಇಲಾಖೆಯಿಂದ ಯಾವುದೇ ಅನುಮತಿ ಪಡೆಯದೆ ಮರದ ಉತ್ಪನ್ನ ಹಾಗೂ ಉಪ ಉತ್ಪನ್ನಗಳ ವ್ಯವಹಾರ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ವೇತನ ನಿಗದಿ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೪ (೭೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಎರಡು ವರ್ಷಗಳಲ್ಲಿ ಅಧ್ಯಾಪಕ ಹುದ್ದೆಯಿಂದ ಮುಖ್ಯೋಪಾದ್ಯಾಯ ಹುದ್ದೆಗೆ ಎಷ್ಟು ಮುಂಬಡ್ತಿಗಳನ್ನು ನೀಡಲಾಗಿದೆ; ಅದರಲ್ಲಿ ಎಷ್ಟು ಜನರಿಗೆ ಮುಂಬಡ್ತಿ ವೇತನ ನಿಗದಿ ಪಡಿಸಲಾಗಿದೆ; ಅನುದಾನಿತ ಹಾಗೂ ಸರ್ಕಾರಿ ಪ್ರೌಢ ಶಾಲೆಗಳಲ್ಲಿ ಮುಖ್ಯೋಪಾಧ್ಯಾಯರಾಗಿ ಬಡ್ತಿಪಡೆದ ಅಧ್ಯಾಪಕರ ಹೆಸರಿನೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಅಧ್ಯಾಪಕ ಹುದ್ದೆಯಿಂದ ಮುಖ್ಯೋಪಾಧ್ಯಾಯ ಹುದ್ದೆಗೆ ಬಡ್ತಿ ಪಡೆದ ಬಳಿಕ ಸಕಾಲದಲ್ಲಿ ಮುಂಬಡ್ತಿ ವೇತನ ಕೋರಿ ಮನವಿ ಸಲ್ಲಿಸಿದ ಬಳಿಕ ಕೇಂದ್ರ ಕಛೇರಿಗೆ ಪತ್ರ ತಲುಪುವ ಸಮಯದಲ್ಲಿ

ಮುಂಬಡ್ತಿ ಹೊಂದಿದ ಅಧ್ಯಾಪಕರು ನಿವೃತ್ತರಾಗಿರುತ್ತಾರೆ ಎಂಬ ಕಾರಣ ನೀಡಿ ಎಷ್ಟು ಅಧ್ಯಾಪಕರಿಗೆ ಮುಂಬಡ್ತಿ ವೇತನ ನಿಗದಿ ಪಡಿಸಿರುವುದಿಲ್ಲ ; (ವಿವರ ನೀಡುವುದು)

(ಇ) ದಕ್ಷಿಣ ಕನ್ನಡ ಜಿಲ್ಲೆಯ ಅನುದಾನಿತ ಪ್ರೌಢ ಶಾಲೆಯ ಅಧ್ಯಾಪಕರು, ಮುಖ್ಯೋಪಾಧ್ಯಾಯರು ನಿವೃತ್ತಿ ಹೊಂದುವ ೨ ತಿಂಗಳ ಮುಂಚಿತವಾಗಿ ಉಪ ನಿರ್ದೇಶಕರ ಕಛೇರಿ ಮಂಗಳೂರಿಗೆ ಬಡ್ತಿ ಹೊಂದಿದ ಕಾರಣಕ್ಕೆ ಮುಂಬಡ್ತಿ ವೇತನ ನಿಗದಿಪಡಿಸಲು ಎಲ್ಲಾ ದಾಖಲೆಗಳನ್ನು ಸಲ್ಲಿಸಿ ಮನವಿ ಸಲ್ಲಿಸಿದ್ದು, ಉಪ ನಿರ್ದೇಶಕರು, ಮಂಗಳೂರು ಇವರ ನಿರ್ಲಕ್ಷ್ಯದಿಂದ ಸದರಿಯವರು ನಿವೃತ್ತಿ ಹೊಂದಿದ ಬಳಿಕ ಅರ್ಜಿಯು ಆಯುಕ್ತರ ಕಛೇರಿಗೆ ತಲುಪಿದೆ ಎಂಬ ಕಾರಣಕ್ಕೆ ಮುಂಬಡ್ತಿ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಕುರಿತು ಸರ್ಕಾರದ ನಿಲುವೇನು ? (ವಿವರ ನೀಡುವುದು)

## ರಾಜ್ಯದಲ್ಲಿ ಮತಾಂತರಗೊಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ನೀಡಲಾಗುತ್ತಿರುವ ಸೌಲಭ್ಯಗಳ ಕುರಿತು

**ಶ್ರೀ ಎನ್.ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೯೫ (೭೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮತಾಂತರಗೊಂಡ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರಿಗೆ ಮತಾಂತರಗೊಂಡ ಬಳಿಕವೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಸೌಲಭ್ಯಗಳನ್ನು ನೀಡಲಾಗುತ್ತಿದೆಯೇ ;

(ಆ) ರಾಜ್ಯದಲ್ಲಿ ಮತಾಂತರ ನಿಷೇಧ ಕಾನೂನು ಜಾರಿಗೆ ತರುವ ಪ್ರಸ್ತಾಪ ಸರ್ಕಾರದ ಮುಂದಿದೆಯೇ ; ಯಾವಾಗ ಮತಾಂತರ ನಿಷೇಧ ಕಾನೂನು ಜಾರಿಗೆ ತರಲಾಗುವುದು ;

(ಇ) ರಾಜ್ಯದಲ್ಲಿ ಕಳೆದ ೨ ವರ್ಷಗಳಲ್ಲಿ ಮತಾಂತರಗೊಂಡವರ ಸಂಖ್ಯೆ ಎಷ್ಟು; ಮತಾಂತರಗೊಂಡವರು ಯಾವ ಧರ್ಮದಿಂದ ಯಾವ ಧರ್ಮಕ್ಕೆ ಮತಾಂತರಗೊಂಡಿರುತ್ತಾರೆ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಗೆ ನಿಗದಿಪಡಿಸಿರುವ ಅನುದಾನ ಕುರಿತು

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೬ (೭೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಅಭಿವೃದ್ಧಿ ನಿಗಮಗಳ ಸಂಖ್ಯೆ ಎಷ್ಟು ; ಹಾಗೂ ಸದರಿ ನಿಗಮದಲ್ಲಿರುವ ಯೋಜನೆಗಳಾವುವು ; (ಮಾಹಿತಿ ನೀಡುವುದು)

(ಆ) ೨೦೨೬–೨೭ನೇ ಸಾಲಿನ ಆಯ–ವ್ಯಯದಲ್ಲಿ ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮಗಳಿಗೆ ನಿಗದಿಪಡಿಸಿರುವ ಅನುದಾನವೆಷ್ಟು ; ಇದರಲ್ಲಿ ಸದರಿ ನಿಗಮಗಳಿಗೆ ಬಿಡುಗಡೆಯಾಗಿರುವ ಅನುದಾನವೆಷ್ಟು ;

(ಇ) ಸದರಿ ಅಭಿವೃದ್ಧಿ ನಿಗಮಗಳಲ್ಲಿ ಯಾವ ಯಾವ ಯೋಜನೆಗಳಿಗೆ ಎಷ್ಟು ಅನುದಾನ ಹಂಚಿಕೆಯಾಗಿದೆ ; ಸದರಿ ಯೋಜನೆಗಳಿಗೆ ಖರ್ಚಾಗಿರುವ ಮೊತ್ತವೆಷ್ಟು ? (ನಿಗಮವಾರು ಮಾಹಿತಿ ನೀಡುವುದು)

## ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ನಿಗದಿಪಡಿಸಿರುವ ಅನುದಾನ ಕುರಿತು

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೭ (೭೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೬–೨೭ನೇ ಸಾಲಿನಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಗೆ ಆಯವ್ಯಯದಲ್ಲಿ ಹಂಚಿಕೆ ಮಾಡಿರುವ ಅನುದಾನವೆಷ್ಟು ; (ಮಾಹಿತಿ ನೀಡುವುದು)

(ಆ) ಸದರಿ ಇಲಾಖೆಯಿಂದ ಸಾಂಸ್ಕೃತಿಕ ಮತ್ತು ಅಭಿವೃದ್ಧಿ ಕಾರ್ಯಕ್ರಮಗಳಿಗೆ ಪ್ರತಿ ವರ್ಷ ನಿಗದಿಪಡಿಸಿರುವ ಅನುದಾನವೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಕಾರ್ಯಕ್ರಮಗಳಿಗೆ ಖರ್ಚಾಗಿರುವ ಮೊತ್ತವೆಷ್ಟು ; ಕಳೆದ ಮೂರು ವರ್ಷಗಳಿಂದ ಬಿಡುಗಡೆಯಾಗಿರುವ ಅನುದಾನ ಹಾಗೂ ಬಾಕಿ ಉಳಿದಿರುವ ಅನುದಾನವೆಷ್ಟು ? (ಮಾಹಿತಿ ನೀಡುವುದು)

## ಮೈಸೂರಿನ ಪಾರಂಪರಿಕ ಕಟ್ಟಡಗಳ ದುರಸ್ತಿ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೮ (೭೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರಿನ ಪಾರಂಪರಿಕ ಕಟ್ಟಡಗಳನ್ನು ನವೀಕರಣಗೊಳಿಸದೇ ಇರುವ ವಿಷಯ ಸರ್ಕಾರದ ಗಮನಕ್ಕಿದೆಯೇ ; ಇದ್ದರೆ, ಮಾಹಿತಿ ನೀಡುವುದು ;

(ಆ) ಕಳೆದ ಮೂರು ವರ್ಷಗಳಿಂದ ಸದರಿ ಪಾರಂಪರಿಕ ಕಟ್ಟಡಗಳಿಗೆ ನವೀಕರಣ/ದುರಸ್ತಿಗೆ ಬಿಡುಗಡೆಯಾಗಿರುವ ಅನುದಾನ ಹಾಗೂ ವೆಚ್ಚವಾಗಿರುವ ಅನುದಾನವೆಷ್ಟು ; ನವೀಕರಣಗೊಳಿಸದೇ ದುರಸ್ತಿಯಲ್ಲಿ ಇರುವ ಪಾರಂಪರಿಕ ಕಟ್ಟಡಗಳ ಸಂಖ್ಯೆ ಎಷ್ಟು ; (ಮಾಹಿತಿ ನೀಡುವುದು)

(ಇ) ಮೈಸೂರಿನ ಪಾರಂಪರಿಕ ಕಟ್ಟಡಗಳನ್ನು ನವೀಕರಿಸದಿರಲು ಕಾರಣಗಳೇನು ; ಇದಕ್ಕೆ ಬಿಡುಗಡೆ ಮಾಡಿರುವ ಅನುದಾನವೆಷ್ಟು ; ದಸರಾ ಹತ್ತಿರದಲ್ಲಿರುವ ಹಿನ್ನೆಲೆಯಲ್ಲಿ ಅತೀ ಶೀಘ್ರವಾಗಿ ಮೈಸೂರು ಪಾರಂಪರಿಕ ಕಟ್ಟಡಗಳನ್ನು ನವೀಕರಣಗೊಳಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಸಂಪೂರ್ಣ ಮಾಹಿತಿ ನೀಡುವುದು)

## ದಸರಾ ಸಾಂಸ್ಕೃತಿಕ ಉಪ ಸಮಿತಿ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೯೯ (೭೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ದಸರಾ ಸಾಂಸ್ಕೃತಿಕ ಉಪ ಸಮಿತಿಯು ಇತ್ತೀಚಿಗೆ ಅರಮನೆ ಮತ್ತು ಉಳಿದ ವೇದಿಕೆ ಎಂದು ಎರಡೆರಡು ಸಭೆ ನಡೆಸುತ್ತಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಬಂದಿದ್ದಲ್ಲಿ, ಸದರಿ ಉಪಸಮಿತಿಯನ್ನು ಮಧ್ಯವರ್ತಿ/ಏಜೆಂಟರ ಮುಖಾಂತರ ಕಾರ್ಯಕ್ರಮ ನಿಗದಿಪಡಿಸಿರುವುದು ನಿಜವೇ ; ಇದರಿಂದ ಹಣ ದುರುಪಯೋಗ ಆಗುವುದಿಲ್ಲವೇ ; (ಮಾಹಿತಿ ನೀಡುವುದು)

(ಇ) ಯಾವ ಯಾವ ಇಲಾಖೆಗಳು ದಸರಾ ಸಾಂಸ್ಕೃತಿಕ ಉಪ ಸಮಿತಿಯಲ್ಲಿ ಇರುತ್ತವೆ ; ಸದರಿ ಉಪ ಸಮಿತಿಯನ್ನು ಸಂಪೂರ್ಣ ನಿರ್ವಹಣೆ ವಹಿಸುತ್ತಿರುವ ಇಲಾಖೆ ಹಾಗೂ ಅಧಿಕಾರಗಳ ಮಾಹಿತಿ ನೀಡುವುದು ;

(ಈ) ಸಂಸ್ಕೃತಿ ಇಲಾಖೆ ಮುಖಾಂತರ ಸದರಿ ಕಾರ್ಯಕ್ರಮವನ್ನು ಸಂಪೂರ್ಣವಾಗಿ ಆಯೋಜಿಸುವ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ? (ಮಾಹಿತಿ ನೀಡುವುದು)

## ಕರ್ನಾಟಕ ಪಬ್ಲಿಕ್ ಶಾಲೆಗಳ ಮಾರ್ಗಸೂಚಿಗಳ ಬಗ್ಗೆ

**ಶ್ರೀ ರಘು ಆರ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೦ (೭೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ಪ್ರಾರಂಭಿಸಲು ಸರ್ಕಾರ ಅಳವಡಿಸಿಕೊಂಡಿರುವ ಮಾನದಂಡಗಳು/ಮಾರ್ಗಸೂಚಿಗಳೇನು ; (ಮಾಹಿತಿ ನೀಡುವುದು)

(ಆ) ಇದುವರೆಗೂ ಎಷ್ಟು ಕರ್ನಾಟಕ ಪಬ್ಲಿಕ್ ಶಾಲೆಗಳನ್ನು ತೆರೆಯಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಸದರಿ ಪಬ್ಲಿಕ್ ಶಾಲೆಗಳಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲಾಗಿದೆಯೇ ? (ಜಿಲ್ಲಾವಾರು ಮಾಹಿತಿ ನೀಡುವುದು)

## ನ್ಯಾಯಾಂಗ ಇಲಾಖೆಯಲ್ಲಿನ ನೌಕರರಿಗೆ ನೀಡುವ ವಸತಿ ಸೌಲಭ್ಯದ ಬಗ್ಗೆ

**ಶ್ರೀ ಶಿವಕುಮಾರ್.ಕೆ (ನಾಮನಿರ್ದೇಶನ ಹೊಂದಿದವರು) :–**

೧೦೧ (೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು ಜಿಲ್ಲೆಯಲ್ಲಿ ನ್ಯಾಯಾಂಗ ಇಲಾಖೆಯ ನೌಕರರಿಗೆ ವಸತಿ ಸೌಲಭ್ಯ ಕಲ್ಪಿಸಲು ತೆಗೆದುಕೊಂಡಿರುವ ಕ್ರಮಗಳೇನು ;

(ಆ) ಮೈಸೂರಿನ ಕೆರಗಳ್ಳಿ ಬಡಾವಣೆಯಲ್ಲಿ (ಲಿಂಗಾಮ್ಮದಿ ಶಾಲೆಯ ಪಕ್ಕ) ನ್ಯಾಯಾಂಗ ಇಲಾಖೆಯ ನೌಕರರಿಗೆ ವಸತಿ ಸಮುಚ್ಚಯ ಕಲ್ಪಿಸಲು ಮಂಜೂರಾತಿಯನ್ನು ಯಾವಾಗ ನೀಡಲಾಯಿತು ; ಹಾಗೂ ಈ ಕಾಮಗಾರಿ ಯಾವಾಗ ಪೂರ್ಣಗೊಂಡಿದೆ ; (ಮಾಹಿತಿ ಒದಗಿಸುವುದು)

(ಇ) ನ್ಯಾಯಾಂಗ ಬಡಾವಣೆಯ ನೌಕರರಿಗೆ ವಸತಿ ಮಂಜೂರಾತಿ ನೀಡಲಾಗಿದೆಯೇ ; ಕಳೆದ ೭–೮ ವರ್ಷಗಳಿಂದ ಮಂಜೂರಾತಿ ನೀಡದೆ ಇರಲು ಕಾರಣಗಳೇನು ;

(ಈ) ಸದರಿ ನೌಕರರಿಗೆ ಯಾವ ಕಾಲಮಿತಿಯೊಳಗೆ ಸಮುಚ್ಚಯಗಳನ್ನು ವಿತರಿಸಲಾಗುವುದು ?

## ರಾಜ್ಯದ ವಿಶ್ವವಿದ್ಯಾನಿಲಯಗಳಲ್ಲಿನ ಪ್ರಾಧ್ಯಾಪಕರ ನೇಮಕಾತಿಯ ಬಗ್ಗೆ

**ಶ್ರೀ ಶಿವಕುಮಾರ್.ಕೆ (ನಾಮನಿರ್ದೇಶನ ಹೊಂದಿದವರು) :–**

೧೦೨ (೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರವು ವಿವಿಧ ಇಲಾಖೆಗಳಲ್ಲಿ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡುವ ಪ್ರಕ್ರಿಯೆಯನ್ನು ಪ್ರಾರಂಭಿಸಿದೆಯೇ ;

(ಆ) ರಾಜ್ಯದಲ್ಲಿ ಎಷ್ಟು ವಿಶ್ವವಿದ್ಯಾನಿಲಯುಗಳಿವೆ ; ಪ್ರಸ್ತುತ ಉಪನ್ಯಾಸಕರುಗಳ ಸಂಖ್ಯೆ ಎಷ್ಟು ; ಖಾಲಿ ಇರುವ ಹುದ್ದೆಗಳ

ಸಂಖ್ಯೆ ಎಷ್ಟು ; (ಸಹಾಯಕ ಪ್ರಾಧ್ಯಾಪಕ, ಸಹಪ್ರಾಧ್ಯಾಪಕ ಮತ್ತು ಪ್ರಾಧ್ಯಾಪಕರ ವಿವರಗಳನ್ನು ಒದಗಿಸುವುದು) ;

(ಇ) ಇವುಗಳಲ್ಲಿ ಮುಂಬರುವ ಆರ್ಥಿಕ ವರ್ಷದಲ್ಲಿ ಎಷ್ಟು ಹುದ್ದೆಗಳನ್ನು ಭರ್ತಿಮಾಡಲಾಗುವುದು ಹಾಗೂ ಈ ಪ್ರಕ್ರಿಯೆಯನ್ನು ಯಾವಾಗ ಪ್ರಾರಂಭಿಸಲಾಗುವುದು ;

(ಈ) ಕುಲಸಚಿವರ ಉದ್ಯೋಗಕ್ಕೆ ಕೆ.ಎ.ಎ.ಸ್. ಅಧಿಕಾರಿಗಳನ್ನು ನೇಮಿಸುವ ಪ್ರಕ್ರಿಯೆ ಯಾವಾಗ ಪ್ರಾರಂಭವಾಯಿತು ; ಇದನ್ನು ತಿದ್ದುಪಡಿಗೊಳಿಸಿ ಪ್ರಾಧ್ಯಾಪಕರನ್ನು ಆಡಳಿತಾತ್ಮಕ ಹುದ್ದೆಗಳಿಗೆ ನೇಮಿಸಲು ಕ್ರಮಕೈಗೊಳ್ಳಲಾಗುವುದೇ ;

(ಉ) ವಿಶ್ವವಿದ್ಯಾನಿಲಯಗಳಲ್ಲಿ ಯುವ ಪೀಳಿಗೆಗೆ ಉತ್ತೇಜನ ನೀಡಲು ಸಂಶೋಧನೆ ಕಾರ್ಯಕ್ಕೆ ಉಪಯೋಗಿಸಿಕೊಳ್ಳಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; ಇದಕ್ಕೆ ವಿಶೇಷ ಕಾರ್ಯಕ್ರಮಗಳನ್ನು ರೂಪಿಸುವ ಪ್ರಸ್ತಾವನೆಯು ಸರ್ಕಾರದ ಮುಂದಿದೆಯೇ ?

## ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಬಗ್ಗೆ

**ಶ್ರೀ ಶಿವಕುಮಾರ್.ಕೆ (ನಾಮನಿರ್ದೇಶನ ಹೊಂದಿದವರು) :–**

೧೦೩ (೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯು ಯಾವ ವರ್ಷದಲ್ಲಿ ಸ್ಥಾಪನೆಯಾಯಿತು ಹಾಗೂ ಪ್ರಸ್ತುತ ಈ ಮಂಡಳಿಯ ಮೂಲಕ ರಾಜ್ಯದಲ್ಲಿ ಜಾರಿಗೊಳಿಸಲಾಗುತ್ತಿರುವ ಪರಿಸರ ಮತ್ತು ಮಾಲಿನ್ಯ ನಿಯಂತ್ರಣ ಕಾಯ್ದೆ ಹಾಗೂ ನಿಯಮಗಳು ಯಾವುವು ; (ವಿವರ ನೀಡುವುದು)

(ಆ) ಈ ಮಂಡಳಿಯ ಕಾರ್ಯವ್ಯಾಪ್ತಿಗೆ ಬರುವ ರಾಜ್ಯದ ಒಟ್ಟು ಕೈಗಾರಿಕೆಗಳು, ಸ್ಥಳೀಯ ಸಂಸ್ಥೆಗಳು, ವಾಣಿಜ್ಯ ಮತ್ತು ಮೂಲಭೂತ ಸೌಕರ್ಯ ಯೋಜನೆಗಳು, ಗಣಿಗಾರಿಕೆ, ಜಲ್ಲಿ ಕ್ರಷರ್ ಹಾಗೂ ವಸತಿ ಸಮುಚ್ಚಯಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಮಂಡಳಿಯ ಸುಗಮ ಕಾರ್ಯನಿರ್ವಹಣೆಗೆ ಇರುವ ಜಿಲ್ಲಾ ಮತ್ತು ಪ್ರಾಂತೀಯ ಕಛೇರಿಗಳ ಸಂಖ್ಯೆ ಎಷ್ಟು ; ಒಂದೇ ಜಿಲ್ಲೆಯಲ್ಲಿ ಒಂದಕ್ಕಿಂತ ಹೆಚ್ಚು ಕಛೇರಿಗಳನ್ನು ತೆರೆಯಲು ಅನುಸರಿಸಲಾದ ಮಾನದಂಡಗಳೇನು ; ಹಾಗೂ ಬೆಂಗಳೂರು ಹೊರತುಪಡಿಸಿ ಕೆಲಸದ ಒತ್ತಡ ಹೆಚ್ಚಿರುವ ಇತರೆ ಜಿಲ್ಲೆಗಳಲ್ಲಿ ಹೊಸ ಕಛೇರಿಗಳನ್ನು ತೆರೆಯುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಈ) ಮಂಡಳಿಯಲ್ಲಿ ಮಂಜೂರಾಗಿರುವ ವೃಂದವಾರು ಹುದ್ದೆಗಳ ಸಂಖ್ಯೆ ಎಷ್ಟು ; ಮತ್ತು ಇವುಗಳಲ್ಲಿ ಪ್ರಸ್ತುತ ಖಾಲಿ ಇರುವ ಹುದ್ದೆಗಳೆಷ್ಟು ; ಈ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಉ) ಮಂಡಳಿಯಲ್ಲಿ ಹೊರಗುತ್ತಿಗೆ (Outsourcing) ಮತ್ತು ಗುತ್ತಿಗೆ ಆಧಾರದ ಮೇಲೆ ಸಿಬ್ಬಂದಿಗಳನ್ನು ಯಾವ ವರ್ಷದಿಂದ ನೇಮಿಸಿಕೊಳ್ಳಲಾಗುತ್ತಿದೆ ಹಾಗೂ ಇದಕ್ಕೆ ಸರ್ಕಾರದ ಅನುಮೋದನೆ ಪಡೆಯಲಾಗಿದೆಯೇ ; ಈ ನೇಮಕಾತಿಗಳಲ್ಲಿ ನಿಗದಿತ ತಾಂತ್ರಿಕ/ ಶೈಕ್ಷಣಿಕ ವಿದ್ಯಾರ್ಹತೆಯನ್ನು ಪರಿಗಣಿಸಲಾಗಿದೆಯೇ ;

(ಊ) ಮಂಡಳಿಯಲ್ಲಿ ದೀರ್ಘಕಾಲದಿಂದ ಸೇವೆ ಸಲ್ಲಿಸುತ್ತಿರುವ ಗುತ್ತಿಗೆ/ ಹೊರಗುತ್ತಿಗೆ ಸಿಬ್ಬಂದಿಗಳ ಸೇವಾವಧಿಯನ್ನು ಪರಿಗಣಿಸಿ, ಅವರನ್ನು ಖಾಯಂಗೊಳಿಸುವ ಅಥವಾ ಅವರಿಗೆ ಸೇವಾ ಭದ್ರತೆ ನೀಡುವ

ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ; ಇದ್ದಲ್ಲಿ, ಅದರ ಸಂಪೂರ್ಣ ವಿವರ ನೀಡುವುದು ?

## ಉನ್ನತ ಶಿಕ್ಷಣಕ್ಕೆ ಮೀಸಲಿರಿಸಿದ ಅನುದಾನದ ಬಗ್ಗೆ

**ಶ್ರೀ ಟಿ.ಎ.ಶರವಣ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೪ (೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ಉನ್ನತ ಶಿಕ್ಷಣ ಸಂಸ್ಥೆಗಳಿವೆ; ಅವುಗಳಲ್ಲಿ ಎಷ್ಟು ಕಾಲೇಜುಗಳು NAAC & NIKF ಮಾನ್ಯತೆ ಪಡೆದುಕೊಂಡಿವೆ ; (Brand rating ವಾರು ಮಾಹಿತಿ ನೀಡುವುದು) ;

(ಆ) ಕಳೆದ ೩ ವರ್ಷಗಳಲ್ಲಿ ಶಿಕ್ಷಣಕ್ಕೆ ಮೀಸಲಿರಿಸಿದ ಅನುದಾನದ ವಿವರ ನೀಡುವುದು ; ಸರ್ಕಾರವು ಉನ್ನತ ಶಿಕ್ಷಣಕ್ಕಾಗಿ ಮಾನದಂಡಗಳಿಗಿಂತ ಕಡಿಮೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ , ಕಾರಣಗಳೇನು ?

(ಇ) ಉನ್ನತ ಶಿಕ್ಷಣಕ್ಕೆ ಪ್ರತ್ಯೇಕ ಗುಣಮಟ್ಟ ನಿಧಿ ರಚಿಸಲಾಗಿದೆಯೆ ; ಆ ರಚಿಸಿದ್ದಲ್ಲಿ, ಕಳೆದ ೩ ವರ್ಷಗಳಲ್ಲಿ ಮೀಸಲಿರಿಸಿದ ಅನುದಾನ ಎಷ್ಟು ಹಾಗೂ ಖರ್ಚು ಮಾಡಲಾಗಿರುವ ಹಣ ಎಷ್ಟು ;

(ಈ) ರಚನೆ ಮಾಡದಿದ್ದಲ್ಲಿ, ಕಾರಣಗಳೇನು, ಪ್ರತ್ಯೇಕ ಗುಣಮಟ್ಟ ನಿಧಿ ರಚಿಸಲು ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಯಾವ ಕಾಲಮಿತಿಯಲ್ಲಿ ಪ್ರತ್ಯೇಕ ಗುಣಮಟ್ಟ ನಿಧಿ ರಚಿಸಲಾಗುವುದು ?

# ಹಾಸ್ಟೆಲ್‌ಗಳಲ್ಲಿ ಸ್ವಯಂಚಾಲಿತ ಚಪಾತಿ ತಯಾರಿಕಾ ಯಂತ್ರಗಳ ಖರೀದಿ ಬಗ್ಗೆ

**ಶ್ರೀ ಟಿ.ಎ. ಶರವಣ (ನಾಮನಿರ್ದೇಶನ ಹೊಂದಿದವರು) :–**

೧೦೫ (೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆ ವ್ಯಾಪ್ತಿಯಲ್ಲಿನ ಹಾಸ್ಟೆಲ್‌ಳಿಗೆ ಕಿಯೋನಿಕ್ಸ್ ಸಂಸ್ಥೆಯ ಮೂಲಕ ೫೫೦ ಅರೆ ಸ್ವಯಂಚಾಲಿತ ಚಪಾತಿ ತಯಾರಿಸುವ ಯಂತ್ರಗಳನ್ನು ಖರೀದಿಸುವಲ್ಲಿ ನಡೆದ ಅಕ್ರಮದಿಂದಾಗಿ ಕಿಕಿಯೋನಿಕ್ಸ್ ಸಂಸ್ಥೆಗೆ ಸುಮಾರು ಅನಗತ್ಯ ಲಾಭ ಮಾಡಿಕೊಟ್ಟಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಚಪಾತಿ ತಯಾರಿಸುವ ಯಂತ್ರಗಳು ಮುಕ್ತ ಮಾರುಕಟ್ಟೆಯಲ್ಲಿ ಹಾಗೂ ಕೇಂದ್ರ ಸರ್ಕಾರದ ಇ–ಮಾರುಕಟ್ಟೆ (GeM) ಪೋರ್ಟಲ್‌ನಲ್ಲಿ ಸುಲಭವಾಗಿ ಲಭ್ಯವಿದ್ದರೂ ಸಹ, ಇಲಾಖೆಯು ಮುಕ್ತ ಟೆಂಡರ್ ಮೂಲಕ ಸ್ಪರ್ಧಾತ್ಮಕ ದರಗಳನ್ನು ಪಡೆಯುವ ಪ್ರಯತ್ನ ಮಾಡದೆ, ಯಾವುದೇ ಮಾರುಕಟ್ಟೆ ಸಮೀಕ್ಷೆ ನಡೆಸದೇ ನೇರವಾಗಿ ಕಿಯೋನಿಕ್ಸ್ ಸಂಸ್ಥೆಗೆ ಕೆಟಿಪಿಪಿ ಕಾಯ್ದೆಯ 4 (ಜಿ) ಅಡಿಯಲ್ಲಿ ವಿನಾಯಿತಿ ನೀಡಿ ಏಕಪಕ್ಷೀಯವಾಗಿ ಖರೀದಿಸಲು ಇದ್ದ ಬಲವಾದ ಕಾರಣಗಳೇನು ;

(ಇ) ಇಲಾಖೆಯ ಆಂತರಿಕ ಪತ್ರವ್ಯವಹಾರಗಳ ಪ್ರಕಾರ ಪ್ರತಿಯಂತ್ರದ ನೈಜ ಮಾರುಕಟ್ಟೆ ಬೆಲೆಗಿಂತ ದುಪ್ಪಟ್ಟು ದರವನ್ನು ನಿಗದಿಪಡಿಸಿ, ಭಾರಿ ಅನಗತ್ಯ ಲಾಭ ಮಾಡಿಕೊಟ್ಟಿರುವುದು ನಿಜವೇ ;

(ಈ) ಇಲಾಖಾ ಅಧಿಕಾರಿಗಳ ಜಂಟಿ ಭೌತಿಕ ಪರಿಶೀಲನೆಯಲ್ಲಿ ಕೇವಲ ಶೇ.೮ ರಷ್ಟು ಹಾಸ್ಟೆಲ್‌ಗಳು ಮಾತ್ರ ಈ ಯಂತ್ರಗಳನ್ನು ಬಳಸುತ್ತಿದ್ದು, ಇನ್ನುಳಿದ ಕಡೆಗಳಲ್ಲಿ ನಿಷ್ಪ್ರಯೋಜಕವಾಗಿ ಬಿದ್ದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಖರೀದಿಸುವ ಮುನ್ನ ಹಾಸ್ಟೆಲ್ಗಳ ನೈಜ ಅಗತ್ಯತೆ ಮತ್ತು ಬೇಡಿಕೆ ಪತ್ರಗಳ ಮೌಲ್ಯ ಮಾಪನವನ್ನು ಏಕೆ ಮಾಡಲಾಗಿಲ್ಲ ;

(ಉ) ಈ ಭಾರಿ ಆರ್ಥಿಕ ನಷ್ಟ ಮತ್ತು ಅಕ್ರಮಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಶಿಸ್ತು ಕ್ರಮ ಅಥವಾ ಉನ್ನತಮಟ್ಟದ ತನಿಖೆ ನಡೆಸಲು ಕ್ರಮ ಕೈಗೊಳ್ಳಲಾಗಿದೆಯೇ ; ಉಪಯೋಗವಿಲ್ಲದೇ ಬಿದ್ದಿರುವ ಯಂತ್ರಗಳನ್ನು ಅರ್ಹ ಹಾಸ್ಟೆಲ್‌ಗಳಿಗೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಬೆಂಗಳೂರಿನಲ್ಲಿ ಕೃತಕ ಬುದ್ಧಿಮತ್ತೆ (AI) ವಿಶ್ವವಿದ್ಯಾಲಯ ಸ್ಥಾಪನೆ ಕುರಿತು

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೬ (೫೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರಿನಲ್ಲಿ ಭಾರತದ ಮೊದಲ ಸರ್ಕಾರಿ ಪ್ರಾಯೋಜಿತ ಕೃತಕ ಬುದ್ಧಿಮತ್ತೆ (Artificial Intelligence – AI) ವಿಶ್ವವಿದ್ಯಾಲಯವನ್ನು ಪ್ರಾರಂಭಿಸಲು ಸರ್ಕಾರ ನಿರ್ಧರಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಯೋಜನೆಯ ಸದ್ಯದ ಪ್ರಗತಿಯ ವಿವರ ನೀಡುವುದು ;

(ಆ) ಕರ್ನಾಟಕವನ್ನು 'ಎಐ–ನೇಟಿವ್' (AI-Native) ಈ ರಾಜ್ಯವನ್ನಾಗಿ ರೂಪಿಸಲು, ಶಿಕ್ಷಣ ಸಂಸ್ಥೆಗಳು, ಉದ್ದಿಮೆ ಹಾಗೂ ಸರ್ಕಾರದ ನಡುವೆ ಸಹಯೋಗವನ್ನು ಬೆಳೆಸಲು ಮತ್ತು ಸುಧಾರಿತ ಸಂಶೋಧನೆಯನ್ನು ಉತ್ತೇಜಿಸಲು ಈ ವಿಶ್ವವಿದ್ಯಾಲಯವು ಯಾವ ರೀತಿಯ ಕಾರ್ಯಯೋಜನೆಗಳನ್ನು ಒಳಗೊಂಡಿದೆ ;

(ಇ) ಸಾರ್ವಜನಿಕ ಸೇವೆಗಳ ವಿತರಣೆಯಲ್ಲಿ ಎಐ ತಂತ್ರಜ್ಞಾನವನ್ನು ಸಂಯೋಜಿಸುವ ಮೂಲಕ ಆಡಳಿತ ಯಂತ್ರವನ್ನು ಜನಸ್ನೇಹಿಯಾಗಿಸಲು ಹಾಗೂ ಕೃಷಿ, ಆರೋಗ್ಯ ಮತ್ತು ಸಣ್ಣ ಉದ್ಯಮಗಳ ವಲಯದಲ್ಲಿ ಕೃತಕ ಬುದ್ಧಿಮತ್ತೆ ಉಪಕರಣಗಳನ್ನು ಬಳಸಿಕೊಳ್ಳಲು ಸರ್ಕಾರ ರೂಪಿಸಿರುವ ನೀತಿಗಳೇನು ;

(ಈ) ಜಾಗತಿಕ ಮಟ್ಟದ ಈ ಮಹಾತ್ವಾಕಾಂಕ್ಷಿ ವಿಶ್ವವಿದ್ಯಾಲಯದ ಸ್ಥಾಪನೆಗೆ ಗೂಗಲ್ (Google) ನಂತಹ ಪ್ರಮುಖ ತಂತ್ರಜ್ಞಾನ ಸಂಸ್ಥೆಗಳೊಂದಿಗೆ ಪಾಲುದಾರಿಕೆ ಅಥವಾ ತಾಂತ್ರಿಕ ಸಹಯೋಗವನ್ನು ಹೊಂದಲು ಒಪ್ಪಂದ ಮಾಡಿಕೊಳ್ಳಲಾಗಿದೆಯೇ; ಈ ವಿಶ್ವವಿದ್ಯಾಲಯದ ಸ್ಥಾಪನೆಗಾಗಿ ಸರ್ಕಾರ ನಿಗದಿಪಡಿಸಿರುವ ಕಾಲಮಿತಿ ಮತ್ತು ಅಂದಾಜು ವೆಚ್ಚ ಎಷ್ಟು ?

## ಹಿಂದುಳಿದ ವರ್ಗಗಳ ಆಯೋಗದ (ಮಧುಸೂದನ್ ನಾಯಕ್ ವರದಿ) ವರದಿ ಜಾರಿ ಕುರಿತು

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೭ (ಶಳ) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಸಿದ್ಧಪಡಿಸಿ ಸರ್ಕಾರಕ್ಕೆ ಸಲ್ಲಿಸಿರುವ ಸಾಮಾಜಿಕ, ಶೈಕ್ಷಣಿಕ ಮತ್ತು ಆರ್ಥಿಕ ಸಮೀಕ್ಷೆ (ಮಧುಸೂದನ್ ನಾಯಕ್ ವರದಿ) ವರದಿಯನ್ನು ಸಾರ್ವಜನಿಕರ ಮಾಹಿತಿಗಾಗಿ ಹಾಗೂ ಸದನದ ಮುಂದೆ ಮಂಡಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಆ) ಈ ಸಮೀಕ್ಷಾ ವರದಿಯನ್ನು ಸಂಪುಟ ಸಭೆಯಲ್ಲಿ ಅಂಗೀಕರಿಸಿ, ಸಂಪೂರ್ಣ ವರದಿಯನ್ನು ಸಾರ್ವಜನಿಕವಾಗಿ ಬಹಿರಂಗಪಡಿಸಲು ಸರ್ಕಾರಕ್ಕಿರುವ ತೊಡಕುಗಳೇನು ; (ವಿವರ ನೀಡುವುದು)

(ಇ) ಈ ಸಮೀಕ್ಷೆಯ ಶಿಫಾರಸ್ಸುಗಳ ಆಧಾರದ ಮೇಲೆ ರಾಜ್ಯದಲ್ಲಿರುವ ಹಿಂದುಳಿದ, ತುಳಿತಕ್ಕೊಳಗಾದ ಮತ್ತು ಶೋಷಿತ ಸಮುದಾಯಗಳಿಗೆ ಶಿಕ್ಷಣ, ಉದ್ಯೋಗ, ಸಾಮಾಜಿಕ ಮತ್ತು ಆರ್ಥಿಕ ಕ್ಷೇತ್ರಗಳಲ್ಲಿ ಸೂಕ್ತ ಅವಕಾಶ ಹಾಗೂ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ರೂಪಿಸಿರುವ ನಿರ್ದಿಷ್ಟ ಯೋಜನೆಗಳೇನು ;

(ಈ) ಸದರಿ ವರದಿಯ ಶಿಫಾರಸ್ಸುಗಳನ್ನು ಜಾರಿಗೆ ತರಲು ಸರ್ಕಾರ ನಿಗದಿಪಡಿಸಿಕೊಂಡಿರುವ ಕಾಲಮಿತಿ ಏನು ? (ಸಂಪೂರ್ಣ ವಿವರ ನೀಡುವುದು)

## ಗೃಹಲಕ್ಷ್ಮಿ ಯೋಜನೆಯ ದುರ್ಬಳಕೆ ಕುರಿತು

**ಶ್ರೀ ಶಿವಣ್ಣ ಬಿ.ಎಸ್. (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮ (೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರದ ಪಂಚ ಗ್ಯಾರಂಟಿಗಳಲ್ಲಿ ಒಂದಾದ 'ಗೃಹಲಕ್ಷ್ಮಿ' ಯೋಜನೆಯ ಫಲಾನುಭವಿಗಳ ಪಟ್ಟಿಯಲ್ಲಿ ವ್ಯಾಪಕ

ಲೋಪದೋಷಗಳು ಕಂಡುಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬೆಂಗಳೂರು ದಕ್ಷಿಣ (ರಾಮನಗರ ಜಿಲ್ಲೆ) ವ್ಯಾಪ್ತಿಯೊಂದರಲ್ಲೇ ಬರೋಬ್ಬರಿ ೧೨,೭೯೯ ಮಹಿಳೆಯರನ್ನು ನಿಯಮಬಾಹಿರವಾಗಿ ಯೋಜನೆಯಿಂದ ಕೈಬಿಟ್ಟಿರುವುದು ನಿಜವೇ ;

(ಆ) ಸದರಿ ಯೋಜನೆಯಡಿ ಮೃತಪಟ್ಟಿರುವ ೬,೬೨೪ ಮಹಿಳೆಯರ ಖಾತೆಗಳಿಗೆ ನಿರಂತರವಾಗಿ ಹಣ ಸಂದಾಯವಾಗಿ ಯೋಜನೆ ದುರುಪಯೋಗವಾಗಿರುವುದು ಪತ್ತೆಯಾಗಿದೆಯೇ ;

(ಇ) ಈ ಪೈಕಿ ಕಳೆದ ಮೂರು ವರ್ಷಗಳಲ್ಲಿ ಕನಕಪುರ ತಾಲ್ಲೂಕೊಂದರಲ್ಲೇ ಕೊನೆಯುಸಿರೆಳೆದ ೩,೦೫೮ ಮೃತಳೆ ಫಲಾನುಭವಿಗಳ ಖಾತೆಗಳಿಗೆ ಇದುವರೆಗೆ ಜಮೆಯಾಗಿರುವ ಒಟ್ಟು ಮೊತ್ತ ಎಷ್ಟು ;

(ಈ) ಆದಾಯ ತೆರಿಗೆ ಮತ್ತು ಜಿಎಸ್‌ಟಿ ಪಾವತಿಸುತ್ತಿರುವ ೪,೮೦೦ ಶ್ರೀಮಂತ ಮಹಿಳೆಯರು ಹಾಗೂ ಆಧಾರ್ ಲಿಂಕ್ ಮಾಡದ ೧,೨೯೫ ವ್ಯಕ್ತಿಗಳು ಸುಳ್ಳು ಮಾಹಿತಿ ನೀಡಿ ಮಾಸಿಕ ರೂ. ೨,೦೦೦/- ಗಳ ಗೌರವಧನ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿಲ್ಲವೇ; ಬಂದಿದ್ದಲ್ಲಿ, ಈ ಅನರ್ಹ ಫಲಾನುಭವಿಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಉ) ಮೃತ ಫಲಾನುಭವಿಗಳ ಖಾತೆಗಳಿಗೆ ನಿಯಮಬಾಹಿರವಾಗಿ ಜಮೆಯಾಗಿರುವ ಸಾರ್ವಜನಿಕರ ತೆರಿಗೆ ಹಣವನ್ನು ಮರುಪಡೆಯಲು (Recovery) ಸರ್ಕಾರ ಕೈಗೊಂಡಿರುವ ನಿರ್ದಿಷ್ಟ ಕ್ರಮಗಳೇನು ; ಇನ್ನು ಮುಂದೆ ಇಂತಹ ಗಂಭೀರ

ಆರ್ಥಿಕ ಸೋರಿಕೆಗಳು ರಾಜ್ಯಾದ್ಯಂತ ಮರುಕಳಿಸದಂತೆ ತಡೆಯಲು ಸರ್ಕಾರ ಇಲಾಖಾವಾರು ಭೌತಿಕ ಪರಿಶೀಲನೆಗೆ ಯಾವುದೇ ಖಾಯಂ ತಂತ್ರಜ್ಞಾನ ಆಧಾರಿತ ವ್ಯವಸ್ಥೆ ರೂಪಿಸಿದೆಯೇ ?

## ಖಾಸಗಿ ಅನುದಾನಿತ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ತೆರವಾಗಿರುವ ಹುದ್ದೆಗಳ ಕುರಿತು

**ಶ್ರೀ ಎಸ್.ವ್ಹಿ. ಸಂಕನೂರ (ಪದವೀಧರರ ಕ್ಷೇತ್ರ) :–**

೧೦೯ (೯೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸರ್ಕಾರ ಇತ್ತೀಚೆಗೆ ಖಾಸಗಿ ಅನುದಾನಿತ ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ನಿವೃತ್ತಿ ಹಾಗೂ ಇತರ ಕಾರಣಗಳಿಂದ ಖಾಲಿ ಇರುವ ಹುದ್ದೆಗಳನ್ನು ತುಂಬಿಕೊಳ್ಳಲು ಯಾವ ವರ್ಷದಿಂದ ಯಾವ ವರ್ಷದವರೆಗೆ ಅನುಮತಿ ನೀಡಲಾಗಿದೆ ; (ಮಾಹಿತಿ ಒದಗಿಸುವುದು)

(ಆ) ರಾಜ್ಯದ ವಿವಿಧ ಜಿಲ್ಲೆಗಳಿಂದ ಎಷ್ಟು ಆಡಳಿತ ಮಂಡಳಿಗಳು ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಅನುಮತಿ ನೀಡುವಂತೆ ಆನ್‌ಲೈನ್ ಮೂಲಕ ಪ್ರಸ್ತಾವನೆಗಳನ್ನು ಸಲ್ಲಿಸಿರುತ್ತಾರೆ; ಜಿಲ್ಲಾವಾರು ಮಾಹಿತಿ ನೀಡುವುದು ಮತ್ತು ಇವುಗಳಲ್ಲಿ ಎಷ್ಟು ಆಡಳಿತ ಮಂಡಳಿಗಳಿಗೆ ಹುದ್ದೆ ತುಂಬಿಕೊಳ್ಳಲು ಆಯುಕ್ತರು ಶಾಲಾ ಶಿಕ್ಷಣ ಇಲಾಖೆ ಅನುಮತಿ ನೀಡಲಾಗಿದೆ; (ವಿವರವಾದ ಮಾಹಿತಿ ನೀಡುವುದು)

(ಇ) ರಾಜ್ಯದ ಖಾಸಗಿ ಅನುದಾನಿತ ಪ್ರಾಥಮಿಕ ಶಾಲೆಗಳಲ್ಲಿ ನಿವೃತ್ತಿಯಿಂದ ಖಾಲಿಯಾಗಿರುವ ಹುದ್ದೆಗಳನ್ನು ತುಂಬಿಕೊಳ್ಳಲು

ಸರ್ಕಾರ ಅನುಮತಿ ನೀಡದೇ ಇರುವುದು ನಿಜವೇ; ಹಾಗಿದ್ದಲ್ಲಿ, ಯಾವ ಕಾರಣಕ್ಕಾಗಿ ಅನುಮತಿ ನೀಡಿರುವುದಿಲ್ಲ ; (ವಿವರ ನೀಡುವುದು)

(ಈ) ರಾಜ್ಯದ ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಹುದ್ದೆ ತುಂಬಿಕೊಳ್ಳುವ ಪ್ರಕ್ರಿಯೆ ಪ್ರಾರಂಭವಾಗಿದೆಯೇ; ಹಾಗಿದ್ದಲ್ಲಿ, ಎಷ್ಟು ಕಾಲೇಜುಗಳಿಂದ ಹುದ್ದೆ ತುಂಬಿಕೊಳ್ಳಲು ಅನುಮತಿ ಕೇಳಿ ಪ್ರಸ್ತಾವನೆಗಳು ಬಂದಿವೆ; ಈ ವಿಷಯಕ್ಕೆ ಸಂಬಂಧಿಸಿದಂತೆ ಹುದ್ದೆ ತುಂಬಿಕೊಳ್ಳಲು ಅನುಮತಿ ನೀಡುವಲ್ಲಿ ಯಾವುದಾದರೂ ಸಮಸ್ಯೆಗಳಿವೆಯೇ ? (ಮಾಹಿತಿಯೊಂದಿಗೆ ವಿವರ ನೀಡುವುದು)

## ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ಕಾಲ್ಪನಿಕ ವೇತನ ಮತ್ತು ಬಡ್ತಿ ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೦ (೧೩೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಇತ್ತೀಚೆಗೆ ಕರ್ನಾಟಕದ ಉಚ್ಚ ನ್ಯಾಯಾಲಯವು (ಹೈಕೋರ್ಟ್) ದಿನಾಂಕ:೨೪.೦೭.೨೦೨೬ ರಿಂದ ಇಲ್ಲಿಯವರೆಗೆ ಕಳೆದ ಹಲವು ವರ್ಷಗಳಿಂದ ನೆನೆಗುದಿಗೆ ಬಿದ್ದಿರುವ ರಾಜ್ಯದ ಅನುದಾನಿತ ಶಾಲಾ ಕಾಲೇಜುಗಳ ನೌಕರರ ಪಿಂಚಣಿ, ಕಾಲ್ಪನಿಕ ವೇತನ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವ ಆದೇಶವನ್ನು ಪ್ರಕಟಿಸಿದೆ ; (ಆದೇಶದ ಪ್ರತಿಯನ್ನು ನೀಡುವುದು)

(ಆ) ನ್ಯಾಯಾಲಯದ ಈ ಆದೇಶದನ್ವಯ ರಾಜ್ಯ ಸರ್ಕಾರವು ಕೈಗೊಂಡ ಕ್ರಮಗಳೇನು ;

(ಇ) ಯಾವ ಕಾಲಮಿತಿಯಲ್ಲಿ ನ್ಯಾಯಾಲಯದ ಆದೇಶದನ್ವಯ ಅನುದಾನಿತ ಶಾಲಾ ಕಾಲೇಜುಗಳ ನೌಕರರಿಗೆ ಪಿಂಚಣಿ ಮತ್ತು ಕಾಲ್ಪನಿಕ ವೇತನ ಹಾಗೂ ಇತರೆ ಸವಲತ್ತುಗಳನ್ನು ನೀಡಲು ಕ್ರಮ ಕೈಗೊಳ್ಳಲಾಗುತ್ತದೆ ?

## ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ ಶಾಶ್ವತ ಅಧ್ಯಾಪಕರ ನೇಮಕಾತಿ ಪ್ರಕ್ರಿಯೆಯಲ್ಲಿ ವಿಶೇಷ ಅವಕಾಶ (One-Time Measure) ಕಲ್ಪಿಸುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೧ (೧೨೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತಾಂತ್ರಿಕ ಶಿಕ್ಷಣ ಇಲಾಖೆಯ ಅಧೀನದಲ್ಲಿರುವ ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ಕಳೆದ ೫ ವರ್ಷಗಳು ಹಾಗೂ ಅದಕ್ಕಿಂತ ಹೆಚ್ಚು ಅವಧಿಯಿಂದ ನಿರಂತರವಾಗಿ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಸೇವೆ, ಅನುಭವ ಹಾಗೂ ಅರ್ಹತೆಯನ್ನು ಪರಿಗಣಿಸಿ, ಈಗಾಗಲೇ ಘೋಷಿಸಿರುವ ಶಾಶ್ವತ ಅಧ್ಯಾಪಕರ ನೇಮಕಾತಿ ಪ್ರಕ್ರಿಯೆಯಲ್ಲಿ ಅವರಿಗೆ ವಯೋಮಿತಿ ಸಡಿಲಿಕೆ, ಸೇವಾ ಅನುಭವಕ್ಕೆ ಸೂಕ್ತ ತೂಕ (Weightage) ವಿಶೇಷ ಆದ್ಯತೆ ಅಥವಾ ಒಮ್ಮೆಯ ವಿಶೇಷ ಅವಕಾಶ (One-Time Measure) ಕಲ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ;

(ಆ) ಕಳೆದ ಹಲವು ವರ್ಷಗಳಿಂದ ಶಾಶ್ವತ ಉಪನ್ಯಾಸಕರಷ್ಟೇ ಬೋಧನೆ, ಪರೀಕ್ಷೆ, ಮೌಲ್ಯಮಾಪನ ಹಾಗೂ ಇತರೆ ಶೈಕ್ಷಣಿಕ ಜವಾಬ್ದಾರಿಗಳನ್ನು ನಿರ್ವಹಿಸುತ್ತಿರುವ ಅತಿಥಿ ಉಪನ್ಯಾಸಕರಿಗೆ, "ಸಮಾನ ಕೆಲಸಕ್ಕೆ ಸಮಾನ ವೇತನ" ತತ್ವದ ಅನ್ವಯ ಕನಿಷ್ಠ ಮೂಲ ವೇತನಕ್ಕೆ (Basic Pay) ಸಮನಾದ ಗೌರವಧನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಇ) ಶಾಶ್ವತ ನೇಮಕಾತಿ ಪ್ರಕ್ರಿಯೆ ಪೂರ್ಣಗೊಳ್ಳುವವರೆಗೆ, ಅತಿಥಿ ಉಪನ್ಯಾಸಕರಿಗೆ ಪ್ರತಿ ಶೈಕ್ಷಣಿಕ ವರ್ಷದಲ್ಲಿ ಕನಿಷ್ಠ ೧೧ ತಿಂಗಳ ನಿರಂತರ ನೇಮಕಾತಿ ಹಾಗೂ ಸೇವಾ ನಿರಂತರತೆ ಕಲ್ಪಿಸಲು ಸರ್ಕಾರ ಅಗತ್ಯ ಕ್ರಮ ಕೈಗೊಳ್ಳುವುದೇ ;

(ಈ) ಸರ್ಕಾರಿ ಇಂಜಿನಿಯರಿಂಗ್ ಕಾಲೇಜುಗಳಲ್ಲಿ ದೀರ್ಘಾವಧಿಯಿಂದ ಸೇವೆ ಸಲ್ಲಿಸುತ್ತಿರುವ ಅತಿಥಿ ಉಪನ್ಯಾಸಕರ ಹಿತಾಸಕ್ತಿಯನ್ನು ರಕ್ಷಿಸುವ ಉದ್ದೇಶದಿಂದ, ಅವರ ಸೇವೆಯನ್ನು ಪರಿಗಣಿಸಿ ಸೂಕ್ತ ನೀತಿ ರೂಪಿಸಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು ?

## DPSE (Diploma in Pre-School Education) ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಸರ್ಕಾರಿ LKG-UKG ಶಿಕ್ಷಕರ ಹುದ್ದೆಗಳನ್ನು ಸೃಷ್ಟಿಸಿ ನೇಮಕಾತಿ ಮಾಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೨ (೧೨೮) ಮಾನ್ಯ ಮುಖ್ಯಮಂತ್ರಿಗಳ ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) DPSE (Diploma in Pre-School Education) ಕೋರ್ಸ್ ಅನ್ನು ಸರ್ಕಾರವೇ ಆರಂಭಿಸಿದ್ದರೂ, ಅದರ C&R ನಿಯಮಗಳನ್ನು ಇದುವರೆಗೆ ಜಾರಿಗೊಳಿಸದಿರಲು ಕಾರಣಗಳೇನು ;

(ಆ) DPSE ಅರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಸರ್ಕಾರಿ LKG-UKG ಶಿಕ್ಷಕರ ಹುದ್ದೆಗಳನ್ನು ಸೃಷ್ಟಿಸಿ ನೇಮಕಾತಿ ಮಾಡುವ ಕುರಿತು ಸರ್ಕಾರದ ನಿಲುವು ಏನು ;

(ಇ) ರಾಜ್ಯದಲ್ಲಿ ಎಷ್ಟು DPSE ಅಭ್ಯರ್ಥಿಗಳು ಉತ್ತೀರ್ಣರಾಗಿದ್ದಾರೆ ; ಅವರಿಗೆ ಉದ್ಯೋಗಾವಕಾಶ ಕಲ್ಪಿಸಲು ಸರ್ಕಾರ ಕಾಲಮಿತಿಯನ್ನು ನಿಗದಿಪಡಿಸಿರುವುದೇ ;

(ಈ) ರಾಜ್ಯದ ಸರ್ಕಾರಿ ಶಾಲೆಗಳಲ್ಲಿ LKG-UKG ತರಗತಿಗಳನ್ನು ನಡೆಸುತ್ತಿರುವಲ್ಲಿ DPSE ಅರ್ಹ ಶಿಕ್ಷಕರನ್ನೇ ನೇಮಿಸುವ ಕುರಿತು ಸರ್ಕಾರ ಕ್ರಮ ಕೈಗೊಳ್ಳುವುದೇ ;

(ಉ) DPSE ಅಭ್ಯರ್ಥಿಗಳ ಮನವಿ, ಅರ್ಜಿಗಳು ಹಾಗೂ ದೂರುಗಳ ಕುರಿತು ಶಿಕ್ಷಣ ಇಲಾಖೆ ಇದುವರೆಗೆ ಯಾವ ಕ್ರಮ ಕೈಗೊಂಡಿದೆ; DPSE ಅಭ್ಯರ್ಥಿಗಳಿಗೆ ನ್ಯಾಯ ಒದಗಿಸಲು ಸರ್ಕಾರ ನಿಗದಿತ ದಿನಾಂಕದೊಳಗೆ C&R ನಿಯಮಗಳನ್ನು ಜಾರಿಗೊಳಿಸಲು ಕ್ರಮ ಕೈಗೊಳ್ಳುವುದೇ ?

## ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಹುದ್ದೆಯಿಂದ ಪ್ರಾಚಾರ್ಯರ ಹುದ್ದೆಗೆ ಬಡ್ತಿ ನೀಡುವ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೩ (೧೨೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರಿಂದ ಪ್ರಾಚಾರ್ಯರ ಹುದ್ದೆಗೆ ಬಡ್ತಿ ನೀಡುವ ಸಲುವಾಗಿ ಕಾರ್ಯನಿರ್ವಹಣಾ ವರದಿ (CR) ಕರೆದಿದ್ದು, ಮುಂದಿನ ಪ್ರಕ್ರಿಯೆ ಯಾವ ಹಂತದಲ್ಲಿದೆ ;

(ಆ) ರಾಜ್ಯದಲ್ಲಿ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಾಂಶುಪಾಲರ ಹುದ್ದೆ ಖಾಲಿಯಿದ್ದು, ಪರೀಕ್ಷೆ ಮತ್ತು ದಾಖಲಾತಿ ಪ್ರಕ್ರಿಯೆಗೆ ತೊಂದರೆಯಾಗುವುದಿಲ್ಲವೇ ಈ ಬಗ್ಗೆ ಸರ್ಕಾರ ಕ್ರಮ ಕೈಗೊಂಡಿದೆಯೇ ; ಕೈಗೊಂಡಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಹುದ್ದೆಗಳನ್ನು ಭರ್ತಿ ಮಾಡಲಾಗುವುದು ;

(ಇ) ಉಪನ್ಯಾಸಕರಿಂದ ಪ್ರಾಚಾರ್ಯರ ಹುದ್ದೆಗೆ ಪದೋನ್ನತಿ ನೀಡಲು ಕಾರ್ಯನಿರ್ವಹಣಾ ವರದಿ (CR) ಕರೆದಿದ್ದು, ಇಲಾಖಾ ಪದೋನ್ನತಿ ಸಮಿತಿ ಸಭೆ (D.P.C) ಮಾಡಿ ಪ್ರಾಚಾರ್ಯರ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲಾಗುವುದು ?

## ರಾಜ್ಯದಲ್ಲಿರುವ ಒಟ್ಟು ಅಂಗವಿಕಲರ ಮಾಹಿತಿ ಹಾಗೂ ಸೌಲಭ್ಯಗಳ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೪ (೧೩೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಒಟ್ಟು ಅಂಗವಿಕಲರ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅಂಗವಿಕಲರ ಸೌಕರ್ಯಕ್ಕಾಗಿ ತ್ರಿಚಕ್ರ ವಾಹನ ಅಥವಾ ದ್ವಿಚಕ್ರ ವಾಹನ ನೀಡಿದ್ದರೆ; ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು ;

(ಇ) ನೀಡಿದ್ದರೆ, ಅದಕ್ಕೆ ನಿಗದಿ ಪಡಿಸಿದ ಅನುದಾನ ಎಷ್ಟು ; ಉಳಿಕೆ ಅನುದಾನ ಎಷ್ಟು ;

(ಈ) ಇನ್ನೂ ವಿತರಣೆಯಾಗದಂತಹ ಜಿಲ್ಲಾ / ತಾಲ್ಲೂಕುಗಳು ಎಷ್ಟು ? (ಅನುದಾನದೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಹಿಂದುಳಿದ ವರ್ಗಗಳ ಮೆಟ್ರಿಕ್ ಪೂರ್ವ ವಿದ್ಯಾರ್ಥಿ ನಿಲಯಗಳ ಬಗ್ಗೆ ಮಾಹಿತಿ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೫ (೧೩೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಡಿ ಕಾರ್ಯ ನಿರ್ವಹಿಸುತ್ತಿರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯಗಳೆಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ವಿದ್ಯಾರ್ಥಿ ನಿಲಯಗಳಲ್ಲಿ ಇರುವ ಸೀಟುಗಳ ಸಂಖ್ಯೆ ಎಷ್ಟು; ಎಷ್ಟು ವಿದ್ಯಾರ್ಥಿಗಳು ಪ್ರವೇಶ ಪಡೆದಿರುತ್ತಾರೆ ;

(ಇ) ತುಮಕೂರು, ಚಿತ್ರದುರ್ಗ ಮತ್ತು ಕೋಲಾರ ಜಿಲ್ಲೆಗಳಲ್ಲಿ ಅತೀ ಹಿಂದುಳಿದ (MBC) ವಿದ್ಯಾರ್ಥಿಗಳಿಗೆ ಹಾಸ್ಟೆಲ್ ಸೌಲಭ್ಯ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಅತೀ ಹಿಂದುಳಿದ (MBC) ವಿದ್ಯಾರ್ಥಿಗಳಿಗೆ ಪ್ರವೇಶ ದೊರೆಯುದೇ ಅವರ ವಿದ್ಯಾಭ್ಯಾಸ ಕುಂಠಿತವಾಗುವುದಿಲ್ಲವೇ ; ಇದಕ್ಕಾಗಿ ಸರ್ಕಾರ ತೆಗೆದುಕೊಂಡ ಕ್ರಮಗಳೇನು ;

(ಉ) ಕಾಲೇಜುಗಳಲ್ಲಿ ವ್ಯಾಸಂಗ ಮಾಡುವ ಎಲ್ಲಾ ಅತೀ ಹಿಂದುಳಿದ (MBC) ವಿದ್ಯಾರ್ಥಿಗಳಿಗೆ ನಿಲಯಗಳ ಪ್ರವೇಶ ನೀಡಬೇಕಾಗಿರುವುದು ಸರ್ಕಾರದ ಆದ್ಯತೆಯಲ್ಲವೇ, ಈ ರೀತಿಯಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗಲು ಕಾರಣ ಯಾರು ;

(ಊ) ವಿದ್ಯಾರ್ಥಿಗಳಿಗೆ ಪ್ರವೇಶಾವಕಾಶ ದೊರೆಯದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ, ಬಂದಿದ್ದಲ್ಲಿ, ನಿಯಮಗಳನ್ನು ಸಡಿಲಗೊಳಿಸಿ, ಪ್ರವೇಶಾವಕಾಶ ನೀಡಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಜಾತಿ ಮತ್ತು ಅಲೆಮಾರಿಗಳನ್ನು ಮುಖ್ಯವಾಹಿನಿಗೆ ತರುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೬ (೧೬೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಇಲಾಖೆಯಿಂದ ಇತ್ತೀಚೆಗೆ ನಡೆದ ಸಾಮಾಜಿಕ ಮತ್ತು ಶೈಕ್ಷಣಿಕ ಸ್ಥಿತಿಗಳ ಬಗ್ಗೆ ಸರ್ಕಾರವು ಈಗಾಗಲೇ ವರದಿ ಸ್ವೀಕರಿಸಿದೆಯೇ ;

(ಆ) ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳ ಶೇಕಡಾವಾರು ಪ್ರಮಾಣ ಎಷ್ಟು ; ಅದಕ್ಕೆ ಸರಿಸಮನಾಗಿ ಹಿಂದುಳಿದ ವರ್ಗಗಳನ್ನು ಮತ್ತು ಹಿಂದುಳಿದ ವರ್ಗಗಳ ಅಲೆಮಾರಿಗಳನ್ನು ಮುಖ್ಯ ವಾಹಿನಿಗೆ ತರಲು ರಾಜ್ಯ ಸರ್ಕಾರವು ಕೈಗೊಂಡ ಕ್ರಮಗಳೇನು ;

(ಇ) ಇದಕ್ಕೆ ಸಂಬಂಧಿಸಿದಂತೆ, ಸರ್ಕಾರವು ಯಾವುದಾದರೂ ಹೊಸ ಯೋಜನೆ ರೂಪಿಸಲಾಗಿದೆಯೇ ;

(ಈ) ರೂಪಿಸಿದ್ದಲ್ಲಿ, ಸದರಿ ಯೋಜನೆಗೆ ನಿಗಧಿಪಡಿಸಿರುವ ಅನುದಾನ ಎಷ್ಟು ? (ಪೂರ್ಣ ಪ್ರಮಾಣದ ಮಾಹಿತಿ ನೀಡುವುದು)

## ರಾಜ್ಯದಲ್ಲಿ ಗೌರವ ವನ್ಯಜೀವಿ ಪರಿಪಾಲಕರನ್ನು ನೇಮಕ ಮಾಡುವ ಬಗ್ಗೆ

**ಶ್ರೀ ಡಿ.ಟಿ. ಶ್ರೀನಿವಾಸ್ (ಡಿ.ಟಿ.ಎಸ್) (ಶಿಕ್ಷಕರ ಕ್ಷೇತ್ರ) :–**

೧೧೭ (೧೩೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೩ ರಿಂದ ರಾಜ್ಯದಲ್ಲಿ ಎಷ್ಟು ಗೌರವ ವನ್ಯ ಜೀವಿ ಪರಿಪಾಲಕರನ್ನು ನೇಮಕ ಮಾಡಲಾಗಿದೆ ನೇಮಕ ಮಾಡಿದ್ದಲ್ಲಿ, ಯಾವ ಯಾವ ಜಿಲ್ಲೆಗಳಿಗೆ ಆದ್ಯತೆ ನೀಡಲಾಗಿದೆ ;

(ಆ) ರಾಜ್ಯದಲ್ಲಿರುವ ಒಟ್ಟು ಎಷ್ಟು ಜಿಲ್ಲಾ ಗೌರವ ವನ್ಯಜೀವಿ ಪರಿಪಾಲಕರಿದ್ದಾರೆ ; ಎಷ್ಟು ಖಾಲಿ ಹುದ್ದೆಗಳಿವೆ ; (ಮಾಹಿತಿ ನೀಡುವುದು)

(ಇ) ಜಿಲ್ಲಾ ಗೌರವ ವನ್ಯಜೀವಿ ಪರಿಪಾಲಕರನ್ನು ನೇಮಿಸಿಕೊಳ್ಳಲು ಇರುವ ಅರ್ಹತೆಗಳೇನು ;

(ಈ) ಖಾಲಿಯಿದ್ದಲ್ಲಿ ಯಾವಾಗ ಹುದ್ದೆಗಳನ್ನು ತುಂಬಿಕೊಳ್ಳಲಾಗುವುದು ;

(ಉ) ನೇಮಿಸಿಕೊಳ್ಳಲು ಇರುವ ಅಡಚಣೆಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

# ಅತಿಥಿ ಉಪನ್ಯಾಸಕರ ನೇಮಕಾತಿಗೆ ನಕಲಿ ಪಿಎಚ್‌ಡಿ ಪ್ರಮಾಣ ಪತ್ರ ಸಲ್ಲಿಸಿರುವ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೮ (೮೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೨೫–೨೬ನೇ ಸಾಲಿನಲ್ಲಿ ಕಾಲೇಜು ಶಿಕ್ಷಣ ಇಲಾಖೆಯಡಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕ ಹುದ್ದೆ ಪಡೆಯಲು ೨೪೯ ಅಭ್ಯರ್ಥಿಗಳು ನಕಲಿ ಹಾಗೂ ಅಮಾನ್ಯ ಪಿಎಚ್‌ಡಿ ಪ್ರಮಾಣ ಪತ್ರಗಳನ್ನು ಸಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ನೆಟ್ (NET) ಅಥವಾ ಕೆ–ಸೆಟ್ (K-SET) ಪರೀಕ್ಷೆಯಲ್ಲಿ ತೇರ್ಗಡೆಯಾಗದ ಅಭ್ಯರ್ಥಿಗಳು ಯುಜಿಸಿ (UGC) ನಿಯಮಾವಳಿಗಳನ್ನು ಮರೆಮಾಚಿ ಹುದ್ದೆ ಗಿಟ್ಟಿಸಲು ಸುಳ್ಳು ಮಾಹಿತಿ ನೀಡಿ ವಂಚಿಸಿರುವುದು ಕಂಡುಬಂದಿದ್ದು, ಇವರ ವಿರುದ್ಧ ಕೈಗೊಂಡಿರುವ ಕಾನೂನು ಕ್ರಮಗಳೇನು ;

(ಇ) ಇಲಾಖೆಯ ಇ–ಎಂಐಎಸ್ (EMIS) ಪೋರ್ಟಲ್ ಪರಿಶೀಲನೆ ಹಾಗೂ ಉನ್ನತ ಮಟ್ಟದ ಸಮಿತಿಯ ಶಿಫಾರಸ್ಸಿನಂತೆ ನಕಲಿ ಪಿಎಚ್‌ಡಿ ಪ್ರಮಾಣ ಪತ್ರ ಸಲ್ಲಿಸಿ ಈಗಾಗಲೇ ಸೇವೆ ಸಲ್ಲಿಸುತ್ತಿರುವವರನ್ನು ತಕ್ಷಣವೇ ಸೇವೆಯಿಂದ ವಜಾಗೊಳಿಸಲು ಕ್ರಮ ಕೈಗೊಳ್ಳಲಾಗಿದೆಯೇ ;

(ಈ) ರಾಜ್ಯದಲ್ಲಿರುವ ಸುಮಾರು ೪೩೦ಕ್ಕೂ ಹೆಚ್ಚು ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳು ಮಾತ್ರವಲ್ಲದೆ, ಖಾಸಗಿ ಅನುದಾನಿತ

ಕಾಲೇಜುಗಳಲ್ಲಿಯೂ ಇಂತಹ ನಕಲಿ ಪಿಎಚ್‌ಡಿ ಪ್ರಮಾಣ ಪತ್ರಗಳ ದುರುಪಯೋಗ ತಡೆಯಲು ಹಾಗೂ ಪಾರದರ್ಶಕ ಪರಿಶೀಲನೆಗೆ ಸರ್ಕಾರ ರೂಪಿಸಿರುವ ಸ್ಪಷ್ಟ ಕಟ್ಟುನಿಟ್ಟಿನ ನಿಯಮಗಳೇನು ? (ವಿವರ ನೀಡುವುದು)

## ಕಲ್ಯಾಣ ಕರ್ನಾಟಕ ಭಾಗದಲ್ಲಿ ಶಿಥಿಲಗೊಂಡಿರುವ ಶಾಲಾ ಕಾಲೇಜುಗಳ ಬಗ್ಗೆ

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೯ (೮೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶೈಕ್ಷಣಿಕ ವರ್ಷ ಆರಂಭವಾಗಿದ್ದರೂ ಕಲ್ಯಾಣ ಕರ್ನಾಟಕ ಭಾಗದ ೧೦ ಸಾವಿರಕ್ಕೂ ಹೆಚ್ಚು ಸರ್ಕಾರಿ ಶಾಲಾ ಕೊಠಡಿಗಳು ಅತ್ಯಂತ ಶಿಥಿಲಗೊಂಡು, ಬೋಧನೆಗೆ ಅಸುರಕ್ಷಿತವಾಗಿದ್ದು, ಯಾವುದೇ ಕ್ಷಣದಲ್ಲಿ ಕೊಠಡಿಗಳು ಕುಸಿದು ಬೀಳಬಹುದು ಎಂಬ ಭಯದ ನೆರಳಿನಲ್ಲಿಯೇ ಮಕ್ಕಳು ಮತ್ತು ಶಿಕ್ಷಕರು ಪಾಠ ಮಾಡುವಂತಾಗಿರುವುದು ನಿಜವೇ ;

(ಆ) ಪತ್ರಿಕಾ ವರದಿಯ ಅಧಿಕೃತ ಅಂಕಿ–ಅಂಶಗಳ ಪ್ರಕಾರ ಕಲ್ಯಾಣ ಕರ್ನಾಟಕದ ಏಳು ಜಿಲ್ಲೆಗಳಲ್ಲಿ ಒಟ್ಟು ೧೦,೪೯೪ ಶಾಲಾ ಕೊಠಡಿಗಳು ಬೋಧನೆಗೆ ಸೂಕ್ತವಲ್ಲದ ಶಿಥಿಲಾವಸ್ಥೆಯಲ್ಲಿವೆ ಎಂದು ಗುರುತಿಸಿರುವುದು ನಿಜವೇ; ಈ ಪೈಕಿ ಪ್ರಾಥಮಿಕ ಹಾಗೂ ಪ್ರೌಢ ಶಾಲೆಗಳ ಕೊಠಡಿಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಸಂಪೂರ್ಣ ವಿವರ ನೀಡುವುದು)

(ಇ) ಕಲ್ಯಾಣ ಕರ್ನಾಟಕ ಭಾಗದಲ್ಲೇ ಅತ್ಯಂತ ಹೆಚ್ಚು ಅಂದರೆ ಕಲಬುರಗಿ ಜಿಲ್ಲೆಯೊಂದರಲ್ಲೇ ೨,೪೦೭ ಕೊಠಡಿಗಳು ಹಾಗೂ ಬೀದರ್ ಜಿಲ್ಲೆಯಲ್ಲಿ ೧,೦೧೬ ಕೊಠಡಿಗಳು ಶಿಥಿಲಗೊಂಡಿರುವುದು ನಿಜವೇ; ಶೈಕ್ಷಣಿಕವಾಗಿ ಹಿಂದುಳಿದಿರುವ ಈ ಪ್ರದೇಶದಲ್ಲಿ ಉತ್ತಮ ಕೊಠಡಿಗಳಿಲ್ಲದೆ ಮುಖ್ಯ ಶಿಕ್ಷಕರು ಅನಿವಾರ್ಯವಾಗಿ ಅದೇ ಮುರುಕಲು ಕೊಠಡಿಗಳಲ್ಲೇ ಪಾಠ ನಡೆಸುತ್ತಿರುವುದನ್ನು ತಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಈ ಶಿಥಿಲ ಕೊಠಡಿಗಳ ದುರಸ್ತಿಗೆ ಬೇಸಿಗೆ ರಜೆಯ ಅವಧಿಯಲ್ಲಿ ಮುಂದಾಗದೆ, ಈಗ ಮಳೆಗಾಲ ಆರಂಭವಾದ ನಂತರವೂ ಯಾವುದೇ ಮುನ್ನೆಚ್ಚರಿಕಾ ಯೋಜನೆ (Plan) ಇಲ್ಲದೆ ನಿರ್ಲಕ್ಷ್ಯ ವಹಿಸಿರಲು ಕಾರಣಗಳೇನು; ಮಳೆಗೆ ಕೊಠಡಿಗಳು ಸೋರಿದರೆ ಅಥವಾ ಕುಸಿದು ಬಿದ್ದು ಅನಾಹುತಗಳಾದರೆ ಅದಕ್ಕೆ ಯಾರು ಜವಾಬ್ದಾರರು ;

(ಉ) ಕಲಬುರಗಿ ಡಿಡಿಪಿಐ ಅವರು "ಬೋಧನೆಗೆ ಸೂಕ್ತವಲ್ಲದ ಕೊಠಡಿಗಳನ್ನು ಗುರುತಿಸಿ ಉತ್ತಮ ಕೊಠಡಿಗಳಲ್ಲೇ ಬೋಧಿಸಲು ಹಾಗೂ ಪಿಆರ್‌ಇಡಿ, ಪಿಡಬ್ಲ್ಯೂಡಿ ಅಧಿಕಾರಿಗಳಿಂದ ವರದಿ ಕೇಳಲಾಗಿದೆ" ಎಂದು ಹೇಳಿರುವುದು ನಿಜವೇ; ಕೇವಲ ವರದಿ ಕೇಳುವುದರಲ್ಲೇ ಕಾಲಹರಣ ಮಾಡದೆ, ಕಲ್ಯಾಣ ಕರ್ನಾಟಕದ ಈ ೧೦,೪೯೪ ಅಸುರಕ್ಷಿತ ಕೊಠಡಿಗಳ ದುರಸ್ತಿ ಹಾಗೂ ಮರುನಿರ್ಮಾಣಕ್ಕಾಗಿ ಸರ್ಕಾರ ವಿಶೇಷ ಪ್ಯಾಕೇಜ್ ಅಡಿ ಕಾಯ್ದಿರಿಸಿರುವ ಅನುದಾನ ಎಷ್ಟು ಮತ್ತು ಯಾವ ಗಡುವಿನೊಳಗೆ ಈ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗುವುದು ?

## ಅಂಬಿಗರ ಚೌಡಯ್ಯನವರ ಸಮಾಧಿಯ ಗದ್ದುಗೆ ಅಭಿವೃದ್ಧಿ ಕುರಿತು

**ಶ್ರೀ ತಿಪ್ಪಣ್ಣಪ್ಪ ಕಮಕನೂರ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೦ (೯೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಾವೇರಿ ಜಿಲ್ಲೆಯ ಚೌಡಯ್ಯದಾನಪುರ ಶ್ರೀ ನಿಜಶರಣ ಅಂಬಿಗರ ಚೌಡಯ್ಯನವರ ಕಾಯಕ ಕ್ಷೇತ್ರ ಹಾಗೂ ಐಕ್ಯ ಸ್ಥಳ ಸಮಾದಿ/ ಗದ್ದುಗೆ ನಿರ್ಮಾಣದ ಬಗ್ಗೆ ಭಾರತೀಯ ಪುರಾತತ್ವ ಸರ್ವೇಕ್ಷಣೆ ಇಲಾಖೆ ಮತ್ತು ಜಿಲ್ಲಾಡಳಿತದೊಂದಿಗೆ ಸಮಾಲೋಚನೆ ಹಾಗೂ ಸಮನ್ವಯ ಕಾರ್ಯ ಯಾವ ಹಂತದಲ್ಲಿದೆ ;

(ಆ) ಈ ವಿಚಾರವನ್ನು ಆದ್ಯತೆಯ ಮೇಲೆ ಪರಿಗಣಿಸಿ ತುರ್ತು ಸಭೆಗಳನ್ನು ನಡೆಸಿ ಅಂಬಿಗರ ಚೌಡಯ್ಯನವರ ಸಮಾಧಿಯ ಗದ್ದುಗೆಯನ್ನು ಕೂಡಲಸಂಗಮ ಬಸವಣ್ಣನವರ ಗದ್ದುಗೆಯನ್ನು ಕಟ್ಟಿದ ಮಾದರಿಯಲ್ಲಿ ಕಟ್ಟಲು ಸರ್ಕಾರ ಮುಂದಾಗುವುದೇ ?

## ದೃಶ್ಯ ಕಲಾ ವಿಭಾಗದಲ್ಲಿ ಮೂಲಭೂತ ಕೊರತೆ ಇರುವ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೨೧ (೧೩೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಂಗಳೂರು ವಿಶ್ವವಿದ್ಯಾಲಯದಲ್ಲಿ ಇರುವ ದೃಶ್ಯ ಕಲಾ ವಿಭಾಗ ಈಗ ಮೂಲಸೌಕರ್ಯ ಇಲ್ಲದೆ ಖಾಯಂ ಪ್ರಾಧ್ಯಾಪಕರಿಲ್ಲದೆ ಸೊರಗುವಂತಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ವ್ಯಾಪಕ ಉದ್ಯೋಗ ಸೃಷ್ಟಿಸುವ ಈ ಕೋರ್ಸಿಗೆ ವರ್ಷದಿಂದ ವರ್ಷಕ್ಕೆ ಬೇಡಿಕೆ ಹೆಚ್ಚಾಗುತ್ತಿದ್ದು, ಬೇಡಿಕೆಗೆ ತಕ್ಕಂತೆ ಮೂಲಸೌಕರ್ಯಗಳು ಇಲ್ಲದಿರುವುದರಿಂದ ವಿದ್ಯಾರ್ಥಿಗಳಿಗೆ ಸಂಕಷ್ಟ ತಂದಿರುವುದು ನಿಜವೇ ;

(ಇ) ಕಳೆದ ೨೦೦೪ರಿಂದ ಇಲ್ಲಿಯವರೆಗೂ ಎಷ್ಟು ವಿದ್ಯಾರ್ಥಿಗಳು ಈ ಕೋರ್ಸ್‌ಗಳನ್ನು ಪೂರ್ಣಗೊಳಿಸಿದ್ದಾರೆ ಹಾಗೂ ಪ್ರಸ್ತುತ ಎಷ್ಟು ಸೀಟುಗಳ ಬೇಡಿಕೆಗಳಿವೆ ;

(ಈ) ಪ್ರಸ್ತುತ ಎಷ್ಟು ಬೋಧಕರು ಮತ್ತು ಬೋಧಕೇತರ ಇನ್ನಿತರ ಸಿಬ್ಬಂದಿಗಳು ಕಾರ್ಯನಿರ್ವಹಿಸುತ್ತಿದ್ದಾರೆ ಹಾಗೂ ಎಷ್ಟು ಹುದ್ದೆಗಳು ಖಾಲಿ ಇವೆ; ದೃಶ್ಯ ಕಲಾ ವಿಭಾಗದಲ್ಲಿ ಯಾವ ಯಾವ ವಿಷಯಗಳನ್ನು ಬೋಧಿಸಲಾಗುವುದು, ಈ ಕೋರ್ಸಿನ ಅವಧಿ ಎಷ್ಟು ವರ್ಷಗಳು ?

## ಜೀತ ಪದ್ಧತಿ ಇನ್ನೂ ಜೀವಂತವಾಗಿರುವ ಬಗ್ಗೆ

**ಡಾ. ಉಮಾಶ್ರೀ (ನಾಮನಿರ್ದೇಶನ ಹೊಂದಿದವರು) :–**

೧೨೨ (೧೩೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅನಿಷ್ಟ ಪದ್ಧತಿ ಜೀತಪದ್ಧತಿ ಇನ್ನೂ ಜೀವಂತವಾಗಿದೆಯೇ; ಇತ್ತೀಚೆಗೆ ಮೈಸೂರು ಜಿಲ್ಲೆ ಟಿ.ನರಸೀಪುರ ತಾಲ್ಲೂಕಿನ ಸೋಸಲೆ ಹೋಬಳಿ ಬೇವಿನಹಳ್ಳಿ ಗ್ರಾಮ ಹೊರವಲಯದ ಇಟ್ಟಿಗೆ ಫ್ಯಾಕ್ಟರಿಯಲ್ಲಿ ಜೀತಕಿದ್ದ ಬಾಲಕರು ಸೇರಿ ೧೮ ಮಂದಿಯನ್ನು ಜೀತದಿಂದ ರಕ್ಷಣೆ ಮಾಡಿದ ಪ್ರಕರಣ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಕಳೆದ ಮೂರು ವರ್ಷಗಳಲ್ಲಿ ಜೀತದಿಂದ ಮುಕ್ತಗೊಂಡಿರುವವರ ಸಂಖ್ಯೆಗಳೆಷ್ಟು; ಯಾವ ಜಿಲ್ಲೆಗಳಲ್ಲಿ ಹೆಚ್ಚು ಜೀತ ಪ್ರಕರಣಗಳು ಬೆಳಕಿಗೆ ಬಂದಿವೆ ;

(ಇ) ಜೀತಕ್ಕಿಟ್ಟುಕೊಂಡವರ ವಿರುದ್ಧ ಕೈಗೊಂಡ ಕ್ರಮಗಳೇನು; ಗುಲಾಮಗಿರಿ ಸಂಕೇತ– ಅನಿಷ್ಟ ಜೀತ ಪದ್ಧತಿ ತಡೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳು ಮತ್ತು ಪುನರ್ ವಸತಿ ಕಾರ್ಯಗಳೇನು ?

## ಖಾಸಗಿ ಅನುದಾನಿತ ಪ್ರೌಢಶಾಲೆಗಳ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳ ಬಗ್ಗೆ

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೨೩ (೧೫೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿರುವ ಅನುದಾನಿತ ಪ್ರೌಢ ಶಾಲೆಗಳು ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು ; (ತಾಲ್ಲೂಕುವಾರು ಪೂರ್ಣ ಮಾಹಿತಿ ನೀಡುವುದು)

(ಆ) ಅನುದಾನಿತ ಪ್ರೌಢ ಶಾಲೆಗಳ ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿವಿಧ ಕಾರಣಗಳಿಂದಾಗಿ ಎಲ್ಲಾ ವಿಷಯಗಳ ಶಿಕ್ಷಕರ ಮತ್ತು ಉಪನ್ಯಾಸಕರುಗಳ ಎಷ್ಟು ಹುದ್ದೆಗಳು ಖಾಲಿ ಇವೆ ;

(ಇ) ರಾಜ್ಯದಲ್ಲಿರುವ ಅನುದಾನಿತ ಪ್ರೌಢ ಶಾಲೆಗಳು ಮತ್ತು ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಈ ಶಿಕ್ಷಕರ ಮತ್ತು ಉಪನ್ಯಾಸಕರ

ಹುದ್ದೆಗಳು ಖಾಲಿ ಇರುವುದರಿಂದ, ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಗುಣಮಟ್ಟ ಕಡಿಮೆಯಾಗುತ್ತಿರುವುದರಿಂದ ಸರ್ಕಾರ ಅತಿಥಿ ಶಿಕ್ಷಕರನ್ನು ಮತ್ತು ಅತಿಥಿ ಉಪನ್ಯಾಸಕರನ್ನು ಈ ಅನುದಾನಿತ ಖಾಸಗಿ ಶಿಕ್ಷಣ ಸಂಸ್ಥೆಗಳಿಗೆ ನೇಮಕ ಮಾಡಲು ಯಾವ ಕ್ರಮ ಕೈಗೊಂಡಿದೆ ?

## ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿ ಮತ್ತು ಉಪನ್ಯಾಸಕರ ಅನುಪಾತ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೨೪ (೧೨೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ಪ್ರಸ್ತುತ ಇರುವ ವಿದ್ಯಾರ್ಥಿಗಳ ಮತ್ತು ಉಪನ್ಯಾಸಕರ ಅನುಪಾತ ಎಷ್ಟು ;

(ಆ) ಕೇಂದ್ರಿಯ ವಿದ್ಯಾಲಯಗಳಲ್ಲಿ ಪ್ರಸ್ತುತ ೧೧ ಮತ್ತು ೧೨ನೇ ತರಗತಿಯಲ್ಲಿರುವ ವಿದ್ಯಾರ್ಥಿಗಳ ಮತ್ತು ಉಪನ್ಯಾಸಕರ ಅನುಪಾತ ಎಷ್ಟು ;

(ಇ) ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವಿದ್ಯಾರ್ಥಿಗಳ ಮತ್ತು ಉಪನ್ಯಾಸಕರ ಅನುಪಾತವನ್ನು ಯಾವ ವೈಜ್ಞಾನಿಕ ಮಾನದಂಡದಲ್ಲಿ ನಿಗದಿಪಡಿಸಲಾಗಿದೆ ;

(ಈ) ವೈಜ್ಞಾನಿಕವಾಗಿ ಕೇಂದ್ರೀಯ ವಿದ್ಯಾಲಯಗಳಲ್ಲಿರುವಂತೆ ರಾಜ್ಯದ ಪದವಿ ಪೂರ್ವ ಶಿಕ್ಷಣ ಇಲಾಖೆಯಲ್ಲಿ ವಿದ್ಯಾರ್ಥಿಗಳ ಮತ್ತು ಉಪನ್ಯಾಸಕರ ಅನುಪಾತವನ್ನು ನಿಗದಿ ಪಡಿಸಲು ಶಿಕ್ಷಣ ಇಲಾಖೆಗೆ ಇರುವ ಸಮಸ್ಯೆ ಏನು ?

# ಸರ್ಕಾರಿ K.P.S ಶಾಲೆಗಳ ಶಿಕ್ಷಕರ ಮತ್ತು ಶಾಲೆಗಳ ಅಭಿವೃದ್ಧಿ ಕುರಿತು

**ಶ್ರೀ ಕೆ. ವಿವೇಕಾನಂದ (ಶಿಕ್ಷಕರ ಕ್ಷೇತ್ರ) :–**

೧೨೫ (೧೫೩) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮೈಸೂರು, ಮಂಡ್ಯ, ಹಾಸನ ಮತ್ತು ಚಾಮರಾಜನಗರ ಜಿಲ್ಲೆಗಳ ವ್ಯಾಪ್ತಿಗೆ ಶಾಲಾ ಶಿಕ್ಷಣ ಇಲಾಖೆಯಿಂದ ಎಷ್ಟು ಕೆ.ಪಿ.ಎಸ್ ಶಾಲೆಗಳನ್ನು ಮಂಜೂರು ಮಾಡಲಾಗಿದೆ ; ಮಂಜೂರಾದ ಎಷ್ಟು ಶಾಲೆಗಳು ಕಾರ್ಯನಿರ್ವಹಿಸುತ್ತಿವೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಈ ನಾಲ್ಕು ಜಿಲ್ಲೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಕೆ.ಪಿ.ಎಸ್ ಶಾಲೆಗಳಿಗೆ ಅನುಗುಣವಾಗಿ ವಿಷಯಾದಾರಿತ ಶಿಕ್ಷಕರ ನೇಮಕವನ್ನು ಮಾಡಲಾಗಿದೆಯೇ ; ಈ ಕೆ.ಪಿ.ಎಸ್. ಶಾಲೆಗಳಿಗೆ ಸ್ವಂತ ಕಟ್ಟಡ ಇವೆಯೇ ; ಇದ್ದಲ್ಲಿ, ಆ ಕಟ್ಟಡಗಳಲ್ಲಿ ಶೌಚಾಲಯದ ವ್ಯವಸ್ಥೆ ಇದೆಯೆ ;

(ಇ) ಸದರಿ ಕೆ.ಪಿ.ಎಸ್. ಶಾಲೆಗಳ ಅಭಿವೃದ್ಧಿ ಕೆಲಸ ಕಾರ್ಯಗಳಿಗೆ ಸರ್ಕಾರ ಇನ್ನೂ ಹೆಚ್ಚಿನ ಅನುದಾನವನ್ನು ಬಿಡುಗಡೆ ಮಾಡಲು ಯಾವ ಕ್ರಮವನ್ನು ಕೈಗೊಂಡಿದೆ ?

# ಕಸ್ತೂರಿ ರಂಗನ್ ವರದಿ ಕುರಿತು

**ಡಾ. ಆರತಿ ಕೃಷ್ಣ (ನಾಮನಿರ್ದೇಶನ ಹೊಂದಿದವರು) :–**

೧೨೬ (೧೦೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಸ್ತೂರಿ ರಂಗನ್ ವರದಿಯನ್ನಾಧರಿಸಿ ಕೇಂದ್ರ ಸರ್ಕಾರ ಜುಲೈ ೨೭, ೨೦೨೬ರಂದು ೭ನೇ ಹೊಸ ಕರಡು ಅಧಿಸೂಚನೆಯನ್ನು

ಮರುಹೊರಡಿಸಿರುವ ಮಾಹಿತಿ ರಾಜ್ಯ ಸರ್ಕಾರದಲ್ಲಿದೆಯೇ ; ಇದ್ದಲ್ಲಿ, ಪೂರ್ಣ ವಿವರಗಳನ್ನು ಒದಗಿಸುವುದು ;

(ಆ) ಸದರಿ ವರದಿಯಲ್ಲಿ ಜಾರಿಯಾಗಲಿರುವ ನಿಯಮಗಳಿಂದ, ಸ್ಥಳೀಯ ನಿವಾಸಿಗಳು ಮತ್ತು ಕೃಷಿಕರು ತಮ್ಮ ನೆಲದಿಂದ ಒಕ್ಕಲೆಬ್ಬಿಸುವರೆಂಬ ಆತಂಕ ನಿವಾರಣೆ ಮಾಡುವುದು ಸೇರಿದಂತೆ ಮೂಲಭೂತ ಸೌಕರ್ಯಗಳು ಮತ್ತು ಅಭಿವೃದ್ಧಿ ಕಾರ್ಯಗಳಿಗೆ ಹಿನ್ನಡೆಯಾಗುವ ಹಾಗೂ ಸ್ಥಳದಲ್ಲೇ ಪರಿಶೀಲಿಸದೆ, ಉಪಗ್ರಹ ಚಿತ್ರಗಳ (Remote Sensing) ಆಧಾರದ ಮೇಲೆ ವರದಿ ತಯಾರಿಸಿರುವುದರಲ್ಲಿ ಕೆಲವು ತಪ್ಪುಗಳಾಗಿವೆ ಎಂಬ ಸಾರ್ವಜನಿಕ ಆತಂಕಗಳ ಪರಿಹಾರಕ್ಕೆ ಮುಂದಾಗಲು ಕೇಂದ್ರ ಸರ್ಕಾರಕ್ಕೆ ಮನವರಿಕೆ ಮಾಡುವ ಸಲುವಾಗಿ ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; ಕೈಗೊಂಡಿದ್ದಲ್ಲಿ, ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ?

## SCSP/TSP ಯೋಜನೆಯ ಅನುದಾನವನ್ನು ಗ್ಯಾರಂಟಿಗಳಿಗೆ ಬಳಕೆ ಮಾಡಿಕೊಂಡಿರುವ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೭ (೯೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ಮೂರು ವರ್ಷಗಳಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡ ವರ್ಗಗಳ ಕಲ್ಯಾಣಕ್ಕಾಗಿ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಡಿ ಮೀಸಲಿಟ್ಟ ಹಾಗೂ ಬಿಡುಗಡೆಯಾದ ಅನುದಾನವೆಷ್ಟು; ಈ ಅನುದಾನದಲ್ಲಿ ಎಷ್ಟು ಮೊತ್ತವನ್ನು ರಾಜ್ಯ

ಸರ್ಕಾರವು ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕಾಗಿ ಮೀಸಲಿರಿಸಿ ವರ್ಗಾಯಿಸಿದೆ; ವರ್ಗಾಯಿಸಿದ ಅನುದಾನದಲ್ಲಿ ಎಷ್ಟು ಮೊತ್ತವನ್ನು ಬಳಕೆ ಮಾಡಲಾಗಿದೆ ; (ವರ್ಷವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ಜುಲೈ–೨೦೨೬ ಅಂತ್ಯದವರೆಗೆ ಎಷ್ಟು ವೆೊತ್ತವನ್ನು ಗ್ಯಾರಂಟಿ ಯೋಜನೆಗಳಲ್ಲಿ ಫಲಾನುಭವಿಗಳಾಗಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳಾಗಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳಿಗೆ ವೆಚ್ಚ ಮಾಡಲಾಗಿದೆ ; ಪ್ರತಿಯೊಂದು ಗ್ಯಾರಂಟಿ ಯೋಜನೆಯಲ್ಲಿರುವ ಪರಿಶಿಷ್ಟ ಜಾತಿ ಮತ್ತು ಪಂಗಡದ ಫಲಾನುಭವಿಗಳ ಸಂಖ್ಯೆ ಎಷ್ಟು ; (ಪ್ರತಿಯೊಂದು ಗ್ಯಾರಂಟಿ ಯೋಜನೆಯ ಅನುಸಾರ ಮಾಹಿತಿ ನೀಡುವುದು)

(ಇ) ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ಗ್ಯಾರಂಟಿ ಯೋಜನೆಗೆ ವರ್ಗಾಯಿಸಿದ್ದಲ್ಲಿ, ಅದನ್ನು ಬಳಕೆ ಮಾಡಿಕೊಂಡಿದ್ದಲ್ಲಿ, ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯ ಹಣವನ್ನು ದುರ್ಬಳಕೆ ಮಾಡಿಕೊಂಡಂತೆ ಆಗುವುದಿಲ್ಲವೇ ; ಎಸ್‌ಸಿಎಸ್‌ಪಿ/ಟಿಎಸ್‌ಪಿ ಕಾಯ್ದೆಯ ಉಲ್ಲಂಘನೆಯಾಗುವುದಿಲ್ಲವೇ ; ದಲಿತರ ಕಲ್ಯಾಣಕ್ಕೆ ಹಿನ್ನೆಡೆಯಾಗುವುದಿಲ್ಲವೇ ; (ಮಾಹಿತಿ ನೀಡುವುದು)

(ಈ) ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಲ್ಲಿ ಪರಿಶಿಷ್ಟರ ಕಲ್ಯಾಣಕ್ಕಾಗಿ ಮೀಸಲಿಟ್ಟ ಹಣವನ್ನು ರಾಜ್ಯ ಸರ್ಕಾರವು ಗ್ಯಾರಂಟಿ ಯೋಜನೆಗಳಿಗೆ ವರ್ಗಾಯಿಸಿರುವುದು ದಲಿತರಿಗೆ ಮಾಡಿದ ಅನ್ಯಾಯವಲ್ಲವೇ; ಆ ವರ್ಗಗಳ ಶ್ರೇಯೋಭಿವೃದ್ಧಿಗೆ ಬಳಕೆ ಮಾಡಬೇಕಾದ ಅನುದಾನಕ್ಕೆ ಕೊಕ್ಕೆ ಹಾಕಿದಂತೆ ಆಗುವುದಿಲ್ಲವೇ;

ದಲಿತರ ಸಾಂವಿಧಾನಿಕ ಹಕ್ಕನ್ನು ಕಸಿದಂತೆ ಆಗುವುದಿಲ್ಲವೇ; ಗ್ಯಾರಂಟಿ ಯೋಜನೆಗಳ ಅನುಷ್ಠಾನಕ್ಕೆ ಬಳಕೆ ಮಾಡಿರುವ ಹಣವನ್ನು ಮತ್ತೆ ಎಸ್‌ಸಿಎಸ್‌ಪಿ/ಟಿಎಸ್‌ಪಿ ಯೋಜನೆಯಲ್ಲಿ ವಿನಿಯೋಗ ಮಾಡಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ ?

## ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ವಿದ್ಯಾರ್ಥಿ ವೇತನ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೮ (೧೦೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯುಡಿಯುಲ್ಲಿ ವಿದ್ಯಾರ್ಥಿಗಳಿಗಾಗಿ ಜಾರಿಯಲ್ಲಿರುವ ಎಲ್ಲಾ ತರಹದ ವಿದ್ಯಾರ್ಥಿ ವೇತನ/ಪ್ರೋತ್ಸಾಹ ಧನ/ ಶಿಷ್ಯ ವೇತನ (ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ) ಯೋಜನೆಗಳ ಸಂಪೂರ್ಣ ಮಾಹಿತಿ ಒದಗಿಸುವುದು ; ವಿದ್ಯಾರ್ಥಿ ವೇತನ ಯೋಜನೆಗಳಿಗೆ ಆಯ್ಕೆ ಪ್ರಕ್ರಿಯೆ ಯಾವ ಆಧಾರದಲ್ಲಿ ನಡೆಯುತ್ತದೆ;

(ಆ) ಕಳೆದ ಮೂರು ವರ್ಷಗಳಿಂದ ಜಾರಿಯಲ್ಲಿರುವ ವಿದ್ಯಾರ್ಥಿ ವೇತನ ಯೋಜನೆಗಳನ್ನು ರದ್ದುಪಡಿಸಲಾಗಿದೆಯೇ; ಒಂದು ವೇಳೆ ರದ್ದುಪಡಿಸಲಾಗಿದ್ದರೆ ಕಾರಣಗಳೇನು; ಸದರಿ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿಗಳಿಗೆ ಯಾವುದಾದರೂ ಹೊಸ ವಿದ್ಯಾರ್ಥಿ ವೇತನ ಜಾರಿಯಾಗಿದೆಯೇ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಿಂದ ಜಾರಿಯಲ್ಲಿರುವ ವಿದ್ಯಾರ್ಥಿ ವೇತನ ಯೋಜನೆಗಳಲ್ಲಿ ಸಹಾಯ ಧನ ಬಯಸಿ ಅರ್ಜಿಸಲ್ಲಿಸಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ತಿರಸ್ಕೃತ ಅರ್ಜಿಗಳ ಸಂಖ್ಯೆ ಎಷ್ಟು ;

ಯಾವ ಕಾರಣಕ್ಕಾಗಿ ತಿರಸ್ಕರಿಸಲಾಗಿದೆ; ಅರ್ಜಿ ಪುರಸ್ಕೃತಗೊಂಡ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ /ಸಹಾಯ ಧನವನ್ನು ಪಾವತಿಸಲಾಗಿದೆಯೇ ; ಪಾವತಿಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು ; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ; ಬಾಕಿ ಮೊತ್ತವನ್ನು ಪಾವತಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ವಿದ್ಯಾರ್ಥಿ ವೇತನ/ಪ್ರೋತ್ಸಾಹ ಧನ/ಶಿಷ್ಯ ವೇತನ (ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ)ಯೋಜನೆಗಳಲ್ಲಿ ಸಹಾಯ ಧನವನ್ನು ಯಾವ ಕಾಲಮಿತಿಯೊಳಗೆ ಪಾವತಿಸಬೇಕೆಂಬ ನಿಯಮವಿದೆ; ಚಾಲ್ತಿಯಲ್ಲಿರುವ ನಿಯಮಗಳನ್ನು ಪಾಲಿಸಲಾಗುತ್ತಿದೆಯೇ; ಸದರಿ ಯೋಜನೆಗಳಲ್ಲಿನ ಸಹಾಯಧನ ಪಾವತಿ ವಿಳಂಬದ ಕುರಿತು ಅಕ್ಷೇಪಗಳು/ಪ್ರತಿಭಟನೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

## ವಿದ್ಯಾರ್ಥಿ ವೇತನ ಯೋಜನೆಗಳ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೨೯ (೧೦೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಸಮಾಜ ಕಲ್ಯಾಣ ಇಲಾಖೆಯಡಿಯಲ್ಲಿ ವಿದ್ಯಾರ್ಥಿಗಳಿಗಾಗಿ ಜಾರಿಯಲ್ಲಿರುವ ಎಲ್ಲಾ ತರಹದ ವಿದ್ಯಾರ್ಥಿ ವೇತನ/ಪ್ರೋತ್ಸಾಹ ಧನ/ ಶಿಷ್ಯ ವೇತನ (ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ) ಯೋಜನೆಗಳ ಸಂಪೂರ್ಣ ಮಾಹಿತಿ ಒದಗಿಸುವುದು ; ವಿದ್ಯಾರ್ಥಿ ವೇತನ ಯೋಜನೆಗಳಿಗೆ ಆಯ್ಕೆ ಪ್ರಕ್ರಿಯೆ ಯಾವ ಆಧಾರದಲ್ಲಿ ನಡೆಯುತ್ತದೆ;

(ಆ) ಕಳೆದ ಮೂರು ವರ್ಷಗಳಿಂದ ಜಾರಿಯಲ್ಲಿರುವ ವಿದ್ಯಾರ್ಥಿ ವೇತನ ಯೋಜನೆಗಳನ್ನು ರದ್ದುಪಡಿಸಲಾಗಿದೆಯೇ; ಒಂದು ವೇಳೆ ರದ್ದುಪಡಿಸಲಾಗಿದ್ದರೆ ಕಾರಣಗಳೇನು; ಸದರಿ ಆರ್ಥಿಕ ವರ್ಷದಲ್ಲಿ ವಿದ್ಯಾರ್ಥಿಗಳಿಗೆ ಯಾವುದಾದರೂ ಹೊಸ ವಿದ್ಯಾರ್ಥಿ ವೇತನ ಜಾರಿಯಾಗಿದೆಯೇ; (ಸಂಪೂರ್ಣ ಮಾಹಿತಿ ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಿಂದ ಜಾರಿಯಲ್ಲಿರುವ ವಿದ್ಯಾರ್ಥಿ ವೇತನ ಯೋಜನೆಗಳಲ್ಲಿ ಸಹಾಯ ಧನ ಬಯಸಿ ಅರ್ಜಿಸಲ್ಲಿಸಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ತಿರಸ್ಕೃತ ಅರ್ಜಿಗಳ ಸಂಖ್ಯೆ ಎಷ್ಟು; ಯಾವ ಕಾರಣಕ್ಕಾಗಿ ತಿರಸ್ಕರಿಸಲಾಗಿದೆ; ಅರ್ಜಿ ಪುರಸ್ಕೃತಗೊಂಡ ಎಲ್ಲಾ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ /ಸಹಾಯ ಧನವನ್ನು ಪಾವತಿಸಲಾಗಿದೆಯೇ; ಪಾವತಿಗೆ ಬಾಕಿ ಇರುವ ಅರ್ಜಿಗಳ ಸಂಖ್ಯೆ ಎಷ್ಟು; ಯಾವ ಕಾರಣಕ್ಕಾಗಿ ಬಾಕಿ ಉಳಿಸಿಕೊಳ್ಳಲಾಗಿದೆ; ಬಾಕಿ ಮೊತ್ತವನ್ನು ಪಾವತಿಸಲು ಯಾವ ರೀತಿಯ ಕ್ರಮಗಳನ್ನು ಕೈಗೊಳ್ಳಲಾಗಿದೆ ;

(ಈ) ವಿದ್ಯಾರ್ಥಿ ವೇತನ/ಪ್ರೋತ್ಸಾಹ ಧನ/ಶಿಷ್ಯ ವೇತನ (ಕೇಂದ್ರ ಮತ್ತು ರಾಜ್ಯ ಸರ್ಕಾರ ಪುರಸ್ಕೃತ)ಯೋಜನೆಗಳಲ್ಲಿ ಸಹಾಯ ಧನವನ್ನು ಯಾವ ಕಾಲಮಿತಿಯೊಳಗೆ ಪಾವತಿಸಬೇಕೆಂಬ ನಿಯಮವಿದೆ; ಚಾಲ್ತಿಯಲ್ಲಿರುವ ನಿಯಮಗಳನ್ನು ಪಾಲಿಸಲಾಗುತ್ತಿದೆಯೇ; ಸದರಿ ಯೋಜನೆಗಳಲ್ಲಿನ ಸಹಾಯಧನ ಪಾವತಿ ವಿಳಂಬದ ಕುರಿತು ಅಕ್ಷೇಪಗಳು/ಪ್ರತಿಭಟನೆಗಳು ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು ? (ಸಂಪೂರ್ಣ ಮಾಹಿತಿ ಒದಗಿಸುವುದು)

# ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ನಡೆದ ಹಗರಣದ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೩೦ (೧೩೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ನಿಯಮಿತದಲ್ಲಿ ನಡೆದ ನಕಲಿ ಕಂಪನಿಗಳು ಮತ್ತು ನೂರಾರು ಇತರ ಖಾತೆಗಳಿಗೆ ಅಕ್ರಮ ಹಣ ವರ್ಗಾವಣೆ ಪ್ರಕರಣ ಹಾಗೂ ನಿಗಮದ ಹಣ ದುರುಪಯೋಗದ ಪ್ರಕರಣಗಳು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ತೆಗೆದುಕೊಂಡಿರುವ ಕ್ರಮಗಳೇನು; ಸದರಿ ಹಗರಣಕ್ಕೆ ಸಂಬಂಧಿಸಿದಂತೆ, ತಪ್ಪಿತಸ್ಥರ ವಿರುದ್ಧ ಯಾವ ಕ್ರಮಗಳನ್ನು ತೆಗೆದುಕೊಳ್ಳಲಾಗಿದೆ; ಹಗರಣದ ಒಟ್ಟು ಮೊತ್ತವೆಷ್ಟು; (ಸಂಪೂರ್ಣ ಮಾಹಿತಿ ನೀಡುವುದು)

(ಆ) ಯಾವ ಯಾವ ನಕಲಿ ಕಂಪನಿಗಳಿಗೆ ಹಾಗೂ ಇತರೆ ಖಾತೆಗಳಿಗೆ ಒಟ್ಟು ಎಷ್ಟು ಮೊತ್ತವನ್ನು ಅಕ್ರಮವಾಗಿ ವರ್ಗಾವಣೆ ಮಾಡಲಾಗಿದೆ; (ಖಾತೆಗಳ ವಿವರ ನೀಡುವುದು) ಈ ರೀತಿ ಅಕ್ರಮವಾಗಿ ವರ್ಗಾವಣೆಯಾದ ಮತ್ತು ದುರ್ಬಳಕೆಯಾದ ಮೊತ್ತವನ್ನು ವಶಪಡಿಸಿಕೊಳ್ಳಲಾಗಿದೆಯೇ; ಎಷ್ಟು ಮೊತ್ತವನ್ನು ವಶಪಡಿಸಿಕೊಳ್ಳಲಾಗಿದೆ; ವಶಪಡಿಸಿಕೊಳ್ಳಲು ಬಾಕಿ ಇರುವ ಮೊತ್ತವೆಷ್ಟು;

(ಇ) ೨೦೨೩–೨೪, ೨೦೨೪–೨೫, ೨೦೨೫–೨೬ನೇ ಸಾಲಿನಲ್ಲಿ ರಾಜ್ಯ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು;

ಬಿಡುಗಡೆಯಾದ ಅನುದಾನವನ್ನು ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ಯೋಜನೆಗಳವಾರು ಹಣ ಬಳಕೆಯ ಸಂಪೂರ್ಣ ಮಾಹಿತಿ ನೀಡುವುದು)

(ಈ) ಅಕ್ರಮ ಹಣ ವರ್ಗಾವಣೆ ಮತ್ತು ದುರುಪಯೋಗ ಹಗರಣದ ಒಟ್ಟು ಮೊತ್ತವನ್ನು ಯಾವ ರೀತಿಯಲ್ಲಿ ಮರು ಹೊಂದಾಣಿಕೆ ಮಾಡಲಾಗಿದೆ; ಯಾವ ಉದ್ದೇಶಗಳಿಗಾಗಿ ಮೀಸಲಿಟ್ಟ ಹಣವನ್ನು ಸದರಿ ಹಗರಣದಲ್ಲಿ ಬಳಸಲಾಗಿದೆ? (ಸಂಪೂರ್ಣ ಮಾಹಿತಿ ನೀಡುವುದು)

## ಸರ್ಕಾರಿ ಶಾಲೆಗಳ ಸಮಸ್ಯೆಗಳ ಕುರಿತು

**ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೩೧ (೧೩೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಶಿಥಿಲಾವಸ್ಥೆಯ ಕಟ್ಟಡಗಳನ್ನು ಹೊಂದಿರುವ ಶಾಲೆಗಳ ಸಂಖ್ಯೆ ಎಷ್ಟು; ಶೌಚಾಲಯಗಳು, ಗ್ರಂಥಾಲಯಗಳು, ಆಟದ ಮೈದಾನ ಹಾಗೂ ಕುಡಿಯುವ ನೀರು ಮತ್ತು ಇನ್ನಿತರ ಮೂಲಭೂತ ಸೌಕರ್ಯಗಳನ್ನು ಹೊಂದಿರದೆ ಇರುವ ಶಾಲೆಗಳ ಸಂಖ್ಯೆ ಎಷ್ಟು; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಸುತ್ತಿರುವ ಶಾಲೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು, ತಾಲ್ಲೂಕುವಾರು ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಆ) ೨೦೨೩-೨೪, ೨೦೨೪-೨೫, ೨೦೨೫-೨೬ ಮತ್ತು ೨೦೨೬-೨೭ನೇ ಸಾಲಿನಲ್ಲಿ ವಿದ್ಯಾರ್ಥಿಗಳಿಗೆ ಪಠ್ಯ ಪುಸ್ತಕಗಳು, ನೋಟ್ ಬುಕ್, ಶೂ-ಸಾಕ್ಸ್‌ಳನ್ನು ಯಾವ ದಿನಾಂಕದಂದು

ವಿತರಿಸಲಾಗಿದೆ.; ಎಲ್ಲಾ ವಿದ್ಯಾರ್ಥಿಗಳಿಗೂ ವಿತರಿಸಲಾಗಿದೆಯೇ; ಒಂದು ವೇಳೆ ವಿತರಿಸಲು ವಿಳಂಬವಾಗಿದ್ದರೆ, ಯಾವ ಕಾರಣಕ್ಕಾಗಿ ವಿಳಂಬವಾಗಿದೆ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ರಾಜ್ಯದಲ್ಲಿರುವ ಶಾಲೆಗಳ ಮೂಲಭೂತ ಸೌಕರ್ಯಗಳು, ಶಿಕ್ಷಕರ ಕೊರತೆ, ಕೊಠಡಿಗಳ ಕೊರತೆ ಹಾಗೂ ಇನ್ನಿತರ ಸಮಸ್ಯೆಗಳಿಂದ ವಿದ್ಯಾರ್ಥಿಗಳು ಸಂಕಷ್ಟಕ್ಕೊಳಗಾಗಿರುವ ಪ್ರಕರಣಗಳು ಬೆಳಕಿಗೆ ಬರುತ್ತಿದ್ದು, ಇವು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ತೆಗೆದುಕೊಂಡ ಕ್ರಮಗಳೇನು; ಶಿಕ್ಷಣ ಕ್ಷೇತ್ರದ ಎಲ್ಲಾ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು ?

## ಗೃಹಲಕ್ಷ್ಮಿ ಯೋಜನೆ ಕುರಿತು

**ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೨ (೨೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಗೃಹಲಕ್ಷ್ಮಿ ಯೋಜನೆಯಡಿ ನೋಂದಣಿಯಾದ ಫಲಾನುಭವಿಗಳು ಹಾಗೂ ಅರ್ಹ ಫಲಾನುಭವಿಗಳ ಸಂಖ್ಯೆ ಎಷ್ಟು ಹಾಗೂ ಈವರೆವಿಗೆ ಪಾವತಿ ಮಾಡಿರುವ ಕಂತುಗಳು ಮತ್ತು ಮೊತ್ತದ ವಿವರಗಳ ಜಿಲ್ಲಾವಾರು ಮಾಹಿತಿ ನೀಡುವುದು ;

(ಆ) ಅರ್ಹ ಫಲಾನುಭವಿಗಳಲ್ಲಿ ಮರಣ ಹೊಂದಿದವರು ಎಷ್ಟು; ಮರಣ ಹೊಂದಿದ ಫಲಾನುಭವಿಗೆ ಪರ್ಯಾಯವಾಗಿ ಮನೆಯ

ಇತರೆ ಕುಟುಂಬಸ್ಥರು ಫಲಾನುಭವಿಯಾಗಿರುವ ಪ್ರಕರಣಗಳೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಮರಣ ಹೊಂದಿರುವ ಫಲಾನುಭವಿಯ ಖಾತೆಗಳಿಗೆ ಹಣ ಪಾವತಿಯಾಗಿದೆಯೇ; ಹಾಗಿದ್ದಲ್ಲಿ ಎಷ್ಟು ಮೊತ್ತ ಪಾವತಿಯಾಗಿದೆ; ಈವರೆವಿಗೆ ಮರುಪಾವತಿಯಾಗಿರುವ ಮತ್ತು ಬಾಕಿ ಇರುವ ಮೊತ್ತವೆಷ್ಟು ; (ಜಿಲ್ಲಾವಾರು, ಬ್ಯಾಂಕುವಾರು ಮಾಹಿತಿ ನೀಡುವುದು)

(ಈ) ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳ ವಿವರಗಳನ್ನು ಪರಿಷ್ಕರಣೆ ಮಾಡುವ ಕಾರ್ಯ ಮತ್ತು ಗುರುತಿನ ಚೀಟಿ ವಿತರಿಸುವ ಕಾರ್ಯವು ಯಾವ ಹಂತದಲ್ಲಿದೆ;

(ಉ) ಗೃಹಲಕ್ಷ್ಮಿ ಯೋಜನೆಯ ಫಲಾನುಭವಿಗಳು ಹಣ ಪಾವತಿಗೆ ಮೊದಲು ಬೈಯೋಮೆಟ್ರಿಕ್ ಪಡೆಯುವ ವ್ಯವಸ್ಥೆ ಜಾರಿಗೆ ತರುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೆ ಇದ್ದಲ್ಲಿ ಯಾವ ಹಂತದಲ್ಲಿದೆ ?

## ರಾಜ್ಯ ಸರ್ಕಾರ ಜಾರಿಗೆ ತರುತ್ತಿರುವ SEP ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೩ (೧೧೮) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯ ಸರ್ಕಾರ NEP ಜಾರಿಗೆ ತರವುದರ ಬದಲು SEP ತರುವುದಾಗಿ ಹೇಳಿದ್ದು ನಿಜವೇ; ಹಾಗಿದ್ದರೆ, ಕಾರಣವೇನು ;

(ಆ) SEP ರಾಜ್ಯದಲ್ಲಿ ಜಾರಿಗೆ ತರುವುದು ಯಾವಾಗ ಇದರಿಂದ ವಿದ್ಯಾರ್ಥಿಗಳಿಗೆ ಆಗುವ ಅನುಕೂಲಗಳೇನು ;

(ಇ) NEP ಯನ್ನು ಜಾರಿಗೆ ಮಾಡದಿರಲು ಕಾರಣವೇನು ? (ವಿವರಗಳೊಂದಿಗೆ ವಿವರಿಸುವುದು)

## ತುಮಕೂರು ವಿಶ್ವವಿದ್ಯಾಲಯದಲ್ಲಿ ನಡೆದ ಘಟಿಕೋತ್ಸವದ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೪ (೧೧೭) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ತುಮಕೂರು ವಿಶ್ವವಿದ್ಯಾಲಯದಲ್ಲಿ ಘಟಿಕೋತ್ಸವ ಕಾರ್ಯಕ್ರಮದಲ್ಲಿ ಒಟ್ಟು ಎಷ್ಟು ವಿದ್ಯಾರ್ಥಿಗಳಿಗೆ ಪದಕ ವಿತರಣೆ ಮಾಡಲಾಗಿದೆ ;

(ಆ) ಈ ಘಟಿಕೋತ್ಸವದಲ್ಲಿ ಪದಕಗಳನ್ನು ಪಡೆದ ವಿದ್ಯಾರ್ಥಿಗಳಿಗೆ ಪದಕ ನೀಡುವ ಬದಲು ಹಣವನ್ನು ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಇದರ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು ;

(ಇ) ಈ ರೀತಿಯಾಗಿ ಪದಕದ ಬದಲು ಹಣವನ್ನು ನೀಡಿದರೆ ವಿದ್ಯಾರ್ಥಿಗಳಿಗೆ ಅವಮಾನ ಮಾಡಿದಂತಾಗುವುದಿಲ್ಲವೇ ;

(ಈ) ಈ ಘಟಿಕೋತ್ಸವದಲ್ಲಿ ಕಾರ್ಯಕ್ರಮದ ಅಂಗವಾಗಿ ಪದಕ ವಿತರಣೆಯನ್ನು ಮಾಡಲು ವಿಶ್ವವಿದ್ಯಾಲಯ ಯಾವುದಾದರು ಸಂಸ್ಥೆಗೆ (ಏಜೆನ್ಸಿಗೆ) ನೀಡಲಾಗಿತ್ತೆ; ನೀಡಿದ್ದಲ್ಲಿ, ಏಜೆನ್ಸಿಯ ಹೆಸರು ಮತ್ತು ಸಂಪೂರ್ಣ ವಿವರ ನೀಡುವುದು ?

## ರಾಜ್ಯದಲ್ಲಿರುವ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೫ (೧೧೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ವಿದ್ಯಾರ್ಥಿ ನಿಲಯಗಳಿವೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಪ್ರತಿ ವರ್ಷ ಎಷ್ಟು ಅರ್ಜಿಗಳು ವಿದ್ಯಾರ್ಥಿ ನಿಲಯಕ್ಕೆ ಬರುತ್ತಿದೆ ;

(ಇ) ಕಳೆದ ಎರಡು ವರ್ಷಗಳಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲಾಗಿದೆ ;

(ಈ) ಸದರಿ ವಿದ್ಯಾರ್ಥಿ ನಿಲಯಗಳಿಗೆ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆ ಯಾವ ರೀತಿಯಾಗಿ ಮಾಡಲಾಗುತ್ತಿದೆ ;

(ಉ) ಪ್ರತಿ ಒಬ್ಬ ವಿದ್ಯಾರ್ಥಿಗೆ ಸರ್ಕಾರ ಒಂದು ವರ್ಷಕ್ಕೆ ಎಷ್ಟು ಹಣ ಖರ್ಚು ಮಾಡುತ್ತಿದೆ ?

## ರಾಜ್ಯದಲ್ಲಿರುವ ವಿದ್ಯಾರ್ಥಿ ನಿಲಯಗಳ ಬಗ್ಗೆ

**ಶ್ರೀ ಕೆ.ಎಸ್. ನವೀನ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೬ (೧೨೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಒಟ್ಟು ಎಷ್ಟು ವಿದ್ಯಾರ್ಥಿ ನಿಲಯಗಳಿವೆ ; (ಜಿಲ್ಲಾವಾರು ವಿವರ ಒದಗಿಸುವುದು)

(ಆ) ಪ್ರತಿ ವರ್ಷ ಎಷ್ಟು ಅರ್ಜಿಗಳು ವಿದ್ಯಾರ್ಥಿ ನಿಲಯಕ್ಕೆ ಬರುತ್ತಿದೆ ;

(ಇ) ಕಳೆದ ಎರಡು ವರ್ಷಗಳಲ್ಲಿ ವಿದ್ಯಾರ್ಥಿ ನಿಲಯಗಳಲ್ಲಿ ಎಷ್ಟು ವಿದ್ಯಾರ್ಥಿಗಳಿಗೆ ಪ್ರವೇಶಾತಿ ನೀಡಲಾಗಿದೆ ;

(ಈ) ಸದರಿ ವಿದ್ಯಾರ್ಥಿ ನಿಲಯಗಳಿಗೆ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆ ಯಾವ ರೀತಿಯಾಗಿ ಮಾಡಲಾಗುತ್ತಿದೆ ;

(ಉ) ಪ್ರತಿ ಒಬ್ಬ ವಿದ್ಯಾರ್ಥಿಗೆ ಸರ್ಕಾರ ಒಂದು ವರ್ಷಕ್ಕೆ ಎಷ್ಟು ಹಣ ಖರ್ಚು ಮಾಡುತ್ತಿದೆ ?

## ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಯಲ್ಲಿರುವ ವಸತಿ ನಿಲಯಗಳ ಬಗ್ಗೆ

**ಡಾ. ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೭ (೧೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ ಬರುವ ಮೆಟ್ರಿಕ್ ಪೂರ್ವ ಮತ್ತು ಮೆಟ್ರಿಕ್ ನಂತರದ ವಸತಿ ನಿಲಯಗಳ ಸಂಖ್ಯೆ ಎಷ್ಟು ;

(ಆ) ಮೇಲ್ಕಂಡ ಜಿಲ್ಲೆಗಳಲ್ಲಿನ ವಸತಿ ನಿಲಯಗಳಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು; ಪ್ರತಿಯೊಬ್ಬ ವಿದ್ಯಾರ್ಥಿಗೆ ಮಾಸಿಕ ಸರ್ಕಾರ ಎಷ್ಟು ಹಣವನ್ನು ವಿನಿಯೋಗಿಸುತ್ತಿದೆ ; (ವಿವರ ನೀಡುವುದು)

(ಇ) ಸದರಿ ವಸತಿ ನಿಲಯಗಳಲ್ಲಿ ಶೌಚಾಲಯ ಹಾಗೂ ಸ್ನಾನದ ಗೃಹಗಳು ಶೋಚನೀಯ ಸ್ಥಿತಿಯಲ್ಲಿದ್ದು, ಸಂಬಂಧಪಟ್ಟ ವಸತಿ ನಿಲಯ ಪಾಲಕರು ಮೇಲಾಧಿಕಾರಿಗಳ ಗಮನಕ್ಕೆ ತಂದರೂ ಯಾವುದೇ ಕ್ರಮ ಕೈಗೊಳ್ಳದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಹೆಚ್ಚುವರಿಯಾಗಿ ಹೊಸ ಸ್ನಾನದ ಗೃಹ ಹಾಗೂ ಶೌಚಗೃಹದ ಅವಶ್ಯಕತೆ ಇರುವುದಾಗಿ ಸಂಬಂಧಪಟ್ಟ ಅಧಿಕಾರಿಗಳು ಸಮಾಜ ಕಲ್ಯಾಣ ಇಲಾಖೆಯ ಆಯುಕ್ತರಿಗೆ ಪ್ರಸ್ತಾವನೆ ಸಲ್ಲಿಸಿದ್ದರೂ

ಇದುವರೆವಿಗೂ ಪ್ರಸ್ತಾವನೆಗೆ ಅನುಮೋದನೆ ದೊರತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ, ಸದರಿ ಪ್ರಸ್ತಾವನೆಗೆ ಯಾವ ಕಾಲಮಿತಿಯೊಳಗೆ ಅನುಮೋದನೆ ನೀಡಲಾಗುವುದು ?

## ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿ ಕಳಪೆ ಆಹಾರ, ಕಲುಷಿತ ನೀರು ಸೇವನೆಯಿಂದ ಅಸ್ವಸ್ಥಗೊಂಡ ಮಕ್ಕಳ ಬಗ್ಗೆ

**ಡಾ. ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೮ (೧೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಮೊರಾರ್ಜಿ ದೇಸಾಯಿ, ಅಲ್ಪಸಂಖ್ಯಾತ ವಸತಿ ಶಾಲೆಗಳ ಸಂಖ್ಯೆ ಎಷ್ಟು ;

(ಆ) ಚಿತ್ತಾಪುರ ತಾಲ್ಲೂಕಿನಲ್ಲಿ ಬರುವ ದಂಡೋತಿ ಗ್ರಾಮದಲ್ಲಿರುವ ಮೊರಾರ್ಜಿ ದೇಸಾಯಿ ಅಲ್ಪ ಸಂಖ್ಯಾತರ ಶಾಲೆಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಹಾಗೂ ಪ್ರತಿಯೊಬ್ಬ ವಿದ್ಯಾರ್ಥಿಗೆ ಮಾಸಿಕ ಎಷ್ಟು ಹಣ ವ್ಯಯ ಮಾಡಲಾಗುತ್ತಿದೆ ;

(ಇ) ಸದರಿ ವಸತಿ ಶಾಲೆಯಲ್ಲಿ ಕಳಪೆ ಆಹಾರ ಹಾಗೂ ಕಲುಷಿತ ನೀರು ಸೇವನೆಯಿಂದ ಅಸ್ವಸ್ಥಗೊಂಡ ಮಕ್ಕಳ ಸಂಖ್ಯೆ ಎಷ್ಟು ಹಾಗೂ ಪ್ರಸ್ತುತ ಮಕ್ಕಳ ಆರೋಗ್ಯದ ಸ್ಥಿತಿ ಹೇಗಿದೆ ; ಮತ್ತು ಸದರಿ ಪ್ರಕರಣ ಮರುಕಳಿಸದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ವಸತಿ ಶಾಲೆಗಳಿಗೆ ಆಹಾರ ಸಾಮಾಗ್ರಿಗಳನ್ನು ಪೂರೈಸುತ್ತಿರುವ ಗುತ್ತಿಗೆದಾರ ಹಾಗೂ ಅಧಿಕಾರಿಗಳು ಶಾಮೀಲಾಗಿ ಕಳಪೆ ಅಕ್ಕಿ,

ಗೋಧಿ, ಬೇಳೆ ಹಿಟ್ಟು ಹಾಗೂ ಇನ್ನಿತರೆ ಸೇರಿದಂತೆ ಅನೇಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದು, ಸಂಬಂಧಪಟ್ಟವರ ವಿರುದ್ಧ ಸರ್ಕಾರ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು ?

## ಕಲಬುರಗಿ ವಿಶ್ವವಿದ್ಯಾಲಯದಲ್ಲಿ ಖಾಲಿ ಇರುವ ಬೋಧಕ ಹುದ್ದೆಗಳ ಬಗ್ಗೆ

**ಡಾ. ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೩೯ (೧೪) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ವಿಶ್ವ ವಿದ್ಯಾಲಯದಲ್ಲಿ ಖಾಲಿ ಇರುವ ಭೋದಕ ಹುದ್ದೆಗಳೆಷ್ಟು, ಖಾಲಿ ಇರುವ ಬೋಧಕ ಹುದ್ದೆಗಳನ್ನು ನೇಮಕಾತಿ ಮಾಡುವಂತೆ ವಿಶ್ವ ವಿದ್ಯಾಲಯದಿಂದ ಸರ್ಕಾರಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಲಾಗಿದೆಯೇ ; (ಮಾಹಿತಿ ಒದಗಿಸುವುದು)

(ಆ) ಸಲ್ಲಿಸಿದಲ್ಲಿ ನೇಮಕಾತಿ ಮಾಡಲು ಸರ್ಕಾರಕ್ಕೆ ಇರುವ ಅಡೆ–ತಡೆಗಳೇನು ;

(ಇ) ಹುದ್ದೆ ಮಂಜೂರಾದರೂ ನೇಮಕಾತಿ ಮಾಡದಿರಲು ಕಾರಣವೇನು ?

## ಕಲಬುರಗಿ ಜಿಲ್ಲೆಯ ಚಿತ್ತಾಪುರದ "ಕನ್ನಡ ಭವನ ಕಟ್ಟಡದ" ಬಗ್ಗೆ

**ಡಾ. ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೦ (೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲಬುರಗಿ ಜಿಲ್ಲೆಯಲ್ಲಿ ಬರುವ ಚಿತ್ತಾಪುರದ ಹೃದಯ ಭಾಗದಲ್ಲಿರುವ ಕನ್ನಡ ಭವನ ನಿರ್ಮಿಸಲು ಸರ್ಕಾರ ನೀಡಿರುವ ಅನುದಾನ ಎಷ್ಟು ಹಾಗೂ ಸದರಿ ಭವನದ ಕಾಮಗಾರಿಗಳು ಪೂರ್ಣಗೊಂಡಿವೆಯೇ; ಪೂರ್ಣಗೊಂಡಿದ್ದಲ್ಲಿ, ಕನ್ನಡ ಭವನ ಕಟ್ಟಡವನ್ನು ಕನ್ನಡ ಸಾಹಿತ್ಯ ಪರಿಷತ್ ವಶಕ್ಕೆ ಯಾವಾಗ ಹಸ್ತಾಂತರಿಸಲಾಗುವುದು ;

(ಆ) ಕನ್ನಡ ಭವನವನ್ನು ಕನ್ನಡ ಸಾಹಿತ್ಯ ಪರಿಷತ್ ವಶಕ್ಕೆ ಇದುವರೆವಿಗೂ ಹಸ್ತಾಂತರಿಸದಿರಲು ಕಾರಣವೇನು ; ಕನ್ನಡ ಸಾಹಿತ್ಯ ಪರಿಷತ್‌ನ ಚಟುವಟಿಕೆಗಳಿಗೆ ಸದರಿ ಕಟ್ಟಡ ಲಭ್ಯವಿಲ್ಲದ ಕಾರಣ ಅಜೀವ ಸದಸ್ಯರು ಬೇಸರ ವ್ಯಕ್ತ ಪಡಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ; ಬಂದಿದ್ದಲ್ಲಿ, ಸರ್ಕಾರ ಇದುವರೆವಿಗೂ ಕೈಗೊಂಡ ಕ್ರಮಗಳೇನು ;

(ಇ) ಕನ್ನಡ ಭವನದ ಕಾಮಗಾರಿಯನ್ನು ನಿರ್ವಹಿಸಿದ ಗುತ್ತಿಗೆದಾರರು ಬರಬೇಕಾದ ಹಣ ಕೈಸೇರುತ್ತಿಲ್ಲವೆಂದು ಭವನಕ್ಕೆ ಬೀಗ ಹಾಕಿ ಕಣ್ಮರೆಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ ? (ವಿವರ ನೀಡುವುದು)

## ಸಿರಗುಪ್ಪ ತಾಲ್ಲೂಕಿನ ತೆಕ್ಕಲಕೋಟೆ ಹೋಬಳಿಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆ ಸ್ಥಾಪಿಸುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೧ (೧೬೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆ, ಸಿರುಗುಪ್ಪ ತಾಲ್ಲೂಕಿನ ತೆಕ್ಕಲಕೋಟೆ ಹೋಬಳಿಯಲ್ಲಿ ಮೊರಾರ್ಜಿ ದೇಸಾಯಿ ವಸತಿ ಶಾಲೆಯನ್ನು ಮಂಜೂರು ಮಾಡಲು ಯಾವುದಾದರೂ ಪ್ರಸ್ತಾವನೆ ಸರ್ಕಾರದ ಮುಂದೆ ಇದೆಯೇ ; ಇದ್ದಲ್ಲಿ, ಅದರ ಸಂಪೂರ್ಣ ಮಾಹಿತಿ ಒದಗಿಸುವುದು ;

(ಆ) ಸಿರಗುಪ್ಪ ತಾಲ್ಲೂಕಿನ ತೆಕ್ಕಲಕೋಟೆಯಲ್ಲಿ ಮೊರಾರ್ಜಿ ದೇಸಾಯಿ ಶಾಲೆಯನ್ನು ಸ್ಥಾಪಿಸಲು ಪ್ರಸ್ತಾವನೆ ಇದ್ದಲ್ಲಿ, ಯಾವಾಗ ಈ ಪ್ರಸ್ತಾವನೆ ಬಂದಿದೆ ; ಅದರ ಮಂಜೂರಾತಿಯು ಯಾವ ಹಂತದಲ್ಲಿದೆ ; ಯಾವ ಕಾಲ ಮಿತಿಯಲ್ಲಿ ಸ್ಥಾಪಿಸಲಾಗುವುದು; ಸಂಪೂರ್ಣ ವಿವರಗಳನ್ನು ನೀಡುವುದು ;

(ಇ) ಸಿರಗುಪ್ಪ ತಾಲ್ಲೂಕಿನ ತೆಕ್ಕಲಕೋಟೆ ಗ್ರಾಮದ ಸರ್ವೆ ನಂ.೦೧ರಲ್ಲಿ ೯ಎಕರೆ ೮೮ ಸೇಂಟ್ ಭೂಮಿಯನ್ನು ಕಾಯ್ದಿರಿಸಿರುವುದರ ಉದ್ದೇಶವೇನು ; ಸಂಪೂರ್ಣ ಮಾಹಿತಿಯನ್ನು ಒದಗಿಸುವುದು ?

## ಬಳ್ಳಾರಿ ನಗರ ಏಕಶಿಲಾ ಬೆಟ್ಟದ ಕೋಟೆ ಪ್ರದೇಶವು ಒತ್ತುವರಿಯಾಗಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೨ (೧೪೨) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ನಗರದ ೧೫ನೇ ವಾರ್ಡಿನ ಏಕಶಿಲಾ ಬೆಟ್ಟದ ಐತಿಹಾಸಿಕ ಪ್ರಾಚೀನ ಕೋಟೆ ಹತ್ತಿರ ಜಾಗವು ಒತ್ತುವರಿಯಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ಒದಗಿಸುವುದು)

(ಆ) ಬಳ್ಳಾರಿ ನಗರದ ೧೫ನೇ ವಾರ್ಡಿನ ಏಕಶಿಲಾ ಬೆಟ್ಟದ ಐತಿಹಾಸಿಕ ಪ್ರಾಚೀನ ಕೋಟೆ ಹತ್ತಿರ ಒತ್ತುವರಿಯಾಗಿರುವ ಸ್ಥಳವನ್ನು ತೆರವುಗೊಳಿಸಲು ಸರ್ಕಾರ ದಿಂದ ಯಾವ ಕ್ರಮ ಜರುಗಿಸಲಾಗುವುದು ? (ವಿವರಗಳೊಂದಿಗೆ ಸಂಪೂರ್ಣ ಮಾಹಿತಿ ನೀಡುವುದು)

## ಅಂಗವಿಕಲ ಕಲ್ಯಾಣ ಅಧಿಕಾರಿಗಳ ನೇಮಕ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೩ (೧೪೧) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ಜಿಲ್ಲೆಯಲ್ಲಿ ಜಿಲ್ಲಾ ಅಂಗವಿಕಲ ಕಲ್ಯಾಣಾಧಿಕಾರಿಗಳ ಹುದ್ದೆ ಸೃಜಿಸಲಾಗಿದೆಯೇ; ಇದ್ದಲ್ಲಿ, ಸದರಿ ಹುದ್ದೆಯು ಎಷ್ಟು ದಿನಗಳಿಂದ ಖಾಲಿ ಇದೆ ಪ್ರಭಾರ ಹುದ್ದೆಯ ಕರ್ತವ್ಯ ನಿರ್ವಹಿಸಲಾಗುತ್ತಿದೆ ;

(ಆ) ಸದರಿ ಹುದ್ದೆಯನ್ನು ಖಾಯಂ ಆಗಿ ನೇಮಕಾತಿ ಮಾಡಲು ಸರ್ಕಾರದಿಂದ ಸಾಧ್ಯವಿಲ್ಲವೇ ; ಇದ್ದಲ್ಲಿ, ಸರ್ಕಾರದಿಂದ ಸದರಿ ಹುದ್ದೆಯನ್ನು ಯಾವ ಕಾಲಮಿತಿಯೊಳಗೆ ಭರ್ತಿಮಾಡಲಾಗುವುದು ?

## ಬಳ್ಳಾರಿ ನಗರದ ಏಕಶಿಲಾ ಬೆಟ್ಟದ ಕೋಟೆ ದ್ವಾರ ಬಾಗಿಲು ಶಿಥಿಲಾವಸ್ಥೆ ಆಗಿರುವ ಕುರಿತು

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೪೪ (೧೩೯) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಳ್ಳಾರಿ ನಗರದ ಏಕಶಿಲಾ ಬೆಟ್ಟದ ಐತಿಹಾಸಿಕ ಪ್ರಾಚೀನ ಕೋಟೆ ದ್ವಾರ ಬಾಗಿಲು ಶಿಥಿಲಾವಸ್ಥೆ ಯಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಇದರಿಂದ ಸಾರ್ವಜನಿಕರು ದಿನಂಪ್ರತಿ ಪ್ರಾಣ ಭಯದಿಂದ ಸಂಚರಿಸುತ್ತಿದ್ದು, ದುರಸ್ತಿಗೊಳಿಸಲು ಹಾಗೂ ಅಗಲೀಕರಣಗೊಳಿಸಲು ಸರ್ಕಾರದಿಂದ ಯಾವ ಕ್ರಮ ಕೈಗೊಳ್ಳಲಾಗುವುದು ;

(ಇ) ಸರ್ಕಾರದಿಂದ ಯಾವ ಕಾಲಮಿತಿಯೊಳಗೆ ದುರಸ್ತಿಗೊಳಿಸಲು ಹಾಗೂ ಅಗಲೀಕರಣಗೊಳಿಸಲು ಕ್ರಮ ಕೈಗೊಳ್ಳಲಾಗುವುದು ?

## ೨೦೨೬-೨೭ನೇ ಸಾಲಿನಲ್ಲಿ ಶಿಕ್ಷಕರ ಸಾಮಾನ್ಯ ವರ್ಗಾವಣೆ ಮಾಡಿಲ್ಲದಿರುವ ಬಗ್ಗೆ

**ಶ್ರೀ ವೈ.ಎಂ. ಸತೀಶ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೪೫ (೧೪೦) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ೨೦೨೬-೨೭ನೇ ಸಾಲಿನಲ್ಲಿ ಶಿಕ್ಷಕರ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ನಡೆದಿದೆಯೇ ;

(ಆ) ೨೦೨೬-೨೭ನೇ ಸಾಲಿನಲ್ಲಿ ಶಿಕ್ಷಕರ ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ನಡೆದಿದಲ್ಲಿ ; (ಮಾಹಿತಿ ಒದಗಿಸುವುದು)

(ಇ) ೨೦೨೬-೨೭ನೇ ಸಾಲಿನಲ್ಲಿ ಶಿಕ್ಷಕರ, ಸಾಮಾನ್ಯ ವರ್ಗಾವಣೆ ಪ್ರಕ್ರಿಯೆ ನಡೆಯದಿದ್ದಲ್ಲಿ, ಯಾವ ಕಾರಣಕ್ಕೆ ಸಾಮಾನ್ಯ ವರ್ಗಾವಣೆ ಮಾಡಿರುವುದಿಲ್ಲ ಕಾರಣವೇನು ? (ಮಾಹಿತಿ ಒದಗಿಸುವುದು)

## ಮಾನವ-ಹುಲಿ ಸಂಘರ್ಷದ ಪ್ರಕರಣಗಳು ಹೆಚ್ಚಾಗಿರುವ ಕುರಿತು

**ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೪೬ (೧೫) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಮಾನವ-ಹುಲಿ ಸಂಘರ್ಷದ ಪ್ರಕರಣಗಳು ನಿರಂತರವಾಗಿ ವರದಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಮಾನವ-ಹುಲಿ ಸಂಘರ್ಷದ ಪ್ರಕರಣಗಳು ಹೆಚ್ಚಾಗಲು ಸರ್ಕಾರ ಗುರುತಿಸಿರುವ ವೈಜ್ಞಾನಿಕ ಮತ್ತು ಇತರೆ ಕಾರಣಗಳೇನು ;

(ಇ) ಹುಲಿಗಳ ಸಂಖ್ಯೆ ಹೆಚ್ಚಾದಂತೆ ಅದಕ್ಕನುಗುಣವಾಗಿ ಅವುಗಳ ನೈಸರ್ಗಿಕ ಆವಾಸಸ್ಥಾನದ ವಿಸ್ತೀರ್ಣ ಹೆಚ್ಚುತ್ತಿಲ್ಲ; ಹಾಗಾಗಿ ಅವುಗಳು ಕಾಡಿನ ಸುತ್ತಮುತ್ತಲಿರುವ ಬೀಳು, ಹಳ್ಳಗಳಲ್ಲಿರುವ ಕುರುಚಲು, ಕಾಫಿ ತೋಟಗಳಂತಹ ಪ್ರದೇಶಗಳನ್ನೇ ವಾಸಸ್ಥಾನ ಮಾಡಿಕೊಂಡಿರುವುದು ಮಾನವ-ಹುಲಿ ಸಂಘರ್ಷಕ್ಕೆ ಅತ್ಯಂತ ಪ್ರಮುಖ ಕಾರಣವಾಗಿದೆ. ಸದರಿ ಕಾರಣದಿಂದಾಗಿ ಹುಲಿಗಳ ಸಂಖ್ಯೆ ಹೆಚ್ಚಳಕ್ಕೆ ಅನುಗುಣವಾಗಿ ಅವುಗಳ ನೈಸರ್ಗಿಕ ಆವಾಸಸ್ಥಾನದ ವಿಸ್ತೀರ್ಣವನ್ನು ಹೆಚ್ಚಿಸಲೇಬೇಕಾದ ಅನಿವಾರ್ಯತೆ ಸೃಷ್ಟಿಯಾಗಿದ್ದು ಈ ಸಂಬಂಧ ಸರ್ಕಾರ ಇದುವರೆಗೆ ಕೈಗೊಂಡಿರುವ ಕ್ರಮಗಳೇನು ;

(ಈ) ಮಾನವ-ಹುಲಿ ಸಂಘರ್ಷವನ್ನು ಗಣನೀಯವಾಗಿ ತಪ್ಪಿಸಲು ಹಾಗೂ ಹುಲಿಗಳ ಭವಿಷ್ಯದ ಹಿತದೃಷ್ಟಿಯಿಂದ ಅವುಗಳ ನೈಸರ್ಗಿಕ

ಆವಾಸಸ್ಥಾನ ಮತ್ತು ಪರಿಸರ ವ್ಯವಸ್ಥೆಯ ಸಂರಕ್ಷಣೆಗೆ ಒತ್ತು ನೀಡುವುದು, ಗಸ್ತು ವ್ಯವಸ್ಥೆಯನ್ನು ಬಲಪಡಿಸುವುದು, ಕಳ್ಳಬೇಟೆ ತಡೆ, ಸಿಬ್ಬಂದಿಗಳಿಗೆ ಸೂಕ್ತ ತರಬೇತಿ, ಸ್ಥಳೀಯ ಸಮುದಾಯಗಳನ್ನು ವಿಶ್ವಾಸಕ್ಕೆ ತೆಗೆದುಕೊಳ್ಳುವುದು ಸೇರಿದಂತೆ ಹುಲಿಗಳೊಂದಿಗೆ ಜನರು ಸುರಕ್ಷಿತವಾಗಿ ಬದುಕಬಲ್ಲ ಪರಿಸರ ನಿರ್ಮಿಸಬೇಕಾದ ಅಗತ್ಯತೆ ಇದ್ದು, ಈ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ಗ್ರಾಮೀಣ ಭಾಗದಲ್ಲಿ ಶಾಲೆಗಳಿಗೆ ಅತ್ಯುತ್ತಮ ಮೂಲಸೌಕರ್ಯ ಒದಗಿಸುವ ಬಗ್ಗೆ

**ಶ್ರೀ ವಿನಯ್ ಕಾರ್ತಿಕ್ ಪ್ರಕಾಶ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೪೭ (೧೬) ಮಾನ್ಯ ಮುಖ್ಯಮಂತ್ರಿಗಳು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಗ್ರಾಮೀಣ ಭಾಗದಲ್ಲಿನ ಸರ್ಕಾರಿ ಪ್ರಾಥಮಿಕ ಶಾಲೆಗಳು ಮೂಲಭೂತ ಸೌಲಭ್ಯಗಳ ಕೊರತೆಯಿಂದಾಗಿ ತಮ್ಮ ಅಸ್ತಿತ್ವವನ್ನೇ ಕಳೆದುಕೊಳ್ಳುವ ಸಂಕಷ್ಟದ ಪರಿಸ್ಥಿತಿಗೆ ತಲುಪಿರುವುದರಿಂದ, ಗ್ರಾಮೀಣ ಭಾಗದ ಬಡ ಮಕ್ಕಳು ಶಿಕ್ಷಣದಿಂದಲೇ ಶಾಶ್ವತವಾಗಿ ವಂಚಿತರಾಗುತ್ತಿರುವ ವಿದ್ಯಮಾನ ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಪ್ರಾಥಮಿಕ ಶಾಲಾ ಶಿಕ್ಷಣವನ್ನು ಸದೃಢಗೊಳಿಸಲು ರಾಜ್ಯದಲ್ಲಿ ಲಭ್ಯವಿರುವ ಸಂಪೂರ್ಣ ಸಿಎಸ್‌ಆರ್ ನಿಧಿಯನ್ನು ಗ್ರಾಮೀಣ ಭಾಗದಲ್ಲಿ ಅತ್ಯುತ್ತಮ ಮೂಲಸೌಕರ್ಯ ಇರುವ ಶಾಲೆಗಳನ್ನು ನಿರ್ಮಿಸುವ ಯೋಜನೆಗೆ ಮಾತ್ರವೇ ವಿನಿಯೋಗಿಸಬೇಕೆಂಬ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ ;

(ಇ) ಗ್ರಾಮೀಣ ಭಾಗದ ಮಕ್ಕಳಿಗೆ ನಗರ ಪ್ರದೇಶಗಳಲ್ಲಿ ಸಿಗುವಂತಹ ಗುಣಮಟ್ಟದ ಶಿಕ್ಷಣ ದೊರೆಯುವಂತಾಗಬೇಕಾದರೆ, ರಾಜ್ಯದಲ್ಲಿ ಪ್ರಸ್ತುತ ಸುಮಾರು ೧೦ ಸಾವಿರ ಕೋಟಿಯಷ್ಟು ಸಿಎಸ್‌ಆರ್ ನಿಧಿ ಲಭ್ಯವಿರುವ ಮಾಹಿತಿ ಇದ್ದು, ಅದರ ಪ್ರತಿ ಪೈಸೆ ಕೂಡ ಸಂಪೂರ್ಣವಾಗಿ ಗ್ರಾಮೀಣ ಭಾಗದ ಪ್ರಾಥಮಿಕ ಶಿಕ್ಷಣಕ್ಕೆ ಮಾತ್ರವೇ ವಿನಿಯೋಗವಾಗಬೇಕಾಗಿರುವ ನಿಟ್ಟಿನಲ್ಲಿ ಇದುವರೆಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಭವಿಷ್ಯದಲ್ಲಿ ಸಂಗ್ರಹವಾಗುವ ಸಿಎಸ್‌ಆರ್ ನಿಧಿಯ ಸಂಪೂರ್ಣ ಮೊತ್ತ ಕೂಡ ಪೂರ್ಣ ಪ್ರಮಾಣದಲ್ಲಿ ಗ್ರಾಮೀಣ ಭಾಗದಲ್ಲಿ ಅತ್ಯುತ್ತಮ ಮೂಲಸೌಕರ್ಯ ಇರುವ ಶಾಲೆಗಳನ್ನು ನಿರ್ಮಿಸುವ ಯೋಜನೆಗೆ ಮಾತ್ರವೇ ವಿನಿಯೋಗವಾಗುವಂತೆ ನೋಡಿಕೊಳ್ಳಲು ಸರ್ಕಾರ ವಹಿಸುವ ಕ್ರಮಗಳೇನು ?

**ಜ್ಯೋತಿ**
ಕಾರ್ಯದರ್ಶಿ (ಪ್ರ)
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. O-43/500 ಪ್ರತಿಗಳು/12–08–2026